**ವಿಷಯಸೂಚಿ**


| ಕ್ರಮ ಸಂಖ್ಯೆ | ವಿಷಯಗಳು | ಪುಟ ಸಂಖ್ಯೆ |
|---|---|---|
| 1. | ಯುವ ಸಂಸತ್ ಸ್ಪರ್ಧೆಗೆ ಸಂಬಂಧಿಸಿದ ರಾಜ್ಯ ಸರ್ಕಾರದ ಆದೇಶ | 1–2 |
| 2. | ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿನ ಮಾನ್ಯತೆ ಪಡೆದ ಪ್ರೌಢ ಶಾಲೆಗಳಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ವ್ಯವಸ್ಥೆಗೊಳಿಸುವುದಕ್ಕಾಗಿ ರಾಜ್ಯ ಸರ್ಕಾರಗಳು/ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸು ನೆರವು ಯೋಜನೆ | 4–14 |
| 3. | ಸರ್ಕಾರಿ ಆದೇಶ ಸಂಖ್ಯೆ: ಸಂವ್ಯಶಾಇ 31 ಸಂವ್ಯವಿ 2007, ದಿನಾಂಕ:27.06.2007 ಹಾಗೂ ಇದರ ಅನುಬಂಧ | 15–17 |
| 4. | ಸರ್ಕಾರಿ ಆದೇಶ ಸಂಖ್ಯೆ:ಸಂವ್ಯಶಾಇ 6 ಸಂವ್ಯವಿ 2008, ದಿನಾಂಕ: 20–06–2008 | 18–20 |
| 5. | ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯ ಮಾರ್ಗಸೂಚಿಗಳು | 21–27 |
| 6. | ಮಾದರಿ ಕಾರ್ಯಕ್ರಮಗಳು (ಅನುಬಂಧ–ಎ) | 28 |
| 7. | ಕಡ್ಡಾಯ ಹಾಗೂ ಐಚ್ಚಿಕ ವಿಷಯಗಳ ಪಟ್ಟಿ (ಅನುಬಂಧ–ಬಿ) | 28–29 |
| 8. | ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಬಹುಮಾನಿತರಿಗೆ ನೀಡುವ ಪ್ರಮಾಣ ಪತ್ರದ ನಮೂನೆ | 30 |
| 9. | ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಭಾಗವಹಿಸಿದ ಶಾಲೆಗೆ ನೀಡುವ ಪ್ರಮಾಣ ಪತ್ರದ ನಮೂನೆ | 31 |
| 10. | ಕರ್ನಾಟಕ ರಾಜ್ಯದ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆಗೆ ಪೂರಕವಾಗಿ ಸಂಸತ್ ಕಾರ್ಯಕಲಾಪಗಳ ಬಗೆಗೆ ಕೆಲವು ವಿಶೇಷ ಮಾಹಿತಿಗಳು | 32–35 |
| 11. | ಕರ್ನಾಟಕ ವಿಧಾನ ಸಭೆಯ ಮಾದರಿ ಕಾರ್ಯಕಲಾಪಗಳ ಪಟ್ಟಿ (ಅನುಬಂಧ–1) | 36–38 |
| 12. | ಕರ್ನಾಟಕ ವಿಧಾನ ಪರಿಷತ್ತಿನ ಮಾದರಿ ಕಾರ್ಯಕಲಾಪಗಳ ಪಟ್ಟಿ | 39–40 |
| 13. | ಮಾದರಿ ಸಂತಾಪ ಸೂಚನೆಗಳು (ಅನುಬಂಧ–2) | 41–42 |
| 14. | ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಹಾಗೂ ಲಿಖಿತ ಮೂಲಕ ಉತ್ತರಿಸುವ (ಚುಕ್ಕೆ ಗುರುತಿಲ್ಲದ) ಪ್ರಶ್ನೆಗಳ ಹಾಗೂ ಉತ್ತರಗಳ ಕೆಲವು ಮಾದರಿಗಳು (ಅನುಬಂಧ–3) | 43–67 |
| 15. | ಗಮನ ಸೆಳೆಯುವ ಸೂಚನೆಗಳ ಮಾದರಿಗಳು (ಅನುಬಂಧ–4) | 68–71 |
| 16. | ಸಾರ್ವಜನಿಕ ಮಹತ್ವದ ಜರೂರು ವಿಷಯದ ಅಲ್ಪ ಕಾಲಾವಧಿ ಚರ್ಚೆಯ ಸೂಚನೆ ಹಾಗೂ ಉತ್ತರದ ಮಾದರಿ (ಅನುಬಂಧ–5) | 72–74 |
| 17. | ಮಾದರಿ ವಿಧೇಯಕ (ಅನುಬಂಧ–6) | 75–85 |
| 18. | ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮಗಳ ನಿಯಮ 324 ರಿಂದ 351ರ ಉದ್ಧೃತ ಭಾಗ (ಅನುಬಂಧ–7) | 86–95 |

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿನ ಮಾನ್ಯತೆ ಪಡೆದ ಪ್ರೌಢ ಶಾಲೆಗಳಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ವ್ಯವಸ್ಥೆಗೊಳಿಸುವುದಕ್ಕಾಗಿ ರಾಜ್ಯ ಸರ್ಕಾರಗಳು/ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸು ನೆರವು ಯೋಜನೆ.

**ಓದಲಾಗಿದೆ:** (1) ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ 6 ಸಂವ್ಯವಿ 97, ದಿನಾಂಕ: 9.10.2002.

(2) ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ 150 ಆಡಳಿತ 2002, ದಿನಾಂಕ:11.11.2002.

(3) ಕೇಂದ್ರ ಸರ್ಕಾರದ ಸಂಸದೀಯ ವ್ಯವಹಾರಗಳ ಸಚಿವಾಲಯದ ಪತ್ರ ಸಂಖ್ಯೆ:ಎಫ್.2(2).2005–ಆರ್ ಅಂಡ್ ಸಿ,ದಿನಾಂಕ: 7.2.2006.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾಗಿರುವ ಸರ್ಕಾರಿ ಆದೇಶದಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆ ನಿಯಮಗಳು, 1999ನ್ನು ಹೊರಡಿಸಲಾಗಿದೆ.

ಮೇಲೆ (2)ರಲ್ಲಿ ಓದಲಾಗಿರುವ ಸರ್ಕಾರಿ ಆದೇಶದಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆ (ತಿದ್ದುಪಡಿ) ನಿಯಮಗಳು, 2002ನ್ನು ಹೊರಡಿಸಲಾಗಿದೆ.

ಮೇಲೆ (3)ರಲ್ಲಿ ಓದಲಾಗಿರುವ ಕೇಂದ್ರ ಸರ್ಕಾರದ ಪತ್ರದಲ್ಲಿ 2005ರ ಫೆಬ್ರವರಿ 4–5ನೇ ದಿನಾಂಕಗಳಂದು ಹೈದರಾಬಾದ್‌ನಲ್ಲಿ ನಡೆದ 13ನೇ ಅಖಿಲ ಭಾರತ ಸಚೇತಕರ ಸಮ್ಮೇಳನವು, ಸಂಸದೀಯ ವ್ಯವಹಾರಗಳ ಮಂತ್ರಾಲಯವು ಪ್ರಸ್ತುತ ಒದಗಿಸುತ್ತಿರುವ ಹಣಕಾಸು ನೆರವಿನ ಪ್ರಮಾಣವನ್ನು ಒಂದು ಲಕ್ಷ ರೂಪಾಯಿಗಳಿಂದ ಮೂರು ಲಕ್ಷ ರೂಪಾಯಿಗಳಿಗೆ ಹೆಚ್ಚಿಸತಕ್ಕದ್ದೆಂದು ಇತರೆ ವಿಷಯಗಳ ಜೊತೆಯಲ್ಲಿ ಶಿಫಾರಸ್ಸು ಮಾಡಿದೆ. ಸದರಿ ಶಿಫಾರಸ್ಸನ್ನು ಭಾರತ ಸರ್ಕಾರವು ಪರಿಶೀಲಿಸಿ 2005–06ರ ಶೈಕ್ಷಣಿಕ ವರ್ಷದಿಂದ ಹಣಕಾಸು ನೆರವನ್ನು ವಾರ್ಷಿಕ ಎರಡು ಲಕ್ಷ ರೂಪಾಯಿಗಳಿಗೆ ಹೆಚ್ಚಿಸಲು ತೀರ್ಮಾನಿಸಿದೆ ಮತ್ತು ಹಣಕಾಸು ನೆರವಿನ ಯೋಜನೆಯ ಒಂದು ಪ್ರತಿಯನ್ನು ಲಗತ್ತಿಸಿ ಕಳುಹಿಸಿ ಕೊಟ್ಟಿರುತ್ತದೆ. ಪ್ರಸ್ತುತ ಜಾರಿಯಲ್ಲಿರುವ ನಿಯಮಗಳು ಕೇಂದ್ರ ಸರ್ಕಾರವು ಒದಗಿಸಿರುವ ಹಣಕಾಸು ಯೋಜನೆಯ ಮಾರ್ಗಸೂಚಿಗಳಿಗೆ ವ್ಯತಿರಿಕ್ತವಾಗಿರುವುದರಿಂದ ಜಾರಿಯಲ್ಲಿರುವ ನಿಯಮಗಳನ್ನು ನಿರಸನಗೊಳಿಸಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಸಂವ್ಯಶಾಇ 11 ಸಂವ್ಯವಿ 2006, ಬೆಂಗಳೂರು, ದಿನಾಂಕ:19.05.2006**

ಕರ್ನಾಟಕ ರಾಜ್ಯದಲ್ಲಿ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆ ನಿಯಮಗಳು, 1999ನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿರಸನಗೊಳಿಸಲಾಗಿದೆ ಹಾಗೂ ಸಂಸದೀಯ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ ಇವರ ಪತ್ರ ಸಂಖ್ಯೆ:ಎಫ್ 2(2) 2005–ಆರ್ ಸಿ, ದಿನಾಂಕ:7.2.2006 ಹಾಗೂ ಇದರೊಂದಿಗೆ ಲಗತ್ತಿಸಿರುವ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸುವುದಕ್ಕಾಗಿ ರಾಜ್ಯಗಳು/ ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸಿನ ನೆರವು ಯೋಜನೆ 2006ನ್ನು (ಅನುಬಂಧದಲ್ಲಿ ಲಗತ್ತಿಸಿ) ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯದಲ್ಲಿ ಜಾರಿ ಗೊಳಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸಹಿ/–
ಸಹಾಯಕ ಪ್ರಾರೂಪಕಾರ ಮತ್ತು ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

ಗೆ,

1. ಸರ್ಕಾರದ ಮುಖ್ಯ ಕಾರ್ಯದರ್ಶಿ : ಅಪರ ಮುಖ್ಯ ಕಾರ್ಯದರ್ಶಿ.
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಆಡಿಟ್ ಮತ್ತು ಅಕೌಂಟ್ಸ್)
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕರ್ನಾಟಕ ವಿಧಾನಮಂಡಲ, ವಿಧಾನ ಸೌಧ, ಬೆಂಗಳೂರು.
6. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸರಸದೀಯ ವ್ಯವಹಾರಗಳ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
7. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ನಂ.4.,100 ಫೀಟ್ ರಿಂಗ್ ರೋಡ್, (ಕೆ.ಎಸ್.ಹಾಸ್ಪೆಟಲ್ ಪಕ್ಕದಲ್ಲಿ) ಹೊಸಕೆರೆಹಳ್ಳಿ, ಬೆಂಗಳೂರು.–560 085.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ–4), ವಿಧಾನ ಸೌಧ, ಬೆಂಗಳೂರು.
9. ಸಂಕಲನಕಾರರು, ಸರ್ಕಾರಿ ಮುದ್ರಣಾಲಯ ಇವರಿಗೆ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು.
10. ಶಾಖಾ ರಕ್ಷಾ ಕಡತ.
11. ಹೆಚ್ಚುವರಿ ಪ್ರತಿ.

**ಸಂಖ್ಯೆ: ಎಫ್ 2(2) 2005–ಆರ್ ಸಿ.**
**ಭಾರತ ಸರ್ಕಾರ**
**ಸಂಸದೀಯ ವ್ಯವಹಾರಗಳ ಮಂತ್ರಾಲಯ**

98, ಸಂಸತ್ ಭವನ,
ಹೊಸದೆಹಲಿ–110001
ದಿನಾಂಕ 7–2–2006.

**ಇವರಿಗೆ,**

ಮಾನ್ಯ ಮುಖ್ಯ ಕಾರ್ಯದರ್ಶಿಗಳು,
ಕರ್ನಾಟಕ ಸರ್ಕಾರ.

**ಮಾನ್ಯರೆ,**

ಮಾನ್ಯತೆ ಪಡೆದ ಪ್ರೌಢ ಶಾಲೆಗಳಲ್ಲಿ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸುವುದಕ್ಕಾಗಿ ರಾಜ್ಯಗಳಿಗೆ/ಕೇಂದ್ರಾಡಳಿತ ಪ್ರದೇಶಗಳಿಗೆ ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯವು ಹಣಕಾಸು ನೆರವನ್ನು ಒದಗಿಸುತ್ತಾ ಇದೆ. 2005ರ ಫೆಬ್ರವರಿ 4–5ನೇ ದಿನಾಂಕಗಳಂದು ಹೈದರಾಬಾದ್‌ನಲ್ಲಿ ನಡೆದ 13ನೇ ಅಖಿಲ ಭಾರತ ಸಚೇತಕರ ಸಮ್ಮೇಳನವು, ಸಂಸದೀಯ ವ್ಯವಹಾರಗಳ ಮಂತ್ರಾಲಯವು ಈಗ ಒದಗಿಸುತ್ತಿರುವ ಹಣಕಾಸು ನೆರವಿನ ಪ್ರಮಾಣವನ್ನು ಒಂದು ಲಕ್ಷ ರೂಪಾಯಿಗಳಿಂದ ಮೂರು ಲಕ್ಷ ರೂಪಾಯಿಗಳಿಗೆ ಹೆಚ್ಚಿಸತಕ್ಕದ್ದೆಂದು ಇತರೆ ವಿಷಯಗಳ ಜೊತೆಯಲ್ಲಿ ಶಿಫಾರಸ್ಸು ಮಾಡಿತ್ತು. ಈ ವಿಷಯವನ್ನು ಭಾರತ ಸರ್ಕಾರವು ಪರಿಶೀಲಿಸಿದೆ ಮತ್ತು 2005–06ರ ಪ್ರಸಕ್ತ ವರ್ಷದಿಂದ ಸದರಿ ಹಣಕಾಸು ನೆರವನ್ನು ವಾರ್ಷಿಕ ಎರಡು ಲಕ್ಷ ರೂಪಾಯಿಗಳಿಗೆ ಹೆಚ್ಚಿಸಲು ತೀರ್ಮಾನಿಸಿದೆ, ಎಂಬ ಅಂಶವನ್ನು ತಮಗೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

2. ಹಣಕಾಸು ನೆರವಿನ ಯೋಜನೆಯ ಒಂದು ಪ್ರತಿಯನ್ನು ಇದರೊಂದಿಗೆ ಲಗತ್ತಿಸಲಾಗಿದೆ. ಸ್ಪರ್ಧೆಗಳನ್ನು ನಡೆಸುವಲ್ಲಿ ವಹಿಸಲಾದ ವೆಚ್ಚಗಳನ್ನು ತುಂಬಿಕೊಡುವುದಕ್ಕಾಗಿ ಪ್ರಸ್ತಾವಗಳನ್ನು ಯೋಜನೆಯ ಅನುಸೂಚಿ III– ರಲ್ಲಿ ನಿರ್ದಿಷ್ಟಪಡಿಸಲಾದ ನಮೂನೆಯಲ್ಲಿ ಮಾತ್ರವೇ ಈ ಮಂತ್ರಾಲಯಕ್ಕೆ ಕಳುಹಿಸಬಹುದಾಗಿದೆ. ಇದರಿಂದ ಈ ಮಂತ್ರಾಲಯವು ಕ್ಲೇಮುಗಳ ಬಗ್ಗೆ ಶೀಘ್ರವಾಗಿ ಕ್ರಮ ಕೈಗೊಳ್ಳಲು ಸಾಧ್ಯವಾಗುತ್ತದೆ.

ತಮ್ಮ ವಿಶ್ವಾಸಿ,

ಸಹಿ/–
(ಶ್ರೀಮತಿ.ಸಂತೋಷ್ ಪ್ರಭಾ)
ಭಾರತ ಸರ್ಕಾರದ ಉಪ ಕಾರ್ಯದರ್ಶಿ,
ದೂರವಾಣಿ:23034761

# **ಯುವ ಸಂಸತ್ ಸ್ಪರ್ಧೆಗಳನ್ನು ನಡೆಸುವುದಕ್ಕಾಗಿ ರಾಜ್ಯಗಳು/**
ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸಿನ ನೆರವು ಯೋಜನೆ

ಸಂಸದೀಯ ವ್ಯವಹಾರಗಳ ಮಂತ್ರಾಲಯ
ಭಾರತ ಸರ್ಕಾರ

2008

==================================================

**ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿನ ಮಾನ್ಯತೆ ಪಡೆದ ಪ್ರೌಢ ಶಾಲೆಗಳಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ವ್ಯವಸ್ಥೆಗೊಳಿಸುವುದಕ್ಕಾಗಿ ರಾಜ್ಯ ಸರ್ಕಾರಗಳು /ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸು ನೆರವು ಯೋಜನೆ.**

**ಪೀಠಿಕೆ**

ಶೈಕ್ಷಣಿಕ ಸಂಸ್ಥೆಗಳಲ್ಲಿ ಯುವ ಸಂಸತ್ ಸ್ಪರ್ಧೆಗಳನ್ನು ಏರ್ಪಡಿಸಿ ನಡೆಸುವ ಪರಿಕಲ್ಪನೆ 1962 ರಲ್ಲಿ ಮುಂಬಯಿಯಲ್ಲಿ ನಡೆದ ನಾಲ್ಕನೇ ಅಖಿಲ ಭಾರತ ಸಚೇತಕರ ಸಮ್ಮೇಳನದಲ್ಲಿ ರೂಪ ತಳೆಯಿತು. ಸದರಿ ಸಮ್ಮೇಳನದಲ್ಲಿ ಇತರೆ ವಿಷಯಗಳ ಜೊತೆಗೆ ಈ ಮುಂದಿನ ಶಿಫಾರಸುಗಳನ್ನು ಮಾಡಲಾಯಿತು:-

"ಈ ಸಮಿತಿಯು, ಶೈಕ್ಷಣಿಕ ಸಂಸ್ಥೆಗಳಲ್ಲಿ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ, ಪಂಚಾಯತಿಗಳ ಮೂಲಕ ಅಣಕು ಸಂಸತ್ ಕಾರ್ಯಕ್ರಮಗಳನ್ನು ನಡೆಸಲು ಸರ್ಕಾರವು ಪ್ರೋತ್ಸಾಹಿಸತಕ್ಕದ್ದೆಂದು ಶಿಫಾರಸು ಮಾಡುತ್ತದೆ".

ಮೇಲ್ಕಂಡ ಶಿಫಾರಸುಗಳನ್ನು 1966 ರಲ್ಲಿ ಬೆಂಗಳೂರಿನಲ್ಲಿ ನಡೆದ ಐದನೇ ಅಖಿಲ ಭಾರತ ಸಚೇತಕರ ಸಮ್ಮೇಳನವು ಈ ಮುಂದೆ ಹೇಳಿರುವಂತೆ ಪುನರುಚ್ಚರಿಸಿತು:-

"ಮುಂಬಯಿಯಲ್ಲಿ ನಡೆದ ನಾಲ್ಕನೇ ಅಖಿಲ ಭಾರತ ಸಚೇತಕರ ಸಮ್ಮೇಳನವು, ಜನಪ್ರತಿನಿಧಿ ಸಂಸ್ಥೆಗಳ ಪಾತ್ರದ ಬಗ್ಗೆ ಅರಿವು ಮೂಡಿಸಲು ಗ್ರಾಮ ಪಂಚಾಯತಿಗಳಲ್ಲಿ ಅಣಕು ಸಂಸತ್ ಕಾರ್ಯಕ್ರಮಗಳನ್ನು ನಡೆಸಬೇಕೆಂದು ಶಿಫಾರಸು ಮಾಡಿತ್ತು. ಈ ಶಿಫಾರಸುಗಳನ್ನು ಕೆಲವು ರಾಜ್ಯಗಳಲ್ಲಿ ಜಾರಿಗೆ ತಂದಿರುವುದಿಲ್ಲ ಎಂಬುದನ್ನು ಈ ಸಮ್ಮೇಳನವು ಗಮನಿಸಿದೆ. ಸಮ್ಮೇಳನವು, ಸಂಬಂಧಪಟ್ಟ ರಾಜ್ಯ ಸರ್ಕಾರಗಳು ತಮ್ಮ ತೀರ್ಮಾನಗಳನ್ನು ಮರುಪರಿಶೀಲಿಸುವಂತೆ ಅವುಗಳ ಮನವೊಲಿಸಬೇಕೆಂದು ಪುನರುಚ್ಚರಿಸುತ್ತದೆ."

ಮೇಲ್ಕಂಡ ಶಿಫಾರಸುಗಳಿಗನುಸಾರ, ಸಂಸದೀಯ ವ್ಯವಹಾರಗಳ ಮಂತ್ರಾಲಯವು ಅಣಕು ಸಂಸತ್ (ಈಗ ಯುವ ಸಂಸತ್) ಸ್ಪರ್ಧೆಯ ಯೋಜನೆಯ ವಿವರಗಳನ್ನು ತಯಾರಿಸಿತು ಮತ್ತು ಅದನ್ನು ಪ್ರಾಯೋಗಿಕ ರೂಪದಲ್ಲಿ ನಡೆಸುವ ಉದ್ದೇಶದಿಂದ ದೆಹಲಿಯ ಪ್ರೌಢ ಶಾಲೆಗಳಲ್ಲಿ ಸ್ಪರ್ಧೆಗಳನ್ನು ಪ್ರಾರಂಭಿಸಲು ತೀರ್ಮಾನಿಸಿತು. 1967 ರಲ್ಲಿ ಸಿಮ್ಲಾದಲ್ಲಿ ಮತ್ತು 1969 ರಲ್ಲಿ ಮದ್ರಾಸಿನಲ್ಲಿ ಕ್ರಮವಾಗಿ ನಡೆದ ಆರು ಮತ್ತು ಏಳನೇ ಅಖಿಲಭಾರತ ಸಚೇತಕರ ಸಮ್ಮೇಳನದಲ್ಲಿ ಈ ಮುಂದಿನ ಶಿಫಾರಸುಗಳನ್ನು ಮಾಡಲಾಯಿತು:-

"ದೆಹಲಿಯ ಶಾಲೆಗಳಲ್ಲಿ "ಯುವ ಸಂಸತ್" ಕಾರ್ಯಕ್ರಮವನ್ನು ನಡೆಸುವಲ್ಲಿ ಸಂಸದೀಯ ವ್ಯವಹಾರಗಳ ಮಂತ್ರಾಲಯದ ಉತ್ತಮ ಕಾರ್ಯವನ್ನು ಪ್ರಶಂಸಿಸುತ್ತಾ, ಉಳಿದ ರಾಜ್ಯಗಳು ಸಹ ತಮ್ಮ ತಮ್ಮ ರಾಜ್ಯಗಳಲ್ಲಿ ಯೋಜನೆಯನ್ನು ಅಳವಡಿಸಲು ವ್ಯವಸ್ಥೆಯನ್ನು ಮಾಡತಕ್ಕದ್ದೆಂದು

ಸಮ್ಮೇಳನವು ಆಗ್ರಹಪೂರ್ವಕವಾಗಿ ಶಿಫಾರಸ್ಸು ಮಾಡುತ್ತದೆ. (6ನೇ ಅಖಿಲ ಭಾರತ ಸಚೇತಕರ ಸಮ್ಮೇಳನ)"

"ದೆಹಲಿಯ ಶಾಲೆಗಳಲ್ಲಿ 'ಅಣಕು ಸಂಸತ್' ಯೋಜನೆಯ ಯಶಸ್ವಿ ಅನುಷ್ಠಾನವನ್ನು ಹಾಗೂ ಪ್ರಮುಖ ಸಂಸದರು, ಪತ್ರಿಕಾ ಮಾಧ್ಯಮಗಳು ಮತ್ತು ಶಿಕ್ಷಣ ತಜ್ಞರಿಂದ ಆ ಬಗ್ಗೆ ಬಂದ ವ್ಯಾಪಕ ಮೆಚ್ಚುಗೆಯನ್ನು ಗಮನದಲ್ಲಿಟ್ಟುಕೊಂಡು ಮತ್ತು ರಾಷ್ಟ್ರದಲ್ಲಿ ಸುಭದ್ರ ಸಂಸದೀಯ ಪದ್ಧತಿಯನ್ನು ಅನುಷ್ಠಾನಗೊಳಿಸುವ ದೃಷ್ಟಿಯಿಂದ ಸಮ್ಮೇಳನವು ಈ ಮುಂದಿನ ಶಿಫಾರಸ್ಸುಗಳನ್ನು ಮಾಡುತ್ತದೆ.-

(ಎ) ಸಂಸದೀಯ ವ್ಯವಹಾರಗಳ ಕೇಂದ್ರ ಮಂತ್ರಾಲಯವು ಅನುಸರಿಸಿದ ಮಾದರಿಯನ್ನೇ ಅನುಸರಿಸಿ ಎಲ್ಲಾ ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳು ತಮ್ಮ ತಮ್ಮ ರಾಜ್ಯ/ಕೇಂದಾಡಳಿತ ಪ್ರದೇಶಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳತಕ್ಕದ್ದು;

(ಬಿ) ಸಂಸದೀಯ ವ್ಯವಹಾರಗಳ ಕೇಂದ್ರ ಮಂತ್ರಾಲಯವು, ಅಗತ್ಯವಿದ್ದಲ್ಲಿ ಹಣಕಾಸು ನೆರವನ್ನು ನೀಡುವ ಮೂಲಕ ಯೋಜನೆಯನ್ನು ಜಾರಿಗೆ ತರಲು ರಾಜ್ಯಗಳು/ಕೇಂದಾಡಳಿತ ಪ್ರದೇಶಗಳಿಗೆ ಎಲ್ಲಾ ಬಗೆಯ ಪ್ರೋತ್ಸಾಹಗಳನ್ನು ನೀಡತಕ್ಕದ್ದು; ಮತ್ತು

(ಸಿ) ಸಂಸದೀಯ ವ್ಯವಹಾರಗಳ ಕೇಂದ್ರ ಮಂತ್ರಾಲಯವು, ಯೋಜನೆಯನ್ನು ಈಗಾಗಲೇ ಜಾರಿಗೊಳಿಸಿರುವ ರಾಜ್ಯಗಳು/ಕೇಂದಾಡಳಿತ ಪ್ರದೇಶಗಳ ನಡುವೆ ಅಂತರ್ ರಾಜ್ಯ ಸ್ಪರ್ಧೆಗಳನ್ನು ಸಹ ವ್ಯವಸ್ಥೆಗೊಳಿಸತಕ್ಕದ್ದು. (7ನೇ ಅಖಿಲ ಭಾರತ ಸಚೇತಕರ ಸಮ್ಮೇಳನ)"

7ನೇ ಅಖಿಲ ಭಾರತ ಸಚೇತಕರ ಸಮ್ಮೇಳನವು ಮಾಡಿದ ಮೇಲ್ಕಂಡ ಶಿಫಾರಸುಗಳ (ಬಿ) ಭಾಗದ ಪಾಲನೆಯಲ್ಲಿ ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯವು, ರಾಜ್ಯಗಳು/ಕೇಂದಾಡಳಿತ ಪ್ರದೇಶಗಳಲ್ಲಿನ ಮಾನ್ಯತೆ ಪಡೆದ ಪ್ರೌಢ ಶಾಲೆಗಳಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ವ್ಯವಸ್ಥೆಗೊಳಿಸುವುದಕ್ಕಾಗಿ - ರಾಜ್ಯ ಸರ್ಕಾರಗಳು/ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸು ನೆರವು ನೀಡುವುದಕ್ಕಾಗಿ ಈ ಯೋಜನೆಯನ್ನು ರೂಪಿಸಿದೆ.

1. **ಯೋಜನೆಯ ಉದ್ದೇಶ**:- ಪ್ರಜಾಪ್ರಭುತ್ವದ ಬುನಾದಿಯನ್ನು ಭದ್ರಪಡಿಸುವ, ಶಿಸ್ತು, ಇತರರ ಅಭಿಪ್ರಾಯಗಳ ಬಗ್ಗೆ ತಾಳ್ಮೆ ಮುಂತಾದ ಆರೋಗ್ಯಕರ ಗುಣ ವಿಶೇಷಗಳನ್ನು ಮೈಗೂಡಿಸುವ ಮತ್ತು ವಿದ್ಯಾರ್ಥಿ ಸಮುದಾಯದಲ್ಲಿ ಸಂಸತ್ ಕಾರ್ಯ ಕಲಾಪದ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ, ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯವು, ದೆಹಲಿಯಲ್ಲಿರುವ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ - "ಯುವ ಸಂಸತ್" ನ ಸ್ಪರ್ಧೆಯಲ್ಲಿ ಭಾಗವಹಿಸಲಿಚ್ಛಿಸುವ ಮತ್ತು ದೆಹಲಿಯ ಎನ್‌ಸಿಟಿ ಸರ್ಕಾರದ ಶಿಕ್ಷಣ ನಿರ್ದೇಶನಾಲಯವು ಪ್ರಾಯೋಜಿಸಿದಂಥ ಶಾಲೆಗಳ ನಡುವೆ ಪ್ರತಿವರ್ಷ ಯುವ ಸಂಸತ್ ಸ್ಪರ್ಧೆ ನಡೆಸುತ್ತಾ ಬಂದಿದೆ. ರಾಜ್ಯ ಸರ್ಕಾರಗಳು/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರಗಳು, ಇಂಥವೇ ಸ್ಪರ್ಧೆಗಳನ್ನು ತಮ್ಮ

ಮಾನ್ಯತೆ ಪಡೆದ ಶಾಲೆಗಳಲ್ಲಿ ನಡೆಸಲು ಹಣಕಾಸು ನೆರವನ್ನು ನೀಡುವುದೇ ಈ ಯೋಜನೆಯ ಉದ್ದೇಶ.

2. **ಯೋಜನೆಯ ಕಾರ್ಯಾಚರಣೆ:–** ಈ ಯೋಜನೆಯನ್ನು ಸಂಬಂಧಪಟ್ಟ ರಾಜ್ಯ/ಕೇಂದ್ರಾಡಳಿತ ಪ್ರದೇಶಗಳಲ್ಲಿನ ಶಿಕ್ಷಣ ನಿರ್ದೇಶಕರ ಸಹಯೋಗದೊಂದಿಗೆ ಸಂಬಂಧಪಟ್ಟ ರಾಜ್ಯದ/ಕೇಂದ್ರಾಡಳಿತ ಪ್ರದೇಶದ ಸರ್ಕಾರದ ಸಂಸದೀಯ ವ್ಯವಹಾರಗಳ ಇಲಾಖೆಯ ಮೂಲಕ ನಿರ್ವಹಿಸಲಾಗುವುದು. ಸಂಸದೀಯ ವ್ಯವಹಾರಗಳ ಇಲಾಖೆಯು ಇಲ್ಲದಿರುವ ಜಿಲ್ಲಾ ಹಾಗೂ ರಾಜ್ಯ/ಕೇಂದಾಡಳಿತ ಪದೇಶದಲ್ಲಿ, ಶಿಕ್ಷಣ ನಿರ್ದೇಶನಾಲಯವು ನೇರವಾಗಿ ಯೋಜನೆಯನ್ನು ಕಾರ್ಯಗತಗೊಳಿಸುತ್ತದೆ.

3. **ಸ್ಪರ್ಧೆಯಲ್ಲಿ ಭಾಗವಹಿಸುವುದಕ್ಕೆ ಅರ್ಹತೆ:–** ಸಂಬಂಧಪಟ್ಟ ರಾಜ್ಯ/ಕೇಂದ್ರಾಡಳಿತ ಪದೇಶದ ಮಾನ್ಯತೆ ಪಡೆದ ಎಲ್ಲಾ ಪ್ರೌಢ ಶಾಲೆಗಳನ್ನು ಸ್ಪರ್ಧೆಯಲ್ಲಿ ಭಾಗವಹಿಸಲು ಅರ್ಹತೆ ಹೊಂದಿದವರೆಂದು ಪರಿಗಣಿಸಬಹುದು. ಭಾಗವಹಿಸುವ ಶಾಲೆಗಳ ಪಟ್ಟಿಯನ್ನು, ಪ್ರತಿವರ್ಷದ ಮಾರ್ಚ್ 31 ರಿಂದ, ಸಂದರ್ಭಾನುಸಾರ, ಸಂಬಂಧಪಟ್ಟ ಜಿಲ್ಲಾ ಹಾಗೂ ರಾಜ್ಯದ/ಕೇಂದ್ರಾಡಳಿತ ಪ್ರದೇಶದ ಸಂಸದೀಯ ವ್ಯವಹಾರಗಳ ಇಲಾಖೆ ಅಥವಾ ಶಿಕ್ಷಣ ನಿರ್ದೇಶನಾಲಯ ಅಂತಿಮಗೊಳಿಸುತ್ತವೆ.

4. **ಯುವ ಸಂಸತ್ ಸ್ಪರ್ಧೆಯನ್ನು ನಡೆಸುವ ಅವಧಿ:–** ಯುವ ಸಂಸತ್ ಸ್ಪರ್ಧೆಯನ್ನು, ಪ್ರತಿವರ್ಷವು ನಡೆಸಲಾಗುವುದು. ಈ ಬಗ್ಗೆ ಸವಿವರ ಕಾರ್ಯಕ್ರಮವನ್ನು ಸಂಬಂಧಪಟ್ಟ ಜಿಲ್ಲಾ ಹಾಗೂ ರಾಜ್ಯ/ ಕೇಂದಾಡಳಿತ ಪದೇಶದ ಸಂಸದೀಯ ವ್ಯವಹಾರಗಳ ಇಲಾಖೆ/ಶಿಕ್ಷಣ ನಿರ್ದೇಶನಾಲಯವು ರೂಪಿಸತಕ್ಕದ್ದು ಮತ್ತು ವಾರ್ಷಿಕ ಸ್ಪರ್ಧೆಯಲ್ಲಿ ಭಾಗವಹಿಸಲಿರುವ ಸಂಸ್ಥೆಗಳಿಗೆ ಸುತ್ತೋಲೆ ಮೂಲಕ ತಿಳಿಸತಕ್ಕದ್ದು. ಸದರಿ ಕಾರ್ಯಕ್ರಮವನ್ನು ನವದೆಹಲಿಯ ಭಾರತ ಸರ್ಕಾರದ ಸಂಸದೀಯ ವ್ಯವಹಾರ ಇಲಾಖೆಗೂ ತಿಳಿಸತಕ್ಕದ್ದು.

5. **ಯುವ ಸಂಸತ್ತಿನಲ್ಲಿ ಭಾಗವಹಿಸುವವರ ಸಂಖ್ಯೆ:–** ಪ್ರತಿಯೊಂದು ಶಾಲೆಯಲ್ಲಿ ಯುವ ಸಂಸತ್ತನ್ನು ನಡೆಸುವುದಕ್ಕಾಗಿ ಬೇಕಾಗುವ ವಿದ್ಯಾರ್ಥಿಗಳ ಸಂಖ್ಯೆಗೆ ಯಾವುದೇ ಮಿತಿ ಇಲ್ಲ. ಆದಾಗ್ಯೂ, ಅಧಿವೇಶನದ ಅವಧಿಯನ್ನು ಸೀಮಿತಗೊಳಿಸುವುದು ಅಪೇಕ್ಷಣೀಯವಾಗಿರುವ ಕಾರಣ, ಭಾಗವಹಿಸಿರುವ ವಿದ್ಯಾರ್ಥಿಗಳಲ್ಲಿ ಹಲವರು ಸಂಸತ್ತಿನ ಅಧಿವೇಶನದ ಒಂದು ಚಿತ್ರಣವನ್ನು ಮೂಡಿಸುವುದಕ್ಕೆ ಮಾತ್ರವೇ ಸುಮ್ಮನೆ ಕುಳಿತುಕೊಂಡಿರಬೇಕಾಗುತ್ತದೆ. ಅವರಿಗೆ ಮಾತನಾಡಲು ಅವಕಾಶವಿರುವುದಿಲ್ಲ. ಪ್ರತಿ ತಂಡ 25–30 ವಿದ್ಯಾರ್ಥಿಗಳಿಗೆ ಸೀಮಿತವಾಗಿರಬೇಕು.

6. **ಯುವ ಸಂಸತ್ತಿನ ಅಧಿವೇಶನದ ಅವಧಿ:–** ಯುವ ಸಂಸತ್ತಿನ ಅಧಿವೇಶನದ ಅವಧಿಯು ಒಂದು ಗಂಟೆ ಅವಧಿಯನ್ನು ಮೀರತಕ್ಕದಲ್ಲ ಮತ್ತು ಇದರಲ್ಲಿ 20 ನಿಮಿಷಗಳ ಅವಧಿಯನ್ನು ಪ್ರಶ್ನೆಗಳಿಗೆ ಕಾಯ್ದಿರಿಸತಕ್ಕದ್ದು.

7. **ಯುವ ಸಂಸತ್ತಿನಲ್ಲಿಯ ಚರ್ಚೆಯ ವಿಷಯ:–** ಪ್ರಶ್ನೋತ್ತರಗಳಿಗೆ ಅಥವಾ ಇತರ ಚರ್ಚೆಗೆ ಯಾವುದೇ ನಿರ್ದಿಷ್ಟ ವಿಷಯಗಳನ್ನು ಗೊತ್ತುಪಡಿಸಿರುವುದಿಲ್ಲ. ಆದಾಗ್ಯೂ, ಯುವ ಸಂಸತ್ತಿನಲ್ಲಿ ಕೇಳಲಾಗುವ ಪ್ರಶ್ನೆಗಳು, ಕ್ಷೇಮಾಭ್ಯುದಯ ಕಾರ್ಯ ಚಟುವಟಿಕೆಗಳು, ರಾಷ್ಟ್ರದ ರಕ್ಷಣೆ, ಸಾಮಾಜಿಕ ನ್ಯಾಯ, ಸಮಾಜ ಸುಧಾರಣೆಗಳು, ಆರ್ಥಿಕ ಅಭಿವೃದ್ಧಿ, ಮತೀಯ ಸಾಮರಸ್ಯ,

ಆರೋಗ್ಯ, ವಿದ್ಯಾರ್ಥಿಗಳಲ್ಲಿ ಶಿಸ್ತು ಮುಂತಾದವುಗಳಿಗೆ ಸಂಬಂಧಿಸಿದ ವಿಷಯಗಳಾಗಿರುವುದು ಅಪೇಕ್ಷಣೀಯ.

8. **ಭಾಷೆ:–** ಭಾಗವಹಿಸುವವರು, ಸಂಬಂಧಪಟ್ಟ ಜಿಲ್ಲಾ ಹಾಗೂ ರಾಜ್ಯ/ಕೇಂದ್ರಾಡಳಿತ ಪ್ರದೇಶದ ಸಂಸದೀಯ ವ್ಯವಹಾರಗಳ ಇಲಾಖೆ/ಶಿಕ್ಷಣ ನಿರ್ದೇಶನಾಲಯ ನಿರ್ದಿಷ್ಟಪಡಿಸಬಹುದಾದಂತೆ ಆದಷ್ಟು ಕನ್ನಡದಲ್ಲಿಯೇ ಮಾತನಾಡಬೇಕಾಗಿದ್ದು, ಹಿಂದಿ ಅಥವಾ ಇಂಗ್ಲೀಷ್ ಅಥವಾ ಸ್ಥಳೀಯ ಭಾಷೆಯಲ್ಲಿ ಮಾತನಾಡಲು ಅವಕಾಶ ನೀಡಲಾಗಿದೆ.

9. **ಯುವ ಸಂಸತ್ ಸ್ಪರ್ಧೆ ನಡೆಯುವ ಸ್ಥಳ:–** ಪ್ರತಿಯೊಂದು ಸಂಸ್ಥೆಯು, ಸಾಧ್ಯವಾದಷ್ಟು ಮಟ್ಟಿಗೆ ತನ್ನದೇ ಆದ ಕಟ್ಟಡದಲ್ಲಿ ಅಥವಾ ತಾನು ಇಚ್ಛಿಸುವಂಥ ಯಾವುದೇ ಇತರ ಸ್ಥಳದಲ್ಲಿ ನಡೆಸತಕ್ಕದ್ದು. ಸ್ಪರ್ಧೆಯಲ್ಲಿ ಭಾಗವಹಿಸುವ ಸಂಸ್ಥೆಗಳು, ಸಂಬಂಧಪಟ್ಟ ರಾಜ್ಯದ ಸಂಸದೀಯ ವ್ಯವಹಾರಗಳ ಇಲಾಖೆಗೆ/ಶಿಕ್ಷಣ ನಿರ್ದೇಶನಾಲಯಕ್ಕೆ ಸ್ಪರ್ಧೆ ನಡಸುವ ದಿನಾಂಕವನ್ನು ಹತ್ತು ದಿನಗಳ ಮೊದಲೇ ಪತ್ರ ಮುಖೇನ/ಫ್ಯಾಕ್ಸ್/ದೂರವಾಣಿ ಮುಖಾಂತರ ಸಂಬಂಧಪಟ್ಟ ಬಿ.ಇ.ಓ (ನೋಡೆಲ್ ಆಫೀಸರ್) ಅಧಿಕಾರಿಗಳು ಚರ್ಚಿಸಿ ವಿಷಯಕ್ಕೆ ಸಂಬಂಧಪಟ್ಟ ಮಾಹಿತಿಯೊಂದಿಗೆ ಅಧಿವೇಶನ ನಡೆಸುವ ಸ್ಥಳದ ಬಗ್ಗೆ ತಿಳಿಸುವುದು ಅಗತ್ಯವಾಗಿರುತ್ತದೆ.

10. **<u>ಬಹುಮಾನಗಳು</u>:–** ಈ ಮುಂದಿನ ಬಹುಮಾನಗಳನ್ನು ಇರಿಸಲಾಗಿದೆ:–

(i) ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿದ ಸಂಸ್ಥೆಗೆ ಪಾರಿತೋಷಕ (ಸಂಸದೀಯ ಪಾರಿತೋಷಕ).

(ii) ಅರ್ಹತೆಯ ಆಧಾರದ ಮೇಲೆ ಸ್ಪರ್ಧೆಯಲ್ಲಿನ ಉತ್ತಮ ನಿರ್ವಹಣೆಗಾಗಿ ಮೊದಲ ಐದು ಸ್ಥಾನ ಪಡೆದ ಸಂಸ್ಥೆಗಳಿಗೆ ಟ್ರೋಫಿಗಳು.

(iii) ಪ್ರತಿಯೊಂದು ಸಂಸ್ಥೆಗಳಿಂದ ಭಾಗವಹಿಸಿರುವ ವಿದ್ಯಾರ್ಥಿಗಳಿಂದ ಆಯ್ಕೆ ಮಾಡಲಾದವರಿಗೆ ಪದಕಗಳು / ಕಪ್ಪುಗಳು/ಪುಸ್ತಕಗಳ ರೂಪದಲ್ಲಿ ವೈಯಕ್ತಿಕ ಬಹುಮಾನಗಳು. ಬಹುಮಾನಗಳ ಒಟ್ಟು ಸಂಖ್ಯೆಯು 80ನ್ನು ಮೀರತಕ್ಕದ್ದಲ್ಲ.

(iv) ಇತರೆ ವೆಚ್ಚಗಳು.

**<u>ಸೂಚನೆ</u>:–** ಸಂಬಂಧಪಟ್ಟ ಜಿಲ್ಲಾ ಹಾಗೂ ರಾಜ್ಯದ/ಕೇಂದ್ರಾಡಳಿತ ಪ್ರದೇಶದ ಸಂಸದೀಯ ವ್ಯವಹಾರಗಳ ಇಲಾಖೆ/ಶಿಕ್ಷಣ ನಿರ್ದೇಶನಾಲಯವು ಸ್ಥಳೀಯ ಪರಿಸ್ಥಿತಿಗಳಿಗೆ ಅನುಸಾರವಾಗಿ ಮೇಲಿನ ನಾಲ್ಕು ಬಾಬುಗಳಿಗೆ ಸಂಬಂಧಿಸಿದ ವೆಚ್ಚವನ್ನು ವ್ಯತ್ಯಾಸಗೊಳಿಸಬಹುದು. ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯದಿಂದ ಮರುಪಾವತಿಸುವ ಗರಿಷ್ಠ ಮೊಬಲಗು ವಾರ್ಷಿಕವಾಗಿ ರೂ.2,00,000/– ಗಳನ್ನು (ಎರಡು ಲಕ್ಷ ರೂಪಾಯಿಗಳು ಮಾತ್ರ) ಮೀರುವುದಿಲ್ಲ.

ಪಾರಿತೋಷಕವು ಪರ್ಯಾಯ ಪಾರಿತೋಷಕವಾಗಿದ್ದು ಅದನ್ನು ಸ್ಪರ್ಧೆಯಲ್ಲಿ ಪ್ರಥಮ ಸ್ಥಾನವನ್ನು ಹೊಂದಿದ ಸಂಸ್ಥೆಯು ಒಂದು ವರ್ಷದವರೆಗೆ ಉಳಿಸಿಕೊಳ್ಳಬಹುದಾಗಿದೆ. ಆದಾಗ್ಯೂ, ಒಂದೇ ಸಂಸ್ಥೆಯು ಮೂರು ನಿರಂತರ ವರ್ಷಗಳು ಪಾರಿತೋಷಕವನ್ನು ಗೆದ್ದರೆ ಆ ಸಂಸ್ಥೆಯೇ ಅದನ್ನು ಖಾಯಂ ಆಗಿ ಇಟ್ಟುಕೊಳ್ಳುವುದು.

ಅನುಬಂಧ–I ರಲ್ಲಿ ಇದ್ದಂತೆ ಒಂದು ಪ್ರಮಾಣ ಪತ್ರವನ್ನು ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲ ಸಂಸ್ಥೆಗಳಿಗೆ ನೀಡತಕ್ಕದ್ದು.

ಸ್ಪರ್ಧೆಯಲ್ಲಿ ವೈಯಕ್ತಿಕ ಬಹುಮಾನವನ್ನು ಪಡೆದ ಎಲ್ಲಾ ವಿದ್ಯಾರ್ಥಿಗಳಿಗೆ ಅನುಬಂಧ–II ರಲ್ಲಿ ಇದ್ದಂತೆ ಒಂದು ಪ್ರಮಾಣ ಪತ್ರವನ್ನು ನೀಡತಕ್ಕದ್ದು.

11. **ತೀರ್ಪುಗಾರರ ಸಮಿತಿ**:– ಪ್ರತಿಯೊಂದು ಸಂಸ್ಥೆಗಳ ಮೌಲ್ಯ ಮಾಪನಕ್ಕಾಗಿ ತೀರ್ಪುಗಾರರ ಸಮಿತಿಯನ್ನು ಸಂಬಂಧಿಸಿದ ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸಂಸದೀಯ ವ್ಯವಹಾರಗಳ ಇಲಾಖೆ/ ಶಿಕ್ಷಣ ನಿರ್ದೇಶನಾಲಯವು ರಚಿಸತಕ್ಕದ್ದು ಹಾಗೂ ಅದರಲ್ಲಿ ಶಿಕ್ಷಣ ತಜ್ಞರನ್ನು (ಬಿ.ಇ.ಓ ಆಫೀಸರ್) /ವಿಧಾನಸಭೆ/ಪರಿಷತ್ತಿನ ಸದಸ್ಯರು ಮತ್ತು ಸಂಸದೀಯ ಸಂಸ್ಥೆಗಳನ್ನು ನಡೆಸುವುದಕ್ಕೆ ಸಂಬಂಧಪಟ್ಟ ಇತರರು (ನೋಡೆಲ್ ಆಫೀಸರ್) ಇರಬಹುದು. ಶಿಕ್ಷಣ ನಿರ್ದೇಶನಾಲಯದ ಒಬ್ಬ ಅಧಿಕಾರಿಯು ಸಮಿತಿಯ ಪದನಿಮಿತ್ತ ಸದಸ್ಯನಾಗಿರತಕ್ಕದ್ದು.

12. **ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸುವಾಗ ಪರಿಗಣಿಸಬೇಕಾದ ಅಂಶಗಳು**.– ಸ್ಪರ್ಧೆಯಲ್ಲಿ ಸಾಧನೆಯನ್ನು ನಿರ್ಧರಿಸುವಾಗ ಸಮಿತಿಯು, ಈ ಮುಂದಿನ ಅಂಶಗಳನ್ನು ಗಮನದಲ್ಲಿಟ್ಟು ಕೊಂಡಿರಬೇಕು.

| | | ಅಂಕಗಳು |
|---|---|---|
| (i) | ಶಿಸ್ತು ಮತ್ತು ಸಭ್ಯತೆ | 10 |
| (ii) | ಸಂಸದೀಯ ಕಾರ್ಯ ವಿಧಾನದ ಪಾಲನೆ | 20 |
| (iii) | ಪ್ರಶ್ನೆಗಳಿಗಾಗಿ ಮತ್ತು ಪೂರಕ ಪ್ರಶ್ನೆಗಳಿಗಾಗಿ ವಿಷಯಗಳ ಆಯ್ಕೆ ಹಾಗೂ ಅವುಗಳಿಗೆ ನೀಡಿದ ಉತ್ತರಗಳ ಗುಣಮಟ್ಟ | 20 |
| (iv) | ಚರ್ಚೆಗಳಿಗೆ ವಿಷಯಗಳ ಆಯ್ಕೆ | 10 |
| (v) | ಮಾಡಿದ ಭಾಷಣದ ಶೈಲಿ ಅಥವಾ ಮೌಲ್ಯ, ಚರ್ಚೆಗಳ ಗುಣಮಟ್ಟ | 30 |
| (vi) | ಒಟ್ಟಾರೆ ಸಾಧನೆಯ ಸಾಮಾನ್ಯ ಮೌಲ್ಯ ಮಾಪನ | 10 |
| | ಒಟ್ಟು | 100 |

13. **ಮರು ಪ್ರದರ್ಶನ**:– ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿದ ಸಂಸ್ಥೆಯು ಪ್ರತಿ ವರ್ಷದ ಸ್ಪರ್ಧೆಯ ಬಹುಮಾನ ವಿತರಣೆಯ ಸಮಾರಂಭದಲ್ಲಿ, ಸಂಬಂಧಿಸಿದ ಜಿಲ್ಲಾ ಹಾಗೂ ರಾಜ್ಯ / ಕೇಂದ್ರಾಡಳಿತ ಪ್ರದೇಶದ ಸಂಸದೀಯ ವ್ಯವಹಾರಗಳ ಇಲಾಖೆ/ಶಿಕ್ಷಣ ನಿರ್ದೇಶನಾಲಯ ನಿರ್ಧರಿಸಬಹುದಾದ ಸ್ಥಳ ಮತ್ತು ದಿನಾಂಕದಂದು ಮತ್ತೊಮ್ಮೆ ಪ್ರದರ್ಶನ ಮಾಡುವಂತೆ ಅಗತ್ಯಪಡಿಸಬಹುದು.

14. **ವರದಿ:–** ಸಂಬಂಧಪಟ್ಟ ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸಂಸದೀಯ ವ್ಯವಹಾರಗಳ ಇಲಾಖೆ/ಶಿಕ್ಷಣ ನಿರ್ದೇಶನಾಲಯವು ಸ್ಪರ್ಧೆಯು ಮುಗಿದ ಮೇಲೆ ಅನುಬಂಧ–III ರಲ್ಲಿ ನಿಯಮಿಸಲಾದ ನಮೂನೆಯಲ್ಲಿ, ಅದರಲ್ಲಿ ಮೆರಿಟ್ ಆಧಾರದ ಮೇಲೆ, ಮೊದಲನೇ ಐದು ಸ್ಥಾನ ಪಡೆದ ಶಾಲೆಗಳೂ ಸೇರಿದಂತೆ ಭಾಗವಹಿಸಿದ ಎಲ್ಲಾ ಶಾಲೆಗಳ ಸಂಖ್ಯೆಯನ್ನು ಸೂಚಿಸಿ ವೈಯಕ್ತಿಕ ಬಹುಮಾನಗಳ ಸಂಖ್ಯೆ ಮುಂತಾದವುಗಳನ್ನು ಒಳಗೊಂಡ ಒಂದು ವರದಿಯನ್ನು ತಯಾರಿಸತಕ್ಕದ್ದು. ವರದಿಯಲ್ಲಿ ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯವು ಜಿಲ್ಲಾ ಹಾಗೂ ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರಕ್ಕೆ ಮರುಪಾವತಿ ಮಾಡಬೇಕಾದ ಮೊಬಲಗನ್ನು ಸ್ಪಷ್ಟವಾಗಿ ಮತ್ತು ಪ್ರತ್ಯೇಕವಾಗಿ ಸೂಚಿಸತಕ್ಕದ್ದು. ವರದಿಯನ್ನು ಸಂಬಂಧಿಸಿದ ಜಿಲ್ಲಾ ಹಾಗೂ ರಾಜ್ಯ/ಕೇಂದ್ರಾಡಳಿತ ಪ್ರದೇಶದಲ್ಲಿ ಯೋಜನೆಯ ಪ್ರಭಾರವನ್ನು ಹೊಂದಿರುವ ಇಲಾಖೆಯ ಉಪ ಕಾರ್ಯದರ್ಶಿಯ ದರ್ಜೆಗಿಂತ ಕಡಿಮೆಯಲ್ಲದ ಪ್ರತಿನಿಧಿಯು ಸಹಿ ಮಾಡತಕ್ಕದ್ದು. ಚೆಕ್ಕನ್ನು ಯಾರಿಗೆ ಸಂದಾಯ ಮಾಡಲು ಬರೆಯಬೇಕು ಮತ್ತು ಲೆಕ್ಕ ಶೀರ್ಷಿಕೆ ಮುಂತಾದ ವಿವರಗಳನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು. ನಿಯಮಿಸಲಾದ ನಮೂನೆಯಲ್ಲಿ ವರದಿಯನ್ನು ಯೋಜನೆಯ ಅಡಿಯಲ್ಲಿ ಆರ್ಥಿಕ ಸಹಾಯದ ಕೋರಿಕೆಯೊಂದಿಗೆ ಸಂಸದೀಯ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ, ನವದೆಹಲಿ ಇವರಿಗೆ ಕಳುಹಿಸತಕ್ಕದ್ದು.

15. **ವೆಚ್ಚದ ಮರುಸಂದಾಯದ ಪರಿಮಿತಿ:–** ಜಿಲ್ಲಾ ಹಾಗೂ ರಾಜ್ಯ/ಕೇಂದ್ರಾಡಳಿತ ಪ್ರದೇಶ ಸರ್ಕಾರಗಳು ಮಾಡಿದ ವೆಚ್ಚವನ್ನು, ವರದಿಯನ್ನು ಆಧರಿಸಿ ರೂ.2,00,000/– ದ (ಎರಡು ಲಕ್ಷ ರೂಪಾಯಿಗಳು ಮಾತ್ರ) ಗರಿಷ್ಠ ಮಿತಿಗೊಳಪಟ್ಟು ಸಂಸದೀಯ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರದಿಂದ ಮರುಪಾವತಿ ಮಾಡಲಾಗುವುದು.

## ಅನುಬಂಧ – I

**ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರ**
**ಸಂಸದೀಯ ವ್ಯವಹಾರಗಳ ಇಲಾಖೆ/ನೋಡಲ್ ಕಚೇರಿ/ನಿರ್ದೇಶನಾಲಯ**

**"ಯುವ ಸಂಸತ್ ಸ್ಪರ್ಧೆ"**

(ಶಾಲೆಯ ಹೆಸರು)

------------------------------------------------------------------
---

ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯ, ನವದೆಹಲಿ, ಇವರು ------------------ನೇ ವರ್ಷದಲ್ಲಿ ನಡೆಸಿದ "ಯುವ ಸಂಸತ್" ಸ್ಪರ್ಧೆಯಲ್ಲಿ ಭಾಗವಹಿಸಿದೆಯೆಂದು ಪ್ರಮಾಣೀಕರಿಸಲಾಗಿದೆ.

**ಸಕ್ಷಮ ಪ್ರಾಧಿಕಾರಿ**
**ಸಂಸದೀಯ ವ್ಯವಹಾರಗಳ ಇಲಾಖೆ/ನೋಡಲ್ ಕಚೇರಿ/**
**ನಿರ್ದೇಶನಾಲಯ.**

## ಅನುಬಂಧ-II

**ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರ**
**ಸಂಸದೀಯ ವ್ಯವಹಾರಗಳ ಇಲಾಖೆ/ನೋಡಲ್ ಕಚೇರಿ/ನಿರ್ದೇಶನಾಲಯ**

....

**"ಯುವ ಸಂಸತ್ ಸ್ಪರ್ಧೆ"**

-------------------------------ಶಾಲೆಯ --------------------
--- ತರಗತಿಯ ವಿದ್ಯಾರ್ಥಿ/ವಿದ್ಯಾರ್ಥಿನಿಯಾದ --------------------------------
- ಅವರಿಗೆ
----------------- ವರ್ಷದಲ್ಲಿ ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಮಂತ್ರಾಲಯ, ನವದೆಹಲಿ ಇವರ ನೇತೃತ್ವದಲ್ಲಿ ನಡೆಸಲಾದ "ಯುವ ಸಂಸತ್ ಸ್ಪರ್ಧೆ" ಯಲ್ಲಿನ ಅತ್ಯುತ್ತಮ ಸಾಧನೆಗೆ ---------------------------------------- ಬಹುಮಾನವನ್ನು ನೀಡಲಾಗಿದೆಯೆಂದು ಪ್ರಮಾಣೀಕರಿಸಲಾಗಿದೆ.

**ಸಕ್ಷಮ ಪ್ರಾಧಿಕಾರಿ**
**ಸಂಸದೀಯ ವ್ಯವಹಾರಗಳ ಇಲಾಖೆ/ನೋಡಲ್ ಕಚೇರಿ/**
**ನಿರ್ದೇಶನಾಲಯ.**

## ಅನುಬಂಧ-III

**ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರವು ------------------ವರ್ಷದಲ್ಲಿ ನಡೆಸಿದ ಯುವ ಸಂಸತ್ ಸ್ಪರ್ಧೆಯ ವರದಿ-ಆರ್ಥಿಕ ಸಹಾಯಕ್ಕೆ ಕೋರಿಕೆ.**

| | | | | |
|---|---|---|---|---|
| 1. | ರಾಜ್ಯದ/ಕೇಂದ್ರಾಡಳಿತ ಪ್ರದೇಶದ ಹೆಸರು. | | | |
| 2. | ಯುವ ಸಂಸತ್ ಸ್ಪರ್ಧೆಯನ್ನು ನಡೆಸಿದ ಮತ್ತು ಮರು ಸಂದಾಯದ ಕ್ಲೇಮನ್ನು ಮಾಡಿದ ಆರ್ಥಿಕ ವರ್ಷ. | | | |
| 3. | ಯುವ ಸಂಸತ್ ಸ್ಪರ್ಧೆಯಲ್ಲಿ ಭಾಗವಹಿಸಿದ ಶಾಲೆಗಳ ಸಂಖ್ಯೆ | | | |
| 4. | ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳ ಸಂಖ್ಯೆ. | | | |
| 5. | ಸ್ಪರ್ಧೆಯಲ್ಲಿ ವೈಯಕ್ತಿಕ ಬಹುಮಾನಗಳನ್ನು ಪಡೆದವರ ಸಂಖ್ಯೆ | | | |
| 6. | ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಮೊದಲ ಐದು ಸ್ಥಾನಗಳನ್ನು ಗಳಿಸಿದ ಶಾಲೆಗಳ ಮೆರಿಟ್ ಆಧಾರದ ಮೇಲೆ ಹೆಸರು ಮತ್ತು ವಿಳಾಸ | | | |
| 7. | ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರವು ಕ್ಲೇಮು ಮಾಡಿದ ಮೊಬಲಗು | | | |
| | ವೆಚ್ಚಗಳ ಬಾಬು | ಮಾಡಿದ ಒಟ್ಟು ವೆಚ್ಚ | ಕ್ಲೇಮು ಮಾಡಿದ ಮೊಬಲಗು | ಲಗತ್ತಿಸಿದ ಓಚರುಗಳ ವಿವರ |
| | ವಿಷಯಾಭಿಮುಖ ಶಿಕ್ಷಣಕ್ಕಾಗಿ<br>1.<br>2. | | | 1.<br>2. |
| | ಯುವಸಂಸತ್ ಸ್ಪರ್ಧೆಯ ವ್ಯವಸ್ಥೆ<br>1.<br>2. | | | 1.<br>2. |
| | ಬಹುಮಾನ ವಿತರಣೆ ಸಮಾರಂಭಕ್ಕಾಗಿ<br>1.<br>2. | | | 1.<br>2. |
| 8. | ಚೆಕ್ಕನ್ನು ಯಾರ ಹೆಸರಿಗೆ ನೀಡಬೇಕೋ ಅವರ ಹೆಸರು/ವಿಳಾಸ/ದೂರವಾಣಿ ಸಂಖ್ಯೆ ಮತ್ತು ಲೆಕ್ಕ ಶೀರ್ಷಿಕೆಯ ವಿವರ. | | | |

**(ಹೆಸರು)**

**ಪದನಾಮ**

**ಉಪ ಕಾರ್ಯದರ್ಶಿಯ ದರ್ಜೆಗಿಂತ ಕಡಿಮೆಯಿಲ್ಲದ ಅಧಿಕಾರಿಯು ಸಹಿ ಮಾಡಬೇಕು.**

**ರಾಜ್ಯ/ಕೇಂದ್ರಾಡಳಿತ ಪ್ರದೇಶ ಸರ್ಕಾರದ ವಿಳಾಸ, ದೂರವಾಣಿ ಸಂಖ್ಯೆ/ ಇಮೇಲ್ ಐ.ಡಿ.**

**ಸೂಚನೆ:–** 'ವಿಷಯಾಭಿಮುಖ ಶಿಕ್ಷಣ' ಎಂದರೆ ಯುವ ಸಂಸತ್ತನ್ನು ನಡೆಸುವುದರ ಪ್ರಭಾರದಲ್ಲಿರುವ ಶಿಕ್ಷಕರ/ಶಿಕ್ಷಣ ಅಧಿಕಾರಿಗಳ ಪ್ರಯೋಜನಕ್ಕಾಗಿ ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ನೋಡಲ್ ಪ್ರಾಧಿಕಾರಿಗಳು ನಡೆಸುವ ಒಂದು ಕೋರ್ಸು. ಭಾಗವಹಿಸುವವರಿಗೆ ಹಂಚುವ ಸಾಹಿತ್ಯ/ಲೇಖನ ಸಾಮಗ್ರಿಗಳ ರೂಪದಲ್ಲಿ ವೆಚ್ಚಗಳುಂಟಾಗುತ್ತವೆ.

**'ಯುವ ಸಂಸತ್ ಸ್ಪರ್ಧೆಯನ್ನು ಏರ್ಪಡಿಸುವುದು.,'** ಎಂದರೆ, ಸ್ಪರ್ಧೆಯನ್ನು ನಡೆಸುವುದಕ್ಕೆ ವಹಿಸಿದ ವೆಚ್ಚ, ಇದು ಉಪಹಾರಕ್ಕಾಗಿ, ಭಾಗವಹಿಸುವ ವಿದ್ಯಾರ್ಥಿಗಳ ಸಾರಿಗೆ ವ್ಯವಸ್ಥೆ ಬಹುಮಾನ ಇತ್ಯಾದಿಗಳ ವೆಚ್ಚವನ್ನು ಒಳಗೊಳ್ಳುತ್ತದೆ.

**'ಬಹುಮಾನ ವಿತರಣೆ ಸಮಾರಂಭ,'** ಎಂದರೆ, ರಾಜ್ಯ ಮಟ್ಟದ ಬಹುಮಾನ ವಿಜೇತರು ಮುಂತಾದವರಿಗೆ ಬಹುಮಾನಗಳು/ಷೀಲ್ಡ್‌ಗಳನ್ನು (ಪಾರಿತೋಷಕಗಳನ್ನು) ವಿತರಣೆ ಮಾಡುವುದಕ್ಕಾಗಿ ನಡೆಸಿದ ಸಮಾರಂಭ, ಇದು ಪ್ರತಿಭಾನ್ವಿತ ಶಾಲೆಗಳು ಮತ್ತು ವಿದ್ಯಾರ್ಥಿಗಳಿಗೆ ಪುಸ್ತಕಗಳು, ನೆನಪಿನ ಕಾಣಿಕೆಗಳು, ಪ್ರಮಾಣ ಪತ್ರಗಳು, ಷೀಲ್ಡ್‌ಗಳ (ಪಾರಿತೋಷಕಗಳು) ರೂಪದಲ್ಲಿ ಬಹುಮಾನಗಳಿಗಾಗಿ ವಹಿಸಿದ ವೆಚ್ಚವನ್ನು ಒಳಗೊಳ್ಳುತ್ತದೆ.
(ಪುನರ್‌ಭರ್ತಿ ಕ್ಲೇಮಿನಲ್ಲಿ, ಶಿಕ್ಷಕರಿಗೆ/ಅಧಿಕಾರಿಗಳಿಗೆ, ಪ್ರಯಾಣಭತ್ಯೆ/ದಿನಭತ್ಯೆಗಳ ವೆಚ್ಚಗಳನ್ನು ಸೇರಿಸತಕ್ಕದ್ದಲ್ಲ)

ಸ್ಪರ್ಧೆಗಾಗಿ ವಹಿಸಿದ ವೆಚ್ಚಗಳನ್ನು ತುಂಬಿಕೊಡುವುದಕ್ಕಾಗಿ ರಾಜ್ಯಗಳಿಗೆ/ಕೇಂದ್ರಾಡಳಿತ ಪ್ರದೇಶಗಳಿಗೆ ಆರ್ಥಿಕ ನೆರವು ಯೋಜನೆಯ 14ನೇ ಕಂಡಿಕೆಯಲ್ಲಿ ಹೇಳಿರುವಂತೆ, ಯುವ ಸಂಸತ್ ಸ್ಪರ್ಧೆಗಳು ಮುಕ್ತಾಯವಾದ ಮೇಲೆ, ರಾಜ್ಯ/ಕೇಂದ್ರಾಡಳಿತ ಸರ್ಕಾರಗಳು ಭರ್ತಿ ಮಾಡಿ ಕಳುಹಿಸಬೇಕು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿನ ಮಾನ್ಯತೆ ಪಡೆದ ಪ್ರೌಢ ಶಾಲೆಗಳಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ವ್ಯವಸ್ಥೆಗೊಳಿಸುವುದಕ್ಕಾಗಿ ರಾಜ್ಯ ಸರ್ಕಾರಗಳು/ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸು ನೆರವು ಯೋಜನೆ ಬಗ್ಗೆ.

**ಓದಲಾಗಿದೆ:** (1) ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ 6 ಸಂವ್ಯವಿ 97, ದಿನಾಂಕ: 09.10.2002.

(2) ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ 150 ಆಡಳಿತ 2002, ದಿನಾಂಕ:11.11.2002.

(3) ಕೇಂದ್ರ ಸರ್ಕಾರದ ಸಂಸದೀಯ ವ್ಯವಹಾರಗಳ ಸಚಿವಾಲಯದ ಪತ್ರ ಸಂಖ್ಯೆ:ಎಫ್.2(2).2005-ಆರ್ ಅಂಡ್ ಸಿ, ದಿನಾಂಕ: 07.2.2006.

(4) ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ 11 ಸಂವ್ಯವಿ 2006, ದಿನಾಂಕ:19.5.2006.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾಗಿರುವ ಸರ್ಕಾರಿ ಆದೇಶದಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆ ನಿಯಮಗಳು, 1999ನ್ನು ಹೊರಡಿಸಲಾಗಿದೆ.

ಮೇಲೆ (2)ರಲ್ಲಿ ಓದಲಾಗಿರುವ ಸರ್ಕಾರಿ ಆದೇಶದಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆ (ತಿದ್ದುಪಡಿ) ನಿಯಮಗಳು, 2002ನ್ನು ಹೊರಡಿಸಲಾಗಿದೆ.

ಮೇಲೆ (3)ರಲ್ಲಿ ಓದಲಾಗಿರುವ ಕೇಂದ್ರ ಸರ್ಕಾರದ ಪತ್ರದಲ್ಲಿ 2005ರ ಫೆಬ್ರವರಿ 4-5ನೇ ದಿನಾಂಕಗಳಂದು ಹೈದರಾಬಾದ್‌ನಲ್ಲಿ ನಡೆದ 13ನೇ ಅಖಿಲ ಭಾರತ ಸಚೇತಕರ ಸಮ್ಮೇಳನವು, ಸಂಸದೀಯ ವ್ಯವಹಾರಗಳ ಮಂತ್ರಾಲಯವು ಪ್ರಸ್ತುತ ಒದಗಿಸುತ್ತಿರುವ ಹಣಕಾಸು ನೆರವಿನ ಪ್ರಮಾಣವನ್ನು ಒಂದು ಲಕ್ಷ ರೂಪಾಯಿಗಳಿಂದ ಮೂರು ಲಕ್ಷ ರೂಪಾಯಿಗಳಿಗೆ ಹೆಚ್ಚಿಸತಕ್ಕದ್ದೆಂದು ಇತರೆ ವಿಷಯಗಳ ಜೊತೆಯಲ್ಲಿ ಶಿಫಾರಸ್ಸು ಮಾಡಿದೆ. ಸದರಿ ಶಿಫಾರಸ್ಸನ್ನು ಭಾರತ ಸರ್ಕಾರವು ಪರಿಶೀಲಿಸಿ 2005-06ರ ಶೈಕ್ಷಣಿಕ ವರ್ಷದಿಂದ ಹಣಕಾಸು ನೆರವನ್ನು ವಾರ್ಷಿಕ ಎರಡು ಲಕ್ಷ ರೂಪಾಯಿಗಳಿಗೆ ಹೆಚ್ಚಿಸಲು ತೀರ್ಮಾನಿಸಿದೆ ಮತ್ತು ಹಣಕಾಸು ನೆರವಿನ ಯೋಜನೆಯ ಒಂದು ಪ್ರತಿಯನ್ನು ಲಗತ್ತಿಸಿ ಕಳುಹಿಸಿ ಕೊಟ್ಟಿರುತ್ತದೆ. ಪ್ರಸ್ತುತ ಜಾರಿಯಲ್ಲಿರುವ ನಿಯಮಗಳು ಕೇಂದ್ರ ಸರ್ಕಾರವು ಒದಗಿಸಿರುವ ಹಣಕಾಸು ಯೋಜನೆಯ ಮಾರ್ಗಸೂಚಿಗಳಿಗೆ ವ್ಯತಿರಿಕ್ತವಾಗಿರುವುದರಿಂದ ಜಾರಿಯಲ್ಲಿರುವ ನಿಯಮಗಳನ್ನು ನಿರಸನಗೊಳಿಸಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸಲು ನಿರ್ಧರಿಸಲಾಗಿದೆ.

ಮೇಲೆ (4)ರಲ್ಲಿ ಓದಲಾಗಿರುವ ಸರ್ಕಾರಿ ಆದೇಶದಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆ ನಿಯಮಗಳು, 1999ನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿರಸನ ಗೊಳಿಸಲಾಗಿದೆ. ಹಾಗೂ ಸಂಸದೀಯ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ ಇವರ ಪತ್ರ ಸಂಖ್ಯೆ:ಎಫ್ 2(2) 2005-ಆರ್ ಸಿ, ದಿನಾಂಕ:7.2.2006 ಹಾಗೂ ಇದರೊಂದಿಗೆ ಲಗತ್ತಿಸಿರುವ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸುವುದಕ್ಕಾಗಿ ರಾಜ್ಯಗಳು/

ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸಿನ ಯೋಜನೆ 2006ನ್ನು (ಅನುಬಂಧದಲ್ಲಿ ಲಗತ್ತಿಸಿ) ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯದಲ್ಲಿ ಜಾರಿ ಗೊಳಿಸಲು ಆದೇಶಿಸಿದೆ.

ರಾಜ್ಯಮಟ್ಟದ ಯುವ ಸಂಸತ್ ಸ್ಪರ್ಧೆಯನ್ನು ಜಾರಿಗೊಳಿಸಬೇಕಾದಲ್ಲಿ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸಿ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದಲ್ಲಿ ವಿಷಯಾಭಿಮುಖ ಶಿಕ್ಷಣ ನೀಡುವುದು ಹಾಗೂ ಸೂಕ್ತ ಪ್ರಕ್ರಿಯೆಯ ಮುಖಾಂತರ ಅರ್ಹ ಅಭ್ಯರ್ಥಿಗಳನ್ನು ರಾಜ್ಯಮಟ್ಟದ ಸ್ಪರ್ಧೆಗಳಿಗೆ ಆಯ್ಕೆ ಮಾಡುವುದು ಅಗತ್ಯವೆಂದು ತೀರ್ಮಾನಿಸಲಾಯಿತು. ಆದ್ದರಿಂದ ಮೇಲೆ (4)ರಲ್ಲಿ ಓದಲಾದ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸುವುದಕ್ಕಾಗಿ ರಾಜ್ಯಗಳು/ ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸಿನ ಯೋಜನೆ 2006ನ್ನು ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದನ್ವಯ ಮಾರ್ಪಡಿಸಿ ಹೊರಡಿಸಲು ಉದ್ದೇಶಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಸಂವ್ಯಶಾಇ 31 ಸಂವ್ಯವಿ 2007, ಬೆಂಗಳೂರು, ದಿನಾಂಕ:27.6.2007**

ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ 11 ಸಂವ್ಯವಿ 2006, ದಿನಾಂಕ:19.5.2006ರಲ್ಲಿ ಜಾರಿಗೊಳಿಸಿರುವ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸುವುದಕ್ಕಾಗಿ ರಾಜ್ಯಗಳು/ ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸಿನ ಯೋಜನೆ 2006ನ್ನು ಅನುಬಂಧದಲ್ಲಿ ಲಗತ್ತಿಸಿರುವಂತೆ ಮಾರ್ಪಡಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯದಲ್ಲಿ ಜಾರಿಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸಹಿ/-
(ಬಿ.ಜಿ.ಶ್ಯಾಮಲ)
ಸಹಾಯಕ ಪಾರೂಪಕಾರ ಮತ್ತು ಪದನಿಮಿತ್ತ
ಸರ್ಕಾರದ ಅಧೀನಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.
☏:22033665

ಗೆ,

1. ಸರ್ಕಾರದ ಮುಖ್ಯ ಕಾರ್ಯದರ್ಶಿ : ಅಪರ ಮುಖ್ಯ ಕಾರ್ಯದರ್ಶಿ.
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಆಡಿಟ್ ಮತ್ತು ಅಕೌಂಟ್ಸ್)
3. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.
4. ಸರ್ಕಾರದ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕರ್ನಾಟಕ ವಿಧಾನಮಂಡಲ, ವಿಧಾನ ಸೌಧ, ಬೆಂಗಳೂರು.
6. ಮಾನ್ಯ ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
7. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
8. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ನಂ.4., 100 ಫೀಟ್ ರಿಂಗ್ ರೋಡ್, (ಕೆ.ಎಸ್.ಹಾಸ್ಪಟಲ್ ಪಕ್ಕದಲ್ಲಿ) ಹೊಸಕೆರೆಹಳ್ಳಿ,ಬೆಂಗಳೂರು-560085

. 9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನ ಸೌಧ, ಬೆಂಗಳೂರು.

10. ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು.
11. ಎಲ್ಲಾ ಅಧಿಕಾರಿಗಳು, ಸಂ.ವ್ಯ.ಶಾ.ಇಲಾಖೆ
12 ವಾರ್ಷಿಕ ಸಂಕಲನ
13. ಶಾಖಾ ರಕ್ಷಕ ಕಡತ.
14. ಹೆಚ್ಚುವರಿ ಪ್ರತಿ.

## ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ 31 ಸಂವ್ಯವಿ 2007, ಬೆಂಗಳೂರು, ದಿನಾಂಕ:27.6.2007ರ ಅನುಬಂಧ

ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ನಡೆಸಲಾಗುತ್ತಿರುವ ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಹಾಗೂ ವಿಷಯಾಭಿಮುಖ ಶಿಕ್ಷಣವನ್ನು ಅವರಿಗೆ ನೀಡಲು ಜಿಲ್ಲಾ ಮಟ್ಟದಲ್ಲಿ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸಲು ಈ ಕೆಳಗೆ ನಮೂದಿಸಿರುವಂತೆ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿದೆ.

**1. ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ.-** (1) ಪ್ರತಿಯೊಂದು ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿ ಅಂದರೆ ಜುಲೈ ತಿಂಗಳ ಅಂತ್ಯದೊಳಗೆ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯ ಕಾರ್ಯದರ್ಶಿಯವರು ಇಲಾಖೆಯ ಸಹಾಯಕ ಪ್ರಾರೂಪಕಾರ ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ ಹುದ್ದೆಗಳಿಗೆ ಕಡಿಮೆಯಿಲ್ಲದ ಅಧಿಕಾರಿಗಳನ್ನು ಒಂದು ಅಥವಾ ಒಂದಕ್ಕಿಂತ ಹೆಚ್ಚಿನ ಶೈಕ್ಷಣಿಕ ಜಿಲ್ಲೆಗಳಿಗೆ ತೀರ್ಪುಗಾರರ ಸಮಿತಿಯ ಸದಸ್ಯರಾಗಿ ನೇಮಿಸತಕ್ಕದ್ದು.

(2) ತೀರ್ಪುಗಾರರ ಸಮಿತಿಯ ಸದಸ್ಯರಾಗಿ ನೇಮಕಗೊಂಡ ಅಧಿಕಾರಿಗಳು ಸಂಬಂಧಪಟ್ಟ ಶೈಕ್ಷಣಿಕ ಜಿಲ್ಲೆಯ ಉಪ ನಿರ್ದೇಶಕರನ್ನು ಸಂಪರ್ಕಿಸಿ ಜಿಲ್ಲೆಯಲ್ಲಿ ನಡೆಸುವ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಗೆ ಅಗತ್ಯವಿರುವ ಮಾಹಿತಿಗಳನ್ನು ಅಂದರೆ ಕಿರುಹೊತ್ತಿಗೆ / ಸಿ.ಡಿ ಇತ್ಯಾದಿಗಳನ್ನು ಒದಗಿಸಲು ಹಾಗೂ ಜಿಲ್ಲಾ ಮಟ್ಟದಲ್ಲಿ ನವೆಂಬರ್ ತಿಂಗಳೊಳಗೆ ಸ್ಪರ್ಧೆಯನ್ನು ನಡೆಸಲು ಕ್ರಮ ಜರುಗಿಸತಕ್ಕದ್ದು.

(3) ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಭಾಗವಹಿಸಿರುವ ಶಾಲೆಗಳ ಹಾಗೂ ವಿದ್ಯಾರ್ಥಿಗಳ ಪಟ್ಟಿಯನ್ನು ಅವರಿಗೆ ನೀಡಿರುವ ಅಂಕಗಳನ್ನು ನಮೂದಿಸಿ ಸದರಿ ಪಟ್ಟಿಯನ್ನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯ ಕಾರ್ಯದರ್ಶಿಯವರಿಗೆ ಡಿಸೆಂಬರ್ ಮೊದಲನೇ ವಾರದಲ್ಲಿ ನೀಡತಕ್ಕದ್ದು.

**2. ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆ.-** ಪ್ರತಿಯೊಂದು ಜಿಲ್ಲೆಗೆ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯ ವತಿಯಿಂದ ನೇಮಕಗೊಂಡಿರುವ ತೀರ್ಪುಗಾರರ ಸಮಿತಿಯ ಸದಸ್ಯರು ತಮ್ಮ ಜಿಲ್ಲೆಯಿಂದ ಆಯ್ಕೆಯಾದ ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆ ನಡೆಯುವ ಪೂರ್ವದಲ್ಲಿ ಸೂಕ್ತ ಸಮಯದಲ್ಲಿ ಆಹ್ವಾನ ಪತ್ರಿಕೆ ಲಭ್ಯವಾಗುವಂತೆ ಕ್ರಮ ಜರುಗಿಸುವುದು ಹಾಗೂ ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಸದರಿ ಸ್ಪರ್ಧಿಗಳಿಗೆ ಊಟ, ವಸತಿ ಇತ್ಯಾದಿಗಳಿಗೆ ಕ್ರಮ ಜರುಗಿಸತಕ್ಕದ್ದು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿನ ಮಾನ್ಯತೆ ಪಡೆದ ಪ್ರೌಢ ಶಾಲೆಗಳಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ವ್ಯವಸ್ಥೆಗೊಳಿಸುವುದಕ್ಕಾಗಿ ರಾಜ್ಯ ಸರ್ಕಾರಗಳು/ ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸು ನೆರವು ಯೋಜನೆ ಬಗ್ಗೆ.

**ಓದಲಾಗಿದೆ:**
(1) ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ 6 ಸಂವ್ಯವಿ 97, ದಿನಾಂಕ: 9.10.2002.
(2) ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ 150 ಆಡಳಿತ 2002, ದಿನಾಂಕ:11.11.2002.
(3) ಕೇಂದ್ರ ಸರ್ಕಾರದ ಸಂಸದೀಯ ವ್ಯವಹಾರಗಳ ಸಚಿವಾಲಯದ ಪತ್ರ ಸಂಖ್ಯೆ:ಎಫ್.2(2).2005-ಆರ್ ಅಂಡ್ ಸಿ,ದಿನಾಂಕ: 7.2.2006.
(4) ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ 11 ಸಂವ್ಯವಿ 2006, ದಿನಾಂಕ:19.5.2006.
(5) ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ 31 ಸಂವ್ಯವಿ 2007, ದಿನಾಂಕ:27.6.2007.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾಗಿರುವ ಸರ್ಕಾರಿ ಆದೇಶದಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆ ನಿಯಮಗಳು, 1999ನ್ನು ಹೊರಡಿಸಲಾಗಿದೆ.

ಮೇಲೆ (2)ರಲ್ಲಿ ಓದಲಾಗಿರುವ ಸರ್ಕಾರಿ ಆದೇಶದಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆ (ತಿದ್ದುಪಡಿ) ನಿಯಮಗಳು, 2002ನ್ನು ಹೊರಡಿಸಲಾಗಿದೆ.

ಮೇಲೆ (3)ರಲ್ಲಿ ಓದಲಾಗಿರುವ ಕೇಂದ್ರ ಸರ್ಕಾರದ ಪತ್ರದಲ್ಲಿ 2005ರ ಫೆಬ್ರವರಿ 4-5ನೇ ದಿನಾಂಕಗಳಂದು ಹೈದರಾಬಾದ್‌ನಲ್ಲಿ ನಡೆದ 13ನೇ ಅಖಿಲ ಭಾರತ ಸಚೇತಕರ ಸಮ್ಮೇಳನವು, ಸಂಸದೀಯ ವ್ಯವಹಾರಗಳ ಮಂತ್ರಾಲಯವು ಪ್ರಸ್ತುತ ಒದಗಿಸುತ್ತಿರುವ ಹಣಕಾಸು ನೆರವಿನ ಪ್ರಮಾಣವನ್ನು ಒಂದು ಲಕ್ಷ ರೂಪಾಯಿಗಳಿಂದ ಮೂರು ಲಕ್ಷ ರೂಪಾಯಿಗಳಿಗೆ ಹೆಚ್ಚಿಸತಕ್ಕದ್ದೆಂದು ಇತರೆ ವಿಷಯಗಳ ಜೊತೆಯಲ್ಲಿ ಶಿಫಾರಸ್ಸು ಮಾಡಿದೆ. ಸದರಿ ಶಿಫಾರಸ್ಸನ್ನು ಭಾರತ ಸರ್ಕಾರವು ಪರಿಶೀಲಿಸಿ 2005-06ರ ಶೈಕ್ಷಣಿಕ ವರ್ಷದಿಂದ ಹಣಕಾಸು ನೆರವನ್ನು ವಾರ್ಷಿಕ ಎರಡು ಲಕ್ಷ ರೂಪಾಯಿಗಳಿಗೆ ಹೆಚ್ಚಿಸಲು ತೀರ್ಮಾನಿಸಿದೆ ಮತ್ತು ಹಣಕಾಸು ನೆರವಿನ ಯೋಜನೆಯ ಒಂದು ಪ್ರತಿಯನ್ನು ಲಗತ್ತಿಸಿ

ಕಳುಹಿಸಿ ಕೊಟ್ಟಿರುತ್ತದೆ. ಪ್ರಸ್ತುತ ಜಾರಿಯಲ್ಲಿರುವ ನಿಯಮಗಳು ಕೇಂದ್ರ ಸರ್ಕಾರವು ಒದಗಿಸಿರುವ ಹಣಕಾಸು ಯೋಜನೆಯ ಮಾರ್ಗಸೂಚಿಗಳಿಗೆ ವ್ಯತಿರಿಕ್ತವಾಗಿರುವುದರಿಂದ ಜಾರಿಯಲ್ಲಿರುವ ನಿಯಮಗಳನ್ನು ನಿರಸನಗೊಳಿಸಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸಲು ನಿರ್ಧರಿಸಲಾಗಿದೆ.

ಮೇಲೆ (4)ರಲ್ಲಿ ಓದಲಾಗಿರುವ ಸರ್ಕಾರಿ ಆದೇಶದಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆ ನಿಯಮಗಳು, 1999ನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿರಸನ ಗೊಳಿಸಲಾಗಿದೆ. ಹಾಗೂ ಸಂಸದೀಯ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ ಇವರ ಪತ್ರ ಸಂಖ್ಯೆ:ಎಫ್ 2(2) 2005-ಆರ್ ಸಿ, ದಿನಾಂಕ:7.2.2006 ಹಾಗೂ ಇದರೊಂದಿಗೆ ಲಗತ್ತಿಸಿರುವ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸುವುದಕ್ಕಾಗಿ ರಾಜ್ಯಗಳು/ ಕೇಂದ್ರಾಡಳಿತ ಪ್ರದೇಶಗಳಿಗೆ ಹಣಕಾಸಿನ ಯೋಜನೆ 2006ನ್ನು (ಅನುಬಂಧದಲ್ಲಿ ಲಗತ್ತಿಸಿ) ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯದಲ್ಲಿ ಜಾರಿ ಗೊಳಿಸಲು ಆದೇಶಿಸಿದೆ.

ಮೇಲೆ (5)ರಲ್ಲಿ ಓದಲಾಗಿರುವ ಸರ್ಕಾರದ ಆದೇಶದಲ್ಲಿ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ನಡೆಸಲಾಗುತ್ತಿರುವ ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಹಾಗೂ ವಿಷಯಾಭಿಮುಖ ಶಿಕ್ಷಣವನ್ನು ಅವರಿಗೆ ನೀಡಲು ಜಿಲ್ಲಾ ಮಟ್ಟದಲ್ಲಿ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸಲು ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿದೆ. ಈ ರೀತಿ ಜಾರಿ ಗೊಳಿಸಿದ ಮಾರ್ಗಸೂಚಿಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಮೊದಲ 5 ಸ್ಥಾನ ಗಳಿಸಿದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ನೀಡಲು ಅವಕಾಶವಿರುವುದರಿಂದ ಅಂತಹ ವಿದ್ಯಾರ್ಥಿಗಳು ರಾಜ್ಯಮಟ್ಟದ ಸ್ಪರ್ಧೆಗೆ ತಮಗೂ ಅವಕಾಶ ನೀಡಬೇಕೆಂದು ಜಿಲ್ಲಾ ಮಟ್ಟದ ತೀರ್ಪುಗಾರರ ಸಮಿತಿಯ ಸದಸ್ಯರಿಗೆ ಒತ್ತಡ ತರುತ್ತಿದ್ದು, ರಾಜ್ಯಮಟ್ಟದ ಸ್ಪರ್ಧೆಗಳಿಗೆ ಮೊದಲ 5 ಸ್ಥಾನ ಗಳಿಸಿದ ವಿದ್ಯಾರ್ಥಿಗಳ ಪೈಕಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಗಳಿಸಿದ ವಿದ್ಯಾರ್ಥಿಗಳನ್ನು ಮಾತ್ರ ಆಯ್ಕೆ ಮಾಡಲಾಗುವುದು ಎಂಬ ಅಂಶವನ್ನು ಸ್ಪಷ್ಟಪಡಿಸಲು ಮೇಲೆ (5)ರಲ್ಲಿ ಹೊರಡಿಸಿರುವ ಸರ್ಕಾರದ ಆದೇಶದ ಅನುಬಂಧಕ್ಕೆ ತಿದ್ದುಪಡಿ ಮಾಡಲು ಉದ್ದೇಶಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಸಂವ್ಯಶಾಇ 6 ಸಂವ್ಯವಿ 2008, ಬೆಂಗಳೂರು, ದಿನಾಂಕ:20.06.2008**

ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ 31 ಸಂವ್ಯವಿ 2007, ದಿನಾಂಕ:27.6.2007ರ ಅನುಬಂಧದಲ್ಲಿ **2. ರಾಜ್ಯಮಟ್ಟದ ಯುವ ಸಂಸತ್ ಸ್ಪರ್ಧೆ** ಶೀರ್ಷಿಕೆಯ ಅಡಿಯಲ್ಲಿ ಈ ಮುಂದಿನದನ್ನು ಪ್ರತ್ಯಾಯೋಜಿಸತಕ್ಕದ್ದು ಅಂದರೆ,-

‘‘ಪ್ರತಿಯೊಂದು ಜಿಲ್ಲೆಗೆ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯ ವತಿಯಿಂದ ನೇಮಕಗೊಂಡಿರುವ ತೀರ್ಪುಗಾರರ ಸಮಿತಿಯ ಸದಸ್ಯರು ತಮ್ಮ ಜಿಲ್ಲೆಯಿಂದ ಆಯ್ಕೆಯಾದ

ಮೊದಲ 5 ಸ್ಥಾನ ಗಳಿಸಿದ ವಿದ್ಯಾರ್ಥಿಗಳ ಪೈಕಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಗಳಿಸಿದ ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆ ನಡೆಯುವ ಪೂರ್ವದಲ್ಲಿ ಸೂಕ್ತ ಸಮಯದಲ್ಲಿ ಆಹ್ವಾನ ಪತ್ರಿಕೆ ಲಭ್ಯವಾಗುವಂತೆ ಕ್ರಮ ಜರುಗಿಸುವುದು ಹಾಗೂ ರಾಜ್ಯ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಸದರಿ ಸ್ಪರ್ಧಿಗಳಿಗೆ ಊಟ, ವಸತಿ ಇತ್ಯಾದಿಗಳಿಗೆ ಕ್ರಮ ಜರುಗಿಸತಕ್ಕದ್ದು. ಯಾವುದೇ ಸಂದರ್ಭದಲ್ಲೂ ಜಿಲ್ಲಾ ಮಟ್ಟದಿಂದ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿ ಸ್ಪರ್ಧಿಸುವ ವಿದ್ಯಾರ್ಥಿಗಳ ಸಂಖ್ಯೆಯು ಪ್ರತಿ ಜಿಲ್ಲೆಯಿಂದ ಎರಡಕ್ಕಿಂತಾ ಅಧಿಕವಾಗಿರತಕ್ಕುದಲ್ಲ.”

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸಹಿ/-
(ಬಿ.ಜಿ. ಶ್ಯಾಮಲ)
ಸಹಾಯಕ ಪ್ರಾರೂಪಕಾರ ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

ಗೆ,

1. ಸರ್ಕಾರದ ಮುಖ್ಯ ಕಾರ್ಯದರ್ಶಿ : ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕರ್ನಾಟಕ ವಿಧಾನಮಂಡಲ, ವಿಧಾನ ಸೌಧ, ಬೆಂಗಳೂರು.
5. ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಪೌರಾಡಳಿತ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ,
6. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ನಂ.4., 100 ಫೀಟ್ ರಿಂಗ್ ರೋಡ್, (ಕೆ.ಎಸ್.ಹಾಸ್ಪೆಟಲ್ ಪಕ್ಕದಲ್ಲಿ) ಹೊಸಕೆರೆಹಳ್ಳಿ,ಬೆಂಗಳೂರು - 560 085.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನ ಸೌಧ, ಬೆಂಗಳೂರು.
8. ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಇವರಿಗೆ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಮತ್ತು ಅದರ 100 ಪ್ರತಿಗಳನ್ನು ಈ ಇಲಾಖೆಗೆ ಒದಗಿಸಲು.
9. ಎಲ್ಲಾ ಅಧಿಕಾರಿಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.
10. ಶಾಖಾ ರಕ್ಷಕ ಕಡತ.
11. ಹೆಚ್ಚುವರಿ ಪ್ರತಿ.

## ಜಿಲ್ಲಾಮಟ್ಟದ ಯುವ ಸಂಸತ್ ಸ್ಪರ್ಧೆಯ ಮಾರ್ಗಸೂಚಿಗಳು

**1. ಯುವ ಸಂಸತ್ ಸ್ಪರ್ಧೆಯ ವ್ಯವಸ್ಥೆ:–** (ಎ) ಸಂಬಂಧಪಟ್ಟ ಶೈಕ್ಷಣಿಕ ಜಿಲ್ಲೆಗಳ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ತಮ್ಮ ಜಿಲ್ಲೆಯ ನೋಡಲ್ ಅಧಿಕಾರಿ ಹಾಗೂ ಇತರ ಸಿಬ್ಬಂದಿಯ ಸಮನ್ವಯದೊಂದಿಗೆ ಯುವಸಂಸತ್ ಸ್ಪರ್ಧೆಯನ್ನು ಸರ್ಕಾರ ನಿಗದಿಪಡಿಸಿದ ಕಾಲಮಿತಿಯೊಳಗೆ ವ್ಯವಸ್ಥಿತವಾಗಿ ನಡೆಸತಕ್ಕದ್ದು. ಸ್ಪರ್ಧೆಗಾಗಿ ಉತ್ತಮ ವೇದಿಕೆ, ಧ್ವನಿವರ್ಧಕ, ಹಾಗೂ ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಉಪಹಾರ, ಸ್ಪರ್ಧಾವಿಜೇತರಿಗೆ ಬಹುಮಾನ, ಮುಂತಾದವನ್ನು ಪ್ರತಿ ಜಿಲ್ಲೆಗೆ ನೀಡಲಾಗುವ ಅನುದಾನದಿಂದ ಏರ್ಪಾಡು ಮಾಡತಕ್ಕದ್ದು.

(ಬಿ) ಜಿಲ್ಲಾ ಮಟ್ಟದ ಸ್ಪರ್ಧೆಗೆ 2008–09ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಪ್ರತಿಯೊಂದು ಜಿಲ್ಲೆಗೆ ರೂ. 6,000/– (ಆರು ಸಾವಿರ ರೂಪಾಯಿಗಳು ಮಾತ್ರ) ಅಥವಾ ಸ್ಪರ್ಧೆಯ ವಾಸ್ತವ ವೆಚ್ಚ ಇವುಗಳಲ್ಲಿ ಯಾವುದು ಕಡಿಮೆಯೋ ಅದನ್ನು ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆಯ ಮೂಲಕ ನೀಡಲಾಗುವುದು.

**2. ಯುವ ಸಂಸತ್ ಸ್ಪರ್ಧೆಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವ ವಿಧಾನ.–** ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಗಳಿಗೆ ಕರ್ನಾಟಕ ರಾಜ್ಯದ ಮಾನ್ಯತೆ ಪಡೆದ ಎಲ್ಲಾ ಪ್ರೌಢ ಶಾಲೆಗಳ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸುವ ಅರ್ಹತೆ ಹೊಂದಿರುವುದರಿಂದ ಸುಮಾರು 60 ರಿಂದ 90 ವಿದ್ಯಾರ್ಥಿಗಳು ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸುವಂತೆ ಅವಕಾಶ ನೀಡಬೇಕು. ಇದಕ್ಕಾಗಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವಾಗ ಈ ಮುಂದೆ ಹೇಳಿದ ಅರ್ಹತೆಗಳನ್ನು ಸಾಮಾನ್ಯವಾಗಿ ಪರಿಗಣಿಸಬೇಕು.

(1) ಚರ್ಚಿಸುವ ಸಾಮರ್ಥ್ಯವಿರುವ ವಿದ್ಯಾರ್ಥಿಗಳು.

(2) ನಮ್ಮ ದೇಶದ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಸಮಸ್ಯೆಗಳ ಬಗ್ಗೆ ಸಾಕಷ್ಟು ಚೆನ್ನಾಗಿ ತಿಳಿದುಕೊಂಡ ವಿದ್ಯಾರ್ಥಿಗಳು.

(3) ತಮ್ಮ ತಮ್ಮ ತರಗತಿಗಳಲ್ಲಿ ಉತ್ತಮ ಮೆರಿಟ್ ಪಡೆದಿರುವ ವಿದ್ಯಾರ್ಥಿಗಳು.

(4) ಮುಖಂಡತ್ವದ ಗುಣಗಳಿರುವ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಆಸಕ್ತಿ ಇರುವ ವಿದ್ಯಾರ್ಥಿಗಳು.

(5) ಮಾಧ್ಯಮಿಕ ಶಾಲೆಗಳು ಮತ್ತು ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು.

ಪ್ರತಿ ವರ್ಷವೂ ಹೊಸ ವಿದ್ಯಾರ್ಥಿಗಳ ಗುಂಪುಗಳಿಗೆ ಆದ್ಯತೆ ನೀಡಿ, ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸುವಂತೆ ನೋಡಿಕೊಳ್ಳಬೇಕೆಂದು ಮತ್ತು ಪ್ರಶ್ನೋತ್ತರ ಅವಧಿಯಲ್ಲಿ ಮತ್ತು ಇತರ ಶಾಸನ–ಕಲಾಪಗಳ ಅವಧಿಯಲ್ಲಿ ಆಯ್ಕೆ ಮಾಡಿದ ವಿಷಯಗಳಿಗೆ ಸಂಬಂಧಪಟ್ಟ ಅಂಕಿ

ಅಂಶಗಳನ್ನು ಸಂಗ್ರಹಿಸುವಂತೆ ಅವರಿಗೆ ಸೂಚಿಸಬೇಕು. ವಿದ್ಯಾರ್ಥಿನಿಯರಿಗೂ ಯುವ ಸಂಸತ್ತಿನಲ್ಲಿ ಭಾಗವಹಿಸಲು ಸಮಾನ ಅವಕಾಶ ನೀಡತಕ್ಕದ್ದು.

**3. ಯುವ ಸಂಸತ್ ರಚನೆ.–** (ಎ) ಪ್ರತಿ ಜಿಲ್ಲೆಯಲ್ಲಿ, ನಿಗದಿತ ದಿನಾಂಕ ಹಾಗೂ ಸ್ಥಳದಲ್ಲಿ ಅಧಿವೇಶನದಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳು ಹತ್ತು ಗಂಟೆಗೆ ತಮ್ಮ ಹೆಸರನ್ನು ನೋಂದಾಯಿಸುವರು.

(ಬಿ) ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯಿಂದ ನಿಯೋಜಿತ ತೀರ್ಪುಗಾರರ ಸಮಿತಿಯ ಸದಸ್ಯರು ವಿದ್ಯಾರ್ಥಿಗಳನ್ನು,–

ಶೇಕಡ 60 – ಆಡಳಿತ ಪಕ್ಷದ ಸದಸ್ಯರು.

ಶೇಕಡ 40 – ವಿರೋಧ ಪಕ್ಷದ ಸದಸ್ಯರನ್ನಾಗಿ ವಿಂಗಡಿಸುವರು.

(ಸಿ) ಆಡಳಿತ ಪಕ್ಷದ ಸದಸ್ಯರು ತಮ್ಮೊಳಗೆ ಇಬ್ಬರನ್ನು ಆರಿಸುವರು. ಇವರಲ್ಲಿ ಒಬ್ಬರನ್ನು "ಮುಖ್ಯಮಂತ್ರಿ" ಎಂದು ಕರೆಯಲಾಗುವುದು. ಹಾಗೂ ಇನ್ನೊಬ್ಬರನ್ನು ಸಭಾಧ್ಯಕ್ಷರು (speaker) ಯೆಂದು ಕರೆಯಲಾಗುವುದು. ಮುಖ್ಯಮಂತ್ರಿಯವರು ಆಡಳಿತ ಪಕ್ಷದ 5 ಸದಸ್ಯರನ್ನು ಮಂತ್ರಿಗಳನ್ನಾಗಿ ಆರಿಸುವರು. ಇವರನ್ನು

(ಅ) ಶಿಕ್ಷಣ ಸಚಿವರು.

(ಆ) ಗೃಹ ಸಚಿವರು.

(ಇ) ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು.

(ಈ) ಆರೋಗ್ಯ ಸಚಿವರು; ಹಾಗೂ

(ಉ) ಸಮಾಜ ಕಲ್ಯಾಣ ಸಚಿವರು.

ಎಂದು ನಾಮಕರಣ ಮಾಡಲಾಗುವುದು.

(ಡಿ) ವಿರೋಧ ಪಕ್ಷದ ಸದಸ್ಯರು ಸಮನಾದ ಮೂರು ಪಂಗಡಗಳಲ್ಲಿ ವಿಭಜಿಸಿ ಕೊಳ್ಳುವರು, ಪ್ರತಿಯೊಂದು ವಿರೋಧ ಪಕ್ಷವನ್ನು

(ಅ) ವಿರೋಧ ಪಕ್ಷ–1

(ಆ) ವಿರೋಧ ಪಕ್ಷ–2

(ಇ) ವಿರೋಧ ಪಕ್ಷ–3

ಎಂದು ಕರೆಯಲಾಗುವುದು. ವಿರೋಧ ಪಕ್ಷದ ಸದಸ್ಯರು ತಮ್ಮೊಳಗೆ ಒಬ್ಬ ನಾಯಕನನ್ನು ಆರಿಸುವರು. ಅವರನ್ನು ಆಯಾ ವಿರೋಧ ಪಕ್ಷದ ಹೆಸರಿನ ನಾಯಕರೆಂದು ಕರೆಯಲಾಗುವುದು.

4. **ಆಸನಗಳ ವ್ಯವಸ್ಥೆ.–** (ಎ) ಆಡಳಿತ ಪಕ್ಷದ ಸದಸ್ಯರು ಕೊಠಡಿಯ (ಇನ್ನು ಮುಂದೆ ಸದನ ಎಂದು ಕರೆಯಲಾಗುವುದು) ಬಲ ಭಾಗದಲ್ಲಿ, ವಿರೋಧ ಪಕ್ಷದ ಸದಸ್ಯರು ಸದನದ ಎಡಭಾಗದಲ್ಲಿ ಕುಳಿತು ಕೊಳ್ಳುವರು. ಸಭಾಧ್ಯಕ್ಷರ ಆಸನವು ಸದನದ ವೇದಿಕೆಯಲ್ಲಿ ಇರುವುದು. ಮುಖ್ಯಮಂತ್ರಿ ಹಾಗೂ ಇತರ ಸಚಿವರು ಆಡಳಿತ ಪಕ್ಷದ ಆಸನಗಳಲ್ಲಿ ಮುಂದಿನ ಸ್ಥಾನಗಳನ್ನು, ವಿರೋಧ ಪಕ್ಷದ ಮುಖಂಡರು ತಮ್ಮ ಪಕ್ಷದ ವಿಭಾಗದಲ್ಲಿ ಮುಂದಿನ ಸ್ಥಳಗಳಲ್ಲಿ ಆಸೀನರಾಗುವರು.

(ಬಿ) ತೀರ್ಪುಗಾರರ ಸಮಿತಿಯ ಸದಸ್ಯರು ಎಲ್ಲಾ ಸದಸ್ಯರನ್ನು ವೀಕ್ಷಿಸಲು ಹಾಗೂ ಆಲಿಸಲು ಸಾಧ್ಯವಾಗುವಂತಹ ಸೂಕ್ತ ಸ್ಥಳದಲ್ಲಿ ಆಸೀನರಾಗುವರು.

5. **ಸ್ಪರ್ಧೆಗಳನ್ನು ನಡೆಸುವ ವಿಧಾನ.–**(ಎ) ಮೊದಲಿಗೆ ಆಡಳಿತ ಹಾಗೂ ವಿರೋಧ ಪಕ್ಷದ ಸದಸ್ಯರು ತಮ್ಮ ತಮ್ಮ ನಾಯಕರನ್ನು ಆಯ್ಕೆ ಮಾಡಲು ವಿಫಲರಾದಲ್ಲಿ ತೀರ್ಪುಗಾರರ ಸಮಿತಿಯ ಸದಸ್ಯರು ಅವರಿಗೆ ಮಾರ್ಗದರ್ಶನ ನೀಡುವರು ಅಥವಾ ಸೂಕ್ತ ವಿದ್ಯಾರ್ಥಿಯನ್ನು ನಾಮನಿರ್ದೇಶನ ಮಾಡುವರು. ಮೇಲಿನ ಪ್ರಕಾರ್ಯಗಳು 10–00 ಗಂಟೆಯಿಂದ 10–55 ರೊಳಗೆ ಮುಕ್ತಾಯಗೊಳ್ಳಬೇಕಾಗಿದೆ.

(ಬಿ) 11–00 ಗಂಟೆಗೆ "ಸಭಾಧ್ಯಕ್ಷರು ಸದನಕ್ಕೆ ಆಗಮಿಸುತ್ತಿದ್ದಾರೆ" ಯೆಂಬುದಾಗಿ ಶಾಲಾ ಸಿಬ್ಬಂದಿಯೊಬ್ಬರು ಘೋಷಿಸುವರು.

(ಸಿ) ಸದನದ ಸದಸ್ಯರು ತಮ್ಮ ಆಸನಗಳಿಂದ ಎದ್ದು ನಿಲ್ಲುವರು. ಸಭಾಧ್ಯಕ್ಷರು ತಮ್ಮ ಸ್ಥಾನದಲ್ಲಿ ಕುಳಿತ ನಂತರ ಸದಸ್ಯರು ಆಸೀನರಾಗುವರು.

(ಡಿ) ಸಭಾಧ್ಯಕ್ಷರು.– 1. ಪ್ರಶ್ನೋತ್ತರ

ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಪ್ರಶ್ನೆಗಳು

ಪ್ರಶ್ನೆ ಸಂಖ್ಯೆ–1

ಸಚಿವರು – ಉತ್ತರ ಒದಗಿಸಲಾಗಿದೆ.
ಸಭಾಧ್ಯಕ್ಷರು – ಪ್ರಶ್ನೆ ಸಂಖ್ಯೆ –2
ಸಚಿವರು – ಉತ್ತರ ಒದಗಿಸಲಾಗಿದೆ.
(ಇದೇ ಕ್ರಮವನ್ನು ಅನುಬಂಧ–3 ರ ಪ್ರಶ್ನೆಗಳ ಬಗ್ಗೆ ಅನುಸರಿಸಲಾಗುವುದು)
ಸಭಾಧ್ಯಕ್ಷರು – ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಪ್ರಶ್ನೆಗಳು ಮುಗಿದಿವೆ.

ಲಿಖಿತ ಮೂಲಕ ಉತ್ತರಿಸುವ (ಚುಕ್ಕೆ ಗುರುತಿಲ್ಲದ) ಪ್ರಶ್ನೆಗಳು

ಸಚಿವರು – ಉತ್ತರಗಳನ್ನು ಕಳುಹಿಸಲಾಗಿದೆ.

ಪ್ರಶ್ನೆ ಕೇಳುವ ಸದಸ್ಯರು – (ಅ) ಉತ್ತರಗಳು ತೃಪ್ತಿಕರವಿಲ್ಲ;
(ಆ) ಉತ್ತರಗಳು ಸತ್ಯಕ್ಕೆ ದೂರವಾಗಿದೆ.
(ಇ) ಮಾನ್ಯ ಸಚಿವರು ಆಶ್ವಾಸನೆ ಕೊಡಬೇಕು.
(ಮುಂತಾದ ವಿಷಯಗಳ ಬಗ್ಗೆ ಮಾತಾಡುವರು)

ಇತರೆ ಸದಸ್ಯರು – ಅಧ್ಯಕ್ಷರ ಅನುಮತಿಯೊಂದಿಗೆ ಉತ್ತರಗಳ ಬಗ್ಗೆ ಮಾತಾಡಬಹುದು.

(ಇದೇ ಕ್ರಮವನ್ನು ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಪ್ರಶ್ನೆಗಳ ಬಗ್ಗೆ ಜರುಗಿಸುವುದು)

(ಇ) **ಶೂನ್ಯ ವೇಳೆ.–** ವಿಧಾನ ಸಭೆಯ ಕಾರ್ಯಕಲಾಪಗಳ ಪಟ್ಟಿಯಲ್ಲಿ ನಿಗದಿಪಡಿಸಿರುವ ಒಂದು ಕಾರ್ಯಕಲಾಪವನ್ನು ಪೂರೈಸಿದನಂತರ ಇನ್ನೊಂದು ಕಾರ್ಯಕಲಾಪ ಪ್ರಾರಂಭಿಸುವ ಅವಧಿಯನ್ನು "ಶೂನ್ಯ ವೇಳೆ" ಯೆಂದು ಕರೆಯಲಾಗುವುದು. ಪ್ರಸ್ತುತ ಅಧಿವೇಶನದಲ್ಲಿ ಪ್ರಶ್ನೋತ್ತರ ಮುಗಿದಿದೆ. "ಗಮನ ಸೆಳೆಯುವ ಸೂಚನೆ" ಗಳನ್ನು ತೆಗೆದು ಕೊಳ್ಳಬೇಕಾಗಿದೆ. ಈ ಶೂನ್ಯ ವೇಳೆಯಲ್ಲಿ ಅನೇಕ ಶಾಸಕರು ಪ್ರಸ್ತುತ ನಡೆಯುತ್ತಿರುವ ಎಸ್. ಎಸ್. ಎಲ್. ಸಿ. ಪರೀಕ್ಷೆಯಲ್ಲಿ "ವಿಜ್ಞಾನ" ವಿಷಯಕ್ಕೆ ಸಂಬಂಧಪಟ್ಟ ಪ್ರಶ್ನೆ ಪತ್ರಿಕೆಗಳು ಬಯಲಾಗಿರುವ ವಿಷಯದ ಬಗ್ಗೆ ಪ್ರಸ್ತಾಪಿಸಲು ಎದ್ದು ನಿಂತು ಅಧ್ಯಕ್ಷರ ಅನುಮತಿ ಕೋರುವರು.

ಸದಸ್ಯರು: ಪ್ರಸ್ತುತ ನಡೆಯುತ್ತಿರುವ ಎಸ್. ಎಸ್. ಎಲ್. ಸಿ. ಪರೀಕ್ಷೆಯ ವಿಜ್ಞಾನ ವಿಷಯದ ಪ್ರಶ್ನೆ ಪತ್ರಿಕೆ ನೂರು ರೂಪಾಯಿಗೆ ದೊರೆಯುತ್ತಿದೆ. ಇದರ ಬಗ್ಗೆ ಪ್ರಸ್ತಾಪಿಸಲು ನಮಗೆ ಅನುಮತಿ ಕೊಡಬೇಕು ಇತ್ಯಾದಿ.

ಸಭಾಧ್ಯಕ್ಷರು: ತಾವು ಎತ್ತ ಬೇಕೆಂದಿರುವ ವಿಷಯದ ಬಗ್ಗೆ ಸೂಚನಾ ಪತ್ರ ಕೊಡಿ. ಮಾನ್ಯ ಸಚಿವರು ಅದಕ್ಕೆ ಉತ್ತರಿಸಲು ಕಾಲಾವಕಾಶ ಬೇಕು. ನಂತರ ತೆಗೆದುಕೊಳ್ಳೋಣ.

ಸದಸ್ಯರು: ಇದು ಅತ್ಯಂತ ಗಂಭೀರವಾದ ತುರ್ತು ವಿಷಯ ನಡೆಯುತ್ತಿರುವ ಪರೀಕ್ಷೆಗಳು ತುರ್ತಾಗಿ ನಿಲ್ಲಬೇಕು. ಉಳಿದ ಕಲಾಪಗಳನ್ನು ನಂತರ ತೆಗೆದುಕೊಳ್ಳಬಹುದು.

ಸಂಬಂಧಪಟ್ಟ ಸಚಿವರು: ಈಗಾಗಲೇ ನಾನು ಎಸ್. ಎಸ್. ಎಲ್. ಸಿ. ಪರೀಕ್ಷಾ ಮಂಡಳಿಯಿಂದ ವರದಿ ಕೋರಿದ್ದೇನೆ. ಇಂದು ಸಂಜೆ ವರದಿ ತಲುಪುವ ನಿರೀಕ್ಷೆಯಿದೆ. ನಾಳೆ ವಿಷಯವನ್ನು ಚರ್ಚೆಗೆ ತೆಗೆದುಕೊಳ್ಳಬಹುದು.

ಸಭಾಧ್ಯಕ್ಷರು: ವಿಷಯವನ್ನು ನಾಳಿನ ಕಾರ್ಯಕಲಾಪಗಳ ಪಟ್ಟಿಯಲ್ಲಿ "ಗಮನ ಸೆಳೆಯುವ ಸೂಚನೆಗಳಡಿಯಲ್ಲಿ ತೆಗೆದುಕೊಳ್ಳಲಾಗುವುದು" ಮುಂದಿನ ಕಾರ್ಯಕಲಾಪ "ಗಮನ ಸೆಳೆಯುವ ಸೂಚನೆ".

(ಎಫ್) **ಗಮನ ಸೆಳೆಯುವ ಸೂಚನೆ.–** ಅನುಬಂಧ – 4 ರಲ್ಲಿರುವ ವಿಷಯದ ಬಗ್ಗೆ ಸಂಬಂಧಪಟ್ಟ ಸಚಿವರು ವಿವರಣೆಯನ್ನು ನೀಡುವರು.

ಗಮನ ಸೆಳೆಯುವ ಸೂಚನೆ ನೀಡಿರುವ ಶಾಸಕರು "ವಿವರಣೆ ತೃಪ್ತಿಕರವಾಗಿಲ್ಲ". ವಾಸ್ತವಿಕತೆ ದೂರವಾಗಿದೆ, ಸರ್ಕಾರವು ತಮ್ಮ ಅಸಮರ್ಥತೆಯನ್ನು ಒಪ್ಪಿಕೊಳ್ಳಬೇಕು. ಸದನ ಸಮಿತಿ ರಚಿಸಬೇಕು ಇತ್ಯಾದಿ ವಿಷಯಗಳ ಬಗ್ಗೆ ಮಾತಾಡುವರು.

ಉಳಿದ ಶಾಸಕರು ಅಧ್ಯಕ್ಷರ ಅನುಮತಿಯ ಮೇರೆಗೆ ಚರ್ಚೆಯಲ್ಲಿ ಭಾಗವಹಿಸಬಹುದು. ನಂತರ ಸಚಿವರು ಉತ್ತರ/ ಆಶ್ವಾಸನೆ ನೀಡುವರು.

(ಜಿ) **ಅಲ್ಪ ಕಾಲಾವಧಿ ಚರ್ಚೆ.–** ಅನುಬಂಧ – 5ರ ಅನ್ವಯ ಸೂಚನೆಯನ್ನು ಕೊಟ್ಟಿರುವ ಸದಸ್ಯರು ಒಂದು ಸಂಕ್ಷಿಪ್ತ ಹೇಳಿಕೆಯನ್ನು ಕೊಡುವರು. ಸಂಬಂಧಪಟ್ಟ ಮಂತ್ರಿಯವರು ಸಂಕ್ಷಿಪ್ತ ಉತ್ತರ ನೀಡುವರು. ಕೆಲವು ಸದಸ್ಯರು ಅಧ್ಯಕ್ಷರ ಅನುಮತಿ ಪಡೆದು ಚರ್ಚೆಯಲ್ಲಿ ಭಾಗವಹಿಸುವರು.

(ಹೆಚ್) **ವಿಧೇಯಕದ ಮಂಡನೆ.–** ಅನುಬಂಧ – 6 ರಲ್ಲಿರುವ ವಿಧೇಯಕವನ್ನು ಮಂಡಿಸುವಂತೆ ಸಂಬಂಧಪಟ್ಟ ಸಚಿವರಿಗೆ ಸಭಾಧ್ಯಕ್ಷರು ಸೂಚಿಸುವರು.

ಸಂಬಂಧಪಟ್ಟ ಸಚಿವರು (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) ಎದ್ದು ನಿಂತು.– ನಾನು ಕರ್ನಾಟಕ ದೇವದಾಸಿಯರ (ಸಮರ್ಪಣ ನಿಷೇಧ) (ತಿದ್ದುಪಡಿ) ವಿಧೇಯಕ, 2007ನ್ನು ಮಂಡಿಸುತ್ತಿದ್ದೇನೆ.

ಸಭಾಧ್ಯಕ್ಷರು – ವಿಧೇಯಕವನ್ನು ಮಂಡಿಸಲಾಗಿದೆ.

(ಐ) **ವಿಧೇಯಕದ ಪರ್ಯಾಲೋಚನೆ.–** ಸಂಬಂಧಪಟ್ಟ ಸಚಿವರು ವಿಧೇಯಕದ ಉದ್ದೇಶವನ್ನು ವಿವರಿಸುವರು ಹಾಗೂ ಮುಗಿಸಿದನಂತರ ಕುಳಿತು ಕೊಳ್ಳುವರು.

ಸಭಾಧ್ಯಕ್ಷರು: ವಿಧೇಯಕದ ಬಗ್ಗೆ ಚರ್ಚೆಯಲ್ಲಿ ಪಾಲ್ಗೊಳ್ಳಲು ಸೂಚನೆ ನೀಡಿರುವ ಶಾಸಕರ ಹೆಸರನ್ನು ಕರೆಯುವರು– ತಮ್ಮ ತಮ್ಮ ಸರದಿಯನ್ವಯ ಶಾಸಕರು ಚರ್ಚೆಯಲ್ಲಿ ಭಾಗವಹಿಸಿ ಸಲಹೆ/ಸೂಚನೆ ನೀಡುವರು.

ಸಂಬಂಧಪಟ್ಟ ಸಚಿವರು: ಸಲಹೆಗಳ ಬಗ್ಗೆ ಉತ್ತರಿಸುವರು. ಇದಾದ ನಂತರ

ಸಭಾಧ್ಯಕ್ಷರು: ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕಲಾಗಿದೆ. ವಿಧೇಯಕದ ಪರವಾಗಿರುವವರು "ಹೌದು" ಎಂದು ಉತ್ತರಿಸಬೇಕು. ವಿಧೇಯಕಕ್ಕೆ ವಿರುದ್ಧವಾಗಿರುವವರು "ಇಲ್ಲ" ಎಂದು ಉತ್ತರಿಸಬೇಕು ಎಂದು ಹೇಳುವರು.

(ಸದಸ್ಯರು ತಮ್ಮ ತಮ್ಮ ನಿರ್ಣಯಗಳನ್ನು "ಹೌದು" ಅಥವಾ "ಇಲ್ಲ" ಎಂದು ಉತ್ತರಿಸುವರು.)

ಸಭಾಧ್ಯಕ್ಷರು – ವಿಧೇಯಕ ಅಂಗೀಕಾರವಾಗಿದೆ.

ಸಭಾಧ್ಯಕ್ಷರು – ಇಂದಿನ ಕಾರ್ಯಕಲಾಪಗಳು ಮುಗಿದಿವೆ. ನಾಳೆ ಪೂರ್ವಾಹ್ನ

11–00 ಗಂಟೆಗೆ ಸೇರಲಾಗುವುದು.

ಎಂದು ತಿಳಿಸುವರು. ಸದಸ್ಯರೆಲ್ಲರೂ ಎದ್ದು ನಿಲ್ಲುವರು. ಸಭಾ ಸದಸ್ಯರು ನಿರ್ಗಮಿಸಿದ ನಂತರ ಸದಸ್ಯರು ತಮ್ಮ ಆಸನಗಳಿಂದ ನಿರ್ಗಮಿಸುವರು.

ಮಾದರಿ ಕಾರ್ಯಕ್ರಮ ಹಾಗೂ ಕಡ್ಡಾಯ ವಿಷಯಗಳ ಪಟ್ಟಿಯನ್ನು ಕ್ರಮವಾಗಿ ಅನುಬಂಧ–ಎ ಮತ್ತು ಅನುಬಂಧ–ಬಿ ಯಲ್ಲಿ ಒದಗಿಸಲಾಗಿದೆ.

**(ಜೆ) ಶಿಷ್ಟಾಚಾರ ಸಂಹಿತೆ** – ಸ್ಧರ್ಧೆಗೆ ಭಾಗವಹಿಸುವ ವಿದ್ಯಾರ್ಥಿಗಳು ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.–

(1) ವಿದ್ಯಾರ್ಥಿಗಳು ಕೊಟ್ಟ ವಿಷಯವನ್ನು ಮಾತನಾಡಬೇಕಾಗುತ್ತದೆ. ವಿಷಯವನ್ನು ಮೀರಿ ಮಾಡನಾಡಲು ಅವಕಾಶವಿರುವುದಿಲ್ಲ.

(2) ಶಿಸ್ತು ಸಂಯಮಗಳು, ನಿಯಮಗಳು ಎಲ್ಲಾ ಸ್ಪರ್ಧೆಯ ವಿದ್ಯಾರ್ಥಿಗಳಿಗೆ ಮೀಸಲಾಗಿರುತ್ತದೆ.

**6. ತೀರ್ಪುಗಾರರ ಸಮಿತಿಯ ರಚನೆ:–** ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯ ತೀರ್ಪುಗಾರರ ಸಮಿತಿಯಲ್ಲಿ,–

(1) ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಯ ನಿಯೋಜಿತ ಅಧಿಕಾರಿ;

(2) ಸಾರ್ವಜನಿಕ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಯ ದರ್ಜೆಗಿಂತ ಕಡಿಮೆ ಇಲ್ಲದ ಅಧಿಕಾರಿ;

(3) ಸ್ಥಳೀಯ ಶಾಸಕರು/ಜಿಲ್ಲಾ ಪಂಚಾಯತ್/ ತಾಲ್ಲೂಕ್ ಪಂಚಾಯತ್ ಸದಸ್ಯರು.

ಇರತಕ್ಕದ್ದು.

**7. ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸುವುದು ಹಾಗೂ ಬಹುಮಾನ:–** ಮೆರಿಟ್ ಪಟ್ಟಿ ಹಾಗೂ ವರದಿಯನ್ನು ರಾಜ್ಯಮಟ್ಟದ ಯುವ ಸಂಸತ್ ಸ್ಪರ್ಧೆಗೆ ನಿಗದಿ ಪಡಿಸಿರುವ ಮಾದರಿಯಲ್ಲೇ ಸಿದ್ದಪಡಿಸತಕ್ಕದ್ದು. ಬಹುಮಾನಗಳನ್ನು ಸ್ಥಳೀಯ ಅಗತ್ಯತೆಗಳಿಗನುಗುಣವಾಗಿ ಮೊದಲ 5 ಸ್ಥಾನ ಗಳಿಸಿದವರಿಗೆ ಉತ್ತಮ ನಿರ್ವಹಣೆಗಾಗಿ ಬಹುಮಾನಗಳನ್ನು ನೀಡುವುದರೊಂದಿಗೆ, ಸ್ಪರ್ಧಿಗಳಿಗೆ ಬಹುಮಾನ ನೀಡುವುದನ್ನು ತೀರ್ಪುಗಾರರ ಸಮಿತಿಯು ನಿರ್ಧರಿಸಬಹುದು. ಜಿಲ್ಲಾ ಮಟ್ಟದ ಸ್ಪರ್ಧಿಗಳಿಗೆ/ಶಾಲೆಗಳಿಗೆ ಅನುಬಂಧ IV ಮತ್ತು Vರಲ್ಲಿ ನಿಗದಿ ಪಡಿಸಿದ ರೀತ್ಯಾ ಪ್ರಮಾಣ ಪತ್ರಗಳನ್ನು ಸ್ಪರ್ಧೆಯ ಸ್ಥಳದಲ್ಲೇ ನೀಡಲಾಗುವುದು.

## ಅನುಬಂಧ – ಎ

### ಮಾದರಿ ಕಾರ್ಯಕ್ರಮಗಳು

| | | |
|---|---|---|
| ಪೂರ್ವಾಹ್ನ | 11.00 ರಿಂದ 11.30 ರವರೆಗೆ | ಉದ್ಘಾಟನೆ |
| | 11.30 ರಿಂದ 11.45 ರವರೆಗೆ | ಆಸನಗಳ ಜೋಡಣೆ ಇತ್ಯಾದಿ |
| | 11.45 ರಿಂದ ಅ. 1.00 ರವರೆಗೆ | ಮೊದಲನೆ ತಂಡದ ಪ್ರದರ್ಶನ |
| ಅಪರಾಹ್ನ | 1.00 ರಿಂದ 2.00 ರವರೆಗೆ | ಊಟದ ವಿರಾಮ |
| | 2.00 ರಿಂದ 3.15 ರವರೆಗೆ | ಎರಡನೆ ತಂಡದ ಪ್ರದರ್ಶನ |
| | 3.15 ರಿಂದ 3.45 ರವರೆಗೆ | ಫಲಿತಾಂಶ ನಿರ್ಣಯ |
| | 3.45 ರಿಂದ 4.14 ರವರೆಗೆ | ಮುಕ್ತಾಯ |

## ಅನುಬಂಧ – ಬಿ

### ಭಾಗ – I – ಕಡ್ಡಾಯ ವಿಷಯಗಳ ಪಟ್ಟಿ

1. ಸಭಾಧ್ಯಕ್ಷರ ಆಗಮನ
2. ಪ್ರಶ್ನೋತ್ತರ ವೇಳೆ
3. ಗಮನ ಸೆಳೆಯುವ ಸೂಚನೆಗಳು
4. ವಿಧೇಯಕಗಳ ಮಂಡನೆ
5. ಅಲ್ಪ ಕಾಲಾವಧಿ ಚರ್ಚೆ

## ಭಾಗ –2 ಐಚ್ಛಿಕ ವಿಷಯಗಳ ಪಟ್ಟಿ

1. ಸಂತಾಪ ಸೂಚನೆಗಳು
2. ಶೂನ್ಯ ವೇಳೆ
3. ವಿಧೇಯಕಗಳ ಪರಿಶೀಲನೆ / ಅಂಗೀಕಾರ
4. ಇಲಾಖಾ ಬೇಡಿಕೆಗಳ ಮೇಲಿನ ಚರ್ಚೆ
5. ಖಾಸಗೀ ಕಲಾಪಗಳು (ನಿರ್ಣಯ ಅಥವಾ ಖಾಸಗೀ ವಿಧೇಯಕದ ಮಂಡನೆ ಇತ್ಯಾದಿ)

ಸ್ಪರ್ಧೆಯ ಬಗ್ಗೆ ಸ್ಪಷ್ಟೀಕರಣ ಅಗತ್ಯತೆ ಇದ್ದಲ್ಲಿ ನಿರ್ದೇಶಕರು, ಡಿ.ಎಸ್.ಇ.ಆರ್.ಟಿ., ಬಿ.ಪಿ. ವಾಡಿಯಾ ರಸ್ತೆ, ಬಸವನಗುಡಿ, ಬೆಂಗಳೂರು ಅಥವಾ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ, ವಿಧಾನಸೌಧ, ಬೆಂಗಳೂರು ಇವರನ್ನು ಸಂಪರ್ಕಿಸಬಹುದು.

# ಅನುಬಂಧ– IV

## ಕರ್ನಾಟಕ ಸರ್ಕಾರ

**ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ**

"ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ" 200 - 200

----------------------------------------- ಶಾಲೆಯ-------------------------------- ತರಗತಿಯ ವಿದ್ಯಾರ್ಥಿ / ವಿದ್ಯಾರ್ಥಿನಿಯಾದ -------------------------------------------------- -- ಅವರಿಗೆ 200 - 200 ನೇ ಶೈಕ್ಷಣಿಕ ವರ್ಷದಲ್ಲಿ ಕರ್ನಾಟಕ ಸರ್ಕಾರದ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸಹಭಾಗಿತ್ವದಲ್ಲಿ ನಡೆಸಲಾದ **"ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ"** ಯಲ್ಲಿ ಅತ್ಯುತ್ತಮ ಸಾಧನೆಗೆ ----------------------------- --- ಮೆರಿಟ್ ಬಹುಮಾನವನ್ನು ನೀಡಲಾಗಿದೆಯೆಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| ಸ್ಥಳ:____________ | ಉಪ ನಿರ್ದೇಶಕರು, | ಸಕ್ಷಮ ಪ್ರಾಧಿಕಾರಿ |
| ದಿನಾಂಕ:_________ | ಸಾರ್ವಜನಿಕ ಶಿಕ್ಷಣ ಇಲಾಖೆ | ಸಂಸದೀಯ ವ್ಯವಹಾರಗಳು ಮತ್ತು |
| | ______________ ಜಿಲ್ಲೆ | ಶಾಸನ ರಚನೆ ಇಲಾಖೆ |

# ಅನುಬಂಧ– V

## ಕರ್ನಾಟಕ ಸರ್ಕಾರ

**ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ**

**ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ 200 - 200**

------------------------------------------------------------------ಈ ಶಾಲೆಯು ಕರ್ನಾಟಕ ಸರ್ಕಾರದ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹಭಾಗಿತ್ವದಲ್ಲಿ **200 - 200 ನೇ** ಶೈಕ್ಷಣಿಕ ವರ್ಷದಲ್ಲಿ ನಡೆಸಿದ **"ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ"** ಭಾಗವಹಿಸಿದೆಯೆಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| ಸ್ಥಳ:____________ | ಉಪ ನಿರ್ದೇಶಕರು, | ಸಕ್ಷಮ ಪ್ರಾಧಿಕಾರಿ |
| ದಿನಾಂಕ:_________ | ಸಾರ್ವಜನಿಕ ಶಿಕ್ಷಣ ಇಲಾಖೆ | ಸಂಸದೀಯ ವ್ಯವಹಾರಗಳು ಮತ್ತು |
| | ______________ ಜಿಲ್ಲೆ | ಶಾಸನ ರಚನೆ ಇಲಾಖೆ |

**ಕರ್ನಾಟಕ ರಾಜ್ಯದ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸುವ ಯುವ ಸಂಸತ್ ಸ್ಪರ್ಧೆಗೆ ಪೂರಕವಾಗಿ ಸಂಸತ್ ಕಾರ್ಯಕಲಾಪಗಳ ಬಗೆಗೆ ಕೆಲವು ವಿಶೇಷ ಮಾಹಿತಿಗಳು:–**

ಅಖಿಲ ಭಾರತ ಮುಖ್ಯ ಸಚೇತಕರ ಸಮ್ಮೇಳನವು ಮಾಡಿರುವ ಶಿಫಾರಸ್ಸುಗಳನ್ವಯ ಪ್ರಜಾಸತ್ತಾತ್ಮಕ ವ್ಯವಸ್ಥೆಯ ಬಗ್ಗೆ ಸಂಸತ್ತು, ವಿಧಾನ ಮಂಡಲದ ಅಧಿವೇಶನಗಳ ಬಗ್ಗೆ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಮಾಹಿತಿ ನೀಡುವ ಉದ್ದೇಶದಿಂದ ಕರ್ನಾಟಕ ರಾಜ್ಯದಲ್ಲಿ "ಯುವ ಸಂಸತ್" ಸ್ಪರ್ಧೆಗಳನ್ನು ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ನಡೆಸಲಾಗುತ್ತಿದೆ. ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ "ವಿಧಾನ ಸಭೆಯ" ಮಾದರಿ ಅಧಿವೇಶನವನ್ನು ನಡೆಸುವ ಕಾರ್ಯಕ್ರಮವನ್ನು ರೂಪಿಸಲಾಗಿದೆ.

**2. ವಿಧಾನ ಸಭೆಯ ರಚನೆ.–** ಭಾರತ ಸಂವಿಧಾನದ 170ನೇ ಅನುಚ್ಛೇದದ ಅನ್ವಯ ಕರ್ನಾಟಕ ರಾಜ್ಯದ ವಿಧಾನ ಸಭೆಯಲ್ಲಿ 224 ಚುನಾಯಿತ ಸದಸ್ಯರು ಹಾಗೂ ನಾಮನಿರ್ದೇಶಿತ ಒಬ್ಬ ಆಂಗ್ಲೋ ಇಂಡಿಯನ್ ಸದಸ್ಯರಿದ್ದಾರೆ.

**3. ವಿಧಾನ ಸಭೆಯ ಕಾರ್ಯಕಲಾಪಗಳು.–** ವಿಧಾನ ಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವಿಧಾನ ಸಭಾಧ್ಯಕ್ಷರ ಅನುಮೋದನೆಯೊಂದಿಗೆ ವಿಧಾನ ಸಭಾ ಸಚಿವಾಲಯದ ಕಾರ್ಯದರ್ಶಿಯವರು ಹೊರಡಿಸುವರು. ಕಾರ್ಯಕಲಾಪಗಳ ಪಟ್ಟಿಯಲ್ಲಿ,–

(ಅ) ಸಂತಾಪ ಸೂಚನೆ

(ಆ) ಪ್ರಶ್ನೋತ್ತರ

(ಇ) ವರದಿಗಳನ್ನು ಒಪ್ಪಿಸುವುದು

(ಈ) ಗಮನ ಸೆಳೆಯುವ ಸೂಚನೆಗಳು

(ಉ) ವಿತ್ತೀಯ ಕಾರ್ಯಕಲಾಪಗಳು

(ಊ) ಪೂರಕ ಕಾರ್ಯಕಲಾಪಗಳ ಪಟ್ಟಿ

(ಋ) ನಿಯಮ 69ರ ಅಡಿಯಲ್ಲಿ ಸಾರ್ವಜನಿಕ ಮಹತ್ವಗಳ ಜರೂರು ವಿಷಯದ ಚರ್ಚೆ.

(ಎ) ಶಾಸನ ರಚನೆ.

ಹಾಗೂ ಇನ್ನಿತರೆ ವಿಷಯಗಳನ್ನು ಸೇರಿಸಬಹುದು. ಪ್ರಸ್ತುತ ಅಧಿವೇಶನದ ಮಾದರಿ ಕಾರ್ಯಕಲಾಪಗಳ ಪಟ್ಟಿಯನ್ನು ಅನುಬಂಧ –I ರಲ್ಲಿ ಒದಗಿಸಲಾಗಿದೆ.

**4. ಸಂತಾಪ ಸೂಚನೆಗಳು:** ಅಧಿವೇಶನ ಪ್ರಾರಂಭವಾದ ದಿನದ ಮೊದಲಿಗೆ ಅಗಲಿದ ಗಣ್ಯ ವ್ಯಕ್ತಿಗಳಿಗೆ ಸಭಾಧ್ಯಕ್ಷರಿಂದ ಸಂತಾಪ ಸೂಚನೆ. ಸಂತಾಪ ಸೂಚನೆಯನ್ನು ಅನುಬಂಧ–2 ರಲ್ಲಿ ಒದಗಿಸಲಾಗಿದೆ.

**5. ಪ್ರಶ್ನೋತ್ತರಗಳು.–** (1) ಪ್ರತಿಯೊಂದು ದಿನದ ಅಧಿವೇಶನದ ಮೊದಲನೆಯ ಒಂದು ಗಂಟೆಯ ಅವಧಿಯನ್ನು ಪ್ರಶ್ನೆ ಕೇಳುವುದಕ್ಕೆ ಮತ್ತು ಉತ್ತರಿಸುವುದಕ್ಕೆ ಮೀಸಲಿಡಲಾಗುವುದು. ಸದರಿ ವಿಷಯದಲ್ಲಿ ಒಂದು ಉಪ ಪ್ರಶ್ನೆಗೆ ಅವಕಾಶವಿರುತ್ತದೆ.

(2) ಪ್ರಶ್ನೆಯನ್ನು ಕೇಳಲಿಚ್ಛಿಸುವ ಸದಸ್ಯರು 15 ದಿನಗಳಿಗೆ ಕಡಿಮೆ ಇಲ್ಲದೆ ಪ್ರಶ್ನೆಯ ಬಗ್ಗೆ ಸೂಚನಾ ಪತ್ರವನ್ನು ವಿಧಾನ ಸಭೆಯ ಕಾರ್ಯದರ್ಶಿಯವರಿಗೆ ಕೊಡಬೇಕು. ಪ್ರಶ್ನೆಯು ಲಿಖಿತ ರೂಪದಲ್ಲಿರಬೇಕು ಹಾಗೂ ಅದರಲ್ಲಿ ಯಾರಿಗೆ ಪ್ರಶ್ನೆ ಕೇಳಲಾಗಿದೆಯೋ ಆ ಸಚಿವರ ಪದನಾಮವನ್ನು ನಮೂದಿಸಬೇಕು.

(3) ಪ್ರಶ್ನೆಗಳನ್ನು,–

(ಅ) ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಪ್ರಶ್ನೆಗಳು; ಹಾಗೂ

(ಆ) ಲಿಖಿತ ಮೂಲಕ ಉತ್ತರಿಸುವ (ಚುಕ್ಕೆ ಗುರುತಿಲ್ಲದ) ಪ್ರಶ್ನೆಗಳು

ಎಂದು ವಿಂಗಡಿಸಲಾಗಿದೆ.

(4) ಪ್ರಶ್ನೆ ಕೇಳುವ ಬಗ್ಗೆ ಕೆಳಕಂಡ ಕೆಲವು ಪ್ರಮುಖ ಷರತ್ತುಗಳಿವೆ,–

(ಎ) ಒಂದು ಪ್ರಶ್ನೆಯು ಒಂದೇ ವಿಚಾರಕ್ಕೆ ಸಂಬಂಧ ಪಟ್ಟಿರಬೇಕು.

(ಬಿ) ಪ್ರಶ್ನೆಯು ಅರ್ಥವಾಗುವಂತೆ ಇರಬೇಕು.

(ಸಿ) ಪ್ರಶ್ನೆಯು ಸಾಮಾನ್ಯವಾಗಿ 150 ಪದಗಳನ್ನು ಮೀರತಕ್ಕುದಲ್ಲ.

(ಡಿ) ಸರ್ಕಾರಕ್ಕೆ ಸಂಬಂಧಪಡದ ಯಾವುದೇ ವಿಷಯಗಳ ಬಗ್ಗೆ ಪ್ರಶ್ನೆ ಕೇಳತಕ್ಕದ್ದಲ್ಲ.

(ಇ) ಕ್ಷುಲ್ಲಕ, ಸುಲಭವಾಗಿ ದೊರೆಯುವ ಮಾಹಿತಿಗಳನ್ನು ಕೇಳತಕ್ಕದ್ದಲ್ಲ.

(ಎಫ್) ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವ ವಿಷಯವನ್ನು ಪ್ರಶ್ನಿಸುವಂತಿಲ್ಲ. ಇತ್ಯಾದಿ.

(5) ವಿದ್ಯಾರ್ಥಿಗಳ ಉಪಯೋಗಕ್ಕಾಗಿ, ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಹಾಗೂ ಲಿಖಿತ ಮೂಲಕ ಉತ್ತರಿಸುವ (ಚುಕ್ಕೆ ಗುರುತಿಲ್ಲದ) ಪ್ರಶ್ನೆಗಳ ಕೆಲವು ಮಾದರಿಗಳನ್ನು ಅನುಬಂಧ–3 ರಲ್ಲಿ ಒದಗಿಸಲಾಗಿದೆ.

**6. ಗಮನ ಸೆಳೆಯುವ ಸೂಚನೆಗಳು.–** (1) ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಮಂತ್ರಿಯವರ ಗಮನಕ್ಕೆ ತರಬಹುದು. ಮಂತ್ರಿಯವರು ಸಂಕ್ಷಿಪ್ತವಾಗಿ ಒಂದು ಹೇಳಿಕೆಯನ್ನು ಕೊಡಬಹುದು ಅಥವಾ ಇನ್ನೊಂದು ದಿನ ತಮ್ಮ ಹೇಳಿಕೆ ನೀಡಲು ಕಾಲಾವಕಾಶ ಕೋರಬಹುದು.

(2) (ಅ) ಗಮನ ಸೆಳೆಯುವ ಸೂಚನೆಯನ್ನು ಒಂದಕ್ಕಿಂತ ಹೆಚ್ಚು ಸದಸ್ಯರು ಸಹಿ ಮಾಡಿದ್ದಲ್ಲಿ, ಕಾರ್ಯಕಲಾಪಗಳ ಪಟ್ಟಿಯಲ್ಲಿ ನಮೂದಿಸಿರುವ ಸದಸ್ಯರು ಗಮನ ಸೆಳೆಯಬಹುದು.

(ಆ) ಗಮನ ಸೆಳೆಯುವ ಕಾರ್ಯಕಲಾಪದಲ್ಲಿ ಚರ್ಚೆಗೆ ಅವಕಾಶವಿಲ್ಲ. ಆದರೆ ಸಭಾಧ್ಯಕ್ಷರ ಅನುಮತಿಯೊಂದಿಗೆ ಸ್ಪಷ್ಟೀಕರಣ ಕೋರಬಹುದು. ಗಮನ ಸೆಳೆಯುವ ಸೂಚನೆಗಳ ಮಾದರಿಗಳನ್ನು ಅನುಬಂಧ–4 ರಲ್ಲಿ ನೀಡಲಾಗಿದೆ.

**7. ಸಾರ್ವಜನಿಕ ಮಹತ್ವದ ಜರೂರು ವಿಷಯದ ಅಲ್ಪ ಕಾಲಾವಧಿ ಚರ್ಚೆ.–** ನಿಯಮ 69ರ ಅಡಿಯಲ್ಲಿ ಸಾರ್ವಜನಿಕ ಮಹತ್ವದ ಒಂದು ಜರೂರು ವಿಷಯದ ಮೇಲೆ ಚರ್ಚೆ ನಡೆಸಲು ಅಪೇಕ್ಷಿಸುವ ಸದಸ್ಯರು ಬರಹದ ಮೂಲಕ ಸೂಚನೆಯನ್ನು ವಿವರಣಾತ್ಮಕ ಟಿಪ್ಪಣಿಯೊಂದಿಗೆ ಕಾರ್ಯದರ್ಶಿಯವರಿಗೆ ಕೊಡಬಹುದು. ಆ ಸೂಚನೆಗೆ ಕನಿಷ್ಠ ಬೇರೆ ಇಬ್ಬರು ಸದಸ್ಯರು ತಮ್ಮ ಸಹಿಗಳನ್ನು ಹಾಕುವುದರ ಮೂಲಕ ಬೆಂಬಲಿಸಲ್ಪಟ್ಟಿರಬೇಕು. ನಿಯಮದ ಅಡಿಯಲ್ಲಿ ಸೂಚನೆಯನ್ನು ಕೊಟ್ಟಿರುವ ಸದಸ್ಯನು ಒಂದು ಸಂಕ್ಷಿಪ್ತ ಹೇಳಿಕೆಯನ್ನು ನೀಡಬಹುದು ಮತ್ತು ಮಂತ್ರಿಗಳು ಸಂಕ್ಷಿಪ್ತವಾಗಿ ಉತ್ತರ ನೀಡಬೇಕು. ಅಧ್ಯಕ್ಷರ ಅನುಮತಿ ಪಡೆದ ಸದಸ್ಯರು ಚರ್ಚೆಯಲ್ಲಿ ಭಾಗವಹಿಸಬಹುದು. ಈ ನಿಯಮದಡಿ ನೀಡುವ ಮಾದರಿ ಸೂಚನೆಯನ್ನು ಅನುಬಂಧ – 5 ರಲ್ಲಿ ಒದಗಿಸಿದೆ.

**8. ಶಾಸನ ರಚನೆ.–** (1) ಶಾಸನ ರಚನೆಯು ಶಾಸಕರ ಪ್ರಮುಖ ಅಧಿಕಾರ ಮತ್ತು ಕರ್ತವ್ಯಗಳಲ್ಲಿ ಒಂದು. ಭಾರತ ಸಂವಿಧಾನದ ಏಳನೇ ಅನುಸೂಚಿಯ ಎರಡನೇ ಪಟ್ಟಿ (ರಾಜ್ಯ ಪಟ್ಟಿ) ಹಾಗೂ ಮೂರನೇ ಪಟ್ಟಿ (ಸಂಯುಕ್ತ ಪಟ್ಟಿ) ಯಲ್ಲಿರುವ ವಿಷಯಗಳ ಬಗ್ಗೆ, ವಿಧಾನ ಸಭೆಯು ಶಾಸನಗಳನ್ನು ರಚಿಸಲು ಅಧಿಕಾರ ಹೊಂದಿದೆ.

(2) ಶಾಸನ ರಚನೆಯಲ್ಲಿ,–

(ಅ) ವಿಧೇಯಕವನ್ನು ಮಂಡಿಸುವುದು;

(ಆ) ವಿಧೇಯಕವನ್ನು ಪರ್ಯಾಲೋಚಿಸುವುದು; ಹಾಗೂ

(ಇ) ವಿಧೇಯಕವನ್ನು ಅಂಗೀಕರಿಸುವುದು.

ಈ ರೀತಿ ಮೂರು ಹಂತಗಳಿವೆ.

(3) ವಿಧೇಯಕಗಳನ್ನು ಸರ್ಕಾರವು ಸಂಬಂಧಪಟ್ಟ ಸಚಿವರ ಮುಖಾಂತರ ವಿಧಾನ ಸಭೆಯಲ್ಲಿ ಮಂಡಿಸುವುದು. ವಿಧೇಯಕದ ಪರ್ಯಾಲೋಚನೆಯಲ್ಲಿ ಆಡಳಿತ ಹಾಗೂ ವಿರೋಧ ಪಕ್ಷದ ಸದಸ್ಯರು ಸಲಹೆಗಳನ್ನು ನೀಡಬಹುದು ಹಾಗೂ ತಿದ್ದುಪಡಿಗಳನ್ನು ಸೂಚಿಸಬಹುದು. ಪರ್ಯಾಲೋಚನೆಯ ನಂತರ ವಿಧೇಯಕವನ್ನು ಖಂಡ ಖಂಡವಾಗಿ (clause by clause) ಮತಕ್ಕೆ ಹಾಕಲಾಗುವುದು ಹಾಗೂ ಅಂಗೀಕರಿಸಲಾಗುವುದು.

(4) ವಿಧೇಯಕದ ಮಾದರಿಯನ್ನು ಅನುಬಂಧ – 6 ಯಲ್ಲಿ ಕೊಡಲಾಗಿದೆ.

## ಅನುಬಂಧ – 1

ಮಾದರಿ-1

**(ಕರ್ನಾಟಕ ವಿಧಾನ ಸಭೆಯ ಮಾದರಿ ಕಾರ್ಯಕಲಾಪಗಳ ಪಟ್ಟಿ)**

**ಕರ್ನಾಟಕ ವಿಧಾನ ಸಭೆ**

ಹದಿಮೂರನೇ ವಿಧಾನ ಸಭೆ

(ಮೊದಲನೇ ಅಧಿವೇಶನ)

**ಕಾರ್ಯಕಲಾಪಗಳ ಪಟ್ಟಿ**

ದಿನಾಂಕ --------

(ಸಮಯ: ಬೆಳಿಗ್ಗೆ 10.00 ಗಂಟೆಗೆ)

---

**1. ಪ್ರಶ್ನೋತ್ತರ**

(i) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

(ii) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು :
ಹದಿಮೂರನೇ ಪಟ್ಟಿ

**2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು**

**ಶ್ರೀ ------------------ (ಹಣಕಾಸು ಸಚಿವರು) ಅವರು:–**

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್ 2007ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಧನವಿನಿಯೋಗ ಲೆಕ್ಕಪತ್ರಗಳು ಮತ್ತು ಆರ್ಥಿಕ ಲೆಕ್ಕಪತ್ರಗಳನ್ನು ಸಭೆಯ ಮುಂದಿಡುವುದು.

**3. ಚುನಾವಣಾ ಪ್ರಸ್ತಾವ**

**ಶ್ರೀ ------------------ (ಕಾನೂನು, ನ್ಯಾಯ ಮತ್ತು ಮಾನವಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) ಅವರು:**

1992ನೇ ಇಸವಿಯ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ನಿಯಮಾವಳಿ ನಿಯಮ 18(1)(8)ರ ಪ್ರಕಾರ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ವ್ಯವಸ್ಥಾಪನ ಮಂಡಳಿಗೆ ಇಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

## 5. ವಿತ್ತೀಯ ಕಾರ್ಯಕಲಾಪಗಳು

2008–09ನೇ ಸಾಲಿನ ಕೆಳಕಂಡ ಅನುದಾನ ಬೇಡಿಕೆಗಳ ಮಂಡನೆ:

| ಬೇಡಿಕೆ ಸಂಖ್ಯೆ | ಬೇಡಿಕೆಗಳ ಹೆಸರು |
|---|---|
| 04 | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ |
| 03 | ಆರ್ಥಿಕ |
| 19 | ನಗರಾಭಿವೃದ್ಧಿ |
| 08 | ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ |
| 25 | ಕನ್ನಡ ಮತ್ತು ಸಂಸ್ಕೃತಿ |
| 24 | ಇಂಧನ |
| 17 | ಶಿಕ್ಷಣ |
| 21 | ಜಲಸಂಪನ್ಮೂಲ |
| 27 | ಕಾನೂನು |
| 28 | ಸಂಸದೀಯ ವ್ಯವಹಾರಗಳಿ ಮತ್ತು ಶಾಸನ ರಚನೆ |

## 6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

**ಶ್ರೀಯುತರುಗಳಾದ:–** ------------------- (ವಿಧಾನ ಸಭೆಯ ಸದಸ್ಯರುಗಳು) ದಿನಾಂಕ 25-07-2008ರಂದು ಬೆಂಗಳೂರು ನಗರದಲ್ಲಿ ಸಂಭವಿಸಿದ ಸರಣಿ ಸ್ಫೋಟಗಳ ಬಗ್ಗೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

## 7. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಲಾಲಾಜಿ ಆರ್. ಮೆಂಡನ್ ಅವರು ಆಹಾರ ಹಾಗೂ ನಾಗರೀಕರ ಪೂರೈಕೆ ವ್ಯವಸ್ಥೆಯಲ್ಲಿ ಸುಧಾರಣೆ ಮಾಡುವ ಬಗ್ಗೆ ದಿನಾಂಕ -----------------------ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಐದನೇ ಪಟ್ಟಿಯ ಪ್ರಶ್ನೆ ಸಂಖ್ಯೆ; 64(244)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

## 8. ಗಮನ ಸೆಳೆಯುವ ಸೂಚನೆಗಳು

(ಅ) ಶ್ರೀ ---------- (ವಿಧಾನ ಸಭಾ ಸದಸ್ಯರು) ಅವರು ರಾಜ್ಯ ಮಹಿಳಾ ಆಯೋಗದಲ್ಲಿ ಕಡತಗಳು ನಾಪತ್ತೆಯಾಗಿರುವ ಬಗ್ಗೆ ಮಹಿಳಾ ಮತ್ತು ಮಕ್ಕಳಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

(ಆ) ಶ್ರೀ ---------- (ವಿಧಾನ ಸಭಾ ಸದಸ್ಯರು) ಅವರು ಹಾಸನ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ ವಿಶೇಷ ಉಪ ವಿಭಾಗ, ಚೆನ್ನರಾಯಪಟ್ಟಣ ಕಛೇರಿಯನ್ನು ಲೋಕೋಪಯೋಗಿ ವಿದ್ಯುತ್ ಉಪ ವಿಭಾಗ ಶಿವಮೊಗ್ಗ ಎಂದು ಪುನರ್ ನಾಮಕರಣ ಮಾಡಿರುವ ಬಗ್ಗೆ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

## 9. ಶಾಸನ ರಚನೆ

### I ವಿಧೇಯಕಗಳನ್ನು ಮಂಡಿಸುವುದು

### ಕರ್ನಾಟಕ ದೇವದಾಸಿಯರ ಸಮರ್ಪಣಾ ನಿಷೇಧ (ತಿದ್ದುಪಡಿ) ವಿಧೇಯಕ, 2008

ಶ್ರೀ ---------- (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು), ಅವರು:-

(ಅ)2008ನೇ ಸಾಲಿನ ಕರ್ನಾಟಕ ದೇವದಾಸಿಯರ ಸಮರ್ಪಣಾ ನಿಷೇಧ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ಕೋರುವುದು

(ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

### II ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

### ಕರ್ನಾಟಕ ದೇವದಾಸಿಯರ ಸಮರ್ಪಣಾ ನಿಷೇಧ (ತಿದ್ದುಪಡಿ) ವಿಧೇಯಕ, 2008

ಶ್ರೀ ---------- (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು), ಅವರು:-

(ಅ) 2008ನೇ ಸಾಲಿನ ಕರ್ನಾಟಕ ದೇವದಾಸಿಯರ ಸಮರ್ಪಣಾ ನಿಷೇಧ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

(ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**ಸಹಿ/-**

**ಕಾರ್ಯದರ್ಶಿ**

**ಮಾದರಿ–2**

**(ಕರ್ನಾಟಕ ವಿಧಾನ ಪರಿಷತ್ತಿನ ಮಾದರಿ ಕಾರ್ಯಕಲಾಪಗಳ ಪಟ್ಟಿ)**

**ಕರ್ನಾಟಕ ವಿಧಾನ ಪರಿಷತ್ತು**

ನೂರ ಎಂಟನೆಯ ಅಧಿವೇಶನ

**ಕಾರ್ಯಕಲಾಪಗಳ ಪಟ್ಟಿ**

ದಿನಾಂಕ ---------

(ಸಮಯ: ಬೆಳಿಗ್ಗೆ 10.30 ಗಂಟೆಗೆ)

---

## 1. ಪ್ರಶ್ನೋತ್ತರ

(i) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

(ii) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

## 2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ------------ (ಹಣಕಾಸು ಸಚಿವರು) ಅವರು:–**

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು ನೀಡಿರುವ ದಿನಾಂಕ: 31ನೇ ಮಾರ್ಚ್ 2007ಕ್ಕೆ ಕೊನೆಗೊಂಡ ವರ್ಷಕ್ಕೆ (ರಾಜಸ್ವ ಸ್ವೀಕೃತಿ) (ವಾಣಿಜ್ಯ ) ಹಾಗೂ (ಸಿವಿಲ್) ವರದಿ ಗಳನ್ನು ಸಭೆಯ ಮುಂದಿಡುವುದು.

## 3. ವರದಿಗಳನ್ನೊಪ್ಪಿಸುವುದು

ಶ್ರೀ ಕೆ.ಸಿ.ಕೊಂಡಯ್ಯ (ಅಧ್ಯಕ್ಷರು, ಹಕ್ಕು ಭಾದ್ಯತ ಸಮಿತಿ) ಅವರು ಹಕ್ಕುಭಾದ್ಯತ ಸಮಿತಿಯ ಐವತ್ತೈದನೆಯ ವರದಿಯನ್ನು ಒಪ್ಪಿಸುವುದು.

## 4. ಗಮನ ಸೆಳೆಯುವ ಸೂಚನೆಗಳು

(ಅ) ಶ್ರೀ ---------- (ವಿಧಾನ ಸಭಾ ಸದಸ್ಯರು) ಅವರು ವಿಶ್ವ ಬ್ಯಾಂಕ್ ನೆರವಿನ ಆರೋಗ್ಯ ಯೋಜನೆ ಮತ್ತು ಏಡ್ಸ್ ನಿಯಂತ್ರಣ ಯೋಜನೆಗಳ ಅನುಧಾನದಲ್ಲಿ ನಡೆದಿರುವ ಬ್ರಷ್ಟಾಚಾರದ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

(ಆ) ಶ್ರೀಯುತರುಗಳಾದ ---------- (ವಿಧಾನ ಸಭಾ ಸದಸ್ಯರುಗಳು) ಇವರುಗಳು ರಾಜ್ಯದಲ್ಲಿ ವ್ಯಾಪಕವಾಗಿ ಹರಡುತ್ತಿರುವ ಚಿಕನ್ ಗುನ್ಯಾ ಹಾಗೂ ಸಂಕ್ರಾಮಿಕ ರೋಗಗಳ

ನಿಯಂತ್ರಣಕ್ಕೆ ಸರ್ಕಾರವು ಶೀಘ್ರ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

**5. ನಿಯಮ 330ರ ಮೇರೆಗೆ**

(ಅ) ಶ್ರೀ ---------- (ವಿಧಾನ ಸಭಾ ಸದಸ್ಯರು) ಅವರು ಮೊರಾರ್ಜಿ ದೇಸಾಯಿ / ನವೋದಯ ಮಾದರಿ ವಸತಿ ಶಾಲೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸಿತ್ತಿರುವ ಶಿಕ್ಷಕರು ಮತ್ತು ಪ್ರಾಂಶುಪಾಲರುಗಳನ್ನು ಖಾಯಂಗೊಳಿಸುವ ವಿಷಯದ ಬಗ್ಗೆ ಪ್ರಸ್ತಾಪಿಸುವುದು.

(ಆ) ಶ್ರೀಯುತರುಗಳಾದ ---------- (ವಿಧಾನ ಸಭಾ ಸದಸ್ಯರುಗಳು) ಇವರುಗಳು ಹೆಚ್.ಡಿ.ಕೋಟೆ ತಾಲ್ಲೂಕಿನ ಕೆ.ಬೆಳ್ತೂರಿನಲ್ಲಿ ಎರಡು ಕೋಮುಗಳ ಮಧ್ಯೆ ನಡೆದ ಘರ್ಷಣೆಯಿಂದಾಗಿ ಉಂಟಾಗಿರುವ ಕ್ಲಿಷ್ಟ ಪರಿಸ್ಥಿತಿಯ ಬಗ್ಗೆ ಪ್ರಸ್ತಾಪಿಸುವುದು.

**6. ನಿಯಮ 68ರ ಅಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲಿನ ಚರ್ಚೆ**

ಶ್ರೀಯುತರುಗಳಾದ ---------- (ವಿಧಾನ ಸಭಾ ಸದಸ್ಯರುಗಳು) ಇವರುಗಳು ರಾಜ್ಯದಲ್ಲಿ ರಸಗೊಬ್ಬರ ಪೂರೈಕೆಯಲ್ಲಿ ಕೊರತೆ ಮತ್ತು ರೈತರ ಮೇಲೆ ನಡೆದಗೋಲಿಬಾರ್ ಹಾಗೂ ಸರಣಿ ಆತ್ಮಹತ್ಯೆಯ ಬಗ್ಗೆ ಪ್ರಸ್ತಾಪಿಸುವುದು.

**7. ಶಾಸನ ರಚನೆ**

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು**

ಕರ್ನಾಟಕ ದೇವದಾಸಿಯರ ಸಮರ್ಪಣಾ ನಿಷೇಧ (ತಿದ್ದುಪಡಿ) ವಿಧೇಯಕ, 2008
ಶ್ರೀ ---------- (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು), ಅವರು:-

(ಅ) ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2008ನೇ ಸಾಲಿನ ಕರ್ನಾಟಕ ದೇವದಾಸಿಯರ ಸಮರ್ಪಣಾ ನಿಷೇಧ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

(ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಸಹಿ/-
**ಕಾರ್ಯದರ್ಶಿ.**

# ಅನುಬಂಧ – 2
# (ಮಾದರಿ ಸಂತಾಪ ಸೂಚನೆಗಳು)

**ಮಾನ್ಯ ಸಭಾಧ್ಯಕ್ಷರು:**

ಕೇಂದ್ರ ಹಾಗೂ ರಾಜ್ಯದ ಮಾಜಿ ಸಚಿವೆಯಾದ ಶ್ರೀಮತಿ ಬಸವರಾಜೇಶ್ವರಿ ಹಾಗೂ ವಿಧಾನ ಸಭೆಯ ಮಾಜಿ ಸದಸ್ಯರಾದ ಡಾ: ಟಿ.ಪಾರ್ಥಸಾರಥಿ ಅವರುಗಳು ನಿಧನ ಹೊಂದಿರುವುದನ್ನು ಈ ಸದನಕ್ಕೆ ಅತ್ಯಂತ ವಿಷಾದದಿಂದ ತಿಳಿಯಬಯಸುತ್ತೇನೆ.

## ಶ್ರೀಮತಿ ಬಸವರಾಜೇಶ್ವರಿ

ಕೇಂದ್ರ ಹಾಗೂ ರಾಜ್ಯ ಸರ್ಕಾರಗಲ ಮಾಜಿ ಸಚಿವರು ಹಾಗೂ ವಿಧಾನ ಪರಿಷತ್ತಿನ ಮಾಜಿ ಸಭಾಪತಿ ಯವರಾಗಿದ್ದ ಶ್ರೀಮತಿ ಬಸವರಾಜೇಶ್ವರಿ ರವರು 1922ರಲ್ಲಿ ಬಳ್ಳಾರಿ ಜಿಲ್ಲೆ ರಾಯದುರ್ಗ ತಾಲ್ಲೂಕಿನಲ್ಲಿ ಜನಿಸಿದ್ದು, ಕೃಷಿಕರಾಗಿದ್ದರು. ಹಿಂದುಳಿದ ವರ್ಗಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಕಾರ್ಯ ನಿರ್ವಹಿಸುತ್ತಿದ್ದ ಶ್ರೀಮತಿಯವರು ರಾಯಚೂರಿನ ಟ್ಯಾಗೊರ್ ಮೆಮೋರಿಯಲ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾಗಿ, ಬೆಂಗಳೂರಿನ ಇನ್ಸಿಟ್ಯೂಟ್ ಆಫ್ ಪಾರ್ಲಿಮೆಂಟರಿ ಅಫೇರ್ಸ್ ಸಂಸ್ಥೆಯ ಉಪಾಧ್ಯಕ್ಷರಾಗಿ ಹಾಗೂ ಇತರೆ ಹಲವಾರು ಸಂಘ ಸಂಸ್ಥೆಗಳ ಪದಾಧಿಕಾರಿಗಳಾಗಿ ಸೇವೆ ಸಲ್ಲಿಸಿರುತ್ತಾರೆ. 1957ರಲ್ಲಿ ಮಾನ್ವಿ ಕ್ಷೇತ್ರದಿಂದ ಮೊದಲ ಬಾರಿಗೆ ವಿಧಾನ ಸಭೆಗೆ ಆಯ್ಕೆಯಾದ ಶ್ರೀಮತಿಯವರು ಸತತ ಮೂರು ಬಾರಿ ಚುನಾಯಿತರಾಗಿದ್ದಾರೆ. 1967ರಿಂದ 1969ರವರೆಗೆ ಸಣ್ಣ ನೀರಾವರಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಉಪ ಮಂತ್ರಿಗಳಾಗಿ, 1976 ರಿಂದ 1984ರವರೆಗೆ ವಿಧಾನ ಪರಿಷತ್ ಸದಸ್ಯರಾಗಿ ಹಾಗೂ ಮೊದಲ ಮಹಿಳಾ ಸಭಾಪತಿಯಾಗಿ ಕಾರ್ಯ ನಿರ್ವಹಿಸಿದ್ದರು. 1984ರಿಂದ ಬಳ್ಳಾರಿ ಲೋಕಸಭಾ ಕ್ಷೇತ್ರದಿಂದ ಸತತ ಮೂರು ಬಾರಿ ಆಯ್ಕೆಯಾಗಿ ಅಂದಿನ ಪ್ರಧಾನಿ ಶ್ರೀ ಪಿ.ವಿ.ನರಸಿಂಹರಾವ್ ಅವರ ಸಂಪುಟದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆಯಾಗಿ ರಾಜ್ಯದಲ್ಲಿ ಹಂಪಿ ಎಕ್ಸ ಪ್ರೆಸ್ ರೈಲ್ವೆ ಸೌಲಭ್ಯವನ್ನು ಕಲ್ಪಿಸುವಲ್ಲಿ ಹಾಗು ಬಾಲವಾಡಿ ಕೇಂದ್ರಗಳನ್ನು ತೆರೆಯಲು ಕಾರಣಕರ್ತರಾಗಿದ್ದರು.

ಶ್ರೀಮತಿಯವರು ದಿನಾಂಕ 19-2-2008ರಂದು ನಿಧನ ಹೊಂದಿದರು.

## ಡಾ: ಟಿ.ಪಾರ್ಥಸಾರಥಿ

ವಿಧಾನ ಸಭೆಯ ಮಾಜಿ ಸದಸ್ಯರಾದ ಡಾ: ಟಿ.ಪಾರ್ಥಸಾರಥಿ ರವರು 1917ನೇ ಏಪ್ರಿಲ್ 23ರಂದು ಮೈಸೂರಿನಲ್ಲಿ ಜನಿಸಿದ್ದು, ವೃತ್ತಿಯಲ್ಲಿ ವೈದ್ಯರಾಗಿದ್ದರು. ಬೆಂಗಳೂರು ನಗರದಲ್ಲಿ ಜನಸಾಮಾನ್ಯರಿಗೆ ಕಡಿಮೆ ಖರ್ಚಿನಲ್ಲಿ ಸುಲಭವಾಗಿ ವೈದ್ಯಕೀಯ ಸೇವೆ ಸಿಗಲು ಶ್ರಮವಹಿಸಿದ್ದ ಶ್ರೀಯುತರು 1937ರಲ್ಲಿ ನಡೆದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹಾಗೂ 1942ರಲ್ಲಿ ಕ್ವಿಟ್ ಇಂಡಿಯಾ ಚಳುವಳಿಯಲ್ಲಿ ಪಾಲ್ಗೊಂಡು ಬಂಧನಕ್ಕೆ ಒಳಗಾಗಿದ್ದರು. ಬೆಂಗಳೂರು ನಗರ ಸಭೆಗೆ ಎರಡು ಬಾರಿ ಚುನಾಯಿತರಾಗಿದ್ದು, ಜವಹರ್

ಕೋರ್ಟ್ ಕ್ಲಬ್ ಹಾಗೂ ಕಲ್ಪನಾ ಆರ್ಟಿಸ್ಟ್ ಮುಂತಾದ ಹಲವಾರು ಸಂಘ ಸಂಸ್ಥೆಗಳ ಸ್ಥಾಪನೆಗೆ ಕಾರಣ ಕರ್ತರಾಗಿದ್ದರು ಹಾಗೂ ಇಂಡಿಯನ್ ಮೆಡಿಕಲ್ ಆಸೋಷಿಯೇಷನ್ನಿನ ರಾಜ್ಯ ಶಾಖೆಯ ಉಪಾಧ್ಯಕ್ಷರಾಗಿ ಯೂ ಕಾರ್ಯ ನಿರ್ವಹಿಸಿರುತ್ತಾರೆ. ಶ್ರೀಯುತರು ಎರಡನೇ ವಿಧಾನಸಭೆಗೆ ಮಲ್ಲೇಶ್ವರಂ ಕ್ಷೇತ್ರದಿಂದ ಚುನಾಯಿತರಾಗಿ ಸೇವೆ ಸಲ್ಲಿಸಿರುತ್ತಾರೆ. ಶ್ರೀಯುತರು ವೈದ್ಯಕೀಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಹಾಗೂ ಡಾ: ಬಿ.ಸಿ.ರಾಯ್ ಪ್ರಶಸ್ತಿಗೆ ಪುರಸ್ಕೃತರಾಗಿರುತ್ತಾರೆ.

ಶ್ರೀಯುತರು ದಿನಾಂಕ 22-12-2007ರಂದು ನಿಧನ ಹೊಂದಿದರು.

(ಮಾನ್ಯ ಸದಸ್ಯರುಗಳು ಚರ್ಚೆಯಲ್ಲಿ ಭಾಗವಹಿಸಿದ ನಂತರ)

ಮೃತರ ಗೌರವಾರ್ಥ ಮಾನ್ಯ ಸದಸ್ಯರು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೋರುತ್ತೇನೆ.

(ಮೌನ ಆಚರಿಸಿದ ನಂತರ)

ಈ ಸಭೆಯು ಅಂಗೀಕರಿಸಿದ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಮೃತರ ಕುಟುಂಬಕ್ಕೆ ಕಳುಹಿಸಲಾಗುವುದು.

## ಅನುಬಂಧ – 3

## ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಹಾಗೂ ಲಿಖಿತ ಮೂಲಕ ಉತ್ತರಿಸುವ (ಚುಕ್ಕೆ ಗುರುತಿಲ್ಲದ) ಪ್ರಶ್ನೆಗಳ ಹಾಗೂ ಉತ್ತರಗಳ ಕೆಲವು ಮಾದರಿಗಳು

### ಮಾದರಿ–1

### (ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಪ್ರಶ್ನೆಗಳ ಕೆಲವು ಮಾದರಿಗಳು)

### ಕರ್ನಾಟಕ ವಿಧಾನ ಸಭೆ

ಹದಿಮೂರನೇ ವಿಧಾನ ಸಭೆ
(ಮೊದಲನೇ ಅಧಿವೇಶನ)
ದಿನಾಂಕ --------

**ರಾಜ್ಯದ** ರೈತರ ವಿದ್ಯುತ್ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡುವ ಬಗ್ಗೆ .

**ಶ್ರೀ ------------- (ಸದಸ್ಯರ ಹೆಸರು)**

**01**. (101) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ರೈತರ ವಿದ್ಯುತ್ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ?

(ಆ) ಹಾಗಿದ್ದಲ್ಲಿ, ಎಷ್ಟು ಲಕ್ಷ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಒದಗಿಸ ಲಾಗುವುದು ಹಾಗೂ ನೀಡಲಾಗುವ ಯೂನಿಟ್ ಗಳು ಎಷ್ಟು,- ಇದರಿಂದ ಸರ್ಕಾರಕ್ಕೆ ಉಂಟಾಗುವ ಆರ್ಥಿಕ ಹೊರೆ ಎಷ್ಟು?

(ಇ) ರೈತರು ಈಗ ಬಳಸುತ್ತಿರುವ ವಿದ್ಯುತ್‌ನ ಪ್ರಮಾಣವೆಷ್ಟು ಹಾಗೂ ಬಿಲ್ಲನ್ನು ಪಾವತಿಸುತ್ತಿರುವ ರೈತರೆಷ್ಟು?

(ಈ)ಪಂಪ್‌ಸೆಟ್‌ಗಳಿಗೆ ಅಕ್ರಮ ವಿದ್ಯುತ್ ಹೊಂದಿರುವ ರೈತರೆಷ್ಟು,- ಅಕ್ರಮವನ್ನು ಸಕ್ರಮಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ?

**ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕಾಗಿ ರೈತರಿಂದ ವಶಪಡಿಸಿಕೊಂಡ ಜಮೀನಿನ ಬಗ್ಗೆ**

**ಶ್ರೀ ------------ (ಸದಸ್ಯರ ಹೆಸರು)**

**02**. (85) ಮಾನ್ಯ ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ)ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕಾಗಿ ರೈತರಿಂದ ವಶಪಡಿಸಿಕೊಂಡ ಜಮೀನೆಷ್ಟು?

(ಆ) ವಶಪಡಿಸಿಕೊಂಡ ಜಮೀನಿಗೆ ಪರಿಹಾರ ನೀಡಲಾಗಿದೆಯೇ?

(ಇ) ಹಾಗಿದ್ದಲ್ಲಿ ಪ್ರತಿ ಎಕರೆ ಜಮೀನಿಗೆ ನೀಡಿದ ಪರಿಹಾರವೆಷ್ಟು?

(ಈ) ವಶಪಡಿಸಿಕೊಂಡ ಜಮೀನಿನಲ್ಲಿ ಉಪಯೋಗಿಸಿಕೊಂಡ ಜಮೀನೆಷ್ಟು?

(ಉ) ಉಳಿದ ಜಮೀನನ್ನು ರೈತರಿಗೆ ವಾಪಸ್ಸು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

(ಊ) ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ನಿರ್ಮಾಣಕ್ಕೆ ಜಮೀನು ಕಳೆದು ಕೊಂಡ ರೈತರ ಮಕ್ಕಳಿಗೆ ಉದ್ಯೋಗ ನೀಡಲಾಗಿದೆಯೇ?

ಋ) ಹಾಗಿದ್ದಲ್ಲಿ ಉದ್ಯೋಗ ಪಡೆದವರ ಹಾಗೂ ಉದ್ಯೋಗ ಪಡೆಯದವರ ಸಂಖ್ಯೆ ಎಷ್ಟು,- ಉದ್ಯೋಗಕ್ಕಾಗಿ ಬಂದ ಅರ್ಜಿಗಳೆಷ್ಟು,- ತಿರಸ್ಕೃತಗೊಂಡ ಅರ್ಜಿಗಳೆಷ್ಟು,- ತಿರಸ್ಕೃತಗೊಂಡಿದ್ದರೆ ಕಾರಣಗಳೇನು?

**ರಾಜ್ಯದಲ್ಲಿ ರಸಗೊಬ್ಬರ ಹಂಚಿಕೆ ಸಂಬಂಧವಾಗಿ ವಿವಿಧೆಡೆಗಳಲ್ಲಿ ನಡೆದ ಗಲಭೆಗಳ ಬಗ್ಗೆ**

**ಶ್ರೀ ------------ (ಸದಸ್ಯರ ಹೆಸರು)**

**03**. (84) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ತಿಂಗಳ ಅವಧಿಯಲ್ಲಿ ರಾಜ್ಯದಲ್ಲಿ ರಸಗೊಬ್ಬರ ಹಂಚಿಕೆ ಸಂಬಂಧವಾಗಿ ವಿವಿದೆಡೆಗಳಲ್ಲಿ ಗಲಭೆಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಯಾವ ಯಾವ ಸ್ಥಳಗಳಲ್ಲಿ ಈ ಗಲಭೆಗಳು ನಡೆದಿವೆ?

(ಆ) ಈ ಗಲಭೆಗಳನ್ನು ಹತ್ತಿಕ್ಕಲು ನಡೆಸಲಾದ ಪೋಲೀಸ್ ಗೋಲಿಬಾರ್ ನಲ್ಲಿ ಇದುವರೆವಿಗೂ ಪ್ರಾಣ ಕಳೆದುಕೊಂಡ, ಕೈಕಾಲು ಕಳೆದುಕೊಂಡ, ತೀವ್ರ ಸ್ವರೂಪದ ಗಾಯಗಳಾದ ಜನರೆಷ್ಟು?

(ಇ) ಈ ಗಲಭೆಗಳಿಗೆ ಬಲಿಯಾದವರಿಗೆ ಸರ್ಕಾರ ಇದುವರೆವಿಗೂ ಯಾವ ಯಾವ ಪರಿಹಾರ ಗಳನ್ನು ನೀಡಿದೆ? (ಪೂರ್ಣ ವಿವರಗಳನ್ನು ಜಿಲ್ಲಾವಾರು ಅಂಕಿಅಂಶಗಳಲ್ಲಿ ಒದಗಿಸುವುದು).

(ಈ) ಈ ಸಂಬಂಧವಾಗಿ ಎಷ್ಟು ಜನರ ಮೇಲೆ ಮೊಕದ್ದಮೆಗಳನ್ನು ದಾಖಲು ಮಾಡಿ ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ? ಯಾವ ಯಾವ ಜೈಲುಗಳಲ್ಲಿ ಎಷ್ಟೆಷ್ಟು ಜನರು ನ್ಯಾಯಾಂಗ ಬಂಧನದಲ್ಲಿದ್ದರೆ.

(ಉ) ಇವರ ಪೈಕಿ ಎಷ್ಟು ಜನರಿಗೆ ಇದುವರೆವಿಗೂ ಜಾಮೀನು ದೊರೆತಿದೆ?

(ಊ) ಅನಾವಶ್ಯಕವಾಗಿ ಗೋಲಿಬಾರು ನಡೆಸಿ ಮುಗ್ಧ ಜನರ ಸಾವಿಗೆ ಕಾರಣರಾದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

(ಋ) ಈ ಸಂಬಂಧವಾಗಿ ನಡೆಯುತ್ತಿರುವ ನ್ಯಾಯಾಂಗ ತನಿಖೆ ಯಾವ ಹಂತದಲ್ಲಿದೆ?

**ಕೇಂದ್ರ ಕಾರಾಗೃಹವನ್ನು ಪರಪ್ಪನ ಅಗ್ರಹಾರಕ್ಕೆ ಸ್ಥಳಾಂತರಿಸಿದ ಬಗ್ಗೆ**

**ಶ್ರೀ ------------ (ಸದಸ್ಯರ ಹೆಸರು)**

**04**(70) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಲ್ಲಿದ್ದ ಕೇಂದ್ರ ಕಾರಾಗೃಹವನ್ನು ಪರಪ್ಪನ ಅಗ್ರಹಾರಕ್ಕೆ ಸ್ಥಳಾಂತರಿಸಿದ ನಂತರ ಹಾಲಿ ಖಾಲಿ ಇರುವ ಆ ಜಾಗವನ್ನು ಸದುಪಯೋಗಪಡಿಸುವ ವಿಷಯ ಸರ್ಕಾರದ ಮುಂದಿದೆಯೇ?

(ಆ) ಹಾಗಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ,- ಪೂರ್ಣ ಮಾಹಿತಿ ನೀಡುವುದು?

(ಇ) ಬೆಂಗಳೂರು ನಗರದಲ್ಲಿರುವ ರೇಸ್‌ಕೋರ್ಸ್ ಅನ್ನು ಸ್ಥಳಾಂತರಿಸುವ ವಿಷಯ ಸರ್ಕಾರದ ಮುಂದಿದೆಯೇ?

**ಭಾರಿ ಮಳೆಯಿಂದಾಗಿ ಮಲೆನಾಡು ತಾಲ್ಲೂಕುಗಳಲ್ಲಿ ಜಿಲ್ಲಾ ಪಂಚಾಯತ್ ರಸ್ತೆಗಳು ಹದಗೆಟ್ಟಿರುವುದರ ಬಗ್ಗೆ**

**ಶ್ರೀ ------------ (ಸದಸ್ಯರ ಹೆಸರು)**

**5.** (39) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭಾರಿ ಮಳೆಯಿಂದಾಗಿ ಮಲೆನಾಡು ತಾಲ್ಲೂಕುಗಳಲ್ಲಿ ಜಿಲ್ಲಾ ಪಂಚಾಯತ್ ರಸ್ತೆಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಆ) ಸಕಲೇಶಪುರ ಕ್ಷೇತ್ರ ಮಲೆನಾಡು ಪ್ರದೇಶವಾಗಿದ್ದು, ರಸ್ತೆಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಇ) ಪ್ರತಿ ವರ್ಷ ಭಾರಿ ಮಳೆ ಬೀಳುವುದು ನಿಯಮಿತವಾಗಿರುವುದರಿಂದ ಸರ್ಕಾರದ ವಿಶೇಷ ಅನುದಾನವನ್ನು ನಿಗದಿ ಮಾಡಿ ಬಿಡುಗಡೆ ಮಾಡಲಾಗುವುದೇ?

**ಮಾದರಿ–2**

**(ಲಿಖಿತ ಮೂಲಕ  ಉತ್ತರಿಸುವ (ಚುಕ್ಕೆ ಗುರುತಿಲ್ಲದ) ಪ್ರಶ್ನೆಗಳ ಕೆಲವು ಮಾದರಿಗಳು)**

**ಕರ್ನಾಟಕ ವಿಧಾನ ಸಭೆ**

ಹದಿಮೂರನೇ ವಿಧಾನ ಸಭೆ
(ಮೊದಲನನೇ ಅಧಿವೇಶನ)
ದಿನಾಂಕ --------

**ಭಾಗ್ಯಲಕ್ಷ್ಮಿ ಯೋಜನೆ ಬಗ್ಗೆ**

**ಶ್ರೀ ------------- (ಸದಸ್ಯರ ಹೆಸರು)**

**01**. (238) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭಾಗ್ಯಲಕ್ಷ್ಮಿ ಯೋಜನೆಯನ್ನು ಯಾವ ವರ್ಷದಿಂದ ಜಾರಿಗೆ ತರಲಾಗಿದೆ,- ಇದರ ಮುಖ್ಯಾಂಶಗಳೇನು,- ಇದುವರೆವಿಗೂ ಎಷ್ಟು ಜನ ಹೆಣ್ಣುಮಕ್ಕಳಿಗೆ ಇದರ ಪ್ರಯೋಜನ ದೊರೆತಿದೆ,- ಆಯವ್ಯಯದಲ್ಲಿ ಇಲ್ಲಿಯವರೆವಿಗೆ ಇದಕ್ಕಾಗಿ ವೆಚ್ಚ ಮಾಡಲಾಗಿರುವ ಹಣವೆಷ್ಟು?

(ಆ) ಈ ಯೋಜನೆಯಡಿಯಲ್ಲಿ ನೀಡಲಾಗುತ್ತಿರುವ ಹಣದ ಮೊತ್ತವನ್ನು ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ,- ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಮೊತ್ತ ಹೆಚ್ಚಿಸಲಾಗಿದೆ?

(ಇ) ಈ ಯೋಜನೆಯ ಬಗ್ಗೆ ಮಾಹಿತಿ ಸಂಗ್ರಹ ಸಲುವಾಗಿ ವೆಬ್‌ಸೈಟ್‌ನ್ನು ಆರಂಭ ಮಾಡಿರುವುದು ನಿಜವೇ?

(ಈ) ಹಾಗಿದ್ದಲ್ಲಿ, ಯಾವಾಗ ಈ ವೆಬ್‌ಸೈಟ್‌ನ್ನು ಪ್ರಾರಂಭಿಸಲಾಯಿತು,- ಅಂದಿನಿಂದ ಇಂದಿನವರೆಗೆ ಎಷ್ಟು ಮಾಹಿತಿಯನ್ನು ಸಂಗ್ರಹಿಸಲಾಗಿದೆ?

(ಉ) ಪ್ರಸಕ್ತ ಸಾಲಿನಲ್ಲಿ ಈ ಯೋಜನೆಗೆ ಎಷ್ಟು ಹಣವನ್ನು ಮೀಸಲಿಡಲಾಗಿದೆ?

**ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿಯ ಅವ್ಯವಸ್ಥೆಯಿಂದಾಗಿ ಸಂಚಾರಕ್ಕೆ ಉಂಟಾಗುತ್ತಿರುವ ಅನಾನುಕೂಲತೆ ಬಗ್ಗೆ**

ಶ್ರೀ **------------ (ಸದಸ್ಯರ ಹೆಸರು)**

**02**. (71) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿಯ ಅವ್ಯವಸ್ಥೆಯಿಂದಾಗಿ ಸಂಚಾರಕ್ಕೆ ತೀವ್ರತರ ಅನಾನುಕೂಲ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಆ) ಹಾಗಿದ್ದಲ್ಲಿ, ಧೀರ್ಘ ಕಾಲದಿಂದಲೂ ಸಮರ್ಪಕ ದುರಸ್ತಿ ಕಾರ್ಯಗಳನ್ನು ಕೈಗೆತ್ತಿಗೊಳ್ಳದೇ ಇರಲು ಕಾರಣಗಳೇನು?

(ಇ) ಈ ರಸ್ತೆಯ ದುರಸ್ತಿ ಕಾರ್ಯಗಳಿಂದಾಗಿ ಒಟ್ಟು ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ?

(ಈ) ಪೂರ್ಣ ಪ್ರಮಾಣದ ದುರಸ್ತಿ ಕಾರ್ಯವನ್ನು ಯಾವಾಗ ವ್ಯವಸ್ಥೆಗೊಳಿಸಿ ಸಂಚಾರಕ್ಕೆ ಅನುಕೂಲ ಮಾಡಿಕೊಡಲಾಗುವುದು?

(ಉ) ಶಿರಾಡಿ ಘಾಟ್ ಪ್ರದೇಶದಲ್ಲಿನ ಹೆಚ್ಚಿನ ದುರಸ್ತಿ ಕಾರ್ಯಗಳಿಗಾಗಿ ಈತನಕ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ?

(ಊ) ದುರಸ್ತಿ ಕಾರ್ಯ ಮುಗಿಸಿ ಸಂಚಾರಕ್ಕೆ ಯಾವಾಗ ಮುಕ್ತಗೊಳಿಸಲಾಗು ವುದು?

**ರಾಮನಗರದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಮಾದರಿ ಆರೋಗ್ಯ ವಿಶ್ವವಿದ್ಯಾನಿಲಯದ ಬಗ್ಗೆ**

ಶ್ರೀ **------------ (ಸದಸ್ಯರ ಹೆಸರು)**

**03**. (213) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಮಾದರಿ ಆರೋಗ್ಯ ವಿಶ್ವವಿದ್ಯಾನಿಲಯದ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು?

(ಆ) ಈ ಆರೋಗ್ಯ ವಿಶ್ವವಿದ್ಯಾನಿಲಯ ನಿರ್ಮಾಣದ ಪ್ರಗತಿಯ ವಿವರಗಳೇನು?

**ರಾಜ್ಯದಲ್ಲಿ ಚಿಕನ್ ಗುನಿಯಾ, ಡೆಂಗ್ಯೂ ಜ್ವರದ ಹಾವಳಿ ಬಗ್ಗೆ**

**ಶ್ರೀ ------------- (ಸದಸ್ಯರ ಹೆಸರು)**

**04**. (170) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಚಿಕನ್ ಗುನಿಯಾ, ಡೆಂಗ್ಯೂ ಜ್ವರದ ಹಾವಳಿ ಎಲ್ಲೆಲ್ಲಿ ಸಂಭವಿಸಿದೆ?

(ಆ) ಈ ಕಾಯಿಲೆಯಿಂದ ಈವರೆವಿಗೆ ಮೃತಪಟ್ಟವರ ಸಂಖ್ಯೆ ಎಷ್ಟು?

(ಇ) ಈ ಕಾಯಿಲೆಯನ್ನು ನಿರ್ಮೂಲನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

**ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಪನ್ಯಾಸಕರು ಮತ್ತು ಇತರೆ ಸಿಬ್ಬಂದಿಯ ಕೊರತೆ ಬಗ್ಗೆ**

**ಶ್ರೀ ------------- (ಸದಸ್ಯರ ಹೆಸರು)**

**05**. (41) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಪನ್ಯಾಸಕರು ಮತ್ತು ಇತರೆ ಸಿಬ್ಬಂದಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಆ) ಹಾಗೂ ನೂತನ ಕಾಲೇಜುಗಳಲ್ಲಿ ಉಪನ್ಯಾಸಕರೇ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಇ) ಬಂದಿದಲ್ಲಿ, ನೇಮಕಾತಿಗೆ ಕೈಗೊಂಡ ಕ್ರಮಗಳೇನು?

## ಸದನದಲ್ಲಿ ಉತ್ತರಿಸುವ (ಚುಕ್ಕೆ ಗುರುತಿನ) ಪ್ರಶ್ನೆಗಳಿಗೆ ಸಿದ್ಧಪಡಿಸಲಾದ ಉತ್ತರಗಳ ಕೆಲವು ಮಾದರಿಗಳು

### ಮಾದರಿ – 1

**ಕರ್ನಾಟಕ ವಿಧಾನಸಭೆ**

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ :101/08
2) ಸದಸ್ಯರ ಹೆಸರು :
3) ಉತ್ತರಿಸುವ ದಿನಾಂಕ :
4) ಉತ್ತರಿಸುವ ಸಚಿವರು :ಮಾನ್ಯ ಇಂಧನ ಸಚಿವರು

| ಪ್ರಶ್ನೆ | ಉತ್ತರ |
|---|---|
| (1) ರಾಜ್ಯದ ರೈತರ ವಿದ್ಯುತ್ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ? | ಹೌದು. ರಾಜ್ಯದ ರೈತರ 10 ಹೆಚ್.ಪಿ. ಸಾಮರ್ಥ್ಯದ ವರೆಗಿನ ನೀರಾವರಿ ಪಂಪುಸೆಟ್ಟು ಬಳಕೆದಾರರಿಗೆ ಉಚಿತ ವಿದ್ಯುತ್ ಸೌಲಭ್ಯವನ್ನು ದಿನಾಂಕ: 1-08-2008ರಿಂದ ಜಾರಿಗೊಳಿಸಲು ದಿನಾಂಕ 17-07-2008ರಂದು ಸದನದಲ್ಲಿ ಮಂಡಿಸಲಾದ 2008-09ರ ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿದೆ. |
| (2) ಹಾಗಿದ್ದಲ್ಲಿ, ಎಷ್ಟು ಲಕ್ಷ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಒದಗಿಸಲಾಗುವುದು ಹಾಗೂ ನೀಡಲಾಗುವ ಯೂನಿಟ್ ಗಳು ಎಷ್ಟು,- ಇದರಿಂದ ಸರ್ಕಾರಕ್ಕೆ ಉಂಟಾಗುವ ಆರ್ಥಿಕ ಹೊರೆ ಎಷ್ಟು? | 10 ಹೆಚ್.ಪಿ. ಸಾಮರ್ಥ್ಯದವರೆಗಿನ 15.00 ಲಕ್ಷ ನಿರಾವರಿ ಪಂಪುಸೆಟ್ಟುಗಳು ಉಚಿತ ವಿದ್ಯುತ್ ಸೌಲಭ್ಯವನ್ನು ಪಡೆಯಲಿವೆ. 10. ಹೆಚ್.ಪಿ. ಸಾಮರ್ಥ್ಯದವರೆಗಿನ ನೀರಾವರಿ ಪಂಪುಸೆಟ್ಟುಗಳು ಬಳಸುವ ವಿದ್ಯುತ್‌ಗೆ ಮಿತಿ ಇಲ್ಲದೆ ಉಚಿತವಾಗಿ ವಿದ್ಯುತ್ ಒದಗಿಸಲಾಗುವುದು.<br>ಇದರಿಂದ ಸರ್ಕಾರದ ಬೊಕ್ಕಸಕ್ಕೆ ವಾರ್ಷಿಕ ರೂ.875 ಕೋಟಿಗಳ ಹೆಚ್ಚಿನ ಆರ್ಥಿಕ ಹೊರೆ ಬೀಳಬಹುದೆಂದು ಅಂದಾಜಿಸಲಾಗಿದೆ. |
| (3) ರೈತರು ಈಗ ಬಳಸುತ್ತಿರುವ ವಿದ್ಯುತ್‌ನ ಪ್ರಮಾಣವೆಷ್ಟು ಹಾಗೂ ಬಿಲ್ಲನ್ನು ಪಾವತಿಸು ತ್ತಿರುವ ರೈತರೆಷ್ಟು? | ಕಳೆದ ವರ್ಷವಾದ 2007-08ನೇ ಸಾಲಿನಲ್ಲಿ ನೀರಾವರಿ ಪಂಪುಸೆಟ್ಟುಗಳಿಂದ ಬಳಕೆಯಾದ ಒಟ್ಟು ಅಂದಾಜು ಪ್ರಮಾಣ 10,500 ದಶಲಕ್ಷ ಯೂನಿಟ್ ಗಳು.<br>ಒಟ್ಟು ನೀರಾವರಿ ಪಂಪುಸೆಟ್ಟು ಬಳಕೆದಾರರಲ್ಲಿ ಕೇವಲ ಶೇಕಡ 8ರಿಂದ 10ರಷ್ಟು ಬಳಕೆದಾರರು ಮಾತ್ರ ವಿದ್ಯುತ್ ಬಿಲ್ಲನ್ನು ಪಾವತಿ ಮಾಡುತ್ತಿರುತ್ತಾರೆ. |

| | |
|---|---|
| (4)ಪಂಪ್‌ಸೆಟ್‌ಗಳಿಗೆ ಅಕ್ರಮ ವಿದ್ಯುತ್ ಹೊಂದಿರುವ ರೈತರೆಷ್ಟು,- ಅಕ್ರಮವನ್ನು ಸಕ್ರಮ ಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ? | 31-03-2008ರಲ್ಲಿದಂತೆ ರಾಜ್ಯದಲ್ಲಿನ ಎಲ್ಲಾ ನೀರಾವರಿ ಪಂಪುಸೆಟ್ಟುಗಳು ಸಕ್ರಮ ಪಂಪುಸೆಟ್ಟುಗಳೇ ಹಾಗಿವೆ. ಈಗ ಅನಧಿಕೃತ ಪಂಪುಸೆಟ್ಟುಗಳು ಕಂಡುಬಂದಲ್ಲಿ ಅವುಗಳ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಲು ಕ್ರಮ ಕೈಗೊಳ್ಳಲಾಗುವುದು.<br>ಹಾಲಿ ಜಾರಿಯಲ್ಲಿರುವುದಿಲ್ಲ. |

**ಇಎನ್ 35 ಪಿಪಿಂ 2008**

**ಇಂಧನ ಸಚಿವರು**

## ಮಾದರಿ – 2

**ಕರ್ನಾಟಕ ವಿಧಾನಸಭೆ**

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ :85/2008

2) ಸದಸ್ಯರ ಹೆಸರು :

3) ಉತ್ತರಿಸುವ ದಿನಾಂಕ :

4) ಉತ್ತರಿಸುವ ಸಚಿವರು :ಮಾನ್ಯ ಪ್ರವಾಸೋದ್ಯಮ ಮತ್ತು ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು

| ಪ್ರಶ್ನೆ | ಉತ್ತರ |
|---|---|
| (1) ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕಾಗಿ ರೈತರಿಂದ ವಶಪಡಿಸಿಕೊಂಡ ಜಮೀನೆಷ್ಟು? | ರೈತರಿಂದ 2593 ಎಕರೆಗಳಷ್ಟು ಜಮೀನನ್ನು ವಶಪಡಿಸಿಕೊಂಡಿದೆ. |
| (2) ವಶಪಡಿಸಿಕೊಂಡ ಜಮೀನಿಗೆ ಪರಿಹಾರ ನೀಡಲಾಗಿದೆಯೇ? | ಕೊಡಲಾಗಿದೆ |
| (3) ಹಾಗಿದ್ದಲ್ಲಿ ಪ್ರತಿ ಎಕರೆ ಜಮೀನಿಗೆ ನೀಡಿದ ಪರಿಹಾರವೆಷ್ಟು? | ಮೊದಲ ಹಂತದ ಭೂಸ್ವಾಧೀನದಲ್ಲಿ ಕೃಷಿ ಭೂಮಿಗೆ ಎಕರೆ ಒಂದಕ್ಕೆ ರೂ.5.00 ಲಕ್ಷದಂತೆ ಹಾಗೂ ಕೃಷಿಯೇತರ ಪರಿವರ್ತಿತ ಭೂಮಿಗೆ ಎಕರೆ ಒಂದಕ್ಕೆ ರೂ.8.00 ಲಕ್ಷದಂತೆ ಪರಿಹಾರವನ್ನು 2001ನೇ ಇಸವಿಯಲ್ಲಿ ನೀಡಲಾಗಿದೆ.<br>ಎರಡನೇ ಹಂತದ ಭೂಸ್ವಾಧೀ ನದಲ್ಲಿ ಪ್ರತಿ ಎಕರೆಗೆ ಕೆಲವು ಗ್ರಾಮಗಳ ಜಮೀನಿಗೆ ರೂ.25.00 ಲಕ್ಷ , ಕೆಲವು ಗ್ರಾಮಗಳ ಜಮೀನಿಗೆ ರೂ. 30.00 ಲಕ್ಷ ಮತ್ತು ರೂ. 42.00 ಲಕ್ಷ ಗಳಷ್ಟು ಪರಿಹಾರವನ್ನು 2006-07ರಲ್ಲಿ ನೀಡಲಾಗಿದೆ.<br>ಇದಲ್ಲದೇ ಜಮೀನಲ್ಲಿರುವ ಮರ ಮುಟ್ಟುಗಳಿಗೆ ಹಾಗೂ ಕಟ್ಟಡಗಳಿಗೆ ಸಹ ಪರಿಹಾರಧನವನ್ನು ನೀಡಲಾಗಿದೆ. ಅಲ್ಲದೆ ಭೂ ಸ್ವಾಧಿನದಿಂದ ನಿರಾಶ್ರಿಗೊಂಡ ಕುಟುಂಬಗಳಿಗೆ ಸರ್ಕಾರವು ಪುನರ್ ವಸತಿ ಬಡಾವಣೆಯನ್ನು ದೇವನಹಳ್ಳಿ ತಾಲ್ಲೂಕಿನ ಸಮೀಪದ ಬಾಲೇಪುರ ಗ್ರಾಮದಲ್ಲಿ ನಿರ್ಮಿಸಿ |

| | |
|---|---|
| | ಉಚಿತ ನಿವೇಶನವನ್ನು ಒದಗಿಸಿ ಕೊಡಲಾಗಿದೆ. ಇದರ ಜೊತೆಗೆ ನೀರಿನ ಸೌಕರ್ಯ, ವಿದ್ಯುತ್ ಸಂಪರ್ಕ, ಶಾಲಾ ಕಟ್ಟಡ, ಅಂಗನವಾಡಿ ಕಟ್ಟಡ ಮತ್ತು ದೇವಸ್ಥಾನಗಳನ್ನು ಪುನರ್ ನಿರ್ಮಾಣ ಮಾಡಲಾಗಿದೆ. |
| (4)ವಶಪಡಿಸಿಕೊಂಡ ಜಮೀನಿನಲ್ಲಿ ಉಪಯೋಗಿಸಿಕೊಂಡ ಜಮೀನೆಷ್ಟು? | ವಶಪಡಿಸಿಕೊಂಡಿರುವ ಜಮೀನು 2593 ಎಕರೆ ಸರ್ಕಾರಿ ಜಮೀನು, ಅರಣ್ಯ ಇಲಾಖೆಗೆ ಸೇರಿದ ಜಮೀನು ಸೇರಿ 1798 ಎಕರೆ, ಒಟ್ಟು 4391 ಎಕರೆಗಳಾಗಿದ್ದು, ಇದರಲ್ಲಿ 409 ಎಕರೆ ಜಮೀನನ್ನು ಹೊರತುಪಡಿಸಿ, ಉಳಿದ ಜಮೀನನ್ನು ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಉಪಯೋಗಿಸಿಕೊಳ್ಳಲಾಗಿದೆ. |
| (5) ಉಳಿದ ಜಮೀನನ್ನು ರೈತರಿಗೆ ವಾಪಸ್ಸು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? | ಇಲ್ಲ. ಉಳಿದ ಭೂಮಿಯನ್ನು ಅಂದರೆ ಮೇಲೆ ತಿಳಿಸಿದ 409 ಎಕರೆ ಜಮೀನನ್ನು ವಿಮಾನ ನಿಲ್ದಾಣಕ್ಕೆ ಸಂಬಂಧಿಸಿದ ಸೌಲಭ್ಯಗಳನ್ನು, ಯೋಗಜನೆಗಳನ್ನು ಹಾಗೂ ಇನ್ನಿತರೆ ವಾಣಿಜ್ಯ ಯೋಜನೆಗಳನ್ನು ಸ್ಥಾಪಿಸಲು ಉಪಯೋಗಿಸಲಾಗುತ್ತಿದೆ. ಜೊತೆಗೆ ಕೆಲವು ಸರ್ಕಾರಿ, ಅರೆ ಸರ್ಕಾರಿ ಸಂಸ್ಥೆಗಳಿಗೂ ಕೊಡಲಾಗುತ್ತಿದೆ. |
| (6) ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ನಿರ್ಮಾಣಕ್ಕೆ ಜಮೀನು ಕಳೆದುಕೊಂಡ ರೈತರ ಮಕ್ಕಳಿಗೆ ಉದ್ಯೋಗ ನೀಡಲಾಗಿದೆಯೇ? | ಕೆಲವರಿಗೆ ನೀಡಲಾಗಿದೆ. |
| (7) ಹಾಗಿದ್ದಲ್ಲಿ ಉದ್ಯೋಗ ಪಡೆದವರ ಹಾಗೂ ಉದ್ಯೋಗ ಪಡೆಯದವರ ಸಂಖ್ಯೆ ಎಷ್ಟು,-ಉದ್ಯೋಗಕ್ಕಾಗಿ ಬಂದ ಅರ್ಜಿಗಳೆಷ್ಟು,-ತಿರಸ್ಕೃತಗೊಂಡ ಅರ್ಜಿ ಗಳೆಷ್ಟು,-ತಿರಸ್ಕೃತಗೊಂಡಿದ್ದರೆ ಕಾರಣ ಗಳೇನು? | ಉದ್ಯೋಗ ಕೋರಿ 492 ಅರ್ಜಿಗಳನ್ನು ಸ್ವೀಕರಿಸಲಾಗಿದೆ. ಈ ಪೈಕಿ 80 ಅರ್ಜಿದಾರರಿಗೆ ಉದ್ಯೋಗ ನೀಡಲಾಗಿದೆ. ಉಳಿದ 412 ಅರ್ಜಿಗಳನ್ನು ಹುದ್ದೆಗಳು ಖಾಲಿ ಇಲ್ಲದಿರುವುದರಿಂದ ಹಾಗೂ ಅಭ್ಯರ್ಥಿಗಳು ಸೂಕ್ತವಾದ ವಿದ್ಯಾರ್ಹತೆ, ನೈಪುಣ್ಯತೆಯನ್ನು ನಿರ್ದಿಷ್ಟ ಹುದ್ದೆಗಳಿಗೆ ಹೊಂದಿಲ್ಲದಿರುವುದರಿಂದ ಪರಿಗಣಿಸಿರುವುದಿಲ್ಲ. |

ಮೂಅಇ 96 ರಾಅವಿ 2008

ಪ್ರವಾಸೋದ್ಯಮ ಮತ್ತು ಮೂಲ ಸೌಲಭ್ಯ

ಅಭಿವೃದ್ಧಿ ಸಚಿವರು

## ಮಾದರಿ – 3

**ಕರ್ನಾಟಕ ವಿಧಾನಸಭೆ**

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ :84-2008
2. ಸದಸ್ಯರ ಹೆಸರು :
3. ಉತ್ತರಿಸುವ ದಿನಾಂಕ :
4. ಉತ್ತರಿಸುವ ಸಚಿವರು :ಮಾನ್ಯ ಗೃಹ ಸಚಿವರು

| ಪ್ರಶ್ನೆ | ಉತ್ತರ |
|---|---|
| (ಅ) ಕಳೆದ ಎರಡು ತಿಂಗಳ ಅವಧಿಯಲ್ಲಿ ರಾಜ್ಯದಲ್ಲಿ ರಸಗೊಬ್ಬರ ಹಂಚಿಕೆ ಸಂಬಂಧವಾಗಿ ವಿವಿದೆಡೆಗಳಲ್ಲಿ ಗಲಭೆಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಯಾವ ಯಾವ ಸ್ಥಳಗಳಲ್ಲಿ ಈ ಗಲಭೆಗಳು ನಡೆದಿವೆ? | ಹೌದು. ಹಾವೇರಿ, ಬೆಳಗಾಂ, ದಾವಣಗೆರೆ, ಹಾಸನ ಚಿತ್ರದುರ್ಗ, ತುಮಕೂರು ಮತ್ತು ಹುಬ್ಬಳ್ಳಿ-ಧಾರವಾಡ ನಗರಗಳಲ್ಲಿ ಗಲಭೆಗಳು ನಡೆದಿದೆ. |
| (ಆ) ಈ ಗಲಭೆಗಳನ್ನು ಹತ್ತಿಕ್ಕಲು ನಡೆಸಲಾದ ಪೋಲೀಸ್ ಗೋಲಿಬಾರ್ ನಲ್ಲಿ ಇದುವರೆವಿಗೂ ಪ್ರಾಣ ಕಳೆದುಕೊಂಡ, ಕೈಕಾಲು ಕಳೆದುಕೊಂಡ, ತೀವ್ರ ಸ್ವರೂಪದ ಗಾಯಗಳಾದ ಜನರೆಷ್ಟು? | ಈ ಗಲಭೆಗಳನ್ನು ಹತ್ತಿಕ್ಕಲು ನಡೆಸಲಾದ ಪೊಲೀಸ್ ಗೋಲಿಬಾರ್‌ನಲ್ಲಿ ಹಾವೇರಿ ಜಿಲ್ಲೆಯಲ್ಲಿ ಪ್ರಾಣಕಳೆದುಕೊಂಡವರು-02, ಸಾದಾ ಗಾಯಗೊಂಡವರು-19 ಜನರು. ಈ ಗಾಯ ಗೊಂಡವರಲ್ಲಿ ಯಾರು ತಮ್ಮ ಕೈಕಾಲುಗಳನ್ನು ಕಳೆದುಕೊಂಡಿರುವುದಿಲ್ಲ. ಅಲ್ಲದೆ ಇದರಲ್ಲಿ ಯಾರಿಗೂ ತೀವ್ರ ಸ್ವರೂಪದ ಗಾಯಗಳಾಗಿರು ವುದಿಲ್ಲ. |
| (ಇ) ಈ ಗಲಭೆಗಳಿಗೆ ಬಲಿಯಾದವರಿಗೆ ಸರ್ಕಾರ ಇದುವರೆವಿಗೂ ಯಾವ ಯಾವ ಪರಿಹಾರಗಳನ್ನು ನೀಡಿದೆ? (ಪೂರ್ಣ ವಿವರಗಳನ್ನು ಜಿಲ್ಲಾವಾರು ಅಂಕಿಅಂಶಗಳಲ್ಲಿ ಒದಗಿಸುವುದು). | ಹಾವೇರಿಯಲ್ಲಿ ನಡೆದ ಗಲಭೆಯಲ್ಲಿ ಬಲಿಯಾದವರಿಗೆ ಸರ್ಕಾರ ಈ ಕೆಳಕಂಡ ಪರಿಹಾರ ನೀಡಿದೆ.<br>1) ಸಿದ್ದಲಿಂಗಪ್ಪ ಚನ್ನಬಸಪ್ಪ ಚೀರಿ ಈತನ ಕುಟುಂಬಕ್ಕೆ ಈ ಕೆಳಕಂಡಂತೆ ಪರಿಹಾರ ನೀಡಲಾಗಿದೆ<br>ಅ) ಮೃತನ ಪತ್ನಿಗೆ ಕಂದಾಯ ಇಲಾಖೆಯಲ್ಲಿ **“ಸಿ”** ದರ್ಜೆಯ ನೌಕರಿ. |

| | |
|---|---|
| | ಆ) ಮೃತನ ಎರಡು ಮಕ್ಕಳಿಗೆ ಪದವಿ ಮಟ್ಟದವರೆಗೆ ಉಚಿತ ಶಿಕ್ಷಣ ಸೌಲಭ್ಯ.<br>ಇ) ರೂ. 2,00,000/- ನಗದು ಪರಿಹಾರ<br>2) ಪುಟ್ಟಪ್ಪ ಹೇಮಪ್ಪ ಹೊನ್ನತ್ತಿ ಈತನ ಕುಟುಂಬಕ್ಕೆ ಈ ಕೆಳಕಂಡಂತೆ ಪರಿಹಾರ ನೀಡಲಾಗಿದೆ:<br>ಅ) ಮೃತನ ಪತ್ನಿಗೆ ಶಿಕ್ಷಣ ಇಲಾಖೆಯಲ್ಲಿ "ಡಿ"ದರ್ಜೆಯ ನೌಕರಿ.<br>ಆ) ರೂ. 50,000/- ಗಾಯಗೊಂಡ ಸಮಯದಲ್ಲಿ ನೀಡಲಾಗಿದೆ.<br>ಇ) ರೂ. 2,00,000/- ಗಳನ್ನು ಮರಣ ಹೊಂದಿದ ನಂತರ ನೀಡಲಾಗಿದೆ.<br>ಈ) ಮೃತರ ಮಕ್ಕಳಿಗೆ ಪದವಿ ಮಟ್ಟದ ವಿದ್ಯಾಭ್ಯಾಸಕ್ಕಾಗಿ ತಗಲುವ ವೆಚ್ಚವನ್ನು ಸರ್ಕಾರ ಭರಿಸುವುದು.<br><br><u>ಗಾಯಗೊಂಡವರಿಗೆ ನೀಡಿರುವ ಪರಿಹಾರಗಳು:</u><br>1) ಹಾವೇರಿ ಜಿಲ್ಲೆ: ಗೋಲಿಬಾರ್ ಘಟನೆಯಲ್ಲಿ 19 ಜನ ಗಾಯಗೊಂಡಿದ್ದು, ಪರಿಹಾರವನ್ನು ಈ ಕೆಳಕಂಡಂತೆ ನೀಡಿದೆ:<br>ಅ) ಮೋಟೆಬೆನ್ನೂರಿನಲ್ಲಿ ಗಾಯಗೊಂಡ 12 ಜನರಿಗೆ ತಲಾ ರೂ. 25,000/- ದಂತೆ ರೂ. 3,00,000/- ಪರಿಹಾರ.<br>ಆ) ಹಾವೇರಿ ಶಹರದಲ್ಲಿ ಗಾಯಗೊಂಡ ಒಟ್ಟು 7 ಜನರಲ್ಲಿ 3 ಜನರಿಗೆ ತಲಾ ರೂ. 50,000/- ನಂತೆ ಹಾಗೂ 4 ಜನರಿಗೆ ತಲಾ ರೂ. 25,000/- ರಂತೆ ಒಟ್ಟು ರೂ. 2,50,000/- ಪರಿಹಾರ ನೀಡಿದೆ. |
| (ಈ) ಈ ಸಂಬಂಧವಾಗಿ ಎಷ್ಟು ಜನರ ಮೇಲೆ ಮೊಕದ್ದಮೆಗಳನ್ನು ದಾಖಲು ಮಾಡಿ ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ? ಯಾವ ಯಾವ | ಈ ಸಂಬಂಧವಾಗಿ 4 ಜಿಲ್ಲೆಗಳಲ್ಲಿ ಮೊಕದ್ದೊಮ್ಮೆಗಳು ದಾಖಲಾಗಿದ್ದು, 279ರ ಪೈಕಿ ಈ ಮೊದಲೆ 21 ಜನರಿಗೆ ಜಾಮೀನು ನೀಡಲಾಗಿದ್ದು 246 |

| | |
|---|---|
| ಜೈಲುಗಳಲ್ಲಿ ಎಷ್ಟೆಷ್ಟು ಜನರು ನ್ಯಾಯಾಂಗ ಬಂಧನದಲ್ಲಿದ್ದರೆ. | ಜನರನ್ನು ನ್ಯಾಯಾಂಗ ಬಂಧನದಿಂದ ಜಾಮೀನಿನ ಮೇಲೆ ಬಿಡುಗಡೆ ಮಾಡಿದ್ದು, ನಂತರ ಹಾವೇರಿ ಜಿಲ್ಲೆಯ ಒಬ್ಬ ರೈತನನ್ನು ಧಾರವಾಡ ಸಬ್ ಜೈಲಿನಲ್ಲಿ ಮತ್ತು ಹುಬ್ಬಳ್ಳಿ ಧಾರವಾಡ ನಗರದ 11 ಜನರನ್ನು ನ್ಯಾಯಾಂಗ ಬಂಧನದಲ್ಲಿರಿಸಿ ಕೇಂದ್ರ ಕಾರಾಗೃಹ, ಧಾರವಾಡ ಜೈಲಿನಲ್ಲಿರಿಸಲಾಗಿದೆ. |
| (ಉ) ಇವರ ಪೈಕಿ ಎಷ್ಟು ಜನರಿಗೆ ಇದುವರೆವಿಗೂ ಜಾಮೀನು ದೊರೆತಿದೆ? | ಇದುವರಿವಿಗೂ 267 ಜನರಿಗೆ ಜಾಮೀನು ದೊರಿತಿದೆ. |
| (ಊ) ಅನಾವಶ್ಯಕವಾಗಿ ಗೋಲಿಬಾರು ನಡೆಸಿ ಮುಗ್ದ ಜನರ ಸಾವಿಗೆ ಕಾರಣರಾದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ನ್ಯಾಯಾಂಗ ವಿಚಾರಣೆ ವಿಧಿಸಲಾಗಿದೆ. |
| (ಋ) ಈ ಸಂಬಂಧವಾಗಿ ನಡೆಯುತ್ತಿರುವ ನ್ಯಾಯಾಂಗ ತನಿಖೆ ಯಾವ ಹಂತದಲ್ಲಿದೆ? | ಈ ಘಟನೆಗೆ ಸಂಬಂಧಿಸಿದಂತೆ ನ್ಯಾಯಮೂರ್ತಿ ಕೆಡಂಬಾಡಿ ಜಗನ್ನಾಥಶೆಟ್ಟಿ ವಿಚಾರಣಾ ಆಯೋಗವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಒಇ/370/ಎಸ್‌ಎಸ್‌ಟಿ/2008, ದಿನಾಂಕ 17.06.2008 ರಂತೆ ಆಯೋಗ ನೇಮಿಸಿರುತ್ತದೆ. |

**ಸಂಖ್ಯೆ: ಹೆಚ್‌ಡಿ 428 ಎಸ್‌ಎಸ್‌ಟಿ 2008**

**(ಸಹಿ)**

**ಗೃಹ ಸಚಿವರು**

## ಮಾದರಿ – 4

**ಕರ್ನಾಟಕ ವಿಧಾನಸಭೆ**

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ :70
2. ಸದಸ್ಯರ ಹೆಸರು :
3. ಉತ್ತರಿಸುವ ದಿನಾಂಕ :
4. ಉತ್ತರಿಸುವ ಸಚಿವರು :ಮಾನ್ಯ ಮುಖ್ಯಮಂತ್ರಿಯವರು

| ಪ್ರಶ್ನೆ | ಉತ್ತರ |
|---|---|
| (ಅ) ಬೆಂಗಳೂರಿನಲ್ಲಿದ್ದ ಕೇಂದ್ರ ಕಾರಾಗೃಹವನ್ನು ಪರಪ್ಪನ ಅಗ್ರಹಾರಕ್ಕೆ ಸ್ಥಳಾಂತರಿಸಿದ ನಂತರ ಹಾಲಿ ಖಾಲಿ ಇರುವ ಆ ಜಾಗವನ್ನು ಸದುಪಯೋಗಪಡಿಸುವ ವಿಷಯ ಸರ್ಕಾರದ ಮುಂದಿದೆಯೇ? | ಹೌದು |
| (ಆ)ಹಾಗಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ,- ಪೂರ್ಣ ಮಾಹಿತಿ ನೀಡುವುದು? | ಹಾಲಿ ಖಾಲಿಯಿರುವ ಜಾಗದಲ್ಲಿ ಫ್ರೀಡಂ ಪಾರ್ಕನ್ನು ಅಭಿವೃದ್ಧಿಪಡಿಸುವ ಕಾಮಗಾರಿಯ ರೂ.751.00 ಲಕ್ಷಗಳ ಅಂದಾಜು ಪಟ್ಟಿಗೆ ಸರ್ಕಾರದ ಆದೇಶ ದಿನಾಂಕ 4.4.2006ರಲ್ಲಿ ಅನುಮೋದನೆ ನೀಡಿದ್ದು, ತದನಂತರ ಸದರಿ ಕಾಮಗಾರಿಯ ಅಂದಾಜು ವೆಚ್ಚ ಪರಿಷ್ಕೃತಗೊಂಡಿದ್ದು, ಪರಿಷ್ಕೃತ ಅಂದಾಜು ಮೊತ್ತ ರೂ.1027.00 ಲಕ್ಷಗಳಿಗೆ ದಿನಾಂಕ 12.11.2007ರ ಆದೇಶದಲ್ಲಿ ಅನುಮೋದನೆ ಯನ್ನು ನೀಡಿದೆ. ಕಾಮಗಾರಿಗೆ ಟೆಂಡರ್ ಅನ್ನು ಕರೆದು ಗುತ್ತಿಗೆಗೆ ನೀಡಿದ್ದು, ಮೊದಲನೇ ಹಂತದ ಕಾಮಗಾರಿಯು ಮುಕ್ತಾಯದ ಹಂತದಲ್ಲಿರುತ್ತದೆ. |
| (ಇ) ಬೆಂಗಳೂರು ನಗರದಲ್ಲಿರುವ ರೇಸ್‌ಕೋರ್ಸ್ ಅನ್ನು ಸ್ಥಳಾಂತರಿಸುವ ವಿಷಯ ಸರ್ಕಾರದ ಮುಂದಿದೆಯೇ? | ಈ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ. |

**ಸಂ.ನಅಇ 282 ಎಂ ಎನ್ ವೈ 2008**

**(ಸಹಿ)**

**ಮುಖ್ಯಮಂತ್ರಿ**

## ಮಾದರಿ – 5

**ಕರ್ನಾಟಕ ವಿಧಾನಸಭೆ**

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 39
2) ಸದಸ್ಯರ ಹೆಸರು :
3) ಉತ್ತರಿಸುವ ದಿನಾಂಕ :
4) ಉತ್ತರಿಸುವ ಸಚಿವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಪ್ರಶ್ನೆ | ಉತ್ತರ |
|---|---|
| (ಅ) ಭಾರಿ ಮಳೆಯಿಂದಾಗಿ ಮಲೆನಾಡು ತಾಲ್ಲೂಕುಗಳಲ್ಲಿ ಜಿಲ್ಲಾ ಪಂಚಾಯತ್ ರಸ್ತೆ ಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಂದಿದೆ. |
| (ಆ) ಸಕಲೇಶಪುರ ಕ್ಷೇತ್ರ ಮಲೆನಾಡು ಪ್ರದೇಶವಾಗಿದ್ದು, ರಸ್ತೆಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು |
| (ಇ) ಪ್ರತಿ ವರ್ಷ ಭಾರಿ ಮಳೆ ಬೀಳುವುದು ನಿಯಮಿತವಾಗಿರುವುದರಿಂದ ಸರ್ಕಾರದ ವಿಶೇಷ ಅನುದಾನವನ್ನು ನಿಗದಿ ಮಾಡಿ ಬಿಡುಗಡೆ ಮಾಡಲಾಗುವುದೇ? | ಕಳೆದ ಸಾಲಿನಲ್ಲಿ ಬಿದ್ದ ಬಾರಿ ಮಳೆಯಿಂದಾಗಿ ಗ ್ರಾಮೀಣ ರಸ್ತೆಗಳ ದುರಸ್ತಿ ಅವಶ್ಯಕತೆ ಇರುತ್ತದೆ. ಪ್ರಸಕ್ತ ಸಾಲಿನಲ್ಲಿ ಆಯವ್ಯಯದಲ್ಲಿ ಒದಗಿ ಸಲಾದ ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಹಾಗೂ ಕೇಂದ್ರ ಸರ್ಕಾರದ ಹಣಕಾಸಿನ ನೆರವಿನ ಹನ್ನೆರಡನೇ ಹಣಕಾಸು ಆಯೋಗದ ಯೋಜನೆಯಡಿ ಒದಗಿಸಲಾದ ಅನುದಾನದಲ್ಲಿ ಈ ರಸ್ತೆಗಳ ನಿರ್ವಹಣೆ ಕೈಗೊಳ್ಳಲಾಗುವುದು. |

**ಸಂ:ಗ್ರಾಅಪ 43 ಆರ್ ಆರ್ ಸಿ 2008.** **(ಸಹಿ)**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

## ಲಿಖಿತ ಮೂಲಕ ಉತ್ತರಿಸುವ (ಚುಕ್ಕೆ ಗುರುತಿಲ್ಲದ) ಪ್ರಶ್ನೆಗಳಿಗೆ ಸಿದ್ಧಪಡಿಸಲಾದ ಉತ್ತರಗಳ ಕೆಲವು ಮಾದರಿಗಳು

### ಮಾದರಿ – 1

**ಕರ್ನಾಟಕ ವಿಧಾನಸಭೆ**

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :238
2. ಸದಸ್ಯರ ಹೆಸರು :
3. ಉತ್ತರಿಸುವ ದಿನಾಂಕ :
4. ಉತ್ತರಿಸುವ ಸಚಿವರು :ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು

| ಪ್ರಶ್ನೆ | ಉತ್ತರ |
|---|---|
| (ಅ) ಭಾಗ್ಯಲಕ್ಷ್ಮಿ ಯೋಜನೆಯನ್ನು ಯಾವ ವರ್ಷದಿಂದ ಜಾರಿಗೆ ತರಲಾಗಿದೆ,- ಇದರ ಮುಖ್ಯಾಂಶಗಳೇನು,- ಇದುವರೆವಿಗೂ ಎಷ್ಟು ಜನ ಹೆಣ್ಣುಮಕ್ಕಳಿಗೆ ಇದರ ಪ್ರಯೋಜನ ದೊರೆತಿದೆ,- ಆಯವ್ಯಯದಲ್ಲಿ ಇಲ್ಲಿಯ ವರೆವಿಗೆ ಇದಕ್ಕಾಗಿ ವೆಚ್ಚ ಮಾಡಲಾಗಿರುವ ಹಣವೆಷ್ಟು? | ಭಾಗ್ಯಲಕ್ಷ್ಮಿ ಯೋಜನೆಯನ್ನು 1.4.2006 ರಿಂದ ಚಾಲನೆ ತರಲಾಗಿರುತ್ತದೆ. 1.4.2006 ರಿಂದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬ ಗಳಲ್ಲಿ ಜನಿಸಿದ 2 ಹೆಣ್ಣು ಮಕ್ಕಳನ್ನು ಈ ಯೋಜನೆಯ ವ್ಯಾಪ್ತಿಗೆ ತರಲಾಗುವುದು. ಹೆಣ್ಣು ಮಗುವಿನ ಹೆಸರಿನಲ್ಲಿ ರೂ.10,000/- ಗಳನ್ನು ಆಯ್ಕೆಯಾದ ಹಣಕಾಸು ಸಂಸ್ಥೆಯಲ್ಲಿ ಠೇವಣಿ ಹೂಡಲಾಗುವುದು. ಠೇವಣಿ ಹಣವನ್ನು ಬಡ್ಡಿ ಸಮೇತವಾಗಿ ಫಲಾನುಭವಿಗಳಿಗೆ 18 ವರ್ಷ ಗಳು ಪೂರ್ಣಗೊಂಡ ನಂತರ ಮೊದಲನೇ ಮಗುವಿಗೆ ರೂ.34,165/- ಹಾಗೂ ಎರಡನೇ ಮಗುವಿಗೆ ರೂ.40,918/- ಮೊತ್ತವನ್ನು ದೊರಕಿಸಿ ಕೊಡಲಾಗುತ್ತದೆ. ಹೆಣ್ಣು ಮಗು ವಿದ್ಯಾಭ್ಯಾಸವನ್ನು ಮುಂದುವರೆಸಿದಂತೆ ವಿದ್ಯಾರ್ಥಿ ವೇತನ, ವೈದ್ಯಕೀಯ ವಿಮೆ ಹಾಗೂ ಪೋಷಕರಿಗೆ ಜೀವ ವಿಮಾ ಸೌಲಭ್ಯ ನೀಡಲಾಗುವುದು.<br>2006-07ರಲ್ಲಿ 2,22,248 ಮಕ್ಕಳು ಈ ಸೌಲಭ್ಯ ಪಡೆದಿದ್ದು, ರೂ.236.74 ಕೋಟಿ ವೆಚ್ಚ ಮಾಡಲಾಗಿದೆ. 2007-08ರಲ್ಲಿ 1,06,410 |

| | |
|---|---|
| | ಮಕ್ಕಳಿಗೆ ಸೌಲಭ್ಯ ಕಲ್ಪಿಸಲಾಗಿದ್ದು, ರೂ.106.41 ಕೋಟಿ ವೆಚ್ಚ ಮಾಡಲಾಗಿದೆ. |
| (ಆ) ಈ ಯೋಜನೆಯಡಿಯಲ್ಲಿ ನೀಡಲಾಗುತ್ತಿರುವ ಹಣದ ಮೊತ್ತವನ್ನು ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ,- ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಮೊತ್ತ ಹೆಚ್ಚಿಸಲಾಗಿದೆ? | ಈ ಯೋಜನೆಗೆ ನೀಡುತ್ತಿದ್ದ ಕೊಡುಗೆಯನ್ನು ದ್ವಿಗುಣಗೊಳಿಸಲಿದೆ ಹಾಗೂ ಫಲಾನುಭವಿ ಹೆಣ್ಣು ಮಗುವು ತನ್ನ 18ನೇ ವಯಸ್ಸಿಗೆ ಬಂದಾಗ ಒಂದು ಲಕ್ಷ ರೂ.ಗಳನ್ನು ಪಡೆಯಲಿದೆ ಎಂದು ಆಯವ್ಯಯ ಭಾಷಣದಲ್ಲಿ ಪ್ರಕಟಿಸಲಾಗಿದೆ. |
| (ಇ)ಈ ಯೋಜನೆಯ ಬಗ್ಗೆ ಮಾಹಿತಿ ಸಂಗ್ರಹ ಸಲುವಾಗಿ ವೆಬ್‌ಸೈಟ್‌ನ್ನು ಆರಂಭ ಮಾಡಿರುವುದು ನಿಜವೇ? | ಈ ಯೋಜನೆ ಮಾಹಿತಿ ಸಂಗ್ರಹ ಮಾಡಲು ವೆಬ್ ಸೈಟ್ ಆರಂಭಿಸುವ ಸಾಫ್ಟ್‌ವೇರ್ ತಯಾರಿ ಪ್ರಕ್ರಿಯೆಯಲ್ಲಿದೆ. |
| (ಈ)ಹಾಗಿದ್ದಲ್ಲಿ, ಯಾವಾಗ ಈ ವೆಬ್‌ಸೈಟ್‌ನ್ನು ಪ್ರಾರಂಭಿಸಲಾಯಿತು,- ಅಂದಿನಿಂದ ಇಂದಿನವರೆಗೆ ಎಷ್ಟು ಮಾಹಿತಿಯನ್ನು ಸಂಗ್ರಹಿಸಲಾಗಿದೆ? | ಪ್ರಥಮ ಹಂತ ಮಾಹಿತಿಯನ್ನು ಸಂಗ್ರಹಿಸುವ ಯಲಹಂಕ ಶಿಸು ಅಭಿವೃದ್ಧಿ ಯೋಜನೆಯನ್ನು ಪ್ರಾಯೋಗಿಕವಾಗಿ ಆಯ್ಕೆ ಮಾಡಿದ್ದು, ಈಗಾಗಲೇ 125 ಮಕ್ಕಳ ಮಾಹಿತಿಯನ್ನು ಸಂಗ್ರಹಿಸಲಾಗಿದೆ. |
| (ಉ) ಪ್ರಸಕ್ತ ಸಾಲಿನಲ್ಲಿ ಈ ಯೋಜನೆಗೆ ಎಷ್ಟು ಹಣವನ್ನು ಮೀಸಲಿಡಲಾಗಿದೆ? | ರೂ.266.65 ಕೋಟಿ |

ಸಂಖ್ಯೆ:ಮಮಇ 197ಮಮಅ 2008

ಸಹಿ/-

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು

## ಮಾದರಿ – 2

**ಕರ್ನಾಟಕ ವಿಧಾನಸಭೆ**

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :71
2. ಸದಸ್ಯರ ಹೆಸರು :
3. ಉತ್ತರಿಸುವ ದಿನಾಂಕ :
4. ಉತ್ತರಿಸುವ ಸಚಿವರು :ಮಾನ್ಯ ಲೋಕೋಪಯೋಗಿ ಸಚಿವರು

| ಪ್ರಶ್ನೆ | ಉತ್ತರ |
|---|---|
| (ಅ) ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿಯ ಅವ್ಯವಸ್ಥೆಯಿಂದಾಗಿ ಸಂಚಾರಕ್ಕೆ ತೀವ್ರತರ ಅನಾನುಕೂಲ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು |
| (ಆ) ಹಾಗಿದ್ದಲ್ಲಿ, ಧೀರ್ಘ ಕಾಲದಿಂದಲೂ ಸಮರ್ಪಕ ದುರಸ್ತಿ ಕಾರ್ಯಗಳನ್ನು ಕೈಗೆತ್ತಿಗೊಳ್ಳದೇ ಇರಲು ಕಾರಣಗಳೇನು? | ಹಾನಿಗೊಳಗಾದ ಭಾಗದ ರಸ್ತೆಯಲ್ಲಿ ವಾರ್ಷಿಕ ನಿರ್ವಹಣೆ ಹಾಗೂ ಮಳೆಹಾನಿ ದುರಸ್ತಿ ಅಡಿಯಲ್ಲಿ ಆಗಿಂದಾಗ್ಗೆ ಗುಂಡಿಗಳನ್ನು ಮುಚ್ಚ ತಾತ್ಕಾಲಿಕ ದುರಸ್ತಿ ಕೈಗೊಳ್ಳಲಾಗಿತ್ತು. ಶಿರಾಡಿಘಾಟ್ ಭಾಗದ ರಸ್ತೆಯ ಸಮರ್ಪಕ ದುರಸ್ತಿಗೆ ನಾಲ್ಕು ಬಾರಿ ಟೆಂಡರು ಕರೆದರೂ ಯಾವುದೇ ಗುತ್ತಿಗೆದಾರರು ಕೂಡಲೇ ಮುಂದೆ ಬಾರದೆ ಕಾರಣ ಶಾಶ್ವತ ದುರಸ್ತಿ ಕೆಲಸ ವಿಳಂಬ ವಾಗಿರುತ್ತದೆ. |
| (ಇ) ಈ ರಸ್ತೆಯ ದುರಸ್ತಿ ಕಾರ್ಯಗಳಿಂದಾಗಿ ಒಟ್ಟು ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ? | ರೂ.3393.38 ಲಕ್ಷಗಳು ವೆಚ್ಚವಾಗಿರುತ್ತದೆ. |
| (ಈ) ಪೂರ್ಣ ಪ್ರಮಾಣದ ದುರಸ್ತಿ ಕಾರ್ಯವನ್ನು ಯಾವಾಗ ವ್ಯವಸ್ಥೆಗೊಳಿಸಿ ಸಂಚಾರಕ್ಕೆ ಅನುಕೂಲ ಮಾಡಿಕೊಡಲಾಗುವುದು? | ರಾ.ಹೆ-48ರ ಶಿರಾಡಿಘಾಟ್ ಭಾಗದ ರಸ್ತೆಯ ದುರಸ್ತಿಗೆ ಮೂರು ಕಾಮಗಾರಿಗಳನ್ನು 2007-08ರಲ್ಲಿ ಕೈಗೆತ್ತಿಕೊಂಡು ಎಲ್ಲಾ ಕಾಮಗಾರಿಗಳನ್ನು ಬಹುತೇಕ ಪೂರ್ಣಗೊಳಿಸಲಾಗಿದ್ದು ಹೆದ್ದಾರಿಯನ್ನು ವಾಹನ ಸಂಚಾರಕ್ಕೆ 12.6.2008 ರಿಂದ ತೆರವುಗೊಳಿಸಲಾಗಿದೆ. |

| | |
|---|---|
| (ಉ) ಶಿರಾಡಿ ಘಾಟ್ ಪ್ರದೇಶದಲ್ಲಿನ ಹೆಚ್ಚಿನ ದುರಸ್ತಿ ಕಾರ್ಯಗಳಿಗಾಗಿ ಈತನಕ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ? | ಶಿರಾಡಿಘಾಟ್ ಪ್ರದೇಶದಲ್ಲಿನ ಹೆಚ್ಚಿನ ದುರಸ್ತಿ ಕಾರ್ಯಗಳಿಗಾಗಿ ಈತನಕ ಒಟ್ಟು ರೂ.3242.00 ಲಕ್ಷಗಳು ವೆಚ್ಚವಾಗಿರು ತ್ತದೆ. |
| (ಊ) ದುರಸ್ತಿ ಕಾರ್ಯ ಮುಗಿಸಿ ಸಂಚಾರಕ್ಕೆ ಯಾವಾಗ ಮುಕ್ತಿಗೊಳಿಸಲಾಗು ವುದು? | 12.6.2008 ರಿಂದ ಸಂಚಾರಕ್ಕೆ ರಸ್ತೆಯನ್ನು ಮುಕ್ತಗೊಳಿಸಲಾಗಿದೆ. |

**ಸಂಖ್ಯೆ:ಲೋಇ 138 ಸಿಎನ್‌ಹೆಚ್ 2008**

ಸಹಿ/-

**ಲೋಕೋಪಯೋಗಿ ಸಚಿವರು**

## ಮಾದರಿ – 3

**ಕರ್ನಾಟಕ ವಿಧಾನಸಭೆ**

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :213
2. ಸದಸ್ಯರ ಹೆಸರು :
3. ಉತ್ತರಿಸುವ ದಿನಾಂಕ :
4. ಉತ್ತರಿಸುವ ಸಚಿವರು :ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು

| ಪ್ರಶ್ನೆ | ಉತ್ತರ |
|---|---|
| (ಅ) ರಾಮನಗರದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಮಾದರಿ ಆರೋಗ್ಯ ವಿಶ್ವವಿದ್ಯಾನಿಲಯದ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು? | 216 ಎಕರೆ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ. 145 ಎಕರೆ ಜಮೀನನ್ನು ಕಟ್ಟಡ ನಿರ್ಮಾಣಕ್ಕಾಗಿ ಲೋಕೋಪಯೋಗಿ ಇಲಾಖೆಯ ವಶಕ್ಕೆ ನೀಡಲಾಗಿದೆ.<br>ರೂ.9.63 ಕೋಟಿಗಳನ್ನು ಭೂ ಸ್ವಾಧೀನಕ್ಕಾಗಿ ಕೆ.ಐ.ಎ.ಡಿ.ಬಿ.ಗೆ ಮತ್ತು ಮೊಬಲೈಜೇಷನ್ ಮುಂಗಡವಾಗಿ ರೂ.33.37 ಕೋಟಿಗಳನ್ನು ಲೋಕೋಪಯೋಗಿ ಇಲಾಖೆಗೆ ಬಿಡುಗಡೆ ಮಾಡಲಾಗಿದೆ. ಕೆಲವೊಂದು ಸರ್ವೆ ನಂಬರುಗಳಿಗೆ ಸಂಬಂಧಿಸಿದಂತೆ ರಾಜ್ಯ ಉಚ್ಛ ನ್ಯಾಯಾಲಯದ ತಡೆಯಾಜ್ಞೆಗಳು ಇರುತ್ತವೆ. ತಡೆಯಾಜ್ಞೆಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳುವಂತೆ ಕೆ.ಐ.ಎ.ಡಿ.ಬಿ.ಗೆ ಸೂಚಿಸಲಾಗಿದೆ. ತನ್ನ ಪಾಲಿನ ರೂ.50.00 ಕೋಟಿಗಳ ಹಣವನ್ನು ಸಂದಾಯಿಸುವಂತೆ ವಿಶ್ವವಿದ್ಯಾನಿಲಯವನ್ನು ಕೋರಿದೆ. |
| (ಆ) ಈ ಆರೋಗ್ಯ ವಿಶ್ವವಿದ್ಯಾನಿಲಯ ನಿರ್ಮಾಣದ ಪ್ರಗತಿಯ ವಿವರಗಳೇನು? | ಭೂ ಸ್ವಾಧೀನ ಕಾರ್ಯ ಪ್ರಗತಿಯಲ್ಲಿದೆ. |

**ಸಂಖ್ಯೆ: ಆಕುಕ 288 ಎಂಪಿಎಸ್ 2008** ಸಹಿ/-

**ವೈದ್ಯಕೀಯ ಶಿಕ್ಷಣ ಸಚಿವರು**

## ಮಾದರಿ – 4

**ಕರ್ನಾಟಕ ವಿಧಾನಸಭೆ**

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :171
2. ಸದಸ್ಯರ ಹೆಸರು :
3. ಉತ್ತರಿಸುವ ದಿನಾಂಕ :
4. ಉತ್ತರಿಸುವ ಸಚಿವರು :ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

| ಪ್ರಶ್ನೆ | ಉತ್ತರ |
|---|---|
| (ಅ) ರಾಜ್ಯದಲ್ಲಿ ಚಿಕನ್ ಗುನಿಯಾ, ಡೆಂಗ್ಯೂ ಜ್ವರದ ಹಾವಳಿ ಎಲ್ಲೆಲ್ಲಿ ಸಂಭವಿಸಿದೆ? | ರಾಜ್ಯದಲ್ಲಿ ಇಲ್ಲಿಯವರೆಗೆ ಚಿಕನ್ ಗುನಿಯಾ ರೋಗವು 10 ಜಿಲ್ಲೆಗಳಲ್ಲಿ (ಚಿಕ್ಕಬಳ್ಳಾಪುರ, ಹಾವೇರಿ, ಉತ್ತರ ಕನ್ನಡ, ಬೀದರ್, ಕೊಪ್ಪಳ, ಚಾಮರಾಜನಗರ, ಹಾಸನ, ಉಡುಪಿ, ಚಿಕ್ಕಮಗಳೂರು ಮತ್ತು ಕೊಡಗು), ಡೆಂಗಿಜ್ವರ ರೋಗ 3 ಜಿಲ್ಲೆಗಳಲ್ಲಿ (ಚಿತ್ರದುರ್ಗ, ಗುಲ್ಬರ್ಗಾ, ಬಳ್ಳಾರಿ) ಹಾಗೂ ಚಿಕನ್ ಗುನಿಯಾ ಮತ್ತು ಡೆಂಗ್ಯೂ ಜ್ವರ ಎರಡೂ ರೋಗಗಳು ಇತರ 13 (ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಕೋಲಾರ, ತುಮಕೂರು, ದಾವಣಗೆರೆ, ಶಿವಮೊಗ್ಗ, ಬೆಳಗಾಂ, ಬಾಗಲಕೋಟೆ, ಧಾರವಾಡ, ಗದಗ್, ಮೈಸೂರು ಮತ್ತು ದಕ್ಷಿಣ ಕನ್ನಡ) ಜಿಲ್ಲೆಗಳಲ್ಲಿ ಹರಡಿರುವ ವರದಿಯಾಗಿರುತ್ತದೆ. ರಾಯಚೂರು, ಬಿಜಾಪುರ ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಈ ಎರಡೂ ರೋಗಗಳು ಹರಡಿರುವ ವರದಿಯಾಗಿರುವುದಿಲ್ಲ.<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ರಾಜಾಜಿನಗರ, ಶ್ರೀರಾಮಪುರ, ಕಾಮಾಕ್ಷಿಪಾಳ್ಯ, ನಂದಿನಿ ಲೇಔಟ್, ಮಾಗಡಿ ರಸ್ತೆ, ಬಾಸ್ಯಂ ನಗರ ಪ್ರದೇಶಗಳಿಂದ ಚಿಕನ್ ಗುನಿಯಾ ರೋಗಗಳು ವರದಿಯಾಗಿರುತ್ತವೆ. |
| (ಆ) ಈ ಕಾಯಿಲೆಯಿಂದ ಈವರೆವಿಗೆ ಮೃತಪಟ್ಟವರ ಸಂಖ್ಯೆ ಎಷ್ಟು? | ರಾಜ್ಯದಲ್ಲಿ ಡೆಂಗ್ಯೂ ಖಾಯಿಲೆಯಿಂದ ಒಬ್ಬರು ಮೃತಪಟ್ಟಿರುತ್ತಾರೆ. (see table below) ಚಿಕನ್ ಗೂನ್ಯ ಖಾಯಿಲೆಯಿಂದ ಯಾವುದೇ ಮರಣ ಸಂಭವಿಸಿರುವುದಿಲ್ಲ. |

| ಡೆಂಗ್ಯೂ ಜ್ವರದಿಂದ ಮರಣಹೊಂದಿದ ರೋಗಿಯ ಹೆಸರು | ವಿಳಾಸ | ವಯಸ್ಸು/ ಲಿಂಗ | ರೋಗ ದೃಡೀಕರಿಸಿದ ಪ್ರಯೋಗಾಲಯ | ಮರಣ ಹೊಂದಿದ ದಿನಾಂಕ |
|---|---|---|---|---|
| ರಾಘವೇಂದ್ರ ಸತ್ಯಪ್ಪ ಪೂಜಾರ್ | ನರಗುಂದ ಪ್ರಾ.ಆ.ಕೇ ಜಗಪುರ ಗದಗ ಜಿಲ್ಲೆ | 11 ವರ್ಷ/ ಗಂಡು | ಬಳ್ಳಾರಿ | 2-6-08 |

| | |
|---|---|
| (ಇ)ಈ ಕಾಯಿಲೆಯನ್ನು ನಿರ್ಮೂಲನಗೊಳಿಸಲು<br><br>ಸರ್ಕಾರ ಕೈಗೊಂಡ ಕ್ರಮಗಳೇನು? | ಚಿಕನ್ ಗುನಿಯಾ ಮತ್ತು ಡೆಂಗೂ ಜ್ವರ ತಡೆಗಟ್ಟಲು ಮತ್ತು ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮಗಳ ವಿವರ ಈ ಕೆಳಕಂಡಂತೆ ಇದೆ.<br><br>• ಚಿಕನ್ ಗುನಿಯಾ ಮತ್ತು ಡೆಂಗೂ ಜ್ವರ ವರದಿಯಾಗಿರುವ ಜಿಲ್ಲೆಗಳಲ್ಲಿ, ಜಿಲ್ಲಾ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಘಟಕಗಳಲ್ಲಿ ಅವಶ್ಯ ಔಷದಿಗಳನ್ನು ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನು ಇಡಲಾಗಿದೆ.<br>• ರೋಗವಾಹಕ ಸೊಳ್ಳೆಗಳ ನಿಯಂತ್ರಣಕ್ಕಾಗಿ ರೋಗಪೀಡಿತ ಪ್ರದೇಶಗಳಲ್ಲಿ ಪೈರಿತ್ರಮ್ ಎಕ್ಸ್ ಟ್ರಾಕ್ಟ್ ಎಂಬ ಕೀಟನಾಶಕ ಬಳಸಿ ಒಳಾಂಗಣ ಧೂಮೀಕರಣ ಮಾಡಲಾಗುತ್ತಿದೆ. ಸೊಳ್ಳೆ ಉತ್ಪತ್ತಿ ನಿಯಂತ್ರಣಕ್ಕಾಗಿ ಟೆಮಿಫಾಸ್ ಎಂಬ ಕೀಟನಾಶಕ ದ್ರಾವಣದಿಂದ ಉಪಚರಿಸಲಾಗುತ್ತಿದೆ. ಈ ಕೀಟನಾಶಕಗಳನ್ನು ಎಲ್ಲಾ ಜಿಲ್ಲೆಗಳಿಗೂ ಈಗಾಗಲೇ ಸರಬರಾಜು ಮಾಡಲಾಗಿದೆ.<br>• ಜಿಲ್ಲಾ ಮಟ್ಟ, ತಾಲ್ಲೂಕು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಮಟ್ಟದಲ್ಲೂ ತ್ವರಿತ ಪ್ರಕ್ರಿಯ ತಂಡಗಳನ್ನು ಗುರುತಿಸಿ ಸ್ಥಾಪಿಸಲಾಗಿದೆ.<br>• ಈ ರೋಗಗಳ ಕಾರ್ಯ ನಿರ್ವಹಣೆಗೆ ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿನೋಡಲ್ ಅಧಿಕಾರಿ ಗಳನ್ನು ನೇಮಿಸಲಾಗಿದ್ದು, ಅವರು ಕಾಲಕಾಲಕ್ಕೆ ರೋಗಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಕೈಗೊಂಡ ಕ್ರಮಗಳನ್ನು ಪರಿಶೀಲಿಸುತ್ತಿದ್ದಾರೆ.<br>• ಚಿಕನ್ ಗುನಿಯಾ ಮತ್ತು ಡೆಂಗೂ ರೋಗದ ಪತ್ತೆ ಹಾಗೂ ದೃಢೀಕರಣ ಕಾರ್ಯವನ್ನು ತ್ವರಿತಗೊಳಿಸಲು ಕೇಂದ್ರ ಸರ್ಕಾರದ ಸಹಯೋಗದಲ್ಲಿ ರಾಜ್ಯದ 6 ಸ್ಥಳಗಳಾದ ಬೆಂಗಳೂರು, ಕೋಲಾರ, ಶಿವಮೊಗ್ಗ, ದಕ್ಷಿಣ ಕನ್ನಡ, ಬೆಳಗಾಂ ಮತ್ತು ಬಳ್ಳಾರಿಗಳಲ್ಲಿ ರೋಗ ಸಮೀಕ್ಷಣಾ ಕಾವಲು ಕೇಂದ್ರಗಳನ್ನು ಸ್ಥಾಪಿಸಿ ಪರೀಕ್ಷಾ ಕಿಟ್ಟುಗಳನ್ನು ಸರಬರಾಜು ಮಾಡಲಾಗಿದೆ.<br>• ಈ ರೋಗಗಳ ನಿಯಂತ್ರಣ ಕಾರ್ಯಕ್ರಮಕ್ಕಾಗಿ 1500 ಗ್ರಾಮ ಪಂಚಾಯತಿಗಳನ್ನು ಗುರುತಿಸಿ ಆ ಪಂಚಾಯತಿ ಪರಿಮಿತಿಯಲ್ಲಿ ಬರುವ ಗ್ರಾಮಗಳಲ್ಲಿ ಸೊಳ್ಳೆ ಉತ್ಪತ್ತಿ ತಾಣಗಳನ್ನು ಗುರುತಿಸಿ |

| | |
|---|---|
| | ನಿರ್ಮೂಲನೆ ಮಾಡಲು ತಂಡಗಳ ಮೂಲಕ ಕ್ರಮ ಕೈಗೊಳ್ಳಲಾಗುತ್ತಿದೆ. ಪಂಚಾಯತಿ ಸದಸ್ಯರು ಮತ್ತು ಗ್ರಾಮದ ಇತರೆ ಮುಖಂಡರುಗಳನ್ನೊಳಗೊಂಡು ಮಾಹಿತಿ ಶಿಬಿರ ನಡೆಸಲಾಗಿದೆ.<br>• ಈ ರೋಗಗಳು ರಾಜ್ಯದ ಗಡಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಕೊಡಗು, ಮೈಸೂರುಗಳಲ್ಲಿ ವ್ಯಾಪಕವಾಗಿ ಹರಡಿರುವ ಹಿನ್ನೆಲೆಯಲ್ಲಿ ಕೇರಳ, ತಮಿಳುನಾಡು ಮತ್ತು ಕರ್ನಾಟಕ ಸೇರಿದಂತೆ ಅಂತರ ರಾಜ್ಯ ಸಭೆಯನ್ನು ದಿನಾಂಕ: 7-6-2008 ಮತ್ತು 19-6-2008ರಂದು ನಡೆಸಿದ್ದು, ಗಡಿ ಭಾಗದ ಎಲ್ಲಾ ಕಡೆ ಸೂಕ್ತ ನಿಯಂತ್ರಣ ಕ್ರಮಗಳ ಬಗ್ಗೆ ಚರ್ಚಿಸಿ ಮುನ್ಜಾಗ್ರತಾ ಕ್ರಮ ತೆಗೆದುಕೊಳ್ಳಲಾಗಿದೆ.<br>• ಈ ರೋಗಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಆರೋಗ್ಯ ಶಿಕ್ಷಣ ಚಟುವಟಿಕೆಗಳನ್ನು ವ್ಯಾಪಕವಾಗಿ ಹಮ್ಮಿಕೊಳ್ಳಲಾಗಿದೆ. ಇದಕ್ಕಾಗಿ ಕರ ಪತ್ರಗಳು, ಭಿತ್ತಿಪತ್ರಗಳನ್ನು ವಿತರಿಸಲಾಗಿದೆ. ದಿನಪತ್ರಿಕೆಗಳಲ್ಲಿ ಜಾಹೀರಾತು, ಆಕಾಶವಾಣಿಯಲ್ಲಿ ಸ್ಪಾಟ್‌ಗಳು ಮತ್ತು ಫೋನ್-ಇನ್ ಕಾರ್ಯಕ್ರಮಗಳನ್ನು ನಡೆಸಲಾಗಿದೆ.<br>• ರಾಜ್ಯ ಮಟ್ಟದ ಹಿರಿಯ ಅಧಿಕಾರಿಗಳು ಮತ್ತು ಪ್ರಾಂತಿಯ ನಿರ್ದೇಶಕರು, ಭಾರತ ಸರ್ಕಾರ ಇವರುಗಳು ಈ ರೋಗ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ರೋಗದ ಸ್ಥಿತಿಯ ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಆದೇಶಿಸಿರುತ್ತಾರೆ. |

**ಸಂಖ್ಯೆ:ಆಕುಕ 35 ಎಸ್ ಎಂ ಎಂ 2008** **(ಸಹಿ)**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

## ಮಾದರಿ – 5

**ಕರ್ನಾಟಕ ವಿಧಾನಸಭೆ**

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :41
2. ಸದಸ್ಯರ ಹೆಸರು :
3. ಉತ್ತರಿಸುವ ದಿನಾಂಕ :
4. ಉತ್ತರಿಸುವ ಸಚಿವರು :ಮಾನ್ಯ ಉನ್ನತ ಶಿಕ್ಷಣ ಸಚಿವರು

| ಪ್ರಶ್ನೆ | ಉತ್ತರ |
|---|---|
| (ಅ) ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಪನ್ಯಾಸಕರು ಮತ್ತು ಇತರೆ ಸಿಬ್ಬಂದಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು |
| (ಆ) ಹಾಗೂ ನೂತನ ಕಾಲೇಜುಗಳಲ್ಲಿ ಉಪನ್ಯಾಸಕರೇ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು |
| (ಇ) ಬಂದಿದಲ್ಲಿ, ನೇಮಕಾತಿಗೆ ಕೈಗೊಂಡ ಕ್ರಮಗಳೇನು? | ಕಾಲೇಜು ಶಿಕ್ಷಣ ಇಲಾಖೆ ವಿವಿಧ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿಯಿರುವ ಒಟ್ಟು 2550 ಉಪನ್ಯಾಸರ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ತುಂಬಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಅದೇ ರೀತ ಇಲಾಖೆಯ ಭೋದಕ ವರ್ಗದ ವಿವಿಧ ವೃಂದ ಗಳಲ್ಲಿ ಖಾಲಿಯಿರುವ ಒಟ್ಟು 407 ಭೋದಕೇತರ ಹುದ್ದೆಗಳನ್ನು ಸಹ ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ತುಂಬಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಭೋದಕ ಹಾಗೂ ಭೋದಕೇತರ ಹುದ್ದೆಗಳ ಆಯ್ಕೆ ಪ್ರಕಿಯ ಪ್ರಗತಿಯಲ್ಲಿದೆ. ಅದಲ್ಲದೇ ಬಡ್ತಿಗೆ ಮೀಸಲಾದ ಭೋದಕೇತರ ಗ್ರೂಪ್-ಡಿ ಹುದ್ದೆ ಗಳನ್ನು ಬಡ್ತಿ ಮೂಲಕ ತುಂಬಲು ಕ್ರಮ ಕೈಗೊಳ್ಳಲಾಗುತ್ತಿದ್ದು, 546 ಪರಿಚಾರಕರ ಹುದ್ದೆಗಳನ್ನು ಆಯಾ ಜಿಲ್ಲಾವಾರು ಆಯ್ಕೆ<br>ಸಮಿತಿಯ ಮೂಲಕ ನೇರ ನೇಮಕಾತಿ ಮಾಡಿಕೊಳ್ಳಲು ಇಲಾಖೆಯ ಹಂತದಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಉಳಿದ ಪರಿಚಾರಕರ ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ಹಾಗೂ ಬೇರೆ ಇಲಾಖೆಗಳಲ್ಲಿ ಹೆಚ್ಚುವರಿ ಹುದ್ದೆ ಗಳೆಂದು ಗುರುತಿಸಲ್ಪಟ್ಟಿರುವ ಸಂಖ್ಯಾರಿಕ್ತ ಹುದ್ದೆಗಳನ್ನು ಮರು ವಿನ್ಯಾಸಗೊಳಿಸುವ ಮೂಲಕ ತುಂಬಲಾಗುತ್ತಿದೆ. |

**ಸಂಖ್ಯೆ:ಇಡಿ 10 ಯುಜಿಹಚ್ 2008**

**(ಸಹಿ)**

**ಉನ್ನತ ಶಿಕ್ಷಣ ಸಚಿವರು**

## ಅನುಬಂಧ – 4

## (ಗಮನ ಸೆಳೆಯುವ ಸೂಚನೆಗಳು)

## ಮಾದರಿ – 1

## ಕರ್ನಾಟಕ ವಿಧಾನ ಸಭೆ

ಹದಿಮೂರನೇ ವಿಧಾನ ಸಭೆ
(ಮೊದಲನೇ ಅಧಿವೇಶನ)

(1) ಶ್ರೀ --------- (ವಿಧಾನ ಸಭಾ ಸದಸ್ಯರು) ಅವರು ರಾಜ್ಯ ಮಹಿಳಾ ಆಯೋಗ ದಲ್ಲಿ ಕಡತಗಳು ನಾಪತ್ತೆಯಾಗಿರುವ ಬಗ್ಗೆ ಮಹಿಳಾ ಮತ್ತು ಮಕ್ಕಳಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

**ಹೇಳಿಕೆ:**

ಸರ್ಕಾರದ ಅಧಿಸೂಚನೆ ಸಂಖ್ಯೆ: ಮಮಇ 04 ರಾಮಅ 2007, ದಿನಾಂಕ:6-2-2007ರಲ್ಲಿ ರಾಜ್ಯ ಮಹಿಳಾ ಆಯೋಗದ ಅಧಿನಿಯಮ 1995 ಅಧ್ಯಾಯ 23(2)(ಎ) ಅಡಿಯಲ್ಲಿ ಪ್ರದತ್ತವಾದ ಅಧಿಕಾರದನ್ವಯ ಶ್ರೀಮತಿ ಪ್ರಮೀಳಾ ನೇಸರ್ಗಿ ಇವರನ್ನು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶವನ್ನು ಹೊರಡಿಸಲಾಗಿತ್ತು.

ಶ್ರೀಮತಿ ಪ್ರಮೀಳಾ ನೇಸರ್ಗಿ ಇವರು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾಗಿ ಫೆಬ್ರುವರಿ 2007ರಿಂದ ನವೆಂಬರ್ 2007ರವರೆಗೆ ಕರ್ತವ್ಯ ನಿರ್ವಹಿಸಿದ ಅವಧಿಯಲ್ಲಿ 51 ಅರ್ಜಿಗಳನ್ನು ಸ್ವೀಕರಿಸಿದ್ದು, ಅವರ ಸಿಬ್ಬಂದಿಗಳು ನಿರ್ವಹಿಸಿದ ನೋಂದಣಿ ಪುಸ್ತಕದಲ್ಲಿ ದಾಖಲಿರಿಸಿರುತ್ತಾರೆ. ನಂತರ ಏಪ್ರಿಲ್ 2007ರಿಂದ ನವೆಂಬರ್ 2007ರವರೆಗೆ ಒಟ್ಟು 1188 ಕಡತಗಳು ಎಂದು ನೋಂದಣಿ ಪುಸ್ತಕದಲ್ಲಿ ದಾಖಲಾಗಿದೆ. ದಿನಾಂಕ 22-2-2007ರಂದು ಶ್ರೀಮತಿ ಪ್ರಮೀಳಾ ನೇಸರ್ಗಿ ರವರು ಆಧ್ಯಕ್ಷರಾಗಿ ಕರ್ನಾಟಕ ರಾಜ್ಯ ಮಹಿಳಾ ಆಯೋಗದಲ್ಲಿ ವರದಿ ಮಾಡಿಕೊಂಡ ನಂತರ ಅವರ ಶಾಖೆಗೆ ಸಿಬ್ಬಂದಿಗಳನ್ನು ನೇಮಿಸಲು ಮೌಖಿಕವಾಗಿ ಕೋರಿದ್ದು, ದಿನಾಂಕ 15-5-2007ರಂದು ಆಯೋಗದಲ್ಲಿ ನೇಮಕಾತಿ ಹೊಂದಿ ಕೆಲಸ ನಿರ್ವಹಿಸುತ್ತಿದ್ದಂತಹ ಮೂರು ಜನ ಸಿಬ್ಬಂದಿಗಳಾದ ಶ್ರೀಮತಿ ಸುನಂದ, ಕಾನೂನು ಸಲಹೆಗಾರರು, ಕು:ರಜತಾ ಕೌಟುಂಬಿಕ ಸಲಹಾ ಕೇಂದ್ರದ ಸಲಹೆಗಾರರು ಹಾಗೂ ಶ್ರೀಮತಿ ವಿದ್ಯಾವತಿ ದ್ವಿತೀಯ ದರ್ಜೆ ಸಹಾಯಕರು ಇವರುಗಳನ್ನು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಕಛೇರಿ ಆದೇಶ ಸಂಖ್ಯೆ; ಕರಾಮಅಆ : ಸಿಬ್ಬಂದಿ: ಕಂಅ:2007-08 ದಿನಾಂಕ 15-5-2007ರ ಅನ್ವಯ ಅಧ್ಯಕ್ಷರ ಶಾಖೆಯಲ್ಲಿ ಕಾರ್ಯ ನಿರ್ವಹಿಸಲು ಸೂಚಿಸಲಾಗಿದ್ದು, ಸದರಿ ಸಿಬ್ಬಂದಿಗಳು ಅವರ ಶಾಖೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದು, ಅಧ್ಯಕ್ಷರು ಸ್ವೀಕರಿಸಿದಂತಹ ಅರ್ಜಿಗಳಿಗೆ ಸಂಬಂದಿಸಿದಂತೆ ಅವರುಗಳೇ ಕಡತ

ನಿರ್ವಹಣೆ ಮಾಡಿರುತ್ತಾರೆ. ಈ ಕಡತಗಳಿಗೆ ಸಂಬಂಧಿಸಿದಂತೆ ಸಮಾಲೋಚನಾ ನೋಟೀಸ್‌ಗಳನ್ನು ಆಯೋಗದ ಕಾರ್ಯದರ್ಶಿಗಳ ಗಮನಕ್ಕೆ ತರದೇ ಅಧ್ಯಕ್ಷರ ಸಹಿಯೊಂದಿಗೆ ಜಾರಿ ಮಾಡಲಾಗುತ್ತಿತ್ತು.

ಸರ್ಕಾರದ ಅಧಿಸೂಚನೆ ದಿನಾಂಕ: 2-11-2007ರಲ್ಲಿ ಶ್ರೀಮತಿ ಪ್ರಮೀಳಾ ನೇಸರ್ಗಿ ಅಧ್ಯಕ್ಷರು, ಕರ್ನಾಟಕ ರಾಜ್ಯ ಮಹಿಳಾ ಆಯೋಗ ಇವರ ನೇಮಕಾತಿಯನ್ನು ಮುಕ್ತಾಗೊಳಿಸಿ ಆದೇಸದಿಸಿದ್ದು, ಸದರಿ ಕಛೇರಿಯಲ್ಲಿ ಮೂರು ಜನ ಸಿಬ್ಬಂದಿಗಳನ್ನು ಅಧ್ಯಕ್ಷರ ಶಾಖೆಯಲ್ಲಿ ಕೆಲಸ ನಿರ್ವಹಿಸಲು ಆದೇಶಿಸಿದ್ದು, ಅದರಂತೆ ಅವರ ಶಾಖೆಯಲ್ಲಿ ಕಡತಗಳನ್ನು ಈ ಸಿಬ್ಬಂದಿಗಳು ನಿರ್ವಹಿಸಿರುವ ಬಗ್ಗೆ ದಾಖಲಾತಿಗಳು ಆಯೋಗದಲ್ಲಿ ಲಭ್ಯವಿರುತ್ತದೆ. ಆದರೆ ಈ ರೀತಿ ಅಧ್ಯಕ್ಷರ ಶಾಖೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಶ್ರೀಮತಿ ಸುನಂದ ಇವರು ಗರ್ಭಿಣಿಯಾಗಿದ್ದು, ಅಧ್ಯಕ್ಷರು ಆಯೋಗವನ್ನು ಬಿಟ್ಟು ಹೋಗುವ ಮೊದಲೇ ರಜಾ ಹಾಕಿ ಹೋಗಿದ್ದು, ಅವರಲ್ಲಿದ್ದ ಕಡತಗಳನ್ನು ಕು:ರಜತಾ ಇವರಿಗೆ ವಹಿಸಿಕೊಡಲು ಅವರಿಗೆ ಮೌಖಿಕವಾಗಿ ತಿಳಿಸಲಾಗಿತ್ತು. ತದನಂತರ ಅಧ್ಯಕ್ಷರ ಶಾಖೆಯ ಎಲ್ಲಾ ಕಡತಗಳನ್ನು ಕು:ರಜತಾರವರೆ ನಿರ್ವಹಿಸುತ್ತಿದ್ದರು. ಅಧ್ಯಕ್ಷರ ಶಾಖೆಯಲ್ಲಿ ಕೆಲಸ ನಿರ್ವಹಿಸುವಂತಹ ಸಿಬ್ಬಂದಿಗಳ ಅವಧಿ ಮುಗಿದ ತಕ್ಷಣವೆ ಇವರ ಸೇವೆ ಮುಕ್ತಾಯವಾಗುತ್ತದೆ ಎಂದಿದ್ದು, ಕು: ರಜತಾರವರು ತಮ್ಮ ಕೆಲಸಕ್ಕೆ ರಾಜೀನಾಮೆಯನ್ನು ಸಲ್ಲಿಸಿರುತ್ತಾರೆ.

ಅರ್ಜಿದಾರರು ಆಯೋಗಕ್ಕೆ ಪದೇ ಪದೇ ಬಂದು ತಮ್ಮ ದೂರು ಅರ್ಜಿಯ ಬಗ್ಗೆ ಕ್ರಮ ಕೈಗೊಳ್ಳಲು ಕೋರಿದಾಗ ಕಡಗಳನ್ನು ಪರಿಶೀಲಿಸಲಾಗಿ ಮೇಲ್ನೋಟಕ್ಕೆ 622 ಕಡತಗಳು ಲಭ್ಯವಿಲ್ಲದೇ ಇರುವುದು ಕಂಡು ಬಂದಿದ್ದು, ಆ ಅಂಕಿಅಂಶಗಳನ್ನು ನೀಡಲಾಗಿತ್ತು. ಅನಂತರ ಮಾಹಿತಿ ಹಕ್ಕು ಆಯೋಗದಲ್ಲಿ ಶ್ರೀಮತಿ ಜಯಶ್ರೀ ಜೆ.ಎನ್. ಇವರ ಅರ್ಜಿ ಬಗ್ಗೆ ವಿಚಾರಣೆ ಸಮಯದಲ್ಲಿ ಮಾನ್ಯ ಆಯುಕ್ತರು, ಮಾಹಿತಿ ಹಕ್ಕು ಆಯೋಗ ಇವರು ನೀಡಿದ ಸೂಚನೆ ಮೇರೆಗೆ ಅಧ್ಯಕ್ಷರ ಶಾಖೆಯಲ್ಲಿ ನಿರ್ವಹಿಸಲಾದ ರಿಜಿಸ್ಟರುಗಳನ್ನು ಆಧಾರವಾಗಿಟ್ಟುಕೊಂಡು ಪರಿಶೀಲಿಸಿದಾಗ ಫೆಬ್ರವರಿ 2007ರಿಂದ ಮಾರ್ಚಿ 2007ರವರೆಗೆ 51 ಕಡತಗಳ ರಿಜಿಸ್ಟರ್ ನಲ್ಲಿ ದಾಖಲಿಸಿರುತ್ತಾರೆ. ಏಪ್ರಿಲ್ 20007ರಿಂದ ನವೆಂಬರ್ 2007ರವರೆಗೆ 1188 ಕಡತಗಳನ್ನು ನೋಂದಣಿ ಪುಸ್ತಕದಲ್ಲಿ ದಾಖಲಿಸಿರುತ್ತಾರೆ. ಇದರಲ್ಲಿ ಒಟ್ಟು 890 ಕಡತಗಳು ಕಾಣೆಯಾಗಿದ್ದು, ದಿನಾಂಕ 31-5-2008ರಂದು ಆಯುಕ್ತರು ಮಾಹಿತಿ ಹಕ್ಕು ಆಯೋಗಕ್ಕೆ ಹಾಗೂ ಶ್ರೀಮತಿ ಜಯಶ್ರೀ ಜೆ.ಎನ್. ಇವರಿಗೆ ಮಾಹಿತಿಯನ್ನು ನೀಡಲಾಗಿದೆ.

ಅರ್ಜಿದಾರರು ತಮ್ಮ ಅರ್ಜಿಗಳಲ್ಲಿ ತೆಗೆದುಕೊಂಡ ಕ್ರಮದ ಬಗ್ಗೆ ಆಗಾಗ್ಗೆ ಮಹಿಳಾ ಆಯೋಗಕ್ಕೆ ವಿಚಾರಿಸಲು ಬರುತ್ತಿರುವುದಾಗಿ ತಿಳಿಸಿರುವುದರಿಂದ ಬಂದ 1188 ಕಡತಗಳ ಪೈಕಿ 890 ಕಡತಗಳು ಕಾಣೆಯಾಗಿರುವ ಬಗ್ಗೆ ಶ್ರೀಮತಿ ಪ್ರಮೀಳಾ ನೇಸರ್ಗಿರವರ ಗಮನಕ್ಕೆ ತರಲು ದಿನಾಂಕ 13-6-2008ರಂದು ಪತ್ರ ಬರೆಯಲಾಯಿತು.

ಶ್ರೀಮತಿ ಪ್ರಮೀಳಾ ನೇಸರ್ಗಿ, ಹಿಂದಿನ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರು ಸರ್ಕಾರಕ್ಕೆ ಪತ್ರ ಬರೆದು ಕಾರ್ಯದರ್ಶಿಗಳು ಕರ್ನಾಟಕ ರಾಜ್ಯ ಮಹಿಳಾ ಆಯೋಗ ಇವರ ಪತ್ರ ಸಂಖ್ಯೆ: ಸಿಆರ್/2008-09/615 ದಿನಾಂಕ 26-05-2008ರ ಪ್ರತಿಯನ್ನು ನೀಡುವಂತೆ ಕೋರಿದ್ದು, ಸದರಿ ಕಡತಗಳ ಬಗ್ಗೆ ಅವರಿಗೆ ಯಾವುದೇ ಕಡತಗಳನ್ನಿಡಲು ಅಲಮಾರ ನೀಡಿರಲಿಲ್ಲವೆಂದೂ, ಕಛೇರಿ ಬಿಡುವ

ಸಮಯದಲ್ಲಿಎಲ್ಲವೂ ಅದೇ ಕಛೇರಿಯಲ್ಲಿ ಇಟ್ಟಿರುವುದಾಗಿ ಮತ್ತು ಅವರನ್ನು ಅನಾಮತ್ತಾಗಿ ಬಿಡುಗಡೆ ಗೊಳಿಸಿರುವುದರಿಂದ ಈ ಕಡತಗಳ ಬಗ್ಗೆ ಅವರಲ್ಲಿ ಯಾವುದೇ ಮಾಹಿತಿ ಇಲ್ಲವೆಂದು ಹಾಗೂ ದಿನಾಂಕ: 26-05-2008ರ ಪತ್ರವನ್ನು ನೀಡಿದ ನಂತರ ಸವಿಸ್ತಾರವಾಗಿ ವರದಿಯನ್ನು ನೀಡಿರುವುದಾಗಿ ತಿಳಿಸಿದ್ದು, ದಿನಾಂಕ 26-07-2008ರಂದು ಉತ್ತರವನ್ನು ನೀಡಿರುತ್ತಾರೆ.

ಆಯೋಗವು ರಾಜ್ಯ ಮಟ್ಟದ ಕಛೇರಿಯಾಗಿದ್ದು, ವಿವಿಧ ಜಿಲ್ಲೆಗಳಿಂದ ಅರ್ಜಿದಾರರುಗಳು ಅರ್ಜಿಗಳನ್ನು ಸಲ್ಲಿಸುತ್ತಿದ್ದು, ಅರ್ಜಿದಾರರುಗಳು ಬೇರೆ ಬೇರೆ ಊರುಗಳಿಂದ ಇಲ್ಲಿಗೆ ಬಂದು ಸಮಾಲೋಚನೆಗೆ ಹಾಜರಾಗಲು ಕಷ್ಟವಾಗುತ್ತಿದ್ದುದರಿಂದ ಹಾಗೂ ಪ್ರಯಾಣ ಭತ್ಯಗಳನ್ನು ಭರಿಸುವುದು ಅರ್ಜಿದಾರರಿಗೆ ಕಷ್ಟವಾಗಿರುವುದರಿಂದ ಹಾಗೂ ಈ ಅರ್ಜಿಗಳಲ್ಲಿ ಹೆಚ್ಚು ಕೌಟುಂಬಿಕ ಸಮಸ್ಯೆಗಳಿಗೆ ಸಂಬಂಧಿಸಿದ ಅರ್ಜಿಗಳೇ ಆಗಿರುವುದರಿದ ಮತ್ತು ಕೌಟುಂಬಿಕ ದೌರ್ಜನ್ಯ ಮಸೂದೆ ಕಾಯ್ದೆ, 2005 ಜಾರಿಗೆ ಬಂದಿರುವ ನಿಟ್ಟಿನಲ್ಲಿ ಸರ್ಕಾರದ ಆದೇಶ ದಿನಾಂಕ 30-05-2007ರನ್ವಯ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರುಗಳನ್ನು ಈ ಕಾಯ್ದೆಯಡಿ ಸಂರಕ್ಷಣಾಧಿಕಾ ಗಳನ್ನಾಗಿ ನೇಮಿಸಲಾಗಿದ್ದು, ಮಹಿಳೆಯರಿಗೆ ತ್ವರಿತವಾಗಿ ನ್ಯಾಯ ಒದಗಿಸಿಕೊಡುವ ನಿಟ್ಟಿನಲ್ಲಿ ಈ ಕಡತಗಳನ್ನು ಸಂಬಂಧಪಟ್ಟ ಜಿಲ್ಲೆಯ ಸಂರಕ್ಷಣಾಧಿಕಾರಿಗಳಿಗೆ ತ್ವರಿತ ಕ್ರಮ ವಹಿಸಲು ಕಳುಹಿಸಿಕೊಡಲಾಗಿದೆ.

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು**

## ಮಾದರಿ-2

(2) ಶ್ರೀ ---------- (ವಿಧಾನ ಸಭಾ ಸದಸ್ಯರು) ಅವರು ಹಾಸನ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ ವಿಶೇಷ ಉಪ ವಿಭಾಗ, ಚೆನ್ನರಾಯಪಟ್ಟಣ ಕಛೇರಿಯನ್ನು ಲೋಕೋಪಯೋಗಿ ವಿದ್ಯುತ್ ಉಪವಿಭಾಗ ಶಿವಮೊಗ್ಗ ಎಂದು ಪುನರ್ ನಾಮಕರಣ ಮಾಡಿರುವ ಬಗ್ಗೆ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

**ಹೇಳಿಕೆ:**

ರಾಷ್ಟ್ರೀಯ ಹೆದ್ದಾರಿ ವಿಶೇಷ ಉಪ ವಿಭಾಗ, ಚೆನ್ನರಾಯಪಟ್ಟಣ ಕಛೇರಿಯನ್ನು ಲೋಕೋಪಯೋಗಿ ವಿದ್ಯುತ್ ಉಪ ವಿಭಾಗ ಶಿವಮೊಗ್ಗ ಎಂದು ಪುನರ್ ನಾಮೀಕರಸಿ ಶಿವಮೊಗ್ಗಕ್ಕೆ ಸ್ಥಳಾಂತರಿಸಿ ದಿನಾಂಕ 11-6-2008ರಂದು ಆದೇಶ ಹೊರಡಿಸಲಾಗಿದೆ. ರಾಷ್ಟ್ರೀಯ ಹೆದ್ದಾರಿ ವಿಶೇಷ ಉಪ ವಿಭಾಗ, ಚನ್ನರಾಯಪಟ್ಟಣ ಕಛೇರಿಗೆ ಸಂಬಂಧಿಸಿದ 39 ಕಾಮಗಾರಿಗಳನ್ನು ಸಿ.ಆರ್.ಎಫ್., ಕೆ.ಆರ್.ಡಿ.ಸಿ.ಎಲ್. ಮತ್ತು ಇತರೆ ಅನುದಾನಗಳ ವತಿಯಿಂದ ನಿರ್ವಹಿಸಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ಎಲ್ಲಾ 39 ಕಾಮಗಾರಿಗಳನ್ನು ಹತ್ತಿರವಿರುವ ಉಪವಿಭಾಗಗಳಿಗೆ ಈ ಕೆಳಕಂಡಂತೆ ಹಂಚಿಕೆ ಮಾಡಿ ದಿನಾಂಕ 16-6-2008ರಂದು ಆದೇಶ ಹೊರಡಿಸಲಾಗಿದೆ.

| | | |
|---|---|---|
| 1 | ಲೋಇ ಉಪವಿಭಾಗ,ಚನ್ನರಾಯಪಟ್ಟಣ | 4 ಕಾಮಗಾರಿಗಳು |
| 2. | ಲೋಇ ಉಪವಿಭಾಗ,ಹೊಳೆನರಸೀಪುರ | 30ಕಾಮಗಾರಿಗಳು |
| 3. | ಲೋಇ ಉಪವಿಭಾಗ,ಕೆ.ಆರ್.ನಗರ | 2 ಕಾಮಗಾರಿಗಳು |
| 4. | ಲೋಇ ಉಪವಿಭಾಗ, ಹಾಸನ | 2 ಕಾಮಗಾರಿಗಳು |
| 5. | ಲೋಇ ಉಪವಿಭಾಗ,ಪಾಂಡವಪುರ | 1 ಕಾಮಗಾರಿ |

ಈ ಮೇಲ್ಕಂಡ ಎಲ್ಲಾ ಉಪವಿಭಾಗಗಳು ಚನ್ನರಾಯಪಟ್ಟಣಕ್ಕೆ ಅತ್ಯಂತ ಸಮೀಪವಿದ್ದು, ಸಾಕಷ್ಟು ಸಿಬ್ಬಂದಿಗಳಿರುವುದರಿಂದ ಯಾವುದೇ ಕಾಮಗಾರಿಗಳು ಸ್ಥಗಿತಗೊಂಡಿರುವುದಿಲ್ಲ ಹಾಗೂ ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗದೆ ಸದರಿ ಉಪ ವಿಭಾಗದ ಕಾಮಗಾರಿಗಳ ಪ್ರಗತಿಯು ಯಾವುದೇ ಕುಂಠಿತವಿಲ್ಲದೇ ಸುಗಮವಾಗಿ ನಡೆಯುತ್ತಿದೆ.

**ಲೋಕೋಪಯೋಗಿ ಸಚಿವರು**

## ಅನುಬಂಧ – 5

## ಸಾರ್ವಜನಿಕ ಮಹತ್ವದ ಜರೂರು ವಿಷಯದ ಅಲ್ಪಕಾಲಾವಧಿ ಚರ್ಚೆಯ ಸೂಚನೆ ಹಾಗೂ ಉತ್ತರದ ಮಾದರಿ

**ಶ್ರೀಯುತರುಗಳಾದ:–** ------------------ (ವಿಧಾನ ಸಭೆಯ ಸದಸ್ಯರುಗಳು) ದಿನಾಂಕ 25-07-2008ರಂದು ಬೆಂಗಳೂರು ನಗರದಲ್ಲಿ ಸಂಭವಿಸಿದ ಸರಣಿ ಸ್ಫೋಟಗಳ ಬಗ್ಗೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

ಬೆಂಗಳೂರು ನಗರದಲ್ಲಿ ದಿನಾಂಕ 25.07.2008ರಂದು ಎಂಟು ಸ್ಥಳಗಳಲ್ಲಿ ಸರಣಿ ಬಾಂಬ್ ಗಳನ್ನು ಮಧ್ಯಾಹ್ನ 1.00 ಗಂಟೆಯಿಂದ ಮಧ್ಯಾಹ್ನ 1.40 ಗಂಟೆಯ ಒಳಗೆ ಸ್ಫೋಟಿಸಲಾಗಿದೆ. ಈ ಬಾಂಬ್ ಸ್ಫೋಟಗಳು ಮೈಸೂರು ರಸ್ತೆ ಕಾನ್‌ಕಾರ್ಡ್ ಮೋಟಾರ್ಸ್ ಬಳಿ, ರಾಜಾರಾಮ್ ಮೋಹನ್‌ರಾಯ್ ರಸ್ತೆಯ ಐ.ಟಿ.ಸಿ. ಬಿಲ್ಡಿಂಗ್ ಬಳಿ, ಹೊಸೂರು ರಸ್ಸತೆಯ ಸೆಂಟ್ ಜಾನ್ಸ್ ಆಸ್ಪತ್ರೆಯ ಬಳಿ, ಆಡುಗೋಡಿಯ ಟೆಕ್ಸ್‌ಟೈಲ್ ಕೋ-ಅಪರೇಟಿವ್ ಬಳಿ, ಆಡುಗೋಡಿಯ ಸುಬ್ಬಣ್ಣ ಗಾರ್ಡನ್ ಚರಂಡಿ ಬಳಿ, ಶಾಂತಿನಗರದ ಬುರ್ಲೆಗಲ್ಲಿಯಲ್ಲಿರುವ ಹರ್ಕ್ಯುಲಸ್ ಸರ್ಕಲ್ ಶೋ ರೂಮ ಎದುರು, ಮೈಸೂರು ರಸ್ತೆಯ ಪಂತರಪಾಳ್ಯದ ಪಾಪಣ್ಣ ಬಿಲ್ಡಿಂಗ್ ಎದುರು ಮತ್ತು ಮೈಸೂರು ರಸ್ತೆಯ ಹೊಸಗುಡ್ಡದ ಹಳ್ಳಿ ಪ್ರೀಮಿಯರ್ ಇರಿಗೇಷನ್ ಕಚೇರಿ ಎದುರು ಸಂಭವಿಸಿರುತ್ತದೆ.

ಮಡಿವಾಳ ಚಕ್ ಪೋಸ್ಟ್‌ನಲ್ಲಿ ಸಂಭವಿಸಿದ ಬಾಂಬ್ ಸ್ಫೋಟದಲ್ಲಿ ಶ್ರೀಮತಿ ಸುಧಾ ತಂದೆ: ತಿಮ್ಮಶೆಟ್ಟಿ,ಕುರುಬರ ಬೀದಿಹಳ್ಳಿ, ಜಾವಗಲ್, ಅರಸೀಕೆರೆ ತಾಲ್ಲೂಕು, ಹಾಸನ ಜಿಲ್ಲೆ, ಸ್ಥಳದಲ್ಲೆ ಮೃತಪಟ್ಟಿರುತ್ತಾರೆ. ಈ ಎಲ್ಲಾ ಬಾಂಬ್ ಸ್ಫೋಟದಲ್ಲಿ ಒಟ್ಟು 10 ಜನರಿಗೆ ಸಾದ ಅಥವಾ ತೀವ್ರ ಪ್ರಮಾಣದ ಗಾಯಗಳಾಗಿರುತ್ತದೆ. ಗಾಯಗೊಂಡವರ ಹೆಸರುಗಳು ಬಳಗನಹಳ್ಳಿಯ ರವಿ (32), ಬೊಮ್ಮಸಂದ್ರದ ಗುಳ್ಳಮ್ಮ (75), ಆಡುಗೋಡಿಯ ಎಸ್ ಮುನಿಯಪ್ಪ (25) ಮತ್ತು ಅನ್ಬು (19), ಸಂಪಂಗಿರಾಮನಗರದ ಎಂ.ಮುನಿರಾಜು (29), ವಿಜಯನಗರದ ಚೇತನ್ ಕುಮಾರ್ (22), ಲಕ್ಕಸಂದ್ರದ ರಮೇಶ್ (22), ರವೀಂದ್ರ (22) ವಿವಿಯನ್ ಮತ್ತು ಜಿತೇಂದ್ರ ಎಂಬುದಾಗಿ ಇರುತ್ತದೆ.

ಗಾಯಗೊಂಡ ವ್ಯಕ್ತಿಗಳಿಗೆ ಮಲ್ಯ, ಸೆಂಟ್ ಜಾನ್ಸ್ ಮತ್ತು ನಿಮಾನ್ಸ್ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲಾಗಿದೆ. ರವಿ ಎಂಬುವವರಿಗೆ ತಲೆ ಗಾಯವಾದ ಕಾರಣ ಅವರನ್ನು ಸೇಂಟ್ ಜಾನ್ಸ್ ಆಸ್ಪತ್ರೆಯಿಂದ ನಿಮಾನ್ಸ್ ಆಸ್ಪತ್ರೆಗೆ ವರ್ಗಾಯಿಸಲಾಯಿತು. ಇವರು ಪ್ರಾಣಾಪಾಯದಿಂದ ಪಾರಾಗಿರುತ್ತಾರೆ.

ಈ ಸ್ಫೋಟಗಳಿಂದ ವಾಹನಗಳ ಸಂಚಾರವು ಬೆಂಗಳೂರಿನ ಕೆಲವು ಪ್ರದೇಶಗಳಲ್ಲಿ ಸ್ವಲ್ಪ ಕಾಲ ಕಡಿಮೆಯಾಗಿರುತ್ತದೆ. ಬಾಂಬ್ ಸ್ಫೋಟಗಳ ರೀತಿಯನ್ನು ಗಮನಿಸಿದರೆ, ಅವು ಬೆಂಗಳೂರು-ಹೊಸೂರು ರಸ್ತೆಯ ಮಡಿವಾಳ ಮತ್ತು ಆಡುಗೋಡಿ ಹಾಗೂ ಬೆಂಗಳೂರು-ಮೈಸೂರು ರಸ್ತೆಯ ಹೊಸಗುಡ್ಡದಹಳ್ಳಿ ಮತ್ತು ಪಂತರಪಾಳ್ಯಕ್ಕೆ ಸೀಮಿತವಾಗಿರುವುದು ಸ್ಪಷ್ಟವಾಗುತ್ತದೆ. ಒಂದು ಬಾಂಬ್ ಸ್ಫೋಟ ಮಾತ್ರ

ಸಂಪಂಗಿರಾಮನಗರ ಸರಹದ್ದಿನ ರಾಜರಾಮ್ ಮೋಹನ್ ರಾಯ್ ರಸ್ತೆಯ ಬಳಿ ಸಂಭವಿಸಿರುತ್ತದೆ. ಎಲ್ಲಾ ಬಾಂಬ್ ಸ್ಫೋಟಗಳು ಪ್ರಮುಖ ರಸ್ತೆಗಳ ಪಾದಚಾರಿ ದಾರಿಗಳ ಮೇಲೆ ಸಂಭವಿಸಿದ್ದು, ಇವುಗಳನ್ನು ಭಯೋತ್ಪಾದಕರು ವಾಹನಗಳಲ್ಲಿ ತಂದು ಅವಿತಿಟ್ಟಿರುವುದು ಸ್ಪಷ್ಟವಾಗುತ್ತದೆ.

ಸ್ಫೋಟಗೊಳ್ಳದ ಒಂದು ಬಾಂಬ್ ಬೆಂಗಳೂರು-ಹೊಸೂರು ರಸ್ತೆಯ ಫಾರಂ ಮಾಲ್ ಬಳಿ ದಿನಾಂಕ : 26.07.2008 ರಂದು ಸುಮಾರು 11.00 ಘಂಟೆಗೆ ಪತ್ತೆಯಾಗಿರುತ್ತದೆ. ಸ್ಫೋಟಗೊಳ್ಳದ ಈ ಬಾಂಬ್‌ನ್ನು ಸಿಮೆಂಟ್ ಕಾಸ್ಟಿಂಗ್‌ನಲ್ಲಿ ಕಬ್ಬಿಣ್ಣದ ಬೋಲ್ಟ್ ಮತ್ತು ನೆಟ್‌ಗಳನ್ನು ಉದುಗಿಸಿ, ಡಿಜಿಟಲ್ ಪ್ರಿಂಟೆಡ್ ಸರ್ಕ್ಯೂಟ್, ಡೆಟೊನೇಟರ್ ಗಳನ್ನು ಮತ್ತು ಅಮೋನಿಯಂ ನೈಟ್ರೇಟ್ ಸ್ಫೋಟಕ ವಸ್ತುಗಳಿಗೆ ಒಳಗಡೆ ಜೋಡಿಸಿ, ಸಿಮೆಂಟ್ ಕಾಂಕ್ರೀಟ್ ಬಾಂಬ್‌ನ್ನು ತಯಾರಿಸಿರುವುದು ಸ್ಪಷ್ಟವಾಗುತ್ತದೆ. ಹೈದ್ರಾಬಾದ್‌ನ ಕೇಂದ್ರ ವಿಧಿವಿಜ್ಞಾನ ಪ್ರಯೋಗಾಲಯದ, ದೆಹಲಿಯ ಎನ್.ಎಸ್.ಜಿ. ಹಾಗೂ ಬೆಂಗಳೂರಿನ ಬಾಂಬ್ ಪತ್ತೆ ಮತ್ತು ನಿಷ್ಕ್ರಿಯ ದಳ ಹಾಗೂ ವಿಧಿವಿಜ್ಞಾನ ಪ್ರಯೋಗಲಯದ ತಜ್ಞರು ಈ ಬಾಂಬ್‌ನ್ನು ಪರೀಕ್ಷಿಸಿದ್ದು, ಅವರ ಅಭಿಪ್ರಾಯದಂತೆ ಇದೊಂದು ಶಕ್ತಸಿಯುಸತ ಸ್ಫೋಟಕ ಬಾಂಬ್ ಆಗಿದ್ದು, ಇದು ಹಲವಾರು ಜನರ ಜೀವಗಳನ್ನು ತೆಗೆಯುವ ಹಾಗೂ ಆಸ್ತಿಪಾಸ್ತಿಗಳನ್ನು ತೆಗೆಯುವ ಹಾಗೂ ಆಸಿಪಾಸ್ತಿಗಳನ್ನು ನಾಶಪಡಿಸುವ ಸಾಮರ್ಥ್ಯವನ್ನು ಹೊಂದಿರುವುದಾಗಿ ಅಭಿಪ್ರಾಯ ಪಟ್ಟಿರುತ್ತಾರೆ. ಹೊರನೋಟಕ್ಕೆ ಈ ಬಾಂಬ್ ಸಿಮೇಂಟ್‌ನ ಹೂವಿನ ಕುಂಡದಂತೆ ಕಂಡುಬರುತ್ತದೆ. ರಾಜ್ಯ ಗುಪ್ತವಾರ್ತೆಯ ಬಾಂಬ್ ಪತ್ತೆ ಮತ್ತು ನಿಷ್ಕ್ರಿಯ ದಳವು ಈ ಕಾಂಕ್ರಿಟ್ ಬಾಂಬ್‌ನ್ನು ದಿನಾಂಕ 26.07.2008ರಂದು ನಿಷ್ಕ್ರಿಯಗೊಳಿಸುವುದರಲ್ಲಿ ಮಹತ್ತರವಾದ ಪಾತ್ರವಹಿಸಿದೆ. ಶ್ವಾನದಳ ಮತ್ತು ಬೆರಳೊತ್ತು ತಜ್ಞರ ಸೇವೆಯನ್ನು ತನಿಖಾ ಕ್ರಮದಲ್ಲಿ ಈಗಾಗಲೇ ಬಳಸಿಕೊಳ್ಳಲಾಗಿದೆ.

ಸರಣಿ ಬಾಂಬ್ ಸ್ಫೋಟಗಳ ಕುರಿತಂತೆ ಬೆಂಗಳೂರು ನಗರದ ಠಾಣೆಗಳಲ್ಲಿ ಹಲವಾರು ಕಲಂಗಳ ಹಾಗೂ ಕಾಯಿದೆಗಳ ಅಡಿಯಲ್ಲಿ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸಿಕೊಂಡು ಜಂಟಿ ಪೊಲೀಸ್ ಆಯುಕ್ತರನ್ನು ಒಳಗೊಂಡಂತೆ ವಿಶೇಷವಾದ ತನಿಖಾ ದಳವನ್ನು ರಚಿಸಿಕೊಂಡು ತನಿಖೆ ನಡೆಸಲಾಗಿರುತ್ತದೆ.

ಚನ್ನಪಟ್ಟಣ ಪೊಲೀಸರು ಕಬ್ಬಿಣದ ಪೆಟ್ಟಿಗೆಯಲ್ಲಿ ಇಟ್ಟಿದ್ದ ಸ್ಫೋಟಕ ವಸ್ತುಗಳನ್ನು ಚನ್ನಪಟ್ಟಣದ ಕುವೆಂಪುನಗಸರದ ಶ್ರೀ ಲಕ್ಷ್ಮೀ ವೆಂಕಟೇಶ್ವರ ಟಾಯ್ಸ್ ಎಂಪೋರಿಯಂ ಬಳಿ ದಿನಾಂಕ 24.07.2008ರಂದು ವಶಪಡಿಸಿಕೊಂಡಿರುತ್ತಾರೆ. ಇದರಲ್ಲಿದ್ದ ಬಾಂಬ್ ಕಬ್ಬಿಣದ ಪೆಟ್ಟಿಗೆಯಲ್ಲಿಯೇ ಒಳ ಸ್ಫೋಟಗೊಂಡಿರುತ್ತದೆ. ಈ ಪ್ರಕರಣವನ್ನು ಕೇಂದ್ರ ವಲಯದ ಐ.ಜಿ.ಪಿ.ರವರ ನೇತೃತ್ವದ ತಂಡ ತನಿಖೆ ನಡೆಸುತ್ತಿದೆ. ವಶಪಡಿಸಿಕೊಂಡಿದ್ದ ಸ್ಫೋಟಕ ವಸ್ತುಗಳನ್ನು ಬೆಂಗಳೂರು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಪರೀಕ್ಷಗಾಗಿ ಕಳುಹಿಸಲಾಗಿದೆ.

ಕರ್ನಾಟಕ ಸರ್ಕಾರವು ಮೃತಪಟ್ಟ ಶ್ರೀಮತಿ ಸುಧಾರವರ ವಾರಸುದಾರರಿಗೆ ರೂ.1,00,000/- ಗಳ ಪರಿಹಾರ ಧನ ಘೋಷಿಸಿದೆ ಹಾಗೂ ಸಾದಾ ಪ್ರಮಾಣದ ಮತ್ತು ತೀವ್ರ ಪ್ರಮಾಣದ ಗಾಯಗೊಂಡವರಿಗೆ ಕ್ರಮವಾಗಿ ರೂ.25,000/- ರಿಂದ ರೂ.50,000/- ಮೊತ್ತದ ಪರಿಹಾರವನ್ನು

ಘೋಷಿಸಿದೆ. ಸರ್ಕಾರವು ಬಾಂಬ್ ಪತ್ತೆ ಮತ್ತು ನಿಷ್ಕ್ರಿಯ ದಳವು ಸ್ಫೋಟಗೊಳ್ಳದ ಬಾಂಬನ್ನು ನಿಷ್ಕ್ರಿಯ ಗೊಳಿಸಿದ ಉತ್ತಮ ಕಾರ್ಯಕ್ಕಾಗಿ ರೂ.1,00,000-00ಗಳನ್ನು ಬಹುಮಾನವನ್ನು ಘೋಷಿಸಿದೆ.

ಬೆಂಗಳೂರು ನಗರದಲ್ಲಿ ಸಂಭವಿಸಿದ ಸರಣಿ ಸ್ಫೋಟಗಳ ಹಿನ್ನೆಲೆಯಲ್ಲಿ ಬೆಂಗಳೂರು ನಗರ ಹಾಗೂ ಕರ್ನಾಟಕದ ಇತರ ಕಡೆಗಳಲ್ಲಿ ಭದ್ರತೆಯನ್ನು ಹೆಚ್ಚಿಸಲಾಗಿದೆ. ಎಚ್ಚರಿಕೆ ಸಂದೇಶಗಳನ್ನು ಘಟಕಾಧಿಕಾರಿಗಳಿಗೆ ಕಳುಹಿಸಿ, ಇನ್ನು ಮುಂದೆ ಬೆಂಗಳೂರಿನಲ್ಲಾಗಲೀ ಅಥವಾ ಕರ್ನಾಟಕದ ಇತರ ಪ್ರದೇಶಗಳಲ್ಲಾಗಲೀ ಇಂತಹ ಸ್ಫೋಟಕಗಳು ಜರುಗದಂತೆ ನೋಡಿಕೊಳ್ಳುವಂತೆ ಸೂಚಿಸಲಾಗಿದೆ. ಪೊಲೀಸ್ ಸಿಬ್ಬಂದಿಯನ್ನು ಸೂಕ್ಷ್ಮ ಹಾಗೂ ಇತರ ಸಂಭವನೀಯ ಪ್ರದೇಶಗಳಲ್ಲಿ ಬಾಂಬ್‌ಗಳನ್ನು ಸಿಡಿಸದಂತೆ ತಡೆಗಟ್ಟಲು ಇತರ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ನಾನೂ ಸೇರಿದಂತೆ ಹಿರಿಯ ಸಚಿವರು ಹಾಗೂ ಅಧಿಕಾರಿಗಳು ಸ್ಥಳಗಳಿಗೆ ಭೇಟಿ ನೀಡಿ ಸೂಕ್ತ ನಿರ್ದೇಶನಗಳನ್ನು ನೀಡಿರುತ್ತಾರೆ. ಮಾನ್ಯ ಮುಖ್ಯಮಂತ್ರಿಗಳು ಆಸ್ಪತ್ರೆಗಳಿಗೆ ಭೇಟಿ ನೀಡಿ ಗಾಯಾಳುಗಳನ್ನು ಮಾಡನಾಡಿಸಿರುತ್ತಾರೆ.

ತನಿಖಾ ತಂಡದ ಅಧಿಕಾರಿಗಳು ದೇಶದ ಇತರ ಭಾಗಗಳ ಪೊಲೀಸ್ ಅಧಿಕಾರಿಗಳೊಂದಿಗೆ ಸಂಪರ್ಕ ಇಟ್ಟುಕೊಂಡು ಮಾಹಿತಿಯನ್ನು ಸಂಗ್ರಹಿಸುತ್ತಿದ್ದಾರೆ. ರಾಜ್ಯ ಗುಪ್ತವಾರ್ತೆ ಮತ್ತು ಕೇಂದ್ರ ಗುಪ್ತವಾರ್ತೆ ಇಲಾಖೆಗಳು ಮಾಹಿತಿಯನ್ನು ನಗರ ಪೊಲೀಸ್ ಅಧಿಕಾರಿಗಳೊಂದಿಗೆ ವಿನಿಮಯ ಮಾಡಿಕೊಳ್ಳುವ ಪ್ರಕ್ರಿಯ ಜಾರಿಯಲ್ಲಿದೆ. ಪೊಲೀಸ್ ಮಾಧ್ಯಮಗಳ ಮತ್ತು ಸಂಘ ಸಂಸ್ಥೆಗಳ ಮುಖಾಂತರ ಸಾರ್ವಜನಿಕರಿಗೆ ಗುರುತಿಸದ ವಸ್ತುಗಳ ಬಗ್ಗೆ ತಿಳುವಳಿಕೆ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿರುತ್ತಾರೆ.

ಸರ್ಕಾರವು ಭಯೋತ್ಪಾದಕ ನಿಗ್ರಹ ದಳಗಳಿಗೆ ಬೇಕಾದ ಸವಲತ್ತುಗಳನ್ನು ಪೂರೈಸಿ, ಇವುಗಳನ್ನು ಸುಭದ್ರಗೊಳಿಸುವ ಕ್ರಮ ಕೈಗೊಳ್ಳುತ್ತಿದೆ. ಈ ನಿಟ್ಟಿನಲ್ಲಿ ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್ (ಆಂತರಿಕ ಭದ್ರತೆ) ಹುದ್ದೆಯನ್ನು ಈಗಾಗಲೇ ಸೃಜನೆ ಮಾಡಿ, ಒಬ್ಬ ಅಧಿಕಾರಿಯನ್ನು ನೇಮಕ ಮಾಡಲಾಗಿದೆ. ಸರ್ಕಾರವು ಭಯೋತ್ಪಾದಕ ಕೃತ್ಯಗಳನ್ನು ರಾಜ್ಯದಲ್ಲಿ ಹತ್ತಿಕ್ಕಲು ಎಲ್ಲಾ ಕ್ರಮಗಳನ್ನು ಕೈಗೊಳ್ಳುವ ಧೃಡ ನಿರ್ಧಾರವನ್ನು ಕೈಗೊಂಡಿದೆ. ಅದೇ ದಿನ ಸಚಿವ ಸಂಪುಟದ ತುರ್ತು ಸಭೆಯನ್ನು ನಡೆಸಿ, ವಸ್ತುಸ್ಥಿತಿಗಳನ್ನು ಪರಿಶೀಲಿಸಲಾಗಿದೆ. ಸರ್ಕಾರದ ವತಿಯಿಂದ ಪರಿಶೀಲನೆ ಪ್ರತಿದಿನ ನಡೆಯುತ್ತಿದೆ.

**ಗೃಹ ಸಚಿವರು**

# ಅನುಬಂಧ 6

**(ಮಾದರಿ ವಿಧೇಯಕ)**

## ಕರ್ನಾಟಕ ವಿಧಾನ ಸಭೆ

**ಹದಿಮೂರನೇ ವಿಧಾನ ಸಭೆ**

**(ಮೊದಲನೆ ಅಧಿವೇಶನ)**

## ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) (ತಿದ್ದುಪಡಿ) ವಿಧೇಯಕ, 2008

ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) ಅಧಿನಿಯಮ, 1982ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) ಅಧಿನಿಯಮ, 1982ನ್ನು (1984ರ ಕರ್ನಾಟಕ ಅಧಿನಿಯಮ ಸಂಖ್ಯೆ 1) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ ;

ಇದು ಭಾರತ ಗಣರಾಜ್ಯದ ಐವತ್ತೊಂಬತ್ತನೆ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ ;

1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ**:- (1) ಈ ಅಧಿನಿಯಮವನ್ನು ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) (ತಿದ್ದುಪಡಿ) ಅಧಿನಿಯಮ, 2008 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

2. **3ಎ, 3ಬಿ, 3ಸಿ, 3ಡಿ ಮತ್ತು 3ಇ ಹೊಸ ಪ್ರಕರಣಗಳ ಸೇರ್ಪಡೆ**.- ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) ಅಧಿನಿಯಮ, 1982ರ (1984ರ ಕರ್ನಾಟಕ ಅಧಿನಿಯಮ ಸಂಖ್ಯೆ 1) 3ನೇ ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ :-

"**3ಎ. ಸಮರ್ಪಣಾ ನಿಷೇಧಕ ನಿರ್ಬಂಧಕಾಜ್ಞೆಯನ್ನು ಹೊರಡಿಸಲು ಜಿಲ್ಲಾ ಮ್ಯಾಜಿಸ್ಟ್ರೇಟನಿಗೆ ಅಥವಾ ಕಾರ್ಯಕಾರಿ ಮ್ಯಾಜಿಸ್ಟ್ರೇಟನಿಗೆ ಇರುವ ಅಧಿಕಾರ**.- (1) ಈ ಅಧಿನಿಯಮದಲ್ಲಿ ಅದಕ್ಕೆ ವಿರುದ್ಧವಾಗಿ ಏನೇ ಇದ್ದರೂ, ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿಯ ಅರ್ಜಿಯ ಮೂಲಕ ಅಥವಾ ಯಾವುದೇ ವ್ಯಕ್ತಿಯ ದೂರಿನ ಮೂಲಕ ಅಥವಾ ಅನ್ಯಥಾ ಮಾಹಿತಿಯನ್ನು ಪಡೆದ ಮೇಲೆ ಜಿಲ್ಲಾ ಮ್ಯಾಜಿಸ್ಟ್ರೇಟನು ಅಥವಾ ಕಾರ್ಯಕಾರಿ ಮ್ಯಾಜಿಸ್ಟ್ರೇಟನು, ಅಧಿನಿಯಮವನ್ನು ಉಲ್ಲಂಘಿಸಿ ಸಮರ್ಪಣೆಯನ್ನು ವ್ಯವಸ್ಥೆ ಮಾಡಲಾಗಿದೆ ಅಥವಾ ಅದನ್ನು ಇನ್ನೇನು ವಿಧ್ಯುಕ್ತಗೊಳಿಸಲಿದ್ದಾರೆ ಎಂದು ಮನಗಂಡರೆ ಅಂಥ ಮ್ಯಾಜಿಸ್ಟ್ರೇಟನು ಒಂದು

ಸಂಸ್ಥೆಯ ಅಥವಾ ವ್ಯಕ್ತಿಗಳ ಸಂಘದ ಒಬ್ಬ ಸದಸ್ಯನೂ ಸೇರಿದಂತೆ ಯಾವನೇ ವ್ಯಕ್ತಿಯ ವಿರುದ್ಧ ಅಂಥ ಸಮರ್ಪಣೆಯನ್ನು ನಿಷೇಧಿಸಿ ಅಥವಾ ನಿಗ್ರಹಿಸಿ ಒಂದು ನಿಷೇಧಕ ನಿರ್ಬಂಧಕಾಜ್ಞೆಯನ್ನು ಹೊರಡಿಸತಕ್ಕದ್ದು.

(2) ಅಂಥ ಸಮರ್ಪಣೆಯು ನಡೆಯಬಹುದಾದ ಸಂಭಾವ್ಯತೆಯ ಬಗ್ಗೆ ವೈಯಕ್ತಿಕ ತಿಳುವಳಿಕೆಯನ್ನು ಹೊಂದಿರುವ ಅಥವಾ ನಂಬಲು ಕಾರಣಗಳಿರುವ ಯಾವೊಬ್ಬ ವ್ಯಕ್ತಿಯೂ ಮತ್ತು ಸಾಕಷ್ಟು ಮಾಹಿತಿಯನ್ನು ಹೊಂದಿರುವ ಒಂದು ಸರ್ಕಾರೇತರ ಸಂಸ್ಥೆಯು (1)ನೇ ಉಪ-ಪ್ರಕರಣದ ಅಡಿಯಲ್ಲಿ ಒಂದು ಅರ್ಜಿಯನ್ನು ಅಥವಾ ಒಂದು ದೂರನ್ನು ನೀಡಬಹುದು.

(3) ಸಂದರ್ಭಾನುಸಾರ ಯಾವುದೇ ನಂಬಲರ್ಹವಾದ ವರದಿ ಅಥವಾ ಮಾಹಿತಿ ಅಥವಾ ದೂರಿನ ಆಧಾರದ ಮೇಲೆ ಸಹ ಜಿಲ್ಲಾ ಮ್ಯಾಜಿಸ್ಟ್ರೇಟನು ಅಥವಾ ಕಾರ್ಯಕಾರಿ ಮ್ಯಾಜಿಸ್ಟ್ರೇಟನು ಸ್ವಪ್ರೇರಣೆಯಿಂದ ಸಂಜ್ಞಾನಕ್ಕೆ ತೆಗೆದುಕೊಳ್ಳಬಹುದು.

(4) ಜಾತ್ರೆಗಳಲ್ಲಿ ಹುಣ್ಣಿಮೆಯಂಥ ಕೆಲವು ದಿನಗಳಲ್ಲಿ ಮಹಿಳೆಯರನ್ನು ದೇವದಾಸಿಯಾರಾಗಿ ಸಾಮೂಹಿಕವಾಗಿ ಸಮರ್ಪಣೆ ಮಾಡುವುದನ್ನು ತಡೆಗಟ್ಟುವ ಉದ್ದೇಶಕ್ಕಾಗಿ, ಸಂಬಂಧಪಟ್ಟ ಜಿಲ್ಲಾ ಮ್ಯಾಜಿಸ್ಟ್ರೇಟನನ್ನು ಈ ಅಧಿನಿಯಮದ ಮೂಲಕ ಅಥವಾ ಅದರಡಿಯಲ್ಲಿ, ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿಗೆ ಪ್ರದಾನ ಮಾಡಲಾದ ಎಲ್ಲಾ ಅಧಿಕಾರಗಳನ್ನುಳ್ಳ, ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿಯೆಂದು ಭಾವಿಸತಕ್ಕದ್ದು.

(5) ಜಿಲ್ಲಾ ಮ್ಯಾಜಿಸ್ಟ್ರೇಟನು, ಸಮರ್ಪಣೆಯನ್ನು ನಿಲ್ಲಿಸುವುದಕ್ಕೆ ಅಥವಾ ತಪ್ಪಿಸುವುದಕ್ಕೆ ಹೆಚ್ಚಿನ ಅಧಿಕಾರವನ್ನು ಸಹ ಹೊಂದಿರತಕ್ಕದ್ದು ಮತ್ತು ಈ ಉದ್ದೇಶಕ್ಕಾಗಿ, ಆತನು ಅಗತ್ಯವಾಗಬಹುದಾದ ಕನಿಷ್ಠ ಬಲಪ್ರಯೋಗವನ್ನು ಮಾಡುವುದೂ ಒಳಗೊಂಡಂತೆ ಎಲ್ಲಾ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬಹುದು.

(6) (1)ನೇ ಉಪಪ್ರಕರಣದಡಿಯಲ್ಲಿ ಯಾವುದೇ ವ್ಯಕ್ತಿಯ ಅಥವಾ ಯಾವುದೇ ಸಂಸ್ಥೆಯ ಅಥವಾ ವ್ಯಕ್ತಿಗಳ ಸಂಘದ ಸದಸ್ಯನ ವಿರುದ್ಧ ಯಾವುದೇ ನಿಷೇಧಕ ನಿರ್ಬಂಧಕಾಜ್ಞೆಯನ್ನು ಸಂಬಂಧಪಟ್ಟ ಮ್ಯಾಜಿಸ್ಟ್ರೇಟನು ಅಂಥ ವ್ಯಕ್ತಿ, ಸಂಸ್ಥೆಯ ಅಥವಾ ಸಂಘದ ಸದಸ್ಯರುಗಳಿಗೆ ಮುಂಚಿತವಾಗಿ ನೋಟೀಸನ್ನು ನೀಡಿದ್ದ ಹೊರತು ಮತ್ತು ನಿರ್ಬಂಧಕಾಜ್ಞೆಯನ್ನು ಏಕೆ ಹೊರಡಿಸಬಾರದು ಎಂಬ ಬಗ್ಗೆ ಕಾರಣ ತೋರಿಸುವ ಅವಕಾಶವನ್ನು ಆತನಿಗೆ ಅಥವಾ ಅವರಿಗೆ ನೀಡಿದ್ದ ಹೊರತು ಹೊರಡಿಸತಕ್ಕದ್ದಲ್ಲ ;

ಪರಂತು, ಯಾವುದೇ ತುರ್ತು ಸಂದರ್ಭದಲ್ಲಿ, ಸಂಬಂಧಪಟ್ಟ ಮ್ಯಾಜಿಸ್ಟ್ರೇಟನು ಈ ಉಪ ಪ್ರಕರಣದಡಿ ಯಾವುದೇ ನೋಟೀಸನ್ನು ನೀಡದೆ ಒಂದು ಮಧ್ಯಂತರ ನಿರ್ಬಂಧಕಾಜ್ಞೆಯನ್ನು ಹೊರಡಿಸುವ ಅಧಿಕಾರವನ್ನು ಹೊಂದಿರತಕ್ಕದ್ದು.

(7) ಯಾವ ಪಕ್ಷಕಾರನ ವಿರುದ್ಧ ನಿರ್ಬಂಧಕಾಜ್ಞೆಯನ್ನು ಹೊರಡಿಸಲಾಗಿದೆಯೋ ಆತನಿಗೆ ನೋಟಿಸನ್ನು ನೀಡಿದ ತರುವಾಯ ಮತ್ತು ಆತನ ಹೇಳಿಕೆಯನ್ನು ಪಡೆದ ಮೇಲೆ (1)ನೇ ಉಪಪ್ರಕರಣದಡಿಯಲ್ಲಿ ಹೊರಡಿಸಿದ ನಿರ್ಬಂಧಕಾಜ್ಞೆಯನ್ನು ಸ್ಥಿರೀಕರಿಸಬಹುದು ಅಥವಾ ತೆರವುಗೊಳಿಸಬಹುದು.

(8) ಜಿಲ್ಲಾ ಮ್ಯಾಜಿಸ್ಟ್ರೇಟನು ಅಥವಾ ಕಾರ್ಯಕಾರಿ ಮ್ಯಾಜಿಸ್ಟ್ರೇಟನು ತಾನಾಗಿಯೇ ಆಗಲಿ ಅಥವಾ ಯಾವುದೇ ಬಾಧಿತ ವ್ಯಕ್ತಿಯ ಅರ್ಜಿಯ ಮೇಲಾಗಲಿ (1)ನೇ ಉಪಪ್ರಕರಣದಡಿಯಲ್ಲಿ ಹೊರಡಿಸಲಾದ ನಿರ್ಬಂಧಕಾಜ್ಞೆಯನ್ನು ರದ್ದುಗೊಳಿಸಬಹುದು ಅಥವಾ ಮಾರ್ಪಡಿಸಬಹುದು.

(9) (1)ನೇ ಉಪಪ್ರಕರಣದಡಿಯಲ್ಲಿ ಒಂದು ಅರ್ಜಿಯು ಸ್ವೀಕರಿಸಿದ ಮೇಲೆ ಜಿಲ್ಲಾ ಮ್ಯಾಜಿಸ್ಟ್ರೇಟನು ಅಥವಾ ಕಾರ್ಯಕಾರಿ ಮ್ಯಾಜಿಸ್ಟ್ರೇಟನು ಅರ್ಜಿದಾರನಿಗೆ ಖುದ್ದಾಗಿ ಅಥವಾ ತನ್ನ ನ್ಯಾಯವಾದಿಯ ಮೂಲಕ ತನ್ನ ಮುಂದೆ ಹಾಜರಾಗಲು ಅವಕಾಶವನ್ನು ನೀಡತಕ್ಕದ್ದು. ಅರ್ಜಿದಾರನ ಅಹವಾಲನ್ನು ಕೇಳಿದ ತರುವಾಯ, ಜಿಲ್ಲಾ ಮ್ಯಾಜಿಸ್ಟ್ರೇಟನು ಅಥವಾ ಕಾರ್ಯಕಾರಿ ಮ್ಯಾಜಿಸ್ಟ್ರೇಟನು ಅರ್ಜಿಯನ್ನು ಪೂರ್ಣವಾಗಿ ಅಥವಾ ಭಾಗಶಃ ತಿರಸ್ಕರಿಸಬಹುದು ಮತ್ತು ಹಾಗೆ ಮಾಡಿದ್ದಕ್ಕೆ ತನ್ನ ಕಾರಣಗಳನ್ನು ಲಿಖಿತದಲ್ಲಿ ದಾಖಲಿಸತಕ್ಕದ್ದು.

(10) (1)ನೇ ಉಪಪ್ರಕರಣದಡಿಯಲ್ಲಿ ತನ್ನ ವಿರುದ್ಧ ನಿರ್ಬಂಧಕಾಜ್ಞೆಯನ್ನು ಹೊರಡಿಸಲಾಗಿದೆ ಎಂದು ಗೊತ್ತಿರುವ ಯಾವೊಬ್ಬ ವ್ಯಕ್ತಿಯು, ಅಂಥ ನಿರ್ಬಂಧಕಾಜ್ಞೆಯನ್ನು ಉಲ್ಲಂಘಿಸಿದರೆ, ಆತನು ಮೂರು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಆದರೆ ಎರಡು ವರ್ಷಗಳಿಗಿಂತ ಕಡಿಮೆಯಲ್ಲದ ಅವಧಿಯವರೆಗೆ ಎರಡರಲ್ಲೊಂದು ಬಗೆಯ ಕಾರಾವಾಸದಿಂದ ಅಥವಾ ಎರಡು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಮತ್ತು ಹತ್ತು ಸಾವಿರ ರೂಪಾಯಿಗಳಿಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು.

3ಬಿ. **ಮಹಿಳೆಯ ಕಾಪಾಡುವಿಕೆ, ಆರೈಕೆ, ಸಂರಕ್ಷಣೆ, ಕ್ಷೇಮಾಭಿವೃದ್ಧಿ ಮತ್ತು ಪುನರ್ವಸತಿ**.- ರಾಜ್ಯ ಸರ್ಕಾರವು, 'ದೇವದಾಸಿ ಪುನರ್ವಸತಿ ಯೋಜನೆ'ಯ ಅಡಿಯಲ್ಲಿ ಸಲಹೆ ನೀಡುವುದು ಮತ್ತು ಜಾಗೃತಿ ಮೂಡಿಸುವುದರ ಮೂಲಕ ಸಮರ್ಪಣೆಯಾಗುವುದರಿಂದ ಕಾಪಾಡಿದಂತಹ ಮಹಿಳೆಯ ಪುನರ್ವಸತಿಗೆ ಅವಶ್ಯಕವಾದ ಎಲ್ಲಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು ಮತ್ತು ಅವಶ್ಯವಿದ್ದಲ್ಲಿ ರಿಮಾಂಡ್ ಹೋಮ್‌ನಲ್ಲಿ ಆರು ತಿಂಗಳವರೆಗೆ ರಕ್ಷಣೆಯನ್ನು ನೀಡುವ ಅಥವಾ ಆಶ್ರಯವನ್ನು ನೀಡುವ ಮೂಲಕ ಆದಾಯಗಳಿಕೆ ಚಟುವಟಿಕೆಗಳಲ್ಲಿ ಸದರಿ ಮಹಿಳೆಯನ್ನು ತೊಡಗಿಸಿ ಆಕೆಯನ್ನು ಆರ್ಥಿಕವಾಗಿ ಸಬಲಗೊಳಿಸತಕ್ಕದ್ದು ಹಾಗೂ ಸದರಿ ಮಹಿಳೆಯು ಬ್ಯಾಂಕ್‌ಗಳಿಂದ ಸಹಾಯಧನ ಮತ್ತು ಸಾಲಗಳನ್ನು ಪಡೆದು ಸ್ವಾವಲಂಬಿಯಾಗುವಂತೆ ನೋಡಿಕೊಳ್ಳತಕ್ಕದ್ದು.

3ಸಿ. **ಅಪರಾಧಗಳು ಸಂಜ್ಞೇಯ ಮತ್ತು ಜಾಮೀನೀಯವಲ್ಲದ್ದು ಆಗಿರತಕ್ಕದ್ದು**.- ಈ ಅಧಿನಿಯಮದ ಅಡಿಯಲ್ಲಿ ದಂಡನೀಯವಾದ ಅಪರಾಧವು ಸಂಜ್ಞೇಯ ಮತ್ತು ಜಾಮೀನೀಯವಲ್ಲದ್ದಾಗಿರತಕ್ಕದ್ದು.

3ಡಿ. **ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿಯ ನೇಮಕಾತಿ**.- (1) ರಾಜ್ಯ ಸರ್ಕಾರವು, ರಾಜ್ಯ ಪತ್ರದಲ್ಲಿ ಅಧಿಸೂಚಿಸುವ ಮೂಲಕ ಇಡೀ ರಾಜ್ಯಕ್ಕೆ ಅಥವಾ ಆ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಪ್ರದೇಶಕ್ಕೆ ಸದರಿ ನಿರ್ದಿಷ್ಟಪಡಿಸಿದ ಪ್ರದೇಶ ಅಥವಾ ಪ್ರದೇಶಗಳ ಮೇಲೆ ಅಧಿಕಾರ ವ್ಯಾಪ್ತಿಯುಳ್ಳ 'ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿ' ಎಂಬ ಅಧಿಕಾರಿ ಅಥವಾ ಅಧಿಕಾರಿಗಳನ್ನು ನೇಮಕ ಮಾಡತಕ್ಕದ್ದು.

(2) (1)ನೇ ಉಪ ಪ್ರಕರಣಕ್ಕೆ ಪ್ರತಿಕೂಲವಾಗದಂತೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಂಬಂಧಪಟ್ಟ ಉಪ ನಿರ್ದೇಶಕರು, ಸಹಾಯಕ ನಿರ್ದೇಶಕರು ಅಥವಾ ಯೋಜನಾ ಅಧಿಕಾರಿಯು ತಮ್ಮ ತಮ್ಮ ಅಧಿಕಾರ ವ್ಯಾಪ್ತಿಯ ಪ್ರದೇಶದಲ್ಲಿ ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿಗಳಾಗಿರತಕ್ಕದ್ದು.

(3) ರಾಜ್ಯ ಸರ್ಕಾರವು, ಸಮಾಜಸೇವೆಯಲ್ಲಿ ಒಳ್ಳೆಯ ಹೆಸರನ್ನು ಪಡೆದಿರುವ ಸಂಬಂಧಿಸಿದ ಸ್ಥಳೀಯ ಗೌರವಾನ್ವಿತ ಸದಸ್ಯ ಅಥವಾ ಗ್ರಾಮ ಪಂಚಾಯತಿ ಅಥವಾ ಮುನ್ಸಿಪಾಲಿಟಿಯ ಒಬ್ಬ ಅಧಿಕಾರಿ ಅಥವಾ ಸರ್ಕಾರಿ ಅಥವಾ ಯಾವುದೇ ಸಾರ್ವಜನಿಕ ಉದ್ಯಮದ ಒಬ್ಬ ಅಧಿಕಾರಿ ಅಥವಾ ಯಾವುದೇ ಸರ್ಕಾರೇತರ ಸಂಸ್ಥೆಯ ಒಬ್ಬ ಪದಾಧಿಕಾರಿಯನ್ನು ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿಗೆ ಸಹಾಯ ನೀಡುವಂತೆ ಕೋರಬಹುದು ಮತ್ತು ಸಂದರ್ಭಾನುಸಾರ ಅಂಥ ಸದಸ್ಯ, ಅಧಿಕಾರಿ ಅಥವಾ ಸಿಬ್ಬಂದಿಯು ಆ ರೀತಿ ವರ್ತಿಸಲು ಬದ್ಧನಾಗಿರತಕ್ಕದ್ದು.

(4) ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿಯ ಕರ್ತವ್ಯಗಳು ಈ ಮುಂದಿನಂತಿರತಕ್ಕದ್ದು,-

(ಎ) 3ಎ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ಅರ್ಜಿಯನ್ನು ಸಲ್ಲಿಸಿ ಮತ್ತು ತಾನು ಸೂಕ್ತವೆಂದು ಭಾವಿಸುವಂಥ ಕ್ರಮವನ್ನು ಕೈಗೊಂಡು ದೇವದಾಸಿ ಸಮರ್ಪಣೆಯನ್ನು ನಿಷೇಧಿಸುವುದು ;

(ಬಿ) ಅಧಿನಿಯಮದ ಉಪಬಂಧಗಳನ್ನು ಉಲ್ಲಂಘಿಸುವ ವ್ಯಕ್ತಿಗಳ ವಿರುದ್ಧ ಪರಿಣಾಮಕಾರಿಯಾಗಿ ಅಭಿಯೋಜನೆ ಮಾಡುವುದಕ್ಕಾಗಿ ಸಾಕ್ಷ್ಯಗಳನ್ನು ಸಂಗ್ರಹಿಸುವುದು ;

(ಸಿ) ದೇವದಾಸಿ ಸಮರ್ಪಣೆಗೆ ಪ್ರೋತ್ಸಾಹಿಸಬೇಡಿ, ಸಹಾಯ ನೀಡಬೇಡಿ, ನೆರವು ನೀಡಬೇಡಿ ಅಥವಾ ಅವಕಾಶ ನೀಡಬೇಡಿ ಎಂದು ವೈಯಕ್ತಿಕ ಪ್ರಕರಣಗಳಲ್ಲಿ ಬುದ್ಧಿವಾದ ಹೇಳುವುದು ಅಥವಾ ಆ ಪ್ರದೇಶದ ನಿವಾಸಿಗಳಿಗೆ ಸಲಹೆಗಳನ್ನು ನೀಡುವುದು ;

(ಡಿ) ಸಮರ್ಪಣೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಉಂಟುಮಾಡುವುದು ;

(ಇ) ಸಮರ್ಪಣೆಯು ಎಷ್ಟು ಹೀನಾಯ ಎಂಬುದುದನ್ನು ಸಮುದಾಯಕ್ಕೆ ಮನಗಾಣಿಸುವುದು ;

(ಎಫ್) ಘಟನೆ ನಡೆದ ಸ್ಥಳದಲ್ಲಿಯೇ ಪಂಚನಾಮೆ ವರದಿಯನ್ನು ಬರೆಯಲು ಮತ್ತು ಸಾಕ್ಷಿಗಳ ಸಹಿಯನ್ನು ಪಡೆಯಲು ಕ್ರಮ ಕೈಗೊಳ್ಳುವುದು ;

(ಜಿ) ರಾಜ್ಯ ಸರ್ಕಾರವು ನಿರ್ದೇಶಿಸಬಹುದಾದಂಥ ನಿಯತಕಾಲಿಕ ವರದಿಯನ್ನು ಮತ್ತು ಅಂಕಿ ಅಂಶಗಳನ್ನು ಸಲ್ಲಿಸುವುದು, ಮತ್ತು

(ಎಚ್) ರಾಜ್ಯ ಸರ್ಕಾರವು ತನಗೆ ವಹಿಸಬಹುದಾದಂಥ ಪ್ರಕಾರ್ಯಗಳನ್ನು ನಿರ್ವಹಿಸುವುದು ಮತ್ತು ಅಂಥ ಕರ್ತವ್ಯಗಳನ್ನು ನೆರವೇರಿಸುವುದು.

(5) ರಾಜ್ಯ ಸರ್ಕಾರವು ರಾಜ್ಯ ಪತ್ರದಲ್ಲಿ ಅಧಿಸೂಚಿಸುವ ಮೂಲಕ ಸದರಿ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಷರತ್ತುಗಳಿಗೆ ಮತ್ತು ಪರಿಮಿತಿಗಳಿಗೆ ಒಳಪಟ್ಟು ಪೋಲೀಸು ಅಧಿಕಾರಿಯ ಅಧಿಕಾರಗಳನ್ನು ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿಯು ಚಲಾಯಿಸಲು ವಹಿಸಿಕೊಡಬಹುದು ಮತ್ತು ದೇವದಾಸಿ ಸಮರ್ಪಣಿ ನಿಷೇಧಕ ಅಧಿಕಾರಿಯು ಅದರಲ್ಲಿ ನಿರ್ದಿಷ್ಟಪಡಿಸಿದಂಥ ಷರತ್ತುಗಳಿಗೆ ಮತ್ತು ಪರಿಮಿತಿಗಳಿಗೆ ಒಳಪಟ್ಟು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು.

(6) ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿಯು ಕಾಪಾಡಲ್ಪಟ್ಟ ಮಹಿಳೆಯ ಪುನರ್ವಸತಿಗಾಗಿ 3ಬಿ ಪ್ರಕರಣದ ಅಡಿಯಲ್ಲಿ ನ್ಯಾಯಾಲಯದ ಆದೇಶವನ್ನು ಕೋರಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

(7) ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿಯು ತನ್ನ ಅಧಿಕಾರ ವ್ಯಾಪ್ತಿಯ ಪ್ರದೇಶದಲ್ಲಿ ಸಮರ್ಪಣೆಯ ಪ್ರಕರಣಗಳು ನಡೆದಾಗ ಅಥವಾ ನಡೆಯುವ ಸಂಭವವಿರುವಾಗ ಸದರಿ ವಿಷಯವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಿಗೆ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಹಾಗೂ ಸಂಬಂಧಿಸಿದ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ವರದಿಮಾಡತಕ್ಕದ್ದು.

3ಇ. **ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿಯು ಸಾರ್ವಜನಿಕ ನೌಕರನಾಗಿರುವುದು**.- ದೇವದಾಸಿ ಸಮರ್ಪಣಾ ನಿಷೇಧಕ ಅಧಿಕಾರಿಯು ಭಾರತ ದಂಡ ಸಂಹಿತೆಯ (1860 ರ ಕೇಂದ್ರ ಅಧಿನಿಯಮ 45) 21ನೇ ಪ್ರಕರಣದ ಅರ್ಥ ವ್ಯಾಪ್ತಿಯಲ್ಲಿ ಸಾರ್ವಜನಿಕ ನೌಕರನಾಗಿರುವನೆಂದು ಭಾವಿಸತಕ್ಕದ್ದು."

(ಸದರಿ ವಿಷಯದ ಮೂಲ ಅಧಿನಿಯಮದ ಪ್ರತಿಯನ್ನು ಪುಟ ಸಂಖ್ಯೆ: 82-85ರಲ್ಲಿ ನೋಡಬಹುದು)

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

(1) ಹೆಣ್ಣು ಮಕ್ಕಳನ್ನು ದೇವದಾಸಿಯರಾಗಿ ಸಮರ್ಪಣೆ ಮಾಡಬಹುದಾದ ಸಂಭಾವ್ಯತೆಯನ್ನು ತಡೆಗಟ್ಟಲು ನಿರ್ಬಂಧಕಾಜ್ಞೆಯನ್ನು ಹೊರಡಿಸುವ ಅಧಿಕಾರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟರಿಗೆ ಅಥವಾ ಕಾರ್ಯಕಾರಿ ಮ್ಯಾಜಿಸ್ಟ್ರೇಟನಿಗೆ ನೀಡುವುದಕ್ಕಾಗಿ,

(2) ದೇವದಾಸಿಯರಾಗಿ ಸಮರ್ಪಣೆಯಿಂದ ಮಹಿಳೆಯನ್ನು ಕಾಪಾಡುವುದು, ಆರೈಕೆ, ಸಂರಕ್ಷಣೆ, ಕ್ಷೇಮಾಭಿವೃದ್ಧಿ ಮತ್ತು ಅವರಿಗೆ ಪುನರ್ವಸತಿ ಕಲ್ಪಿಸುವುದಕ್ಕಾಗಿ,

(3) ಈ ಅಧಿನಿಯಮದಡಿಯಲ್ಲಿನ ಅಪರಾಧಗಳು ಸಂಜ್ಞೇಯ ಮತ್ತು ಜಾಮೀನೀಯವಲ್ಲದ್ದು ಎಂದು ಉಪಬಂಧಿಸುವುದಕ್ಕಾಗಿ,

(4) ದೇವದಾಸಿಯ ಸಮರ್ಪಣೆ ನಿಷೇಧ ಅಧಿಕಾರಿಯನ್ನು ಅಂಥ ಸಮರ್ಪಣೆಯನ್ನು ತಡೆಗಟ್ಟುವ ಅಧಿಕಾರಗಳೊಂದಿಗೆ ನೇಮಿಸಲು ಉಪಬಂಧ ಕಲ್ಪಿಸುವುದಕ್ಕಾಗಿ,-

- ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) ಅಧಿನಿಯಮ, 1982ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಕ್ರಮದಿಂದಾಗಿ ಯಾವುದೇ ಹೆಚ್ಚಿನ ಆರ್ಥಿಕ ಹೊರೆ ಉಂಟಾಗುವುದಿಲ್ಲ.

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ** ಸಚಿವರು.

**ಎಸ್.ಬಿ. ಪಾಟೀಲ್**
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ.

## 1984ರ ಕರ್ನಾಟಕ ಅಧಿನಿಯಮ ಸಂಖ್ಯೆ 1

(1984ರ ಜನವರಿ 31ನೇ ದಿನಾಂಕದಂದು ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಮೊದಲ ಬಾರಿಗೆ ಪ್ರಕಟಿಸಲಾಗಿದೆ)

## ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) ಅಧಿನಿಯಮ, 1982

(1984ರ ಜನವರಿ ಹನ್ನೊಂದರಂದು ರಾಷ್ಟ್ರಾಧ್ಯಕ್ಷರ ಅನುಮತಿ ಪಡೆಯಲಾಗಿದೆ)

ಕರ್ನಾಟಕ ರಾಜ್ಯದಲ್ಲಿ ಸ್ತ್ರೀಯರನ್ನು ದೇವದಾಸಿಯರಾಗಿ ಸಮರ್ಪಣೆ ಮಾಡುವುದನ್ನು ನಿಷೇಧಿಸುವ ಬಗ್ಗೆ ಒಂದು ಅಧಿನಿಯಮ.

ಕರ್ನಾಟಕ ರಾಜ್ಯದ ಕೆಲವು ಭಾಗಗಳಲ್ಲಿ ದೇವತೆಗಳಿಗೆ, ವಿಗ್ರಹಗಳಿಗೆ, ಪೂಜಿಸುವ ವಸ್ತುಗಳಿಗೆ, ದೇವಸ್ಥಾನಗಳಿಗೆ ಮತ್ತು ಇತರ ಧಾರ್ಮಿಕ ಸಂಸ್ಥೆಗಳಿಗೆ ಸ್ತ್ರೀಯರನ್ನು ದೇವದಾಸಿಯರಾಗಿ ಸಮರ್ಪಣೆಮಾಡುವಂಥ ಪದ್ಧತಿ ಪ್ರಚಲಿತವಾಗಿರುವುದರಿಂದ;

ಮತ್ತು ಅಂಥ ಪದ್ಧತಿಯು, ಹಾಗೆ ಸಮರ್ಪಿಸಲಾದ ಸ್ತ್ರೀಯರನ್ನು ವೇಶ್ಯಾ ವೃತ್ತಿಯ ಜೀವನಕ್ಕೆ ಎಳೆಯುವುದರಿಂದ;

ಮತ್ತು ಅಂಥ ಪದ್ಧತಿಯನ್ನು ಕೊನೆಗೊಳಿಸುವುದು ಯುಕ್ತವಾಗಿರುವುದರಿಂದ;

ಭಾರತದ ಗಣರಾಜ್ಯದ ಮೂವತ್ತಮೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯದ ವಿಧಾನಮಂಡಲದಲ್ಲಿ ಮುಂದೆ ಹೇಳಿರುವಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ವ್ಯಾಪ್ತಿ.-** (1) ಈ ಅಧಿನಿಯಮವನ್ನು ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) ಅಧಿನಿಯಮ, 1982 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗುತ್ತದೆ.

**2. ಪರಿಭಾಷೆ.-** ಈ ಅಧಿನಿಯಮದಲ್ಲಿ ಸಂದರ್ಭಕ್ಕೆ ಬೇರೆ ಅರ್ಥದ ಅಗತ್ಯವಿರದಿದ್ದರೆ,-

(ಅ) "ಸಮರ್ಪಣೆ" ಎಂದರೆ, ಯಾವುದೇ ಹೆಸರಿನಿಂದ ಕರೆಯಲಾದ ಯಾವುದೊಂದು ಕೃತ್ಯ ಅಥವಾ ಶಿಷ್ಟಾಚಾರದಿಂದ ಒಬ್ಬಳು ಸ್ತ್ರೀಯನ್ನು ಯಾವುದೇ ದೇವತೆಯ, ವಿಗ್ರಹದ, ಪೂಜಾ ವಸ್ತುವಿನ, ದೇವಸ್ಥಾನದ, ಇತರ ಧಾರ್ಮಿಕ ಸಂಸ್ಥೆಗಳ ಅಥವಾ ಪೂಜಾಸ್ಥಳಗಳ ಸೇವೆಗೆ ಅರ್ಪಣೆ ಮಾಡಲಾಗುವುದೋ ಅದರ ನೆರವೇರಿಕೆ;

(ಆ) "ದೇವದಾಸಿ" ಎಂದರೆ, ಹಾಗೆ ಸಮರ್ಪಿಸಲಾದ ಒಬ್ಬಳು ಸ್ತ್ರೀ;

(ಇ) "ದೇವಸ್ಥಾನ" ಎಂದರೆ ಯಾವುದೇ ಹೆಸರಿನಿಂದ ಪರಿಚಿತವಾಗಿದ್ದು, ಧಾರ್ಮಿಕ ಪ್ರಾರ್ಥನೆಗೆ ಸಮರ್ಪಿತವಾದ ಅಥವಾ ಬಳಸುತ್ತಿರುವ ಒಂದು ಸ್ಥಳ;

(ಈ) “ಸ್ತ್ರೀ” ಎಂದರೆ ಯಾವುದೇ ವಯಸ್ಸಿನ ಒಬ್ಬಳು ಹೆಂಗಸು.

3. **ದೇವದಾಸಿಯರಾಗಿ ಸಮರ್ಪಣೆ ಕಾನೂನು ಬಾಹಿರ.-** ಯಾವುದೇ ರೂಢಿ ಅಥವಾ ಕಾನೂನು ವಿರುದ್ಧವಿದ್ದರೂ, ಈ ಅಧಿನಿಯಮ ಜಾರಿಗೆ ಬರುವ ಮೊದಲಿರಲಿ ಅಥವಾ ಅನಂತರವಿರಲಿ ಮತ್ತು ಅವಳು ಅಂಥ ಸಮರ್ಪಣೆಗೆ ಒಪ್ಪಿರಲಿ, ಒಪ್ಪದಿರಲಿ, ದೇವದಾಸಿಯಾಗಿ ಒಬ್ಬಳು ಸ್ತ್ರೀಯ ಸಮರ್ಪಣೆ ಕಾನೂನು ಬಾಹಿರ, ಶೂನ್ಯ ಮತ್ತು ಪರಿಣಾಮ ಇಲ್ಲತಕ್ಕದ್ದಾಗಿರುವುದು ಎಂದು ಈ ಮೂಲಕ ಘೋಷಿಸಲಾಗಿದೆ ಮತ್ತು ಹಾಗೆ ಸಮರ್ಪಿತಳಾದ ಯಾವಳೇ ಸ್ತ್ರೀ ಊರ್ಜಿತವಾದ ಮದುವೆ ಮಾಡಿಕೊಳ್ಳಲು ತನ್ಮೂಲಕ ಅನರ್ಹಳಾಗಿದ್ದಾಳೆ ಎಂದು ಭಾವಿಸಲಾಗದು.

4. **ದೇವದಾಸಿಯ ವಿವಾಹ.-** ಯಾವುದೇ ರೂಢಿ ಅಥವಾ ಕಾನೂನಿನ ನಿಯಮ ವಿರುದ್ಧವಿದ್ಧರೂ ಒಬ್ಬಳು ಸ್ತ್ರೀ ದೇವದಾಸಿಯಾಗಿ ಇದ್ದಾಳೆ ಎಂಬ ಕಾರಣದಿಂದ ಮಾತ್ರ ಆ ಸ್ತ್ರೀ ಮಾಡಿಕೊಂಡಿರುವಂಥ ವಿವಾಹ ಅನೂರ್ಜಿತವಾಗಲಾರದು ಮತ್ತು ಅಂಥ ವಿವಾಹದಿಂದ ಜನಿಸಿರುವ ಶಿಶುವನ್ನು ಜಾರಜ ಎಂದು ಪರಿಗಣಿಸಲಾಗದು.

5. **ದಂಡ.-** ಈ ಅಧಿನಿಯಮದ ಪ್ರಾರಂಭದ ಅನಂತರ ಒಬ್ಬಳು ಸ್ತ್ರೀಯನ್ನು ದೇವದಾಸಿಯಾಗಿ ಸಮರ್ಪಣೆ ಮಾಡುವಂಥ ಯಾವುದೇ ಶಿಷ್ಟಾಚಾರವನ್ನು ಅಥವಾ ಕೃತ್ಯವನ್ನು ನೆರವೇರಿಸಿದ, ಅನುಮೋದಿಸಿದ, ಅವುಗಳಲ್ಲಿ ಭಾಗವಹಿಸಿದ ಅಥವಾ ನೆರವೇರಿಸುವುದಕ್ಕೆ ದುಷ್ಪ್ರೇರಣೆಯನ್ನು ಇತ್ತ ವ್ಯಕ್ತಿಯ ದೋಷಸಿದ್ಧಿ ಆದಲ್ಲಿ ಅವನು ಎರಡರಲ್ಲಿ ಯಾವುದೇ ಒಂದು ತರದ, ಮೂರು ವರ್ಷಗಳವರೆಗೆ ವಿಸ್ತರಿಸಬಹುದಾದ ಅವಧಿಯ ಜೈಲುವಾಸ ಮತ್ತು ಎರಡು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಗಳಿಂದ ದಂಡನೀಯನಾಗತಕ್ಕದ್ದು:

ಪರಂತು, ಈ ಅಧಿನಿಯಮದಲ್ಲಿ ನಿರ್ದೇಶಿಸಲಾದ ವ್ಯಕ್ತಿ, ಹಾಗೆ ಸಮರ್ಪಿತಳಾದ ಸ್ತ್ರೀಯ ತಂದೆ ತಾಯಿ ಅಥವಾ ಸಂಬಂಧಿಕನಾಗಿದ್ದಲ್ಲಿ, ಆ ವ್ಯಕ್ತಿ ಎರಡರಲ್ಲಿ ಯಾವುದೇ ಒಂದು ತರದ, ಐದು ವರ್ಷಗಳವರೆಗೆ ವಿಸ್ತರಿಸಬಹುದಾದ ಆದರೆ ಎರಡು ವರ್ಷಗಳಿಗೆ ಕಡಿಮೆಯಾಗದ ಅವಧಿಯ ಜೈಲುವಾಸ ಮತ್ತು ಐದು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಆದರೆ ಎರಡು ಸಾವಿರ ರೂಪಾಯಿಗಳಿಗೆ ಕಡಿಮೆಯಾಗದ ಜುಲ್ಮಾನೆಯಿಂದ ದಂಡನೀಯನಾಗತಕ್ಕದ್ದು.

**ವಿವರಣೆ.-** ಈ ಪ್ರಕರಣದಲ್ಲಿ ನಿರ್ದೇಶಿಸಲಾದ ವ್ಯಕ್ತಿಯ ಉಲ್ಲೇಖದಲ್ಲಿ ಯಾವ ಸ್ತ್ರೀಯ ಕುರಿತು ಅಂಥ ಶಿಷ್ಟಾಚಾರ ಅಥವಾ ಕೃತ್ಯವನ್ನು ನೆರವೇರಿಸಲಾಗಿರುವುದೋ ಅವಳು ಸೇರಿರತಕ್ಕದ್ದು.

6. **ಸದ್ಭಾವನೆಯಿಂದ ಮಾಡಿದ ಕೃತ್ಯಕ್ಕೆ ರಕ್ಷಣೆ.-** ಈ ಅಧಿನಿಯಮದ ಕೆಳಗೆ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದಕ್ಕೂ ಸರ್ಕಾರ ಅಥವಾ ಯಾವನೇ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಅಭಿಯೋಜನೆ ಅಥವಾ ಇತರ ವಿಧಿ ವ್ಯವಹರಣೆ ಇರಲು ಸಾಧ್ಯವಿಲ್ಲ.

**7. ನಿಯಮಗಳನ್ನು ಮಾಡುವುದಕ್ಕೆ ಶಕ್ತಿ.-** (1) ರಾಜ್ಯ ಸರ್ಕಾರದ ಪೂರ್ವ ಪ್ರಕಟಣೆಯ ಅನಂತರ ಮತ್ತು ರಾಜ್ಯಪತ್ರದಲ್ಲಿ ಅಧಿಸೂಚನೆ ಮಾಡುವ ಮೂಲಕ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸಲು ನಿಯಮಗಳನ್ನು ಮಾಡಬಹುದು.

(2) ಉಪಪ್ರಕರಣ (1) ರಿಂದ ಪ್ರದತ್ತವಾದ ಶಕ್ತಿಯ ಸಾಮಾನ್ಯತೆಗೆ ಪ್ರತಿಕೂಲವಾಗದಂತೆ ಅಂಥ ನಿಯಮಗಳು ಇವುಗಳಿಗೆ ವ್ಯವಸ್ಥೆ ಮಾಡಬಹುದು, -

(ಅ) ಈ ಅಧಿನಿಯಮದ ಕೆಳಗಿನ ಅಪರಾಧಗಳ ತನಿಖೆಯ ರೀತಿಯ ಕುರಿತು;

(ಆ) ದೇವದಾಸಿಯರ ಅಭಿರಕ್ಷೆ, ರಕ್ಷಣೆ, ಸಂರಕ್ಷಣೆ, ಕಲ್ಯಾಣ ಹಾಗೂ ಪುನರ್ವಸತಿ ಕುರಿತು;

(ಇ) ಸರ್ಕಾರದ ಅಭಿಪ್ರಾಯದಲ್ಲಿ ನಿಯಮಿಸುವುದು ಅಗತ್ಯವೆನಿಸಿದ ಇತರ ಯಾವುದೇ ವಿಚಾರದ ಕುರಿತು.

(3) ಈ ಪ್ರಕರಣದ ಕೆಳಗೆ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ಮೇಲೆ ಎಷ್ಟು ಬೇಗನೆ ಸಾಧ್ಯವೋ ಅಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಅದು ಒಂದೇ ಅಧಿವೇಶನದಲ್ಲಿ ಅಥವಾ ಒಂದಾದ ಮೇಲೊಂದು ಬರುವ ಎರಡು ಅಥವಾ ಹೆಚ್ಚು ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅಧಿವೇಶನದಲ್ಲಿರುವಾಗ ಇರಿಸತಕ್ಕದ್ದು. ಮತ್ತು ಹಿಂದೆ ಹೇಳಿದ ಅಧಿವೇಶನದ ಅಥವಾ ಒಂದಾದ ಮೇಲೊಂದು ಬರುವ ಅಧಿವೇಶನಗಳ, ನಿಕಟೋತ್ತರ ಅಧಿವೇಶನ ಮುಗಿಯುವುದಕ್ಕೂ ಮೊದಲು, ಆ ನಿಯಮದಲ್ಲಿ ಯಾವುದೇ ಮಾರ್ಪಾಟು ಮಾಡಲು ಎರಡು ಸದನಗಳೂ ಒಪ್ಪಿದರೆ ಆ ನಿಯಮವು ರಾಜ್ಯ ಸರ್ಕಾರ ಸರ್ಕಾರಿ ರಾಜ್ಯಪತ್ರದಲ್ಲಿ ಮಾರ್ಪಾಟನ್ನು ಅಥವಾ ರದ್ದಿಯಾತಿಯನ್ನು ಅಧಿಸೂಚನೆ ಮಾಡಿದ ತಾರೀಖಿನಿಂದ ಸಂದರ್ಭಾನುಸಾರ ಅಂಥ ಮಾರ್ಪಾಡು ಆದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದರೆ ಅಂಥ ಬದಲಾವಣೆ ಅಥವಾ ರದ್ದಿಯಾತಿ ಆ ನಿಯಮದ ಮೇರೆಗೆ ಹಿಂದೆ ಮಾಡಿದ ಯಾವುದೇ ಕಾರ್ಯದ ಊರ್ಜಿತತೆಗೆ ಪ್ರತಿಕೂಲವಾಗಿ ಇರತಕ್ಕದ್ದಲ್ಲ.

**8. ನಿರಸನ.-** ಬೊಂಬಾಯಿ ದೇವದಾಸಿಯರ ರಕ್ಷಣೆ ಅಧಿನಿಯಮ, 1934ನ್ನು (ಬೊಂಬಾಯಿಯ 1934ರ 10ನೇ ಅಧಿನಿಯಮ) ಮತ್ತು ಮದ್ರಾಸು ದೇವದಾಸಿಯರ (ಸಮರ್ಪಣೆ ನಿಷೇಧ) ಅಧಿನಿಯಮ, 1947ನ್ನು (ಮದ್ರಾಸು 1947ರ 31ನೇ ಅಧಿನಿಯಮ) ಈ ಮೂಲಕ ನಿರಸನಗೊಳಿಸಲಾಗಿದೆ:

ಪರಂತು ಅಂಥ ಅಧಿನಿಯಮಗಳನ್ನು ಈ ಅಧಿನಿಯಮದಿಂದ ನಿರಸನಗೊಳಿಸಿದರೆ ಮತ್ತು ಪುನಃ ಅಧಿನಿಯಮಿಸಿದರೆ ಹೇಗೋ ಹಾಗೆ 1899ರ ಕರ್ನಾಟಕ ಸಾಮಾನ್ಯ ಖಂಡಗಳ ಅಧಿನಿಯಮದ 6ನೇ ಪ್ರಕರಣ ಅನ್ವಯಿಸತಕ್ಕದ್ದು.

ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇದ ಅಧಿನಿಯಮ), 1982ನ್ನು ಈ ಕೆಳಕಂಡ ಅಧಿನಿಯಮಗಳ ಮೂಲಕ ತಿದ್ದುಪಡಿ ಮಾಡಲಾಗಿದೆ. ಅವುಗಳೆಂದರೆ,–

**ತಿದ್ದುಪಡಿಗಳು (ಕಾಲಾನುಕ್ರಮ)**

| ಕ್ರಮ ಸಂಖ್ಯೆ | ಅಧಿನಿಯಮದ ಸಂಖ್ಯೆ ಮತ್ತು ವರ್ಷ | ತಿದ್ದುಪಡಿಯಾದ ಪ್ರಕರಣಗಳು | ಷರಾ |
|---|---|---|---|
| 1 | 1984ರ ಕರ್ನಾಟಕ ಅಧಿನಿಯಮ ಸಂಖ್ಯೆ: 1 | – | 31.1.1984ರಿಂದ ಜಾರಿಗೆ ಬಂದಿದೆ. |

**ತಿದ್ದುಪಡಿಗಳು (ಪ್ರಕರಣವಾರು)**

| ಪ್ರಕರಣಗಳು | ಅಧಿನಿಯಮದ ಸಂಖ್ಯೆ ಮತ್ತು ವರ್ಷ | ಷರಾ |
|---|---|---|
| – | – | – |

# ಅನುಬಂಧ 7

## (ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮಗಳು 324 ರಿಂದ 351ರ ಉದ್ಧೃತ ಭಾಗ)

### ಸದಸ್ಯರು ಪಾಲಿಸಬೇಕಾದ ನಿಯಮಗಳು

**324. ಸದನದಲ್ಲಿ ಉಪಸ್ಥಿತರಿದ್ದಾಗ ಸದಸ್ಯರು ಪಾಲಿಸಬೇಕಾದ ನಿಯಮಗಳು:**

ಸಭೆಯ ಉಪವೇಶನದಲ್ಲಿ ಸದಸ್ಯನು:

(1) ಸದನದ ಕಾರ್ಯಕಲಾಪಕ್ಕೆ ಸಂಬಂಧಿಸಿರುವುದನ್ನು ಹೊರತು, ಯಾವುದೇ ಪುಸ್ತಕ, ವಾರ್ತಾ ಪತ್ರಿಕೆ ಅಥವಾ ಕಾಗದವನ್ನು ಓದತಕ್ಕುದಲ್ಲ.

(2) ಯಾವನೇ ಸದಸ್ಯನು ಮಾತನಾಡುತ್ತಿರುವಾಗ ಅವನಿಗೆ ದುರ್ವಚನೆಗಳಿಂದ ಅಥವಾ ಏರುಸ್ವರದಿಂದ ಅಥವಾ ಇತರ ಯಾವುದೇ ಕ್ರಮಬಾಹಿರ ರೀತಿಯಲ್ಲಿ ತೊಂದರೆಯುಂಟು ಮಾಡತಕ್ಕುದಲ್ಲ.

(3) ಸದನವನ್ನು ಪ್ರವೇಶಿಸುವಾಗ ಅಥವಾ ಅಲ್ಲಿಂದ ನಿರ್ಗಮಿಸುವಾಗ ಮತ್ತು ತಮ್ಮ ಜಾಗದಲ್ಲಿ ಕುಳಿತುಕೊಳ್ಳುವಾಗ ಅಥವಾ ಜಾಗವನ್ನು ಬಿಡುವಾಗ ಅಧ್ಯಕ್ಷರಿಗೆ ವಂದಿಸತಕ್ಕದ್ದು.

(4) ಅಧ್ಯಕ್ಷರ ಮತ್ತು ಮಾತನಾಡುತ್ತಿರುವ ಸದಸ್ಯರ ಮಧ್ಯೆ ಹಾದು ಹೋಗತಕ್ಕುದಲ್ಲ.

(5) ಅಧ್ಯಕ್ಷರು ಸಭೆಯನ್ನು ಉದ್ದೇಶಿಸಿ ಭಾಷಣ ಮಾಡುತ್ತಿರುವಾಗ ಸದನವನ್ನು ತ್ಯಜಿಸತಕ್ಕುದಲ್ಲ.

(6) ಯಾವಾಗಲೂ ಅಧ್ಯಕ್ಷರನ್ನು ಸಂಭೋದಿಸಿ ಮಾತನಾಡತಕ್ಕುದು.

(7) ಸಭೆಯನ್ನು ಉದ್ದೇಶಿಸಿ ಮಾತನಾಡುವಾಗ ತನ್ನ ಸ್ಥಾನದಲ್ಲಿರತಕ್ಕುದು.

(8) ಸದನದಲ್ಲಿ ಮಾತನಾಡದೇ ಇರುವ ಸಮಯದಲ್ಲಿ ನಿಶ್ಯಬ್ದವಾಗಿರತಕ್ಕುದು.

(9) ಸಭೆಯ ಕಾರ್ಯವಿಧಿಗೆ ತಡೆ ಅಥವಾ ವಿಘ್ನವನ್ನು ತರತಕ್ಕುದಲ್ಲ ಮತ್ತು ಸದನದಲ್ಲಿ ಭಾಷಣವಾಗುತ್ತಿರುವಾಗ ವೀಕ್ಷಕ ವಿವರಣೆಯನ್ನು ಮಾಡತಕ್ಕುದಲ್ಲ.

(10) ಯಾವುದೇ ಉಪ್ಪರಿಗೆಯ ಮೊಗಸಾಲೆಯನ್ನು (ಗ್ಯಾಲರಿಯನ್ನು) ಒಬ್ಬ ಅಪರಿಚಿತನು ಪ್ರವೇಶಿಸಿದಾಗ ಚಪ್ಪಾಳೆ ಹೊಡೆಯತಕ್ಕುದಲ್ಲ.

(11) ಮಾತನಾಡುತ್ತಿರುವಾಗ, ಯಾವುದೇ ಉಪ್ಪರಿಗೆಯ ಮೊಗಸಾಲೆಯಲ್ಲಿರುವ (ಗ್ಯಾಲರಿಯಲ್ಲಿ) ಅಪರಿಚಿತರನ್ನು ಕುರಿತು ಮಾತನಾಡತಕ್ಕುದಲ್ಲ.

(12) ಸದನದಲ್ಲಿ ಘೋಷಣೆಯನ್ನು ಕೂಗತಕ್ಕುದಲ್ಲ ;

(13) ಪೀಠಕ್ಕೆ ಬೆನ್ನು ತೋರಿಸುವಂತೆ ಕುಳಿತುಕೊಳ್ಳತಕ್ಕುದಲ್ಲ ಅಥವಾ ನಿಲ್ಲತಕ್ಕುದಲ್ಲ.

(14) ಸದನದಲ್ಲಿ ಪೀಠದ ಬಳಿ ಖುದ್ದಾಗಿ ಹೋಗತಕ್ಕುದಲ್ಲ ಅವಶ್ಯಕತೆಯುಂಟಾದರೆ ಅವರು ವಿಧಾನ ಮಂಡಲದ ಮುಂದೆ ಅಧಿಕಾರಿಗಳಿಗೆ ಚೀಟಿ ನೀಡಬಹುದು.

(15) ಸದನದಲ್ಲಿ ಬ್ಯಾಡ್ಜುಗಳು ಅಥವಾ ಯಾವುದೇ ವಸ್ತುವನ್ನು ಧರಿಸತಕ್ಕುದಲ್ಲ ಅಥವಾ ಪ್ರದರ್ಶಿಸತಕ್ಕುದಲ್ಲ.

(16) ಸದನದಲ್ಲಿ ಶಸ್ತ್ರಗಳನ್ನು ತರತಕ್ಕುದಲ್ಲ ಅಥವಾ ಪ್ರದರ್ಶಿಸತಕ್ಕುದಲ್ಲ.

(17) ಸದನದಲ್ಲಿ ಬಾವುಟಗಳು, ಲಾಂಛನಗಳು ಅಥವಾ ಯಾವುದೇ ನಿಶಾನೆಗಳನ್ನು ಪ್ರದರ್ಶಿಸತಕ್ಕುದಲ್ಲ.

(18) ತನ್ನ ಭಾಷಣವಾದ ತರುವಾಯ, ಕೂಡಲೇ ಸದನವನ್ನು ಬಿಟ್ಟು ಹೋಗತಕ್ಕುದಲ್ಲ.

(19) ಸದನದ ವ್ಯವಹಾರಗಳಿಗೆ ಸಂಬಂಧಪಡದ ಯಾವುದೇ ಬರವಣಿಗೆ, ಪ್ರಶ್ನಾವಳಿ, ಕರಪತ್ರಗಳು ಪತ್ರಿಕಾ ಹೇಳಿಕೆಗಳು, ಕಾಗದದ ಹಾಳೆಗಳು, ಮೊದಲಾದುವನ್ನು ಸದನದ ಆವರಣದೊಳಗೆ ಹಂಚತಕ್ಕುದಲ್ಲ.

(20) ಸದನದಲ್ಲಿ ಡೆಸ್ಕ್ ಮೇಲೆ ತನ್ನ ಟೋಪಿಯನ್ನು ಇಡತಕ್ಕುದಲ್ಲ, ಕಡತಗಳನ್ನು ಇಡಲು ಅಥವಾ ಬರೆಯುವ ಉದ್ದೇಶಕ್ಕಾಗಿ ರಟ್ಟನ್ನು ತರತಕ್ಕುದಲ್ಲ, ಧೂಮಪಾನ ಮಾಡತಕ್ಕುದಲ್ಲ ಅಥವಾ ಕೋಟನ್ನು ಕೈನಲ್ಲಿ ಹಿಡಿದು ಸದನವನ್ನು ಪ್ರವೇಶಿಸಿತಕ್ಕುದಲ್ಲ.

(21) ಆರೋಗ್ಯದ ಕಾರಣಗಳ ಮೇಲೆ ವಿಧಾನ ಸಭ್ಯಾಧ್ಯಕ್ಷರ ಅನುಮತಿ ಪಡೆಯದೆ ಊರುಗೋಲನ್ನು ತರತಕ್ಕುದಲ್ಲ.

(22) ಸದನದಲ್ಲಿ ಪ್ರತಿಭಟನೆ ಸೂಚಿಸಿ ಕಾಗದ ಪತ್ರಗಳನ್ನು ಹರಿದುಹಾಕತಕ್ಕುದಲ್ಲ;

(23) ಸದನದಲ್ಲಿ ಕ್ಯಾಸೆಟ್ ಅಥವಾ ಟೇಪ್ ರೆಕಾರ್ಡರ್‌ಗಳನ್ನು ತರತಕ್ಕುದಲ್ಲ ಮತ್ತು ಹಾಕತಕ್ಕುದಲ್ಲ ಮತ್ತು

(24) ಸದನಕ್ಕೆ ಜೋರಾಗಿ ಕೇಳಿಸುವಂತೆ ಮೊಗಸಾಲೆಯಲ್ಲಿ ಮಾತನಾಡತಕ್ಕುದಲ್ಲ ಅಥವಾ ನಗತಕ್ಕದಲ್ಲ.

**325. ಅಧ್ಯಕ್ಷರಿಂದ ಕರೆಬಂದಾಗ ಸದಸ್ಯರು ಮಾತನಾಡುವುದು :** ಒಬ್ಬ ಸದಸ್ಯನು ಮಾತನಾಡಲು ಎದ್ದುನಿಂತರೆ, ಅಧ್ಯಕ್ಷರು ಅವರ ಹೆಸರನ್ನು ಕರೆಯತಕ್ಕುದು. ಒಬ್ಬರಿಗಿಂತ ಹೆಚ್ಚು ಸದಸ್ಯರು ಏಕಕಾಲದಲ್ಲಿ ಎದ್ದು ನಿಂತರೆ, ಅಧ್ಯಕ್ಷರು ಹೆಸರು ಕರೆದಿರುವ ಸದಸ್ಯರಿಗೆ ಮಾತನಾಡಲು ಹಕ್ಕಿರುವುದು.

**326. ಸದನವನ್ನು ಉದ್ದೇಶಿಸಿ ಮಾತನಾಡುವ ರೀತಿ :** ಸದನದಲ್ಲಿ ಯಾವುದೇ ವಿಷಯದ ಬಗ್ಗೆ ಒಬ್ಬ ಸದಸ್ಯನು ಯಾವುದೇ ಅಭಿಪ್ರಾಯವನ್ನು ವ್ಯಕ್ತಗೊಳಿಸಲಿಚ್ಛಿಸಿದರೆ, ತನ್ನ ಸ್ಥಳದಿಂದಲೇ ಎದ್ದುನಿಂತು ಅಧ್ಯಕ್ಷರನ್ನು ಸಂಭೋದಿಸಿ ಮಾತನಾಡತಕ್ಕುದು, ಪರಂತು, ಕಾಯಿಲೆ ಅಥವಾ ದುರ್ಬಲತೆಯಿಂದ ನಿಶ್ಯಕ್ತರಾಗಿರುವವರನ್ನು ಕುಳಿತುಕೊಂಡೆ ಮಾತನಾಡಲು ಅನುಮತಿಸಬಹುದು.

**327. ಮಾತನಾಡುವಾಗ ಪಾಲಿಸಬೇಕಾದ ನಿಯಮಗಳು :**

ಸದಸ್ಯರು ಮಾತನಾಡುವಾಗ;–

(1) ನ್ಯಾಯಾಲಯದಲ್ಲಿ ಇತ್ಯರ್ಥದಲ್ಲಿದ್ದು ತೀರ್ಪು ನೀಡಿರದ ಯಾವುದೇ ಸಂಗತಿಯನ್ನು ಕುರಿತು ಮಾತನಾಡತಕ್ಕುದಲ್ಲ.

(2) ಸದಸ್ಯರೊಬ್ಬರ ಮೇಲೆ ವೈಯಕ್ತಿಕ ದೋಷಾರೋಪಣೆ ಮಾಡತಕ್ಕುದಲ್ಲ.

(3) ಸಂಸತ್ತು ಅಥವಾ ಯಾವುದೇ ರಾಜ್ಯ ವಿಧಾನ ಮಂಡಲದ ವ್ಯವಹರಣೆಗಳು ಮತ್ತು ನಡವಳಿಕೆಗಳನ್ನು ಕುರಿತು ಹೀನಾಯವಾಗಿ ಮಾತನಾಡತಕ್ಕುದಲ್ಲ.

(4) ಸದನದ ಯಾವುದೇ ತೀರ್ಮಾನವನ್ನು ಕುರಿತು ಅದನ್ನು ರದ್ದುಪಡಿಸಲು ಪ್ರಸ್ತಾವ ಮಂಡಿಸುವಾಗ ಹೊರತು ಇನ್ನಾವುದೇ ಆರೋಪಣೆ ಮಾಡತಕ್ಕುದಲ್ಲ.

(5) ಸರಿಯಾದ ವಾಕ್ಯಗಳಲ್ಲಿ ರಚಿಸಲಾದ ಆಧಾರಸಹಿತ ಪ್ರಸ್ತಾವದ ಮೇಲೆ ಚರ್ಚೆ ನಡೆಸಿದ್ದ ಹೊರತು ಉನ್ನತಾಧಿಕಾರದಲ್ಲಿರುವ ವ್ಯಕ್ತಿಗಳ ನಡವಳಿಕೆ ಕುರಿತು ಆರೋಪಿಸತಕ್ಕುದಲ್ಲ.

**ವಿವರಣೆ:** ಉನ್ನತಾಧಿಕಾರದಲ್ಲಿರುವ ವ್ಯಕ್ತಿಗಳು ಎಂದರೆ ಭಾರತ ಸಂವಿಧಾನದ ಮೇರೆಗೆ ಯಾವ ನಡವಳಿಕೆಯನ್ನು ಸರಿಯಾದ ವಾಕ್ಯಗಳಲ್ಲಿ ರಚಿಸಿದ ಆಧಾರಸಹಿತ ಪ್ರಸ್ತಾವಗಳ ಮೇಲೆ ಮಾತ್ರವೇ ಚರ್ಚೆ ನಡೆಸಬಹುದೋ ಆ ವ್ಯಕ್ತಿಗಳು ಅಥವಾ ಯಾರ ನಡವಳಿಕೆಯನ್ನು ತಾವು ಒಪ್ಪುವಂತಹ ವಾಕ್ಯಗಳಲ್ಲಿ ರಚಿಸಲಾದ ಆಧಾರಸಹಿತ ಪ್ರಸ್ತಾವದ ಮೇಲೆ ಮಾತ್ರವೇ ಚರ್ಚಿಸತಕ್ಕುದು ಎಂದು ಅಧ್ಯಕ್ಷರು ಅಭಿಪ್ರಾಯಪಡುತ್ತಾರೋ ಆ ವ್ಯಕ್ತಿಗಳು ;

(6) ಚರ್ಚೆಯ ಮೇಲೆ ಪ್ರಭಾವ ಬೀರುವುದಕ್ಕಾಗಿ ರಾಜ್ಯಪಾಲರ ಹೆಸರನ್ನು ಉಪಯೋಗಿಸತಕ್ಕುದಲ್ಲ;

(7) ರಾಷ್ಟ್ರದ್ರೋಹ, ರಾಷ್ಟ್ರವಿರೋಧಿ ಅಥವಾ ಅಪಮಾನಕರವಾದ ಮಾತುಗಳನ್ನು ಆಡತಕ್ಕುದಲ್ಲ.

(8) ಸದನದ ಕಾರ್ಯಕಲಾಪಗಳನ್ನು ಅಡ್ಡಿಪಡಿಸುವುದಕ್ಕಾಗಿ ತಮ್ಮ ವಾಕ್ ಸ್ವಾತಂತ್ರವನ್ನು ಬಳಸಬಾರದು.

(9) ವಿಧಾನ ಸಭಾಧ್ಯಕ್ಷರ ಪರ ಅಥವಾ ವಿಧಾನಮಂಡಲ ಕಾರ್ಯಾಲಯದ ಯಾವುದೇ ಉದ್ದೇಶವನ್ನು ಕುರಿತು ಆರೋಪಿಸತಕ್ಕುದಲ್ಲ.

(10) ರಾಷ್ಟ್ರಾಧ್ಯಕ್ಷರು ಅಥವಾ ರಾಜ್ಯಪಾಲರ ಅಥವಾ ಯಾವುದೇ ನ್ಯಾಯಾಲಯದ ನಡವಳಿಯನ್ನು ಕುರಿತು ಆರೋಪಿಸತಕ್ಕುದಲ್ಲ ಅಥವಾ ಚರ್ಚೆಯನ್ನು

ಪರಿಣಾಮಕಾರಿಯಾಗಿ ಮಾಡುವ ಉದ್ದೇಶಕ್ಕಾಗಿ ರಾಜ್ಯಪಾಲರ ಅಥವಾ ರಾಷ್ಟ್ರಾಧ್ಯಕ್ಷರ ಹೆಸರನ್ನು ಬಳಸತಕ್ಕುದಲ್ಲ ;

(11) ಯಾವುದೇ ಗ್ಯಾಲರಿಯಲ್ಲಿರುವ ಅಪರಿಚಿತರ ಬಗ್ಗೆ ಯಾವುದೇ ಉಲ್ಲೇಖ ಮಾಡತಕ್ಕುದಲ್ಲ ;

(12) ಸರ್ಕಾರಿ ಅಧಿಕಾರಿಗಳನ್ನು ಹೆಸರು ಹಿಡಿದು ಕರೆಯತಕ್ಕದಲ್ಲ ; ಮತ್ತು

(13) ಪೀಠದ ಪೂರ್ವಾನುಮತಿಯ ಹೊರತು ಬರವಣಿಗೆಯಲ್ಲಿರುವ ಭಾಷಣವನ್ನು ಓದತಕ್ಕುದಲ್ಲ;

**328. ಒಬ್ಬ ವ್ಯಕ್ತಿಯನ್ನು ಕುರಿತು ಆಪಾದನೆಯ ಬಗ್ಗೆ ಕೈಗೊಳ್ಳಬೇಕಾದ ಕಾರ್ಯವಿಧಾನ:** ಸದಸ್ಯರು ಅಧ್ಯಕ್ಷರಿಗೆ ಮತ್ತು ಸಂಬಂಧಪಟ್ಟ ಮಂತ್ರಿಗಳಿಗೆ, ಮಂತ್ರಿಗಳು ಉತ್ತರ ನೀಡುವ ಉದ್ದೇಶಕ್ಕಾಗಿ ತನಿಖೆ ನಡೆಸಲು ಸಾಧ್ಯವಾಗುವಂತೆ ಪೂರ್ವಮಾಹಿತಿಯನ್ನು ಕೊಟ್ಟಿದ್ದ ಹೊರತು, ಯಾವ ಸದಸ್ಯರು ಯಾವ ವ್ಯಕ್ತಿಯನ್ನು ಕುರಿತು ಅಪಮಾನಕರವಾದ ಅಥವಾ ಅಪರಾಧದ ಆಪಾದನೆ ಮಾಡುವ ಯಾವ ಆರೋಪವನ್ನು ಮಾಡತಕ್ಕುದಲ್ಲ, ಅಲ್ಲದೆ ಅಧ್ಯಕ್ಷರು ಅಂಥ ಆರೋಪವು ಸದನದ ಮರ್ಯಾದೆಗೆ ಕುಂದು ತರುವಂತಹದು ಅಥವಾ ಅದರಿಂದ ಯಾವುದೇ ಸಾರ್ವಜನಿಕ ಹಿತಾಸಕ್ತಿ ಸಾಧಿತವಾಗುವುದಿಲ್ಲ ಎಂದು ಅಭಿಪ್ರಾಯ ಪಡುವುದಾದರೆ, ಯಾವುದೇ ಸಂದರ್ಭದಲ್ಲಿ ಯಾರೇ ಸದಸ್ಯರು ಅಂಥ ಯಾವುದೇ ಆರೋಪ ಮಾಡುವುದನ್ನು ನಿಷೇಧಿಸಬಹುದು.

**329. ಪರಿಷತ್ತಿನಲ್ಲಿ ಮಾಡಲಾದ ಭಾಷಣಗಳನ್ನು ಉದ್ಧರಿಸುವುದಕ್ಕೆ ಪ್ರತಿಬಂಧ :** ಪರಿಷತ್ತಿನಲ್ಲಿ ಮಾಡಲಾದ ಯಾವುದೇ ಭಾಷಣವನ್ನು ಅದು ಒಂದು ಕಾರ್ಯನೀತಿಯ ಬಗ್ಗೆ ಸಚಿವರ ಸ್ಪಷ್ಟ ಹೇಳಿಕೆಯಾಗಿದ್ದ ಹೊರತು ಸದನದಲ್ಲಿ ಉದ್ಧರಿಸತಕ್ಕುದಲ್ಲ.

ಆದರೂ, ಅಧ್ಯಕ್ಷರು ತಮಗೆ ಮುಂಚಿತವಾಗಿ ಸಲ್ಲಿಸಿದ ಕೋರಿಕೆಯ ಮೇಲೆ ಯಾರೇ ಸದಸ್ಯರಿಗೆ ಪರಿಷತ್ತಿನಲ್ಲಿನ ಭಾಷಣಗಳನ್ನು ಉದ್ಧರಿಸಲು ಅಥವಾ ಅಲ್ಲಿನ ಕಾರ್ಯವಿಧಾನವನ್ನು ಕುರಿತು ಉಲ್ಲೇಖಿಸಲು, ಹಾಗೆ ಮಾಡುವುದು ಆ ಸದಸ್ಯರು ಹಕ್ಕು ಬಾಧ್ಯತೆಯ ಅಥವಾ ಕಾರ್ಯವಿಧಾನದ ಅಂಶವೊಂದನ್ನು ವಿಶದೀಕರಿಸಲು ಅವಶ್ಯವೆಂದು ಅಧ್ಯಕ್ಷರು ಯೋಚಿಸಿದಲ್ಲಿ, ಅನುಮತಿ ನೀಡಬಹುದು.

**330. ಪ್ರಶ್ನೆಗಳನ್ನು ಅಧ್ಯಕ್ಷರ ಮುಖಾಂತರವಾಗಿ ಕೇಳತಕ್ಕುದು:** ಚರ್ಚೆ ನಡೆಯುತ್ತಿರುವಾಗ ವಿವರಣೆ ಉದ್ದೇಶಗಳಿಗಾಗಿ ಅಥವಾ ಇನ್ನಾವುದೇ ಸಾಕಷ್ಟು ಕಾರಣಗಳಿಗಾಗಿ ಸದನದಲ್ಲಿ ಆಗ ಪರ್ಯಾಲೋಚನೆಯಲ್ಲಿರುವ ಯಾವುದೇ ವಿಷಯದ ಸಂಬಂಧದಲ್ಲಿ ಯಾವುದೇ ಸದಸ್ಯರು ಇನ್ನೊಬ್ಬ ಸದಸ್ಯರಿಗೆ ಪ್ರಶ್ನೆಯನ್ನು ಕೇಳುವ ಅಗತ್ಯವುಂಟಾದರೆ, ಅವರು ತಮ್ಮ ಪ್ರಶ್ನೆಯನ್ನು ಅಧ್ಯಕ್ಷರ ಮೂಲಕ ಕೇಳತಕ್ಕುದು.

**331. ಅಸಂಬಂಧಿತ ಅಥವಾ ಪುನರುಕ್ತಿ :** ಅಸಂಬಂಧ ವಿಷಯಗಳನ್ನು ಪ್ರಸ್ತಾಪಿಸುವ ಅಥವಾ ತನ್ನ ವಾದವನ್ನು ಅಥವಾ ಸದಸ್ಯರ ವಾದಗಳನ್ನು ಬೇಸರ ಮಾಡುವಷ್ಟು ಪುನಃ ಪುನಃ ಹೇಳುತ್ತಲೇ ಇರುವ ಸದಸ್ಯರೊಬ್ಬರ ವರ್ತನೆಯನ್ನು ಸದನದ ಗಮನಕ್ಕೆ ತಂದನಂತರ ಅಧ್ಯಕ್ಷರು ಆ ಸದಸ್ಯರನ್ನು ತಮ್ಮ ಭಾಷಣವನ್ನು ನಿಲ್ಲಿಸಬೇಕೆಂದು ನಿರ್ದೇಶಿಸಬಹುದು.

**332. ವೈಯಕ್ತಿಕ ವಿವರಣೆಗಳು :** ಸದಸ್ಯರು ಅಧ್ಯಕ್ಷರ ಅನುಮತಿ ಪಡೆದು ಒಂದು ವಿಷಯವು ಸದನದ ಮುಂದೆ ಚರ್ಚೆಗೆ ಬಂದಿರದಿದ್ದರೂ ಆ ಬಗ್ಗೆ ತಮ್ಮ ವೈಯುಕ್ತಿಕ ವಿವರಣೆಯನ್ನು ನೀಡಬಹುದು, ಆದರೆ ಹಾಗೆ ಮಾಡುವಾಗ ಯಾವುದೇ ಚರ್ಚಾಸ್ಪದ ಅಂಶವನ್ನು ತರತಕ್ಕುದಲ್ಲ ಮತ್ತು ಆ ಬಗ್ಗೆ ಯಾವ ಚರ್ಚೆಗೂ ಅವಕಾಶ ನೀಡತಕ್ಕುದಲ್ಲ.

**333. ಭಾಷಣಗಳ ಅನುಕ್ರಮ ಮತ್ತು ಉತ್ತರ ನೀಡಲು ಹಕ್ಕು:** (1) ಪ್ರಸ್ತಾವವನ್ನು ಸಭೆಯಲ್ಲಿ ಮಂಡಿಸಿದ ಸದಸ್ಯರು ಮಾತನಾಡಿದ ನಂತರ ಇತರ ಸದಸ್ಯರು ಅಧ್ಯಕ್ಷರು ಅವರ ಹೆಸರನ್ನು ಅನುಕ್ರಮದಲ್ಲಿಯೇ ಆ ಪ್ರಸ್ತಾವವನ್ನು ಕುರಿತು ಮಾತನಾಡತಕ್ಕುದು. ಯಾರೇ ಸದಸ್ಯರು ಅಧ್ಯಕ್ಷರು ಕರೆದಾಗ ಮಾತನಾಡದಿದ್ದಲ್ಲಿ ಚರ್ಚೆ ಮುಂದುವರೆದಾಗ, ಅಧ್ಯಕ್ಷರ ಅನುಮತಿಯ ಮೇರೆಗೆ ಹೊರತು ಮಾತನಾಡಲು ಹಕ್ಕುಳ್ಳವರಾಗತಕ್ಕುದಲ್ಲ.

(2) ಉತ್ತರ ಹೇಳುವ ತಮ್ಮ ಹಕ್ಕನ್ನು ಚಲಾಯಿಸುವಾಗ, ಹೊರತು ಅಥವಾ ಈ ನಿಯಮಗಳ ಮೂಲಕ ಅನ್ಯಥಾ ಉಪಬಂಧವಿರುವಂತೆ ಹೊರತು ಅಧ್ಯಕ್ಷರ ಅನುಮತಿ ಪಡೆದಲ್ಲದೆ ಯಾವ ಸದಸ್ಯರೂ ಒಂದು ಪ್ರಸ್ತಾವದ ಮೇಲೆ ಒಂದು ಸಲಕ್ಕಿಂತ ಹೆಚ್ಚು ಬಾರಿ ಮಾತನಾಡತಕ್ಕುದಲ್ಲ.

(3) ಒಂದು ಪ್ರಸ್ತಾವವನ್ನು ಮಂಡಿಸಿದ ಸದಸ್ಯರು ಉತ್ತರ ಹೇಳುವ ಸಲುವಾಗಿ ಮತ್ತೊಮ್ಮೆ ಮಾತನಾಡಬಹುದು ಮತ್ತು ಪ್ರಸ್ತಾವವನ್ನು ಖಾಸಗಿ ಸದಸ್ಯರೊಬ್ಬರು ಮಂಡಿಸಿದ್ದರೆ, ಸಂಬಂಧಪಟ್ಟ ಸಚಿವರು ಅಧ್ಯಕ್ಷರ ಅನುಮತಿ ಪಡೆದು (ಅವರು ಚರ್ಚೆಯಲ್ಲಿ ಈ ಹಿಂದೆ ಮಾತನಾಡಿರಲಿ, ಇಲ್ಲದಿರಲಿ) ಪ್ರಸ್ತಾವ ಮಂಡಿಸಿದ ಸದಸ್ಯರು ಉತ್ತರ ನೀಡಿದನಂತರ ಮಾತನಾಡಬಹುದು.

ಆದರೂ, ಈ ಉಪನಿಯಮದಲ್ಲಿರುವುದು ಯಾವುದೂ ಒಂದು ವಿಧೇಯಕಕ್ಕೆ ತಿದ್ದುಪಡಿಯನ್ನು ಅಥವಾ ಒಂದು ನಿರ್ಣಯವನ್ನು ಪ್ರಸ್ತಾವಿಸಿ ಮಂಡಿಸುವ ಯಾವ ವ್ಯಕ್ತಿಗೂ ಅಧ್ಯಕ್ಷರ ಅನುಮತಿ ಪಡೆದಲ್ಲದೆ ಉತ್ತರ ನೀಡಲು ಯಾವುದೇ ಹಕ್ಕನ್ನು ನೀಡುತ್ತದೆ ಎಂದು ಭಾವಿಸತಕ್ಕುದಲ್ಲ.

**334. ಪ್ರಸ್ತಾವ ಮಂಡಿಸಿದವರ ಉತ್ತರದೊಂದಿಗೆ ಚರ್ಚೆಯ ಸಮಾಪ್ತಿ :** 333ನೇ ನಿಯಮದ (3ನೇ) ಉಪನಿಯಮದ ಉಪಬಂಧಗಳಿಗೆ ಒಳಪಟ್ಟು ಮೂಲ ಪ್ರಸ್ತಾವವನ್ನು ಮಂಡಿಸಿದ ವ್ಯಕ್ತಿಯ ಉತ್ತರದೊಂದಿಗೆ ಎಲ್ಲಾ ಸಂದರ್ಭಗಳಲ್ಲಿಯೂ ಚರ್ಚೆಯು ಮಕ್ತಾಯವಾಗತಕ್ಕುದು.

**335. ಭಾಷಣಗಳ ಕಾಲಾವಧಿ :** ಅಧ್ಯಕ್ಷರು ನಿಯಮಗಳಲ್ಲಿ ನಿರ್ದಿಷ್ಟ ಉಪಬಂಧಗಳನ್ನು ಕಲ್ಪಿಸಿದರೆ ಸಂದರ್ಭಗಳಲ್ಲಿ ಮತ್ತು ಸದನದ ಕಾರ್ಯಕಲಾಪಗಳ ಪರಿಸ್ಥಿತಿಯನ್ನು ಮತ್ತು ಪ್ರಸ್ತಾವದ ಸ್ವರೂಪವನ್ನು ಗಮನದಲ್ಲಿರಿಸಿಕೊಂಡು ಪ್ರಸ್ತಾವವನ್ನು ಕುರಿತು ಭಾಷಣಗಳಿಗೆ ಕಾಲಮಿತಿಯನ್ನು ನಿಗದಿಪಡಿಸಬಹುದು.

**336. ಅಧ್ಯಕ್ಷರ ಭಾಷಣ :** ಅಧ್ಯಕ್ಷರು ಯಾವುದೇ ಸಮಯದಲ್ಲಿ ತಾವಾಗಿಯೇ ಅಥವಾ ಸದಸ್ಯರು ಯಾವುದೇ ಒಂದು ಅಂಶವನ್ನು ಎತ್ತಿದಾಗ ಅಥವಾ ಸದಸ್ಯರೊಬ್ಬರು ಮಾಡಿದ ವಿನಂತಿಯ ಮೇಲೆ, ಸದನದ ಮುಂದೆ ಪರ್ಯಾಲೋಚನೆಯಲ್ಲಿರುವ ವಿಷಯದ ಮೇಲೆ ಸದಸ್ಯರ ಚರ್ಚೆಗೆ ನೆರವು ನೀಡುವ ಉದ್ದೇಶದಿಂದ ಸಭೆಯನ್ನು ಉದ್ದೇಶಿಸಿ ಮಾತನಾಡಬಹುದು ಮತ್ತು ಹಾಗೆ ಅವರು ತಿಳಿಸಿದ ತಮ್ಮ ಅಭಿಪ್ರಾಯಗಳನ್ನು ಒಂದು ತೀರ್ಪು ಎಂದು ಪರಿಗಣಿಸತಕ್ಕುದಲ್ಲ.

**337. ಅಧ್ಯಕ್ಷರು ಎದ್ದುನಿಂತಾಗ ಅನುಸರಿಸಬೇಕಾದ ಕಾರ್ಯವಿಧಾನ :** (1) ಅಧ್ಯಕ್ಷರು ಮಾತನಾಡಲು ಎದ್ದುನಿಂತುಕೊಂಡಾಗಲೆಲ್ಲ ಸದಸ್ಯರು ಮೌನದಿಂದಿದ್ದು ಅವರ ಮಾತುಗಳನ್ನು ಆಲಿಸಬೇಕು ಮತ್ತು  ಆ ಸಮಯದಲ್ಲಿ ಮಾತನಾಡುತ್ತಿದ್ದ ಅಥವಾ ಮಾತನಾಡಲು ಆರಂಭಿಸಲಿದ್ದ ಸದಸ್ಯರು ಕೂಡಲೇ ತಮ್ಮ ಸ್ಥಾನದಲ್ಲಿ ಕುಳಿತುಕೊಳ್ಳತಕ್ಕುದು.

(2) ಅಧ್ಯಕ್ಷರು ಸಭೆಯನ್ನುದ್ದೇಶಿಸಿ ಮಾತನಾಡುತ್ತಿರುವಾಗ ಯಾವ ಸದಸ್ಯರು ತಮ್ಮ ಸ್ಥಾನದಿಂದ ಎದ್ದುಹೋಗತಕ್ಕುದಲ್ಲ.

**338. ಮುಕ್ತಾಯ :** (1) ಪ್ರಸ್ತಾವವನ್ನು ಮಂಡಿಸಿದ ಅನಂತರ ಯಾವುದೇ ಸಮಯದಲ್ಲಿ ಯಾರೇ ಸದಸ್ಯರು "ಈಗ ಸಭೆಯ ಅಭಿಮತಕ್ಕೆ ಹಾಕಬೇಕು". ಎಂದು ಪ್ರಸ್ತಾವವನ್ನು ಮಂಡಿಸಬಹುದು ಮತ್ತು ಈ ಪ್ರಸ್ತಾವವು ಈ ನಿಯಮಾವಳಿಯ ದುರುಪಯೋಗ ಅಥವಾ ಸಮಂಜಸ ಚರ್ಚೆಗೆ ಇರುವ ಹಕ್ಕನ್ನು ಕುಂಠಿತಗೊಳಿಸುತ್ತದೆ ಎಂದು ಅಧ್ಯಕ್ಷರಿಗೆ ತೋರಿದ ಹೊರತು ಅಧ್ಯಕ್ಷರು "ಈಗ ಪ್ರಶ್ನೆಯನ್ನು ಕೇಳಬಹುದು" ಎಂಬ ಪ್ರಸ್ತಾವವನ್ನು ಮಂಡಿಸತಕ್ಕುದು.

(2) "ಈಗ ಪ್ರಶ್ನೆಯನ್ನು ಕೇಳಬಹುದು" ಎಂಬ ಪ್ರಸ್ತಾವಕ್ಕೆ ಸಭೆಯ ಅನುಮೋದನೆ ದೊರೆತಲ್ಲಿ ಅದಕ್ಕೆ ಅನುಷಂಗಿಕವಾದ ಪ್ರಶ್ನೆಯನ್ನು ಅಥವಾ ಪ್ರಶ್ನೆಗಳನ್ನು ಹೆಚ್ಚಿನ ಚರ್ಚೆ ಇಲ್ಲದೆ ಕೂಡಲೇ ಕೇಳತಕ್ಕುದು. ಆದಾಗ್ಯೂ ಅಧ್ಯಕ್ಷರು ಯಾರೇ ಸದಸ್ಯರಿಗೆ ಈ ನಿಯಮದ ಮೇರೆಗೆ ಅವರಿಗಿರುವ ಉತ್ತರ ನೀಡುವ ಹಕ್ಕನ್ನು ಚಲಾಯಿಸಲು ಅವಕಾಶ ನೀಡಬಹುದು.

**339. ಚರ್ಚೆಯ ಪರಿಮಿತಿ :** (1) ಒಂದು ವಿಧೇಯಕಕ್ಕೆ ಸಂಬಂಧಿಸಿದ ಯಾವುದೇ ಪ್ರಸ್ತಾವದ ಮೇಲಿನ ಚರ್ಚೆಯು ಅಥವಾ ಯಾವುದೇ ಇತರ ಪ್ರಸ್ತಾವದ ಮೇಲಿನ ಚರ್ಚೆಯೂ ವೇಳೆ ಮೀರಿ ಮುಂದುವರಿಯುತ್ತಾ ಹೋದಾಗಲೆಲ್ಲ ಅಧ್ಯಕ್ಷರು ಸಭೆಯ ಒಟ್ಟು ಅಭಿಪ್ರಾಯವನ್ನು ತಿಳಿದುಕೊಂಡು ಸಂದರ್ಭಾನುಸಾರ ವಿಧೇಯಕದ ಯಾವುದೇ ಹಂತ ಅಥವಾ ಎಲ್ಲಾ ಹಂತಗಳ ಮೇಲಿನ ಚರ್ಚೆಗಳನ್ನು ಅಥವಾ ಆ ಪ್ರಸ್ತಾವದ ಮೇಲಿನ ಚರ್ಚೆಗಳನ್ನು ಮುಕ್ತಾಯಗೊಳಿಸಲು ಕಾಲ ಪರಿಮಿತಿಯನ್ನು ನಿಗದಿಪಡಿಸತಕ್ಕುದು.

(2) ಯಾವುದೇ ವಿಧೇಯಕ ಅಥವಾ ಪ್ರಸ್ತಾವದ ಒಂದು ನಿರ್ದಿಷ್ಟ ಹಂತವನ್ನು ಪೂರೈಸುವುದಕ್ಕಾಗಿ ಗೊತ್ತುಪಡಿಸಲಾದ ಸಮಯಮಿತಿಗೆ ಅನುಸಾರವಾಗಿ, ಗೊತ್ತಾದ ವೇಳೆಯಲ್ಲಿ ಅಧ್ಯಕ್ಷರು, ಚರ್ಚೆ ಅದಕ್ಕಿಂತ ಮುಂಚಿತವಾಗಿಯೇ ಮುಕ್ತಾಯವಾದ ಹೊರತು ವಿಧೇಯಕ ಅಥವಾ ಪ್ರಸ್ತಾವದ ಆ ಹಂತದ ಸಂಬಂಧದಲ್ಲಿ ಉಳಿದಿರುವ ಎಲ್ಲ ಪ್ರಮುಖ ಅಂಶಗಳನ್ನು ಇತ್ಯರ್ಥಗೊಳಿಸಲು ಅಗತ್ಯವಾದ ಪ್ರತಿಯೊಂದು ಪ್ರಶ್ನೆಯನ್ನು ಕೂಡಲೇ ಹಾಕತಕ್ಕುದು.

(4) ಇತ್ಯರ್ಥಕ್ಕಾಗಿ ಪ್ರಶ್ನೆ

**340. ಸದನದ ನಿರ್ಣಯವನ್ನು ಪಡೆಯಲು ಅನುಸರಿಸಬೇಕಾದ ಕಾರ್ಯ ವಿಧಾನ :** ಸದನದ ನಿರ್ಣಯವನ್ನು ಪಡೆಯಬೇಕಾಗಿರುವ ಯಾವುದೇ ವಿಷಯವು ಯಾವೊಬ್ಬ ಸದಸ್ಯರು ಮಾಡಿದ ಪ್ರಸ್ತಾವದ ಆಧಾರದ ಮೇಲೆ ಅಧ್ಯಕ್ಷರು ಕೇಳುವ ಪ್ರಶ್ನೆಯ ಮೂಲಕ ನಿರ್ಧರಿಸತಕ್ಕುದು.

**341. ಪ್ರಸ್ತಾವ ಮತ್ತು ಇತ್ಯರ್ಥಕ್ಕಾಗಿ ಪ್ರಶ್ನೆಯನ್ನು ಹಾಕುವುದು :** ಒಂದು ಪ್ರಸ್ತಾವವನ್ನು ಸೂಚಿಸಿದಾಗ ಅಧ್ಯಕ್ಷರು ಅದರ ಪರವಾಗಿ ಮತ್ತು ಅದಕ್ಕೆ ವಿರೋಧವಾಗಿ, ಸದಸ್ಯರ ಮತಗಳನ್ನು ಕೇಳುವ ಪ್ರಶ್ನೆಯನ್ನು ಹಾಕಿ ಅದಕ್ಕೆ ಅದನ್ನು ಸಭೆಯ ತೀರ್ಮಾನಕ್ಕೆ ಬಿಡತಕ್ಕುದು. ಒಂದು ಪ್ರಸ್ತಾವದಲ್ಲಿ ಎರಡು ಅಥವಾ ಅದಕ್ಕಿಂತ ಹೆಚ್ಚು ಸಂಖ್ಯೆಯ ಪ್ರತ್ಯೇಕವಾದ ವಿಚಾರಗಳು ಅಡಕವಾಗಿದ್ದ ಪಕ್ಷದಲ್ಲಿ, ಅವುಗಳಲ್ಲಿ ಒಂದೊಂದರ ವಿಷಯವಾಗಿಯೂ ಸದನದ ಅಭಿಪ್ರಾಯವನ್ನು ನಿರ್ಧರಿಸಲು ಅಧ್ಯಕ್ಷರು ಪ್ರತ್ಯೇಕವಾದ ಪ್ರಶ್ನೆಯನ್ನು ಹಾಕಬಹುದು.

**342. ಮತವನ್ನು ಗ್ರಹಿಸಿದ ಮೇಲೆ ಸದಸ್ಯರು ಆ ವಿಷಯದ ಮೇಲೆ ಮಾತನಾಡಕೂಡದು. :** ಅಧ್ಯಕ್ಷರು ಒಂದು ವಿಷಯದ ಮೇಲೆ ಅದರ ಪರವಾಗಿರುವ ಮತ್ತು ಅದಕ್ಕೆ ವಿರೋಧವಾಗಿರುವ ಸದಸ್ಯರ "ಹೌದು ಅಥವಾ ಅಲ್ಲ" ಎಂಬ ಅಭಿಮತವನ್ನು ಪಡೆದ ತರುವಾಯ ಆ ವಿಷಯದ ಮೇಲೆ ಯಾವ ಸದಸ್ಯರೂ ಪುನಃ ಮಾತನಾಡತಕ್ಕುದಲ್ಲ.

**343. ಪ್ರಸ್ತಾಪಿಸಲ್ಪಟ್ಟ ಕಾಗದ ಪತ್ರಗಳನ್ನು ಸಭೆಯ ಮುಂದೆ ಇಡುವುದು :** ಒಬ್ಬ ಸಚಿವರು ಸದನದ ಮುಂದೆ ಹಾಜರುಪಡಿಸಿದ ಒಂದು ಕಾಗದವನ್ನು ಅಥವಾ ರಾಜ್ಯದ ಇತರ ಪತ್ರವನ್ನು ಸದನದಲ್ಲಿ ಪ್ರಸ್ತಾಪಿಸಿದ ಪಕ್ಷದಲ್ಲಿ ಅವರು ಸಂಬಂಧಪಟ್ಟ ಆ ಪತ್ರವನ್ನು ಸಭೆಯ ಮುಂದೆ ಇಡತಕ್ಕುದು.

ಆದರೆ, ಈ ನಿಯಮವು ಕಾಗದಪತ್ರಗಳನ್ನು ಹಾಜರುಪಡಿಸುವುದರಿಂದ ಸಾರ್ವಜನಿಕ ಹಿತಸಾಧನೆಗೆ ಅಸಂಗತವಾದ ಸ್ವಭಾವದವುಗಳಾಗಿರುತ್ತವೆಂಬುದಾಗಿ ಸಚಿವರಿಂದ ತಿಳಿಸಲಾಗುವಂಥ ಕಾಗದ ಪತ್ರಗಳಿಗೆ ಅನ್ವಯಿಸತಕ್ಕುದಲ್ಲ.

ಅಷ್ಟೇ ಅಲ್ಲದೆ, ಅಂಥ, ಕಾಗದದ ಅಥವಾ ರಾಜ್ಯ ಪತ್ರದ ಸಾರಾಂಶ ಅಥವಾ ಮುಖ್ಯಾಂಶಗಳನ್ನು ಒಬ್ಬ ಸಚಿವರು ತಮ್ಮ ಸ್ವಂತ ಮಾತುಗಳಲ್ಲಿ ತಿಳಿಸಿದಾಗ ಸಂಬಂಧಪಟ್ಟ ಕಾಗದ ಪತ್ರವನ್ನು ಸಭೆಯ ಮುಂದಿಡುವುದು ಅವಶ್ಯಕವಾಗಿರತಕ್ಕುದಲ್ಲ.

**344. ಸಭೆಯ ಮುಂದಿಟ್ಟ ಕಾಗದ ಪತ್ರಗಳ ಬಗೆಗಿನ ವ್ಯವಹಾರ :** 1) ಸಭೆಯ ಮುಂದಿಟ್ಟ ಒಂದು ಕಾಗದ ಅಥವಾ ದಸ್ತಾವೇಜನ್ನು ಅದನ್ನು ಮಂಡಿಸುವ ಸದಸ್ಯರಿಂದ ಕ್ರಮವಾಗಿ ಅಧಿಕೃತಗೊಳಿಸತಕ್ಕುದು.

(2) ಸಭೆಯ ಮುಂದಿಟ್ಟ ಎಲ್ಲ ಕಾಗದಗಳೂ ಮತ್ತು ದಸ್ತಾವೇಜುಗಳೂ ಸಾರ್ವಜನಿಕವಾದುದೆಂದು ಭಾವಿಸತಕ್ಕುದು.

**345. ಮಂತ್ರಿಗಳಿಂದ ಹೇಳಿಕೆ :** ವಿಧಾನ ಸಭಾಧ್ಯಕ್ಷರ ಅನುಮತಿ ಪಡೆದು ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಹೇಳಿಕೆ ನೀಡಬಹುದು. ಅಂತಹ ಹೇಳಿಕೆಯ ಮೇಲೆ ಯಾವುದೇ ಚರ್ಚೆಗೆ ಅವಕಾಶವಿರತಕ್ಕುದಲ್ಲ. ಆದರೆ, ರಾಜ್ಯಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿ ಪಡೆಯುವ ಉದ್ದೇಶಕ್ಕಾಗಿ ಪ್ರಶ್ನೆಗಳನ್ನು ಕೇಳಲು ಸದಸ್ಯರಿಗೆ ಅನುಮತಿ ನೀಡಬಹುದು.

**346. ಮತಗಳ ಎಣಿಕೆ** : (1) ಒಂದು ಚರ್ಚೆಯ ಮುಕ್ತಾಯವಾದ ಮೇಲೆ ಅಧ್ಯಕ್ಷರು ಚರ್ಚೆಯ ವಿಷಯವನ್ನು ಸಭೆಯ ಮುಂದೆ ಮಂಡಿಸತಕ್ಕುದು ಮತ್ತು ಪ್ರಸ್ತಾವಕ್ಕೆ ಒಪ್ಪಿಗೆಯುಳ್ಳವರು, "ಹೌದು" ಎಂದು ಹೇಳಬೇಕೆಂಬುದಾಗಿಯೂ ಮತ್ತು ಅದಕ್ಕೆ ವಿರೋಧವಾಗಿರುವವರು "ಇಲ್ಲ" ಎಂದು ಹೇಳಬೇಕೆಂದಾಗಿಯೂ ತಿಳಿಸಬೇಕು.

(2) ಅಧ್ಯಕ್ಷರು, ಅನಂತರ, ತೀರ್ಮಾನವು "ಹೌದು" ಎಂದು ಹೇಳುವವರಿಗೆ (ಅಥವಾ ಆಯಾ ಸಂದರ್ಭಾನುಸಾರವಾಗಿ "ಇಲ್ಲ" ಎಂದು ಹೇಳುವವರಿಗೆ) ಅನುಕೂಲವಾಗಿದೆಯೆಂದು ನನಗೆ ತೋರುತ್ತದೆ ಎಂದು ತಿಳಿಯತಕ್ಕುದು, ಒಂದು ಪ್ರಶ್ನೆಯ ತೀರ್ಮಾನದ ಸಂಬಂಧದಲ್ಲಿ ಅಧ್ಯಕ್ಷರ ಅಭಿಪ್ರಾಯವನ್ನು ಪ್ರತಿಭಟಿಸದಿದ್ದಲ್ಲಿ ಅವರ ತೀರ್ಮಾನವು "ಹೌದು" ಎನ್ನುವವರೆಗೆ (ಅಥವಾ ಆಯಾ ಸಂದರ್ಭಾನುಸಾರವಾಗಿ "ಇಲ್ಲ" ಎನ್ನುವವರೆಗೆ) ಅನುಕೂಲವಾಗಿದೆ ಎಂದು ಎರಡು ಸಲ ಹೇಳತಕ್ಕುದು ಮತ್ತು ಸದನದ ಮುಂದೆ ತೀರ್ಮಾನಕ್ಕೆ ಬಂದಿರುವ ವಿಚಾರವನ್ನು ಅದಕ್ಕೆ ತಕ್ಕಂತೆ ತೀರ್ಮಾನಿಸತಕ್ಕುದು.

(3) ಒಂದು ಪ್ರಶ್ನೆಯ ತೀರ್ಮಾನದ ಸಂಬಂಧದಲ್ಲಿ ಅಧ್ಯಕ್ಷರ ಅಭಿಪ್ರಾಯವನ್ನು ಪ್ರತಿಭಟಿಸಿದ್ದಲ್ಲಿ ಮತದ ಎಣಿಕೆ ಗಂಟೆಯನ್ನು ಎರಡು ನಿಮಿಷಗಳವರೆಗೆ ಬಾರಿಸುವಂತೆ ವ್ಯವಸ್ಥೆ ಮಾಡತಕ್ಕುದು.

(4) ಆ ಎರಡು ನಿಮಿಷಗಳು ಮುಗಿದ ಮೇಲೆ ಬಾಗಿಲುಗಳನ್ನು ಮುಚ್ಚಿಬಿಡುವಂತೆ ಹೇಳತಕ್ಕುದು ಮತ್ತು ಪ್ರಶ್ನೆಯನ್ನು ಎರಡನೆಯ ಸಲ ಹಾಕಬೇಕು. ಮತ್ತು ಪ್ರಸ್ತಾವಕ್ಕೆ ಒಪ್ಪಿಗೆಯುಳ್ಳವರು "ಹೌದು" ಎಂದು ಹೇಳಬೇಕೆಂಬುದಾಗಿಯೂ ಮತ್ತು ಅದಕ್ಕೆ ವಿರೋಧವಾಗಿರುವವರು "ಇಲ್ಲ" ಎಂದು ಹೇಳಬೇಕೆಂಬುದಾಗಿಯೂ ತಿಳಿಸತಕ್ಕುದು.

(5) ಒಂದು ಪ್ರಶ್ನೆಯ ತೀರ್ಮಾನದ ಸಂಬಂಧದಲ್ಲಿ ಅಧ್ಯಕ್ಷರ ಅಭಿಪ್ರಾಯವನ್ನು ಪುನಃ ಪ್ರತಿಭಟಿಸಿದರೆ, ಅವರು ತಾವು ಯುಕ್ತವೆಂದು ಭಾವಿಸಿದರೆ "ಹೌದು" ಎನ್ನುವ ಅಭಿಪ್ರಾಯವುಳ್ಳ ಮತ್ತು "ಇಲ್ಲ" ಎನ್ನುವ ಅಭಿಪ್ರಾಯವುಳ್ಳ ಸದಸ್ಯರು ಕ್ರಮವಾಗಿ ತಮ್ಮ ತಮ್ಮ ಸ್ಥಳಗಳಲ್ಲಿ ಎದ್ದು ಸಭೆಯ ತೀರ್ಮಾನವನ್ನು ಪ್ರಕಟಿಸಬಹುದು. ಅಂಥ ಸಂದರ್ಭಗಳಲ್ಲಿ ಮತಗಳನ್ನು ಕೊಟ್ಟವರ ಹೆಸರುಗಳನ್ನು ದಾಖಲು ಮಾಡತಕ್ಕುದಲ್ಲ.

(6) ಮೇಲಿನ (3)ನೆಯ ಉಪನಿಯಮದಲ್ಲಿ ವಿಧಾಯಕ ಮಾಡಿರುವಂಥ ಕಾರ್ಯ ವಿಧಾನವನ್ನು ಅಧ್ಯಕ್ಷರು ಅನುಸರಿಸದಿದ್ದಲ್ಲಿ, ಅವರು ತಾವು ತೀರ್ಮಾನಿಸಬಹುದಾದಂಥ ಇತರ ಯಾವುದೇ ವಿಧಾನದಲ್ಲಿ ವಿಷಯದ ಪರವಾಗಿಯೂ ಮತ್ತು ವಿಷಯಕ್ಕೆ ವಿರುದ್ಧವಾಗಿಯೂ ಎಷ್ಟು ಮಂದಿ ಮತವುಳ್ಳವರಾಗಿದ್ದಾರೆಂಬುದನ್ನು ತಿಳಿಯಬೇಕೆಂದು ಆದೇಶಿಸತಕ್ಕುದು.

ಸದಸ್ಯರುಗಳನ್ನು ಸಭೆಯಿಂದ ಹೊರಕ್ಕೆ ಕಳುಹಿಸುವುದು ಮತ್ತು ಕೆಲಕಾಲ ಸಭೆಗೆ ಬರದಂತೆ ಆಜ್ಞೆ ಮಾಡುವುದು.

**347. ಸದಸ್ಯರು ಸಭೆಯಿಂದ ಹೊರಕ್ಕೆ ಹೋಗಬೇಕೆಂದು ಆದೇಶ ಮಾಡುವುದು:** ಅಧ್ಯಕ್ಷರು ಯಾವ ಸದಸ್ಯರ ನಡವಳಿಕೆಯು ತುಂಬಾ ಅಸಭ್ಯವಾಗಿದೆಯೆಂದು ಭಾವಿಸುತ್ತಾರೋ, ಅಂಥ ಸದಸ್ಯರಿಗೆ ಸದನದಿಂದ ಕೂಡಲೇ ಹೊರಗೆ ಹೋಗುವಂತೆ ಆದೇಶಿಸಬಹುದು ಮತ್ತು ಆ ರೀತಿ ಹೋಗಬೇಕೆಂದು ಆದೇಶ ಮಾಡಿದ ಯಾರೇ ಸದಸ್ಯರು ಕೂಡಲೇ ಸಭೆಯಿಂದ ಹೊರಗೆ ಹೋಗಬೇಕು ಮತ್ತು ಆ ದಿನದ ಉಪವೇಶನದ ಉಳಿದ ಸಮಯದಲ್ಲಿ ಅವರು ಗೈರುಹಾಜರಾಗತಕ್ಕುದು.

**348. ಸದಸ್ಯರನ್ನು ಕೆಲಕಾಲ ಸಭೆಗೆ ಬರದಂತೆ ತಡೆ ಹಿಡಿಯುವುದು :** (1) ಅಧ್ಯಕ್ಷರು ತಾವು ಅವಶ್ಯವೆಂದು ಭಾವಿಸಿದ ಪಕ್ಷದಲ್ಲಿ ಯಾವ ಸದಸ್ಯರು ಅಧ್ಯಕ್ಷರ ಅಧಿಕಾರದ ವಿಷಯದಲ್ಲಿ ಲಕ್ಷ್ಯವಿಲ್ಲದೆ ತಿರಸ್ಕಾರ ಮಾಡುತ್ತಾರೋ ಅಥವಾ ಸದನದ ಕಾರ್ಯಕಲಾಪಗಳಿಗೆ ಒಂದೇ ಸಮನಾಗಿ ಮತ್ತು ಉದ್ದೇಶಪೂರ್ವಕವಾಗಿ ಅಡಚಣೆಯನ್ನುಂಟು ಮಾಡುವುದರ ಮೂಲಕ ಸದನದ ನಿಯಮಗಳಿಗೆ ವಿರೋಧವಾಗಿ ವರ್ತಿಸುತ್ತಾರೋ ಆ ಸದಸ್ಯರ ಹೆಸರೆತ್ತಿ ಸದನಕ್ಕೆ ತಿಳಿಸಬಹುದು.

(2) ಆ ರೀತಿ, ಅಧ್ಯಕ್ಷರು ಒಬ್ಬ ಸದಸ್ಯರ ಹೆಸರೆತ್ತಿ ತಿಳಿಸಿದ ಪಕ್ಷದಲ್ಲಿ ಆ ಕೂಡಲೇ ಅವರು ಹೆಸರೆತ್ತಿ ತಿಳಿಸಿದ ಸದಸ್ಯರು ಅಧಿವೇಶನದ ಉಳಿದ ಕಾಲದಲ್ಲಿ (ಅಥವಾ ಅಧ್ಯಕ್ಷರು ನಿರ್ದಿಷ್ಟಗೊಳಿಸಬಹುದಾದಂಥ ಅಧಿವೇಶನದ ಒಂದು ಭಾಗದವರೆಗೆ) ಸದನಕ್ಕೆ ಬರಬಾರದಂತೆ ಪ್ರಸ್ತಾವವನ್ನು ಮಂಡಿಸಬೇಕು.

ಆದರೆ, ಸದನವು ಯಾವ ಕಾಲದಲ್ಲಾದರೂ, ಒಂದು ಪ್ರಸ್ತಾವವನ್ನು ಸೂಚಿಸಿದ ಮೇಲೆ ಅಂಥ ನಿಷೇಧವನ್ನು ಮುಕ್ತಾಯಗೊಳಿಸಬೇಕೆಂದು ನಿರ್ಣಯ ಮಾಡಬಹುದು.

(3) ಈ ನಿಯಮದ ಮೇರೆಗೆ ಸದನಕ್ಕೆ ಬರದಂತೆ ನಿಷೇಧಿಸಲ್ಪಟ್ಟ ಸದಸ್ಯರು, ಆ ಕೂಡಲೇ ಸದನದ ಆವರಣವನ್ನು ಬಿಟ್ಟು ಹೊರಟುಹೋಗತಕ್ಕುದು.

**349. ಸದನವು ಕೆಲಕಾಲ ನಡೆಯದಂತೆ ಮುಂದಕ್ಕೆ ಹಾಕುವುದಕ್ಕೆ ಅಥವಾ ಉಪವೇಶನವು ಕೆಲಕಾಲ ನಡೆಯದಂತೆ ಆದೇಶ ಮಾಡುವುದಕ್ಕೆ ಅಧ್ಯಕ್ಷರ ಅಧಿಕಾರ:** ಸದನದಲ್ಲಿ ಭಾರಿ ಗೊಂದಲವಿದ್ದ ಪಕ್ಷದಲ್ಲಿ ಅಧ್ಯಕ್ಷರು ಸದನವು ಕೆಲಕಾಲ ನಡೆಯದಂತೆ ಮುಂದಕ್ಕೆ ಹಾಕುವುದು ಅಥವಾ ಉಪವೇಶನವು ಕೊಂಚ ಕಾಲ ನಡೆಯದಂತೆ ತಡೆಹಿಡಿಯುವುದು ಅವಶ್ಯವೆಂದು ಭಾವಿಸಿದ ಪಕ್ಷದಲ್ಲಿ, ಆ ರೀತಿ ಸದನವನ್ನು ಮುಂದಕ್ಕೆ ಹಾಕಬಹುದು, ಅಥವಾ ಉಪವೇಶನವನ್ನು ಕೆಲಕಾಲ ನಡೆಯದಂತೆ ಮಾಡಬಹುದು.

**350. ಕ್ರಿಯಾಲೋಪಗಳು ಮತ್ತು ಅವುಗಳ ಬಗ್ಗೆ ನಿರ್ಣಯಗಳು :** (1) ಒಂದು ಕ್ರಿಯಾಲೋಪವು ಈ ನಿಯಮಗಳ ಅರ್ಥಾನ್ವಯಕ್ಕೆ ಅಥವಾ ಈ ನಿಯಮಗಳನ್ನು ಜಾರಿಗೆ ತರುವುದಕ್ಕೆ ಇಲ್ಲವೇ ವಿಧಾನಸಭೆಯ ಕಾರ್ಯಕಲಾಪಗಳನ್ನು ಕ್ರಮಪಡಿಸುವುದಕ್ಕಿರುವಂತೆ ಸಂವಿಧಾನದ ಅನುಚ್ಛೇದಗಳ ಅರ್ಥಾನ್ವಯಕ್ಕೆ ಅಥವಾ ಅನುಚ್ಛೇದಗಳನ್ನು ಜಾರಿಗೆ ತರುವುದಕ್ಕೆ ಸಂಬಂಧಪಟ್ಟಿರತಕ್ಕುದು ಮತ್ತು ಅಧ್ಯಕ್ಷರು ಗಮನಕ್ಕೆ ತೆಗೆದುಕೊಳ್ಳುವುದಕ್ಕೆ ಸಾಧ್ಯವಿರುವಂಥ ವಿಷಯವನ್ನು ಸದನದ ಗಮನಕ್ಕೆ ತರತಕ್ಕುದು.

(2) ಸದನದ ಮುಂದೆ ತತ್ಕಾಲದಲ್ಲಿ ಬಂದಿರುವ ಕಾರ್ಯಕಲಾಪದ ಸಂಬಂಧದಲ್ಲಿ ಒಂದು ಕ್ರಿಯಾಲೋಪವನ್ನು ತರಬಹುದು.

ಆದರೆ, ಒಂದು ಕ್ರಿಯಾಲೋಪವು ಸದನದ ಶಿಸ್ತುಪಾಲನೆಯನ್ನು ಮಾಡುವುದಕ್ಕಾಗಲಿ ಅಥವಾ ಸದನದ ಮುಂದೆ ಬಂದಿರುವ ಕಾರ್ಯಕಲಾಪಗಳನ್ನು ವ್ಯವಸ್ಥೆಗೊಳಿಸುವುದಕ್ಕಾಗಲಿ ಸಂಬಂಧಪಟ್ಟಿದ್ದರೆ ಕಾರ್ಯಕಲಾಪಗಳ ಪೈಕಿ ಒಂದು ಬಾಬು ಮುಗಿದು ಇನ್ನೊಂದು ಬಾಬು ಪ್ರಾರಂಭವಾಗುವುದಕ್ಕೆ ಮುಂಚಿತವಾಗಿ ಬರುವ ಮಧ್ಯ ಕಾಲಾವಧಿಯಲ್ಲಿ ಒಬ್ಬರು ಸದಸ್ಯರು ಒಂದು ಕ್ರಿಯಾಲೋಪವನ್ನೆತ್ತುವುದಕ್ಕೆ ಅಧ್ಯಕ್ಷರು ಅನುಮತಿ ಕೊಡಬಹುದು.

(3) ಮೇಲಿನ (1)ನೆಯ ಮತ್ತು (2)ನೆಯ ಉಪನಿಯಮಗಳಲ್ಲಿ ತಿಳಿಸಿರುವಂಥ ಷರತ್ತುಗಳಿಗೊಳಪಟ್ಟು ಒಬ್ಬ ಸದಸ್ಯರು ಒಂದು ಕ್ರಿಯಾಲೋಪವನ್ನು ರಚಿಸಿ ಮಂಡಿಸಬಹುದು. ಹಾಗೆ ಮಂಡಿಸಿರುವುದು ಕ್ರಿಯಾಲೋಪ ಹೌದೇ ಎಂಬುದನ್ನು ಅಧ್ಯಕ್ಷರು ತೀರ್ಮಾನಿಸತಕ್ಕುದು ಮತ್ತು ಅದು ಕ್ರಿಯಾಲೋಪವಾಗಿದ್ದರೆ ಅದರ ವಿಷಯದಲ್ಲಿ ತಮ್ಮ ನಿರ್ಣಯವನ್ನು ಕೊಡತಕ್ಕುದು, ಅಂಥ ನಿರ್ಣಯ ಅಂತಿಮವಾಗಿರತಕ್ಕುದು.

(4) ಕ್ರಿಯಾಲೋಪದ ಮೇಲೆ ಯಾವ ಚರ್ಚೆಗೂ ಅವಕಾಶಕೊಡತಕ್ಕುದಲ್ಲ ಆದರೆ ಅಧ್ಯಕ್ಷರು, ತಮಗೆ ಯುಕ್ತವೆಂದು ಕಂಡು ಬಂದರೆ, ತಮ್ಮ ನಿರ್ಣಯವನ್ನು ಕೊಡವುದಕ್ಕಿಂತ ಮುಂಚಿತವಾಗಿ ಸದಸ್ಯರುಗಳ ಹೇಳಿಕೆಗಳನ್ನು ಕೇಳಬಹುದು.

(5) ಕ್ರಿಯಾಲೋಪವು ಹಕ್ಕುಬಾಧ್ಯತೆಗಳಿಗೆ ಸಂಬಂಧಪಟ್ಟ ಸೂಚನೆಯಾಗುವುದಿಲ್ಲ.

(6) ಒಬ್ಬ ಸದಸ್ಯರು ಈ ಕೆಳಕಂಡ ವಿಷಯಗಳಿಗೆ ಸಂಬಂಧಪಟ್ಟಂತೆ ಕ್ರಿಯಾಲೋಪವನ್ನು ಎತ್ತಕೂಡದು.

(ಎ) ಮಾಹಿತಿಯನ್ನು ಕೇಳುವುದಕ್ಕಾಗಲಿ, ಅಥವಾ

(ಬಿ) ತಮ್ಮ ಅಭಿಪ್ರಾಯವನ್ನು ವಿವರಿಸುವುದಕ್ಕಾಗಲಿ, ಅಥವಾ

(ಸಿ) ಯಾವ ಪ್ರಸ್ತಾವದ ಮೇಲೆ ಆಗಲಿ ಬಂದಿರುವ ಒಂದು ಪ್ರಶ್ನೆಯು ವಿಧಾನಸಭೆಯ ಮುಂದೆ ಮಂಡಿಸುತ್ತಿರುವಾಗ ಆಗಲಿ, ಅಥವಾ

(ಡಿ) ಕೇವಲ ಊಹೆಗೆ ಸಂಬಂಧಪಟ್ಟಂತೆ ಅಥವಾ

(ಇ) ಮತಗಳ ಎಣಿಕೆಯಾಗುವುದೆಂದು ಸೂಚಿಸುವ ಗಂಟೆಗಳ ಶಬ್ದವಾಗಲಿಲ್ಲವೆಂದು ಅಥವಾ ಆ ಶಬ್ದಗಳು ಕೇಳಿಸಲಿಲ್ಲವೆಂದು ಒಂದು ಕ್ರಿಯಾಲೋಪವನ್ನು ಎತ್ತಕೂಡದು.

**351. ಕ್ರಿಯಾಲೋಪವಲ್ಲದ ಒಂದು ವಿಚಾರವನ್ನೆತ್ತುವುದು :** ಒಂದು ಕ್ರಿಯಾ ಲೋಪವಲ್ಲದಂಥ ಯಾವ ವಿಷಯವನ್ನಾಗಲಿ ವಿಧಾನಸಭೆಯು ಗಮನಕ್ಕೆ ತರಬೇಕೆಂದು ಇಚ್ಛಿಸುವ ಸದಸ್ಯರು ವಿಧಾನಸಭೆಯಲ್ಲಿ ತಾವು ಎತ್ತಬೇಕೆಂದಿರುವ ವಿಷಯವನ್ನು, ಅದನ್ನು ಸೂಚಿಸಬೇಕೆಂದಿರುವ ಕಾರಣಗಳೊಡನೆ ಸಂಕ್ಷೇಪವಾಗಿ ತಿಳಿಸಿ ಲಿಖಿತ ಮೂಲಕವಾಗಿ ಕಾರ್ಯದರ್ಶಿಯವರಿಗೆ "ಸೂಚನಾಪತ್ರ" ವನ್ನು ಕೊಡಬೇಕು ಅಧ್ಯಕ್ಷರು ಅನುಮತಿ ಕೊಟ್ಟಮೇಲೆ ಮಾತ್ರವೇ ಅವರು ಅದನ್ನು ಸೂಚಿಸುವುದಕ್ಕೆ ಅವರಿಗೆ ಅನುಮತಿ ದೊರೆಯಬೇಕು ಮತ್ತು ಅಧ್ಯಕ್ಷರು ಗೊತ್ತುಮಾಡಬಹುದಾದ ಕಾಲದಲ್ಲಿ ಮತ್ತು ಆ ದಿನ ಮಾತ್ರ ಅವರು ಅದನ್ನು ಸೂಚಿಸುವುದಕ್ಕೆ ಅವರಿಗೆ ಅನುಮತಿ ದೊರೆಯಬೇಕು.

** ** ***